# ಅರಣ್ಯಕಾಂಡ

### ಮೋಶೆಯು ಇಸ್ರೇಲರನ್ನು ಲೆಕ್ಕಿಸಿದ್ದು

1 ಯೆಹೋವನು ದೇವದರ್ಶನ ಗುಡಾರದೊಳಗೆ
ಮೋಶೆಯೊಡನೆ ಮಾತಾಡಿದನು. ಆಗ ದೇವ
ದರ್ಶನಗುಡಾರವು ಸೀನಾಯಿ ಮರುಭೂಮಿಯಲ್ಲಿತ್ತು.
ಇಸ್ರೇಲರು ಈಜಿಪ್ಟನ್ನು ಬಿಟ್ಟ ಎರಡನೆಯ ವರ್ಷದ
ಎರಡನೆಯ ತಿಂಗಳಿನ ಮೊದಲನೆಯ ದಿನದಲ್ಲಿ ಇದು
ನಡೆಯಿತು. ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
2‘‘ಇಸ್ರೇಲ್ ಜನರೆಲ್ಲರನ್ನು ಅವರವರ ಗೋತ್ರ
ಕುಟುಂಬಗಳ ಪ್ರಕಾರ ಲೆಕ್ಕಿಸಿ ಪ್ರತಿಯೊಬ್ಬನ ಹೆಸರನ್ನೂ
ಪಟ್ಟಿಮಾಡಿ 3ನೀನೂ ಆರೋನನೂ ಇಸ್ರೇಲರಲ್ಲಿ ಎಲ್ಲಾ
ಪುರುಷರನ್ನು ಲೆಕ್ಕಿಸಬೇಕು. ಇಸ್ರೇಲ್ ಸೈನ್ಯದಲ್ಲಿ ಸೇವೆ
ಮಾಡಲು ಶಕ್ತರಾದ ಇಪ್ಪತ್ತು ವರ್ಷ ಮತ್ತು ಅದಕ್ಕಿಂತ
ಮೇಲ್ಪಟ್ಟ ವಯಸ್ಸುಳ್ಳ ಪುರುಷರನ್ನು ಲೆಕ್ಕಿಸು. ಅವರನ್ನು
ಅವರವರ ವಿಭಾಗಗಳಿಗೆ ಅನುಸಾರವಾಗಿ ಪಟ್ಟಿಮಾಡು.
4ಪ್ರತಿಯೊಂದು ಕುಲದ ಕುಟುಂಬದ ನಾಯಕನು ನಿಮಗೆ
ಸಹಾಯ ಮಾಡಬೇಕು. 5ನಿಮ್ಮೊಡನಿದ್ದು ನಿಮಗೆ
ಸಹಾಯಮಾಡುವ ಪುರುಷರು ಯಾರೆಂದರೆ:

ರೂಬೇನನ ಕುಲದಿಂದ ಶೆದೇಯೂರನ
ಮಗನಾದ ಎಲೀಚೂರ್.

6 ಸಿಮೆಯೋನನ ಕುಲದಿಂದ ಚೂರೀಷದ್ದೈಯ
ಮಗನಾದ ಶೆಲುಮೀಯೇಲ್;

7 ಯೆಹೂದನ ಕುಲದಿಂದ ಅಮ್ಮೀನಾದಾಬನ
ಮಗನಾದ ನಹಶೋನ್;

8 ಇಸ್ಸಾಕಾರನ ಕುಲದಿಂದ ಚೂವಾರನ ಮಗನಾದ
ನೆತನೇಲ್;

9 ಜೆಬುಲೂನ್ ಕುಲದಿಂದ ಹೇಲೋನನ
ಮಗನಾದ ಎಲೀಯಾಬ್;

10 ಎಫ್ರಾಯೀಮನ ಕುಲದಿಂದ ಅಮ್ಮೀಹೂದನ
ಮಗನಾದ ಎಲೀಷಾಮಾ; (ಎಫ್ರಾಯೀಮನು
ಯೋಸೇಫನ ಮಗನು.) ಮನಸ್ಸೆಯ ಕುಲದಿಂದ
ಪೆದಾಚೂರನ ಮಗನಾದ ಗಮ್ಲೀಯೇಲ್
(ಮನಸ್ಸೆಯೂ ಯೋಸೇಫನ ಮಗನು);

11 ಬೆನ್ಯಾಮೀನನ ಕುಲದಿಂದ ಗಿದ್ಯೋನನ
ಮಗನಾದ ಅಬೀದಾನ್;

12 ದಾನ್ ಕುಲದಿಂದ ಅಮ್ಮೀಷದ್ದೈಯ ಮಗನಾದ
ಅಹೀಗೆಜೆರ್;

13 ಆಶೇರನ ಕುಲದಿಂದ ಒಕ್ರಾನನ ಮಗನಾದ
ಪಗೀಯೇಲ್;

14 ಗಾದನ ಕುಲದಿಂದ ರೆಗೂವೇಲನ ಮಗನಾದ
ಎಲ್ಯಾಸಾಫ್;

15 ನಫ್ತಾಲಿಯ ಕುಲದಿಂದ ಏನಾನನ ಮಗನಾದ
ಅಹೀರ.’’

16ಸರ್ವಸಮೂಹದವರೊಳಗಿಂದ ಆರಿಸಲ್ಪಟ್ಟಿದ್ದ
ಇವರು ತಮ್ಮ ಪೂರ್ವಿಕರ ಕುಲಗಳಿಗೆ ನಾಯಕರಾಗಿ
ದ್ದರು. 17ಹೆಸರೆಸರಾಗಿ ಆರಿಸಲ್ಪಟ್ಟ ಈ ಜನರನ್ನು ಮೋಶೆ
ಆರೋನರು ತೆಗೆದುಕೊಂಡರು. 18ಎರಡನೆ ತಿಂಗಳಿನ
ಮೊದಲನೆ ದಿನದಲ್ಲಿ ಎಲ್ಲಾ ಜನರು ಒಟ್ಟಾಗಿ ಸೇರಿ
ಬಂದರು. ಜನರು ತಮ್ಮತಮ್ಮ ಕುಟುಂಬಗಳಿಗನು
ಸಾರವಾಗಿ, ಗೋತ್ರಗಳಿಗನುಸಾರವಾಗಿ ಪಟ್ಟಿ ಮಾಡಿಸಿ
ದರು. ಇಪ್ಪತ್ತು ವರ್ಷ ಮತ್ತು ಅದಕ್ಕಿಂತ ಹೆಚ್ಚು ವಯಸ್ಸಾದ
ಎಲ್ಲಾ ಪುರುಷರ ಹೆಸರುಗಳನ್ನು ಪಟ್ಟಿ ಮಾಡಲಾಯಿತು.
19ಯೆಹೋವನು ಆಜ್ಞಾಪಿಸಿದ ಪ್ರಕಾರವೇ ಮೋಶೆಯು
ಮಾಡಿದನು. ಜನರು ಸೀನಾಯಿ ಮರುಭೂಮಿ
ಯಲ್ಲಿದ್ದಾಗ ಮೋಶೆಯು ಅವರನ್ನು ಲೆಕ್ಕಿಸಿದನು.
20ಅವರು ರೂಬೇನನ ಕುಲದವರನ್ನು ಲೆಕ್ಕಿಸಿದರು.
(ರೂಬೇನನು ಇಸ್ರೇಲನ ಚೊಚ್ಚಲು ಮಗನು.) ಸೈನ್ಯ
ದಲ್ಲಿ ಸೇವೆಮಾಡಲು ಶಕ್ತರಾದ ಇಪ್ಪತ್ತು ವರ್ಷ ಮತ್ತು
ಅದಕ್ಕಿಂತ ಹೆಚ್ಚು ವಯಸ್ಸಾದ ಎಲ್ಲಾ ಪುರುಷರ ಹೆಸರು
ಗಳನ್ನು ಪಟ್ಟಿಮಾಡಲಾಯಿತು. ಅವರವರ ಕುಲಗಳಿ
ಗನುಸಾರವಾಗಿ ಮತ್ತು ಕುಟುಂಬಗಳಿಗನುಸಾರವಾಗಿ
ಹೆಸರುಗಳನ್ನು ಪಟ್ಟಿಮಾಡಲಾಯಿತು. 21ರೂಬೇನನ
ಕುಲದಲ್ಲಿ ಲೆಕ್ಕಿಸಲ್ಪಟ್ಟ ಪುರುಷರ ಒಟ್ಟು ಸಂಖ್ಯೆ 46,500.
22ಅವರು ಸಿಮೆಯೋನನ ಕುಲದವರನ್ನು ಲೆಕ್ಕಿಸಿದರು.
ಸೈನ್ಯದಲ್ಲಿ ಸೇವೆಮಾಡಲು ಶಕ್ತರಾದ ಇಪ್ಪತ್ತು ವರ್ಷ

ಮೇಲ್ಪಟ್ಟ ಎಲ್ಲಾ ಪುರುಷರ ಹೆಸರುಗಳನ್ನು ಪಟ್ಟಿ
ಮಾಡಲಾಯಿತು. ಅವರವರ ಕುಲಗಳಿಗನುಸಾರವಾಗಿ
ಮತ್ತು ಕುಟುಂಬಗಳಿಗನುಸಾರವಾಗಿ ಅವರ ಹೆಸರು
ಗಳನ್ನು ಪಟ್ಟಿಮಾಡಲಾಯಿತು. 23 ಸಿಮೆಯೋನನ ಕುಲ
ದಲ್ಲಿ ಲೆಕ್ಕಿಸಲ್ಪಟ್ಟ ಪುರುಷರ ಒಟ್ಟು ಸಂಖ್ಯೆ 59,300.

24 ಗಾದನ ಕುಲದವರನ್ನು ಲೆಕ್ಕಿಸಿದರು. ಸೈನ್ಯದಲ್ಲಿ
ಸೇವೆಮಾಡಲು ಶಕ್ತರಾದ ಇಪ್ಪತ್ತು ವರ್ಷ ಮತ್ತು
ಅದಕ್ಕಿಂತ ಮೇಲ್ಪಟ್ಟ ಎಲ್ಲಾ ಪುರುಷರ ಹೆಸರುಗಳನ್ನು
ಪಟ್ಟಿಮಾಡಲಾಯಿತು. ಅವರವರ ಕುಲಗಳಿಗನುಸಾರ
ವಾಗಿ ಮತ್ತು ಕುಟುಂಬಗಳಿಗನುಸಾರವಾಗಿ ಅವರ ಹೆಸರು
ಗಳನ್ನು ಪಟ್ಟಿಮಾಡಲಾಯಿತು. 25 ಗಾದನ ಕುಲದಲ್ಲಿ
ಲೆಕ್ಕಿಸಲ್ಪಟ್ಟ ಪುರುಷರ ಒಟ್ಟು ಸಂಖ್ಯೆ 45,650.

26 ಯೆಹೂದನ ಕುಲದವರನ್ನು ಲೆಕ್ಕಿಸಿದರು. ಸೈನ್ಯದಲ್ಲಿ
ಸೇವೆಮಾಡಲು ಶಕ್ತರಾದ ಇಪ್ಪತ್ತು ವರ್ಷ ಮತ್ತು
ಅದಕ್ಕಿಂತ ಮೇಲ್ಪಟ್ಟ ಎಲ್ಲಾ ಪುರುಷರ ಹೆಸರುಗಳನ್ನು
ಪಟ್ಟಿಮಾಡಲಾಯಿತು. ಅವರವರ ಕುಲಗಳಿಗನುಸಾರ
ವಾಗಿಯೂ ಕುಟುಂಬಗಳಿಗನುಸಾರವಾಗಿಯೂ ಅವರ
ಹೆಸರುಗಳನ್ನು ಪಟ್ಟಿಮಾಡಲಾಯಿತು.

27 ಯೆಹೂದನ ಕುಲದಲ್ಲಿ ಲೆಕ್ಕಿಸಲ್ಪಟ್ಟ ಪುರುಷರ ಒಟ್ಟು
ಸಂಖ್ಯೆ 74,600.

28 ಇಸ್ಸಾಕಾರನ ಕುಲದವರನ್ನು ಲೆಕ್ಕಿಸಿದರು. ಸೈನ್ಯದಲ್ಲಿ
ಸೇವೆಮಾಡಲು ಶಕ್ತರಾದ ಇಪ್ಪತ್ತು ವರ್ಷ ಮತ್ತು ಅದ
ಕ್ಕಿಂತ ಮೇಲ್ಪಟ್ಟ ಎಲ್ಲಾ ಪುರುಷರ ಹೆಸರುಗಳನ್ನು
ಪಟ್ಟಿಮಾಡಲಾಯಿತು. ಅವರವರ ಕುಲಗಳಿಗನು
ಸಾರವಾಗಿ, ಕುಟುಂಬಗಳಿಗನುಸಾರವಾಗಿ ಅವರ ಹೆಸರು
ಗಳನ್ನು ಪಟ್ಟಿಮಾಡಲಾಯಿತು. 29 ಇಸ್ಸಾಕಾರನ ಕುಲದಲ್ಲಿ
ಲೆಕ್ಕಿಸಲ್ಪಟ್ಟ ಪುರುಷರ ಒಟ್ಟು ಸಂಖ್ಯೆ 54,400.

30 ಜೆಬುಲೂನನ ಕುಲದವರನ್ನು ಲೆಕ್ಕಿಸಿದರು. ಸೈನ್ಯ
ದಲ್ಲಿ ಸೇವೆಮಾಡಲು ಶಕ್ತರಾದ ಇಪ್ಪತ್ತು ವರ್ಷ ಮತ್ತು
ಅದಕ್ಕಿಂತ ಮೇಲ್ಪಟ್ಟ ಎಲ್ಲಾ ಪುರುಷರ ಹೆಸರುಗಳನ್ನು
ಪಟ್ಟಿಮಾಡಲಾಯಿತು. ಅವರವರ ಕುಲಗಳಿಗನು
ಸಾರವಾಗಿ, ಕುಟುಂಬಗಳಿಗನುಸಾರವಾಗಿ ಅವರ ಹೆಸರು
ಗಳನ್ನು ಪಟ್ಟಿಮಾಡಲಾಯಿತು. 31 ಜೆಬುಲೂನನ ಕುಲ
ದಲ್ಲಿ ಲೆಕ್ಕಿಸಲ್ಪಟ್ಟ ಪುರುಷರ ಒಟ್ಟು ಸಂಖ್ಯೆ 57,400.

32 ಎಫ್ರಾಯೀಮನ ಕುಲದವರನ್ನು ಲೆಕ್ಕಿಸಿದರು.
(ಎಫ್ರಾಯೀಮನು ಯೋಸೇಫನ ಮಗನು.) ಸೈನ್ಯದಲ್ಲಿ
ಸೇವೆಮಾಡಲು ಶಕ್ತರಾದ ಇಪ್ಪತ್ತು ವರ್ಷ ಮತ್ತು ಅದ
ಕ್ಕಿಂತ ಮೇಲ್ಪಟ್ಟ ಎಲ್ಲಾ ಪುರುಷರ ಹೆಸರುಗಳನ್ನು ಪಟ್ಟಿ
ಮಾಡಲಾಯಿತು. ಅವರವರ ಕುಲಗಳಿಗನುಸಾರವಾಗಿ,
ಕುಟುಂಬಗಳಿಗನುಸಾರವಾಗಿ ಅವರ ಹೆಸರುಗಳನ್ನು
ಪಟ್ಟಿಮಾಡಲಾಯಿತು. 33 ಎಫ್ರಾಯೀಮನ ಕುಲದಲ್ಲಿ
ಲೆಕ್ಕಿಸಲ್ಪಟ್ಟ ಪುರುಷರ ಒಟ್ಟು ಸಂಖ್ಯೆ 40,500.

34 ಮನಸ್ಸೆಯ ಕುಲದವರನ್ನು ಲೆಕ್ಕಿಸಿದರು.
(ಮನಸ್ಸೆಯು ಸಹ ಯೋಸೇಫನ ಮಗನು.) ಸೈನ್ಯದಲ್ಲಿ
ಸೇವೆಮಾಡಲು ಶಕ್ತರಾದ ಇಪ್ಪತ್ತು ವರ್ಷ ಮತ್ತು
ಅದಕ್ಕಿಂತ ಮೇಲ್ಪಟ್ಟ ಎಲ್ಲಾ ಪುರುಷರ ಹೆಸರುಗಳನ್ನು
ಪಟ್ಟಿಮಾಡಲಾಯಿತು. ಅವರವರ ಕುಲಗಳಿಗನುಸಾರ
ವಾಗಿ, ಕುಟುಂಬಗಳಿಗನುಸಾರವಾಗಿ ಅವರ ಹೆಸರು
ಗಳನ್ನು ಪಟ್ಟಿಮಾಡಲಾಯಿತು. 35 ಮನಸ್ಸೆಯ ಕುಲದಲ್ಲಿ
ಲೆಕ್ಕಿಸಲ್ಪಟ್ಟ ಪುರುಷರ ಒಟ್ಟು ಸಂಖ್ಯೆ 32,200.

36 ಬೆನ್ಯಾಮೀನನ ಕುಲದವರನ್ನು ಲೆಕ್ಕಿಸಿದರು. ಸೈನ್ಯ
ದಲ್ಲಿ ಸೇವೆಮಾಡಲು ಶಕ್ತರಾದ ಇಪ್ಪತ್ತು ವರ್ಷ ಮತ್ತು
ಅದಕ್ಕಿಂತ ಮೇಲ್ಪಟ್ಟ ಎಲ್ಲಾ ಪುರುಷರ ಹೆಸರುಗಳನ್ನು
ಪಟ್ಟಿಮಾಡಲಾಯಿತು. ಅವರವರ ಕುಲಗಳಿಗನು
ಸಾರವಾಗಿ, ಕುಟುಂಬಗಳಿಗನುಸಾರವಾಗಿ ಅವರ ಹೆಸರು
ಗಳನ್ನು ಪಟ್ಟಿಮಾಡಲಾಯಿತು. 37 ಬೆನ್ಯಾಮೀನನ ಕುಲ
ದಲ್ಲಿ ಲೆಕ್ಕಿಸಲ್ಪಟ್ಟ ಪುರುಷರ ಒಟ್ಟು ಸಂಖ್ಯೆ 35,400.

38 ದಾನನ ಕುಲದವರನ್ನು ಲೆಕ್ಕಿಸಿದರು. ಸೈನ್ಯದಲ್ಲಿ
ಸೇವೆಮಾಡಲು ಶಕ್ತರಾದ ಇಪ್ಪತ್ತು ವರ್ಷ ಮತ್ತು ಅದ
ಕ್ಕಿಂತ ಮೇಲ್ಪಟ್ಟ ಎಲ್ಲಾ ಪುರುಷರ ಹೆಸರುಗಳನ್ನು ಪಟ್ಟಿ
ಮಾಡಲಾಯಿತು. ಅವರವರ ಕುಲಗಳಿಗನುಸಾರವಾಗಿ,
ಕುಟುಂಬಗಳಿಗನುಸಾರವಾಗಿ ಅವರ ಹೆಸರುಗಳನ್ನು ಪಟ್ಟಿ
ಮಾಡಲಾಯಿತು. 39 ದಾನನ ಕುಲದಲ್ಲಿ ಲೆಕ್ಕಿಸಲ್ಪಟ್ಟ
ಪುರುಷರ ಒಟ್ಟು ಸಂಖ್ಯೆ 62,700.

40 ಆಶೇರನ ಕುಲದವರನ್ನು ಲೆಕ್ಕಿಸಿದರು. ಸೈನ್ಯದಲ್ಲಿ
ಸೇವೆಮಾಡಲು ಶಕ್ತರಾದ ಇಪ್ಪತ್ತು ವರ್ಷ ಮತ್ತು ಅದ
ಕ್ಕಿಂತ ಮೇಲ್ಪಟ್ಟ ಎಲ್ಲಾ ಪುರುಷರ ಹೆಸರುಗಳನ್ನು ಪಟ್ಟಿ
ಮಾಡಲಾಯಿತು. ಅವರವರ ಕುಲಗಳಿಗನುಸಾರವಾಗಿ,
ಕುಟುಂಬಗಳಿಗನುಸಾರವಾಗಿ ಅವರ ಹೆಸರುಗಳನ್ನು ಪಟ್ಟಿ
ಮಾಡಲಾಯಿತು. 41 ಆಶೇರನ ಕುಲದಲ್ಲಿ ಲೆಕ್ಕಿಸಲ್ಪಟ್ಟ
ಪುರುಷರ ಒಟ್ಟು ಸಂಖ್ಯೆ 41,500.

42 ನಫ್ತಾಲಿಯ ಕುಲದವರನ್ನು ಲೆಕ್ಕಿಸಿದರು. ಸೈನ್ಯದಲ್ಲಿ
ಸೇವೆಮಾಡಲು ಶಕ್ತರಾದ ಇಪ್ಪತ್ತು ವರ್ಷ ಮತ್ತು ಅದ
ಕ್ಕಿಂತ ಮೇಲ್ಪಟ್ಟ ಎಲ್ಲಾ ಪುರುಷರ ಹೆಸರುಗಳನ್ನು ಪಟ್ಟಿ
ಮಾಡಲಾಯಿತು. ಅವರವರ ಕುಲಗಳಿಗನುಸಾರವಾಗಿ,
ಕುಟುಂಬಗಳಿಗನುಸಾರವಾಗಿ ಅವರ ಹೆಸರುಗಳನ್ನು ಪಟ್ಟಿ
ಮಾಡಲಾಯಿತು. 43 ನಫ್ತಾಲಿಯ ಕುಲದಲ್ಲಿ ಲೆಕ್ಕಿಸಲ್ಪಟ್ಟ
ಪುರುಷರ ಒಟ್ಟು ಸಂಖ್ಯೆ 53,400.

44 ಮೋಶೆ, ಆರೋನ ಮತ್ತು ಇಸ್ರೇಲರ ಹನ್ನೆರಡು
ನಾಯಕರು ಈ ಜನರನ್ನು ಲೆಕ್ಕಿಸಿದರು. (ಪ್ರತಿಯೊಬ್ಬ
ನಾಯಕನು ತನ್ನ ಕುಲದ ಪ್ರತಿನಿಧಿಯಾಗಿದ್ದನು.)
45 ಅವರು ಸೇವೆಮಾಡಲು ಶಕ್ತರಾದ ಇಪ್ಪತ್ತು ವರ್ಷ
ಮತ್ತು ಅದಕ್ಕಿಂತ ಮೇಲ್ಪಟ್ಟ ಪ್ರತಿ ಪುರುಷನನ್ನು
ಲೆಕ್ಕಿಸಿದರು. ಪ್ರತಿಯೊಬ್ಬನೂ ಅವನ ಕುಟುಂಬದೊಡನೆ

ಲೆಕ್ಕಿಸಲ್ಪಟ್ಟನು. 46ಲೆಕ್ಕಿಸಲ್ಪಟ್ಟ ಪುರುಷರ ಒಟ್ಟು ಸಂಖ್ಯೆ 603,550.

47ಲೇವಿ ಕುಲದ ಕುಟುಂಬಗಳು ಇತರ ಇಸ್ರೇಲ ರೊಡನೆ ಲೆಕ್ಕಿಸಲ್ಪಡಲಿಲ್ಲ. 48ಯಾಕಂದರೆ ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ, 49''ಲೇವಿ ಕುಲದ ಪುರುಷ ರನ್ನು ಲೆಕ್ಕಿಸಬೇಡ. ಅವರನ್ನು ಉಳಿದ ಇಸ್ರೇಲರ ಜನ ಗಣತಿಯೊಡನೆ ಸೇರಿಸಬಾರದು. 50ಒಡಂಬಡಿಕೆಯ ಪವಿತ್ರಗುಡಾರವನ್ನು ನೋಡಿಕೊಳ್ಳುವ ಜವಾಬ್ದಾರಿಯು ಲೇವಿಯರಿಗೆ ಸೇರಿರುವುದರಿಂದ ಅವರಿಗೆ ಅದನ್ನು ತಿಳಿಸು. ಅವರು ಅದನ್ನೂ ಅದರ ಉಪಕರಣಗಳನ್ನೂ ಮತ್ತು ಅದಕ್ಕೆ ಸಂಬಂಧಿಸಿದ ಪ್ರತಿಯೊಂದನ್ನೂ ನೋಡಿ ಕೊಳ್ಳಬೇಕು. ಅವರು ಪವಿತ್ರಗುಡಾರವನ್ನೂ ಅದ ರಲ್ಲಿರುವ ಪ್ರತಿಯೊಂದನ್ನೂ ಹೊತ್ತುಕೊಂಡು ಹೋಗ ಬೇಕು. ಅವರು ಅದರ ಸುತ್ತಲೂ ಪಾಳೆಯ ಮಾಡಿ ಕೊಂಡು ಅದನ್ನು ನೋಡಿಕೊಳ್ಳಬೇಕು. 51ಪವಿತ್ರ ಗುಡಾರವನ್ನು ತೆಗೆದುಕೊಂಡು ಹೋಗುವಾಗಲೆಲ್ಲಾ ಲೇವಿಯರೇ ಅದನ್ನು ಬಿಚ್ಚಬೇಕು, ಇಳಿಸುವಾಗಲೆಲ್ಲಾ ಲೇವಿಯರೇ ಅದನ್ನು ಹಾಕಬೇಕು. ಪವಿತ್ರಗುಡಾರವನ್ನು ನೋಡಿಕೊಳ್ಳುವವರು ಅವರೇ. ಲೇವಿ ಕುಲಕ್ಕೆ ಸೇರದ ಯಾವನಾದರೂ ಅದರ ಸಮೀಪಕ್ಕೆ ಬಂದರೆ, ಅವನಿಗೆ ಮರಣಶಿಕ್ಷೆಯಾಗಬೇಕು. 52ಇಸ್ರೇಲರ ಆಯಾ ದಂಡು ಗಳು ತಮ್ಮ ಕುಲದ ಧ್ವಜ ಇರುವಲ್ಲಿಯೇ ಪಾಳೆಯ ಮಾಡಿ ಕೊಳ್ಳಬೇಕು. 53ಆದರೆ ಲೇವಿಯರು ಪವಿತ್ರಗುಡಾರದ ಸುತ್ತಲೂ ತಮ್ಮ ಪಾಳೆಯ ಮಾಡಿಕೊಳ್ಳಬೇಕು. ಹೀಗೆ ಲೇವಿಯರು ಒಡಂಬಡಿಕೆಯ ಪವಿತ್ರಗುಡಾರವನ್ನು ಕಾಯುವರು; ಇಸ್ರೇಲರಿಗೆ ಯಾವ ಕೇಡೂ ಸಂಭವಿಸ ದಂತೆ ಅವರು ಪವಿತ್ರಗುಡಾರವನ್ನು ಸಂರಕ್ಷಿಸುವರು.''

54ಹೀಗೆ ಯೆಹೋವನು ಮೋಶೆಗೆ ಆಜ್ಞಾಪಿಸಿದ್ದ ಪ್ರತಿಯೊಂದನ್ನು ಇಸ್ರೇಲರು ಮಾಡಿದರು.

### ಪಾಳೆಯ ಮಾಡಿಕೊಳ್ಳುವ ಕ್ರಮ

2 ಯೆಹೋವನು ಮೋಶೆ ಆರೋನರಿಗೆ ಹೇಳಿದ್ದೇನೆಂದರೆ: 2''ಇಸ್ರೇಲರು ದೇವದರ್ಶನ ಗುಡಾರದ ಸುತ್ತಲೂ ಸ್ವಲ್ಪ ದೂರದಲ್ಲಿ ತಮ್ಮ ಡೇರೆಗಳನ್ನು ಹಾಕಿ ಕೊಳ್ಳಬೇಕು. ಪ್ರತಿಯೊಬ್ಬನು ತನ್ನತನ್ನ ಗೋತ್ರ ಧ್ವಜದ ಹತ್ತಿರ ತನ್ನ ದಂಡಿನಲ್ಲೇ ಇಳಿದುಕೊಳ್ಳಬೇಕು.

3''ವಿಭಾಗಗಳಿಗನುಸಾರವಾಗಿ ತಮ್ಮ ಸ್ವಂತ ಧ್ವಜಗಳೊಡನೆ ಮುನ್ನಡೆಯುವ ಯೆಹೂದ ಮತ್ತು ಅದರ ಗೋತ್ರಗಳವರು ದೇವದರ್ಶನಗುಡಾರದ ಪೂರ್ವ ದಿಕ್ಕಿನಲ್ಲಿ ಪಾಳೆಯ ಮಾಡಿಕೊಳ್ಳಬೇಕು. ಯೆಹೂದ ಕುಲ ದವರ ನಾಯಕನು ಅಮ್ಮೀನಾದಾಬನ ಮಗನಾದ ನಹಶೋನ. 4ಅವರಲ್ಲಿ ಲೆಕ್ಕಿಸಲ್ಪಟ್ಟ ಸೈನಿಕರು 74,600 ಮಂದಿ.

5''ಇಸ್ಸಾಕಾರನ ಕುಲದವರು ಯೆಹೂದ ಕುಲದವರ ನಂತರ ಪಾಳೆಯ ಹಾಕುವರು. ಇಸ್ಸಾಕಾರನ ಕುಲದವರ ನಾಯಕನು ಚೂವಾರನ ಮಗನಾದ ನೆತನೇಲ. 6ಅವರಲ್ಲಿ ಲೆಕ್ಕಿಸಲ್ಪಟ್ಟ ಸೈನಿಕರು 54,400 ಮಂದಿ.

7''ಜೆಬುಲೂನ ಕುಲದವರು ಸಹ ಯೆಹೂದ ಕುಲ ದವರ ನಂತರ ಪಾಳೆಯ ಹಾಕುವರು. ಜೆಬುಲೂನ್ ಕುಲದ ನಾಯಕನು ಹೇಲೋನನ ಮಗನಾದ ಎಲೀಯಾಬ್. 8ಅವರಲ್ಲಿ ಲೆಕ್ಕಿಸಲ್ಪಟ್ಟ ಸೈನಿಕರು 57,400 ಮಂದಿ. 9''ಯೆಹೂದ ಪಾಳೆಯದಲ್ಲಿ ಮತ್ತು ಅದರೊಡನೆ ಮುನ್ನಡೆಯುವ ಗೋತ್ರಗಳವರ ಒಟ್ಟು ಸೈನಿಕರು 186,400 ಮಂದಿ. ಇವರೆಲ್ಲರು ವಿಭಾಗ ಗಳಿಗನುಸಾರವಾಗಿ ತಮ್ಮ ಹೆಸರುಗಳನ್ನು ನೊಂದಾಯಿಸಿ ಕೊಂಡವರು. ಇಸ್ರೇ ಲರು ಒಂದು ಸ್ಥಳದಿಂದ ಇನ್ನೊಂದು ಸ್ಥಳಕ್ಕೆ ಪ್ರಯಾಣಮಾಡುವಾಗ, ಯೆಹೂದ (ಮತ್ತು ಅದ ರೊಂದಿಗಿರುವ ಎರಡು ಕುಲಗಳವರು) ಮೊದಲು ಹೊರಡುವರು.

10''ರೂಬೇನ್ ಕುಲ ಮತ್ತು ಅದರೊಡನೆ ಮುನ್ನಡೆಯುವ ಕುಲಗಳು ದೇವದರ್ಶನಗುಡಾರದ ದಕ್ಷಿಣ ದಿಕ್ಕಿನಲ್ಲಿ ತಮ್ಮ ಧ್ವಜಗಳೊಡನೆ ವಿಭಾಗಗಳಿಗನುಸಾರವಾಗಿ ಪಾಳೆಯಮಾಡಿಕೊಳ್ಳಬೇಕು. ರೂಬೇನ್ ಕುಲದವರ ನಾಯಕನು ಶೆದೇಯೂರನ ಮಗನಾದ ಎಲೀಚೂರನು; 11ಇವರಲ್ಲಿ ಲೆಕ್ಕಿಸಲ್ಪಟ್ಟ ಸೈನಿಕರು 46,500 ಮಂದಿ.

12''ರೂಬೇನ್ ಕುಲದವರ ಪಕ್ಕದಲ್ಲಿ ಸಿಮೆಯೋನ್ ಕುಲದವರು ಪಾಳೆಯ ಹಾಕುವರು. ಸಿಮೆಯೋನ್ ಕುಲದವರ ನಾಯಕನು ಚೂರೀಷದ್ದೈನ ಮಗನಾದ ಶೆಲುಮೀಯೇಲ. 13ಇವರಲ್ಲಿ ಲೆಕ್ಕಿಸಲ್ಪಟ್ಟ ಸೈನಿಕರು 59,300 ಮಂದಿ.

14''ಗಾದನ ಕುಲವು ಸಹ ರೂಬೇನ್ ಕುಲದ ಪಕ್ಕದಲ್ಲಿ ಪಾಳೆಯ ಮಾಡಿಕೊಳ್ಳಬೇಕು. ಗಾದನ ಕುಲದವರ ನಾಯಕನು ರೆಗೂವೇಲನ ಮಗನಾದ ಎಲ್ಯಾಸಾಫ್. 15ಇವರಲ್ಲಿ ಲೆಕ್ಕಿಸಲ್ಪಟ್ಟ ಸೈನಿಕರು 45,650 ಮಂದಿ.

16''ರೂಬೇನನ ಪಾಳೆಯದಲ್ಲಿರುವ ಎಲ್ಲಾ ತಂಡ ಗಳಲ್ಲಿರುವ ಒಟ್ಟು ಸೈನಿಕರು 1,51,450 ಮಂದಿ. ಇವ ರೆಲ್ಲರೂ ವಿಭಾಗಗಳಿಗನುಸಾರವಾಗಿ ಹೆಸರನ್ನು ನೊಂದಾ ಯಿಸಿಕೊಂಡವರು. ಇಸ್ರೇಲರು ಒಂದು ಸ್ಥಳದಿಂದ ಇನ್ನೊಂದು ಸ್ಥಳಕ್ಕೆ ಪ್ರಯಾಣಮಾಡುವಾಗ ರೂಬೇನ್ ಕುಲವು ಮತ್ತು ಅದರ ನಂತರದಲ್ಲಿರುವ ಎರಡು ಕುಲ ಗಳವರು ಎರಡನೆಯದಾಗಿ ಹೊರಡುವರು.

17''ಇಸ್ರೇಲರು ಪ್ರಯಾಣಮಾಡುವಾಗ ಅವರ ನಂತರ ಹೊರಡುವ ತಂಡದವರೇ ಲೇವಿ ಕುಲದವರು. ಇತರ

ಪಾಳೆಯಗಳ ಮಧ್ಯೆ ದೇವದರ್ಶನಗುಡಾರವು ಅವ
ರೊಡನೆ ಇರುವುದು. ಅವರು ತಾವು ಪಾಳೆಯ ಮಾಡಿ
ಕೊಂಡ ಕ್ರಮಾನುಸಾರವಾಗಿ ತಮ್ಮ ಧ್ವಜಗಳೊಡನೆ
ಮುನ್ನಡೆಯುವರು.
18‘‘ಎಫ್ರಾಯೀಮ್ ಕುಲದವರು ಮತ್ತು ಅವರೊಡನೆ
ಮುನ್ನಡೆಯುವ ಕುಲಗಳವರು ದೇವದರ್ಶನಗುಡಾರದ
ಪಶ್ಚಿಮದಿಕ್ಕಿನಲ್ಲಿ ತಮ್ಮ ಧ್ವಜಗಳೊಡನೆ ವಿಭಾಗಗಳಿಗನು
ಸಾರವಾಗಿ ಪಾಳೆಯ ಮಾಡಬೇಕು. ಎಫ್ರಾಯೀಮರ
ಕುಲದವರ ನಾಯಕನು ಅಮ್ಮೀಹೂದನ ಮಗನಾದ
ಎಲೀಷಾಮ. 19ಇವರಲ್ಲಿ ಲೆಕ್ಕಿಸಲ್ಪಟ್ಟ ಸೈನಿಕರು 40,500
ಮಂದಿ.
20‘‘ಮನಸ್ಸೆ ಕುಲದವರು ಎಫ್ರಾಯೀಮ್ ಕುಲದವರ
ಪಕ್ಕದಲ್ಲಿ ಪಾಳೆಯ ಹಾಕುವರು. ಮನಸ್ಸೆ ಕುಲದವರ
ನಾಯಕನು ಪೆದಾಚೂರನ ಮಗನಾದ ಗಮ್ಲೀಯೇಲ.
21ಇವರಲ್ಲಿ ಲೆಕ್ಕಿಸಲ್ಪಟ್ಟ ಸೈನಿಕರು 32,200 ಮಂದಿ.
22‘‘ಬೆನ್ಯಾಮೀನನ ಕುಲವು ಸಹ ಎಫ್ರಾಯೀಮ್
ಕುಲದ ಪಕ್ಕದಲ್ಲಿ ಪಾಳೆಯ ಹಾಕುವರು. ಬೆನ್ಯಾಮೀನ್
ಕುಲದವರ ನಾಯಕನು ಗಿದ್ಯೋನನ ಮಗನಾದ
ಅಬೀದಾನನು. 23ಇವರಲ್ಲಿ ಲೆಕ್ಕಿಸಲ್ಪಟ್ಟ ಸೈನಿಕರು 35,400
ಮಂದಿ.
24‘‘ಎಫ್ರಾಯೀಮರ ಪಾಳೆಯದಲ್ಲಿರುವ ಸೈನಿಕರು
1,08,100 ಮಂದಿ. ಇವರೆಲ್ಲರು ತಮ್ಮ ವಿಭಾಗಗಳಿಗನು
ಸಾರವಾಗಿ ಹೆಸರನ್ನು ನೊಂದಾಯಿಸಿಕೊಂಡವರು.
ಜನರು ಒಂದು ಸ್ಥಳದಿಂದ ಇನ್ನೊಂದು ಸ್ಥಳಕ್ಕೆ ಪ್ರಯಾಣ
ಮಾಡುವಾಗ ಎಫ್ರಾಯೀಮರ ಕುಲದವರು ಮತ್ತು
ಅವರ ನಂತರದಲ್ಲಿರುವ ಎರಡು ಕುಲಗಳವರು
ಮೂರನೆಯ ಗುಂಪಾಗಿ ಹೊರಡುವರು.
25‘‘ದಾನ್ ಕುಲದವರು ಮತ್ತು ಅವರೊಡನೆ
ಮುನ್ನಡೆಯುವ ಕುಲಗಳು ದೇವದರ್ಶನಗುಡಾರದ
ಉತ್ತರದಿಕ್ಕಿನಲ್ಲಿ ತಮ್ಮ ಧ್ವಜದೊಡನೆ ವಿಭಾಗಗಳಿ
ಗನುಸಾರವಾಗಿ ಪಾಳೆಯ ಮಾಡಬೇಕು. ದಾನ್ ಕುಲದ
ನಾಯಕನು ಅಮ್ಮೀಷದ್ದೈಯನ ಮಗನಾದ
ಅಹೀಗೆಜೆರ್. 26ಇವರಲ್ಲಿ ಲೆಕ್ಕಿಸಲ್ಪಟ್ಟ ಸೈನಿಕರು 62,700
ಮಂದಿ.
27ಆಶೇರ್ ಕುಲದವರು ದಾನ್ ಕುಲದ ಪಕ್ಕದಲ್ಲಿ
ಪಾಳೆಯ ಹಾಕಬೇಕು. ಆಶೇರ್ ಕುಲದವರ ನಾಯಕನು
ಒಕ್ರಾನನ ಮಗನಾದ ಪಗೀಯೇಲ. 28ಇವರಲ್ಲಿ ಲೆಕ್ಕಿಸ
ಲ್ಪಟ್ಟ ಸೈನಿಕರು 41,500 ಮಂದಿ.
29‘‘ನಫ್ತಾಲಿ ಕುಲದವರು ಸಹ ದಾನ್ ಕುಲದ ಪಕ್ಕದಲ್ಲಿ
ಪಾಳೆಯ ಹಾಕಬೇಕು. ನಫ್ತಾಲಿ ಕುಲದವರ ನಾಯಕನು
ಏನಾನನ ಮಗನಾದ ಅಹೀರ. 30ಇವರಲ್ಲಿ ಲೆಕ್ಕಿಸಲ್ಪಟ್ಟ
ಸೈನಿಕರು 53,400 ಮಂದಿ.
31‘‘ದಾನ್ ಕುಲದವರಲ್ಲಿ ಲೆಕ್ಕಿಸಲ್ಪಟ್ಟ ಸೈನಿಕರು
1,57,600 ಮಂದಿ. ಇಸ್ರೇಲರು ಸ್ಥಳದಿಂದ ಸ್ಥಳಕ್ಕೆ
ಪ್ರಯಾಣಮಾಡುವಾಗ ದಾನ್ ಕುಲದವರು ಮತ್ತು
ಅವರೊಂದಿಗಿರುವ ಎರಡು ಕುಲಗಳವರು ಕೊನೆಯಲ್ಲಿ
ತಮ್ಮ ಧ್ವಜಗಳೊಡನೆ ಮುನ್ನಡೆಯುವರು.’’
32ತಮ್ಮ ಕುಟುಂಬಗಳಿಗನುಸಾರವಾಗಿ ಹೆಸರನ್ನು
ನೊಂದಾಯಿಸಿಕೊಂಡ ಇಸ್ರೇಲರು ಇವರೇ. ಅವರ
ವಿಭಾಗಗಳಿಗನುಸಾರವಾಗಿ ಪಾಳೆಯದಲ್ಲಿ ಲೆಕ್ಕಿಸಲ್ಪಟ್ಟ
ಇಸ್ರೇಲರ ಸೈನಿಕರ ಸಂಖ್ಯೆ 6,03,550 ಮಂದಿ.
33ಯೆಹೋವನ ಆಜ್ಞೆಯ ಪ್ರಕಾರ ಮೋಶೆಯು ಲೇವಿ
ಯರನ್ನು ಇತರ ಇಸ್ರೇಲರೊಂದಿಗೆ ಲೆಕ್ಕಿಸಲಿಲ್ಲ.
34ಹೀಗೆ ಯೆಹೋವನು ಮೋಶೆಗೆ ಹೇಳಿದ ಪ್ರತಿ
ಯೊಂದನ್ನು ಇಸ್ರೇಲರು ಮಾಡಿದರು. ತಮ್ಮ ಕ್ರಮಕ್ಕನು
ಸಾರವಾಗಿ ಅವರು ಪಾಳೆಯ ಮಾಡಿಕೊಂಡರು. ನೇಮಕ
ವಾದ ಪ್ರಕಾರವೇ ಪ್ರಯಾಣ ಮಾಡುತ್ತಿದ್ದರು; ಪ್ರತಿ
ಯೊಬ್ಬನು ತನ್ನ ಸ್ವಂತ ಕುಲದೊಡನೆಯೂ ಕುಟುಂಬ
ದೊಡನೆಯೂ ಇದ್ದನು.

### ಯಾಜಕರಾದ ಆರೋನನ ಕುಟುಂಬ

3 ಯೆಹೋವನು ಸೀನಾಯಿ ಬೆಟ್ಟದಲ್ಲಿ ಮೋಶೆ
ಯೊಡನೆ ಮಾತಾಡಿದ ಸಮಯದಲ್ಲಿದ್ದ ಆರೋನ
ಮತ್ತು ಮೋಶೆಯ ಸಂತತಿಗಳವರು ಇವರೇ. 2ಆರೋನ
ನಿಗೆ ನಾಲ್ಕು ಮಂದಿ ಗಂಡುಮಕ್ಕಳಿದ್ದರು. ನಾದಾಬನು
ಚೊಚ್ಚಲ ಮಗ. ಅನಂತರ ಹುಟ್ಟಿದವರು ಅಬೀಹು,
ಎಲ್ಲಾಜಾರ್ ಮತ್ತು ಈತಾಮಾರ್. 3ಈ ಗಂಡುಮಕ್ಕಳು
ಯಾಜಕರಾಗಿ ಸೇವೆಮಾಡಲು ಅಭಿಷೇಕಿಸಲ್ಪಟ್ಟವ
ರಾಗಿದ್ದರು ಮತ್ತು ಪ್ರತಿಷ್ಠಿತರಾದವರಾಗಿದ್ದರು.
4ಆದರೆ ನಾದಾಬ್ ಮತ್ತು ಅಬೀಹು ಎಂಬಿಬ್ಬರು
ಯೆಹೋವನ ಸೇವೆಮಾಡುತ್ತಿದ್ದಾಗ ಪಾಪಮಾಡಿದ್ದರಿಂದ
ಸತ್ತರು. ಅವರು ಯೆಹೋವನಿಗೆ ಧೂಪವನ್ನು ಸಮರ್ಪಿ
ಸುವಾಗ ಯೆಹೋವನು ಅಪ್ಪಣೆ ಕೊಡದೆ ಇದ್ದ ಬೆಂಕಿ
ಯನ್ನು ಉಪಯೋಗಿಸಿದರು. ಇದು ಸೀನಾಯಿ
ಮರುಭೂಮಿಯಲ್ಲಿ ನಡೆಯಿತು. ಆದ್ದರಿಂದ ನಾದಾಬ್
ಮತ್ತು ಅಬೀಹೂ ಅಲ್ಲಿ ಸತ್ತರು. ಅವರಿಗೆ ಗಂಡು
ಮಕ್ಕಳಿಲ್ಲದ್ದರಿಂದ ಎಲ್ಲಾಜಾರನು ಮತ್ತು ಈತಾಮಾರನು
ಅವರ ತಂದೆಯಾದ ಆರೋನನ ಕೈಕೆಳಗೆ ಯೆಹೋವನ
ಸೇವೆಮಾಡಿದರು.

### ಯಾಜಕರ ಸಹಾಯಕರಾದ ಲೇವಿಯರು

5ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ, 6‘‘ಲೇವಿ
ಕುಲದವರನ್ನು ಯಾಜಕನಾದ ಆರೋನನ ಬಳಿಗೆ ಕರೆದು
ಕೊಂಡು ಬಾ. ಅವರು ಆರೋನನಿಗೆ ಸಹಾಯಕ

ರಾಗಿರುವರು. 7ಲೇವಿಯರು ಅವನಿಗಾಗಿ ಮತ್ತು ಇಡೀ
ಸಮೂಹಕ್ಕಾಗಿ ದೇವದರ್ಶನಗುಡಾರದ ಮುಂದೆ
ಕಾವಲುಗಾರರಾಗಿರುವರು ಮತ್ತು ದೇವದರ್ಶನ
ಗುಡಾರಕ್ಕೆ ಸಂಬಂಧಿಸಿದ ಭಾರವಾದ ಕೆಲಸಗಳನ್ನು
ಮಾಡುವರು. 8ದೇವದರ್ಶನಗುಡಾರವು (ಚಲಿಸುತ್ತಿರು
ವಾಗ) ಲೇವಿಯರು ದೇವದರ್ಶನ ಗುಡಾರಕ್ಕೆ ಸಂಬಂಧಿ
ಸಿದ ಭಾರವಾದ ಕೆಲಸಗಳನ್ನು ಮಾಡುವುದಲ್ಲದೆ, ದೇವ
ದರ್ಶನಗುಡಾರದ ಎಲ್ಲಾ ಉಪಕರಣಗಳನ್ನು ಇಸ್ರೇಲರಿ
ಗೋಸ್ಕರ ಕಾಯಬೇಕು.

9“ಲೇವಿಯರನ್ನು ಆರೋನನಿಗೂ ಅವನ ಪುತ್ರರಿಗೂ
ಕೊಡು. ಲೇವಿಯರು ಇಸ್ರೇಲರ ಮಧ್ಯದಿಂದ ಆರೋನ
ನಿಗೋಸ್ಕರವಾಗಿ ಪ್ರತಷ್ಠಿತರಾಗಿದ್ದಾರೆ.

10“ಆರೋನನನ್ನೂ ಅವನ ಪುತ್ರರನ್ನೂ ಯಾಜಕ
ರನ್ನಾಗಿ ನೇಮಿಸು. ಅವರು ತಮ್ಮ ಯಾಜಕೋದ್ಯೋಗ
ವನ್ನು ಕಾಪಾಡಿಕೊಳ್ಳಬೇಕು. ಯಾಜಕರ ಕರ್ತವ್ಯಗಳನ್ನು
ಮಾಡಲು ಪವಿತ್ರ ವಸ್ತುಗಳ ಬಳಿಗೆ ಬರಲು ಬೇರೆ ಯಾವ
ನಾದರೂ ಪ್ರಯತ್ನಿಸಿದರೆ ಅವನು ಕೊಲ್ಲಲ್ಪಡಬೇಕು.”
11ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ,
12“ಇಸ್ರೇಲಿನ ಪ್ರತಿ ಕುಟುಂಬವು ತನ್ನ ಚೊಚ್ಚಲ ಮಗ
ನನ್ನು ನನಗೆ ಕೊಡಬೇಕೆಂದು ನಿನಗೆ ಹೇಳಿದ್ದೆ. ಆದರೆ
ನನ್ನ ಸೇವೆಮಾಡುವುದಕ್ಕೆ ಈಗ ನಾನು ಲೇವಿಯರನ್ನು
ಆರಿಸಿಕೊಂಡಿದ್ದೇನೆ. ಅವರು ನನ್ನವರಾಗಿರುವರು. ಆದ್ದ
ರಿಂದ ಬೇರೆ ಎಲ್ಲಾ ಇಸ್ರೇಲರು ತಮ್ಮ ಚೊಚ್ಚಲು ಗಂಡು
ಮಕ್ಕಳನ್ನು ನನಗೆ ಕೊಡಬೇಕಾಗಿಲ್ಲ.

13“ನೀವು ಈಜಿಪ್ಟಿನಲ್ಲಿದ್ದಾಗ ನಾನು ಈಜಿಪ್ಟಿನವರ
ಎಲ್ಲಾ ಚೊಚ್ಚಲು ಮಕ್ಕಳನ್ನು ಕೊಂದೆನು. ಆ ಕಾಲದಲ್ಲಿ
ನಾನು ಇಸ್ರೇಲರ ಎಲ್ಲಾ ಚೊಚ್ಚಲು ಮಕ್ಕಳನ್ನು ನನ್ನವ
ರನ್ನಾಗಿ ತೆಗೆದುಕೊಂಡೆನು. ಎಲ್ಲಾ ಚೊಚ್ಚಲು ಗಂಡು
ಮಕ್ಕಳು ಮತ್ತು ಚೊಚ್ಚಲು ಪಶುಗಳು ನನ್ನದಾಗಿದ್ದವು.
ಆದರೆ ಈಗ ನಿಮ್ಮ ಎಲ್ಲಾ ಚೊಚ್ಚಲು ಗಂಡು ಮಕ್ಕಳನ್ನು
ನಿಮಗೇ ಹಿಂದಕ್ಕೆ ಕೊಡುತ್ತಿದ್ದೇನೆ ಮತ್ತು ಲೇವಿಯರನ್ನು
ನನ್ನವರನ್ನಾಗಿ ಮಾಡುತ್ತಿದ್ದೇನೆ. ನಾನೇ ಯೆಹೋವನು.”

14ಯೆಹೋವನು ತಿರುಗಿ ಸೀನಾಯಿ ಮರುಭೂಮಿ
ಯಲ್ಲಿ ಮೋಶೆಯೊಡನೆ ಮಾತಾಡಿದನು. ಯೆಹೋವನು
ಹೇಳಿದ್ದೇನೆಂದರೆ, 15“ಲೇವಿಯರನ್ನು ಅವರ ಕುಟುಂಬ
ಗಳಿಗನು ಗುಣವಾಗಿಯೂ ಕುಲಗಳಿಗನುಸಾರ
ವಾಗಿಯೂ ಲೆಕ್ಕಿಸು. ಪ್ರತಿಯೊಬ್ಬ ಗಂಡಸನ್ನೂ ಒಂದು
ತಿಂಗಳು ಮೇಲ್ಪಟ್ಟ ಪ್ರತಿಯೊಬ್ಬ ಹುಡುಗನನ್ನೂ ಲೆಕ್ಕಿಸು.’
16ಮೋಶೆ ಯೆಹೋವನಿಗೆ ವಿಧೇಯನಾಗಿ ಅವ
ರೆಲ್ಲರನ್ನೂ ಲೆಕ್ಕಿಸಿದನು.

17ಲೇವಿಗೆ ಮೂರು ಗಂಡುಮಕ್ಕಳಿದ್ದರು. ಅವರ
ಹೆಸರುಗಳು: ಗೇರ್ಷೋನ್, ಕೆಹಾತ್ ಮತ್ತು ಮೆರಾರೀ.

18ಪ್ರತಿಯೊಬ್ಬ ಮಗನು ಅನೇಕ ಗೋತ್ರಗಳ ನಾಯಕ
ನಾಗಿದ್ದನು. ಗೇರ್ಷೋನನ ಗೋತ್ರಗಳು: ಲಿಬ್ನೀ ಮತ್ತು
ಶಿಮ್ಮೀ. 19ಕೆಹಾತನ ಗೋತ್ರಗಳು: ಅಮ್ರಾಮ್,
ಇಚ್ಹಾರ್, ಹೆಬ್ರೋನ್ ಮತ್ತು ಉಜ್ಜೀಯೇಲ್.

20ಮೆರಾರೀಯ ಕುಲಗಳು: ಮಹ್ಲೀ ಮತ್ತು ಮೂಷೀ.
ಅವು ಲೇವಿ ಕುಲದ ಗೋತ್ರಗಳಾಗಿವೆ. 21ಲಿಬ್ನೀ ಮತ್ತು
ಶಿಮ್ಮೀಯ ಕುಟುಂಬಗಳು ಗೇರ್ಷೋನನ ಕುಟುಂಬಕ್ಕೆ
ಸೇರಿದವುಗಳಾಗಿದ್ದವು. 22ಈ ಎರಡು ಕುಲಗಳಲ್ಲಿ ಒಂದು
ತಿಂಗಳು ಮತ್ತು ಅದಕ್ಕಿಂತ ಹೆಚ್ಚು ವಯಸ್ಸಾದ 7,500
ಮಂದಿ ಗಂಡಸರು ಮತ್ತು ಹುಡುಗರು ಇದ್ದರು.
23ಗೇರ್ಷೋನನ ಕುಲದವರು ಪಶ್ಚಿಮದಿಕ್ಕಿನಲ್ಲಿ ದೇವ
ದರ್ಶನಗುಡಾರದ ಹಿಂಭಾಗದಲ್ಲಿ ಪಾಳೆಯ ಮಾಡಿ
ಕೊಂಡರು. 24ಗೇರ್ಷೋನನ ಕುಟುಂಬಗಳ ನಾಯಕನು
ಲಾಯೇಲನ ಮಗನಾದ ಎಲ್ಯಾಸಾಫ್. 25ದೇವದರ್ಶನ
ಗುಡಾರದಲ್ಲಿ ಪವಿತ್ರಗುಡಾರವನ್ನು, ಹೊರಡೇರೆಯನ್ನು
ಮತ್ತು ಅದರ ಮೇಲ್ಹೊದಿಕೆಯನ್ನು ನೋಡಿಕೊಳ್ಳುವುದು
ಗೇರ್ಷೋನರ ಕೆಲಸವಾಗಿತ್ತು. ಇದಲ್ಲದೆ ಅವರು ಅಂಗ
ಳದ ಪರದೆಯನ್ನೂ ನೋಡಿಕೊಳ್ಳುತ್ತಿದ್ದರು. 26ಅವರು
ಅಂಗಳದ ಪರದೆಗಳನ್ನೂ ಅಂಗಳದ ಪ್ರವೇಶ ದ್ವಾರದ
ಪರದೆಯನ್ನೂ ನೋಡಿಕೊಳ್ಳಬೇಕು. ಈ ಅಂಗಳವು
ಪವಿತ್ರಗುಡಾರದ ಮತ್ತು ವೇದಿಕೆಯ ಸುತ್ತಲೂ ಇತ್ತು.
ಅವರು ಹಗ್ಗಗಳನ್ನೂ ಪರದೆಗಳೊಂದಿಗೆ ಉಪಯೋ
ಗಿಸುವ ಪ್ರತಿಯೊಂದನ್ನೂ ನೋಡಿಕೊಂಡರು.

27ಅಮ್ರಾಮ್, ಇಚ್ಹಾರ್, ಹೆಬ್ರೋನ್ ಮತ್ತು
ಉಜ್ಜೀಯೇಲ್ ಗೋತ್ರಗಳವರು ಕೆಹಾತನ ಕುಲದವ
ರಾಗಿದ್ದರು. 28ಈ ಕುಲದಲ್ಲಿ ಒಂದು ತಿಂಗಳು ಮೊದಲು
ಗೊಂಡು ಹೆಚ್ಚಾದ ವಯಸ್ಸುಳ್ಳ 8,300* ಗಂಡಸರು
ಮತ್ತು ಹುಡುಗರು ಇದ್ದರು. ಕೆಹಾತ್ಯರಿಗೆ ಪವಿತ್ರಸ್ಥಳದ
ವಸ್ತುಗಳನ್ನು ನೋಡಿಕೊಳ್ಳುವ ಕೆಲಸ ಕೊಡಲ್ಪಟ್ಟಿತು.
29ಕೆಹಾತ್ಯರ ಗೋತ್ರಗಳವರು ಪವಿತ್ರಗುಡಾರದ ದಕ್ಷಿಣ
ದಿಕ್ಕಿನ ಉದ್ದಕ್ಕೂ ಪಾಳೆಯ ಹಾಕಿಕೊಂಡರು.

30ಕೆಹಾತ್ಯರ ನಾಯಕ ಉಜ್ಜೀಯೇಲನ ಮಗನಾದ
ಎಲೀಚಾಫಾನ್. 31ಅವರು ಪವಿತ್ರಪೆಟ್ಟಿಗೆ, ಮೇಜು,
ದೀಪಸ್ತಂಭ, ವೇದಿಕೆಗಳನ್ನು ಮತ್ತು ಪವಿತ್ರಸ್ಥಳದ
ಸಾಮಗ್ರಿಗಳನ್ನು, ಪರದೆಯನ್ನು ಮತ್ತು ಅವುಗಳಿಗೆ
ಸಂಬಂಧಪಟ್ಟ ಎಲ್ಲಾ ಕಷ್ಟಕರವಾದ ಕೆಲಸಗಳನ್ನು ನೋಡಿ
ಕೊಳ್ಳಬೇಕಾಗಿತ್ತು.

32ಆರೋನನ ಮಗನಾದ ಎಲ್ಲಾಜಾರನು ಲೇವಿ
ಯರಿಗೆ ನಾಯಕನಾಗಿದ್ದನು. ಪವಿತ್ರವಸ್ತುಗಳನ್ನು

---

**8,300** ಪುರಾತನ ಗ್ರೀಕ್ ಭಾಷಾಂತರದ ಕೆಲವು ಗ್ರೀಕ್ ಪ್ರತಿಗಳಲ್ಲಿ “8,300” ಎಂದು ಬರೆದಿದೆ. ಆದರೆ ಹೀಬ್ರೂ ಪ್ರತಿಗಳಲ್ಲಿ “8,600” ಎಂದು ಬರೆದಿದೆ. ವಚನ39ರ ಪ್ರಕಾರ ಬೇಕಾದ ಒಟ್ಟು ಸಂಖ್ಯೆ 8,300.

ನೋಡಿಕೊಳ್ಳುವ ಜನರಿಗೆಲ್ಲಾ ಎಲ್ಲಾಜಾರನು
ಮೇಲ್ವಿಚಾರಕನಾಗಿದ್ದನು.
33-34ಮಹ್ಲೀ ಮತ್ತು ಮೂಷೀಯ ಗೋತ್ರಗಳವರು
ಮೆರಾರೀಯ ಕುಲದವರಾಗಿದ್ದರು. ಮಹ್ಲೀಯ ಕುಲ
ದಲ್ಲಿ ಒಂದು ತಿಂಗಳು ಮೊದಲುಗೊಂಡು ಹೆಚ್ಚಾದ
ವಯಸ್ಸುಳ್ಳ 6,200 ಮಂದಿ ಗಂಡಸರು ಮತ್ತು ಹುಡುಗರು
ಇದ್ದರು. 35ಮೆರಾರೀ ಕುಲಗಳ ನಾಯಕನು ಅಬೀಹೈಲನ
ಮಗನಾದ ಚೂರೀಯೇಲ್. ಮೆರಾರೀ ಗೋತ್ರಗಳವರು
ಪವಿತ್ರಗುಡಾರದ ಉತ್ತರದಿಕ್ಕಿನಲ್ಲಿ ಪಾಳೆಯ ಮಾಡಿ
ಕೊಂಡರು. 36ಮೆರಾರೀ ಕುಲದವರಿಗೆ ಪವಿತ್ರಗುಡಾರದ
ಚೌಕಟ್ಟುಗಳನ್ನು ನೋಡಿಕೊಳ್ಳುವ ಕೆಲಸ ಕೊಡಲ್ಪಟ್ಟಿತು.
ಅವರು ಎಲ್ಲಾ ಅಗುಳಿಗಳನ್ನು, ಕಂಬಗಳನ್ನು, ಗದ್ದಿಗೆ
ಕಲ್ಲುಗಳನ್ನು, ಅದರ ಎಲ್ಲ ಉಪಕರಣಗಳನ್ನು ಮತ್ತು
ಅವುಗಳಿಗೆ ಸಂಬಂಧಪಟ್ಟ ಕಷ್ಟಕರವಾದ ಎಲ್ಲಾ ಕೆಲಸ
ವನ್ನು ನೋಡಿಕೊಳ್ಳಬೇಕಾಗಿತ್ತು. 37ಅವರು ಪವಿತ್ರ
ಗುಡಾರದ ಸುತ್ತಲಿನ ಅಂಗಳದ ಎಲ್ಲಾ ಕಂಬಗಳನ್ನು
ನೋಡಿಕೊಳ್ಳಬೇಕಾಗಿತ್ತು. ಇದರಲ್ಲಿ ಎಲ್ಲಾ ಗದ್ದಿಗೆ
ಕಲ್ಲುಗಳೂ ಗುಡಾರದ ಗೂಟಗಳೂ ಹಗ್ಗಗಳೂ ಸೇರಿವೆ.
38ಮೋಶೆ, ಆರೋನ ಮತ್ತು ಆರೋನನ ಪುತ್ರರು ದೇವ
ದರ್ಶನಗುಡಾರದ ಮುಂದೆ ಪವಿತ್ರ ಗುಡಾರದ ಪೂರ್ವ
ದಿಕ್ಕಿನಲ್ಲಿ ಪಾಳೆಯಮಾಡಿಕೊಂಡರು. ಪವಿತ್ರಸ್ಥಳವನ್ನು
ನೋಡಿಕೊಳ್ಳುವ ಕೆಲಸ ಅವರಿಗೆ ಕೊಡ ಲ್ಪಟ್ಟಿತು. ಅವರು
ಇಸ್ರೇಲರೆಲ್ಲರಿಗೋಸ್ಕರ ಇದನ್ನು ಮಾಡಿದರು. ಇವರ
ಕರ್ತವ್ಯಗಳನ್ನು ಬೇರೆ ಯಾವನಾದರೂ ಮಾಡಲು
ಪ್ರಯತ್ನಿಸಿದರೆ ಅವನು ಕೊಲ್ಲಲ್ಪಡಬೇಕು. 39ಆ ಲೇವಿ
ಯರಲ್ಲಿದ್ದ ಒಂದು ತಿಂಗಳು ಮೊದಲುಗೊಂಡು ಹೆಚ್ಚು
ವಯಸ್ಸುಳ್ಳ ಎಲ್ಲಾ ಗಂಡಸರನ್ನು ಮತ್ತು ಹುಡುಗರನ್ನು
ಅವರ ಗೋತ್ರಗಳಿಗನುಸಾರವಾಗಿ ಲೆಕ್ಕಿಸಬೇಕೆಂದು
ಯೆಹೋವನು ಮೋಶೆ ಆರೋನರಿಗೆ ಆಜ್ಞಾಪಿಸಿದನು.
ಅವರ ಒಟ್ಟುಸಂಖ್ಯೆ 22,000.

### ಲೇವಿಯರಿಗೆ ಚೊಚ್ಚಲು ಪುತ್ರರ ಸ್ಥಾನ

40ಯೆಹೋವನು ಮೋಶೆಗೆ, ‘‘ಇಸ್ರೇಲರ ಒಂದು
ತಿಂಗಳು ಮತ್ತು ಅದಕ್ಕಿಂತ ಹೆಚ್ಚು ವಯಸ್ಸಾದ ಎಲ್ಲಾ
ಚೊಚ್ಚಲು ಗಂಡಸರನ್ನು ಲೆಕ್ಕಿಸು. ಅವರ ಹೆಸರುಗಳ
ಪಟ್ಟಿಮಾಡು. 41ನಾನು ಈಗ ಇಸ್ರೇಲಿನ ಚೊಚ್ಚಲು
ಗಂಡಸರನ್ನು ತೆಗೆದುಕೊಳ್ಳುವುದಿಲ್ಲ. ಯೆಹೋವನಾದ
ನಾನು ಲೇವಿಯರನ್ನು ತೆಗೆದುಕೊಳ್ಳುವೆನು. ಮಾತ್ರ
ವಲ್ಲದೆ ಇಸ್ರೇಲಿನಲ್ಲಿ ಇತರ ಜನರ ಚೊಚ್ಚಲು ಪ್ರಾಣಿಗಳ
ಬದಲು, ಲೇವಿಯರ ಎಲ್ಲಾ ಚೊಚ್ಚಲು ಪ್ರಾಣಿಗಳನ್ನು
ತೆಗೆದುಕೊಳ್ಳುವೆನು’’ ಎಂದು ಹೇಳಿದನು.

42ಯೆಹೋವನು ಆಜ್ಞಾಪಿಸಿದಂತೆಯೇ ಮೋಶೆಯು
ಮಾಡಿದನು. ಮೋಶೆಯು ಇಸ್ರೇಲರ ಚೊಚ್ಚಲು ಜನ
ರನ್ನೆಲ್ಲ ಲೆಕ್ಕಿಸಿದನು. 43ಒಂದು ತಿಂಗಳು ಮತ್ತು ಅದಕ್ಕಿಂತ
ಹೆಚ್ಚು ವಯಸ್ಸಾದ ಎಲ್ಲಾ ಚೊಚ್ಚಲು ಗಂಡಸರ ಹೆಸರು
ಗಳನ್ನು ಮೋಶೆ ಪಟ್ಟಿಮಾಡಿದನು. ಆ ಪಟ್ಟಿಯಲ್ಲಿ 22,273
ಹೆಸರುಗಳಿದ್ದವು.
44ಯೆಹೋವನು ಮೋಶೆಗೆ ಮತ್ತೆ ಹೇಳಿದ್ದೇನೆಂದರೆ,
45‘‘ದೇವರಾದ ನಾನು ಈ ಆಜ್ಞೆಯನ್ನು ಕೊಡುತ್ತೇನೆ:
‘ಇಸ್ರೇಲಿನ ಇತರ ಕುಟುಂಬಗಳಿಂದ ಚೊಚ್ಚಲು ಜನ
ರನ್ನು ತೆಗೆದುಕೊಳ್ಳುವ ಬದಲು ಲೇವಿಯರನ್ನೇ ತೆಗೆದು
ಕೊ. ಇಸ್ರೇಲರ ಚೊಚ್ಚಲು ಪಶುಗಳನ್ನು ತೆಗೆದುಕೊಳ್ಳುವ
ಬದಲು ಲೇವಿಯರ ಪಶುಗಳನ್ನೇ ತೆಗೆದುಕೊ.
ಲೇವಿಯರು ನನ್ನ ಸ್ವತ್ತಾಗಿದ್ದಾರೆ. 46ಲೇವಿಯರ ಸಂಖ್ಯೆ
22,000. ಆದರೆ ಬೇರೆ ಕುಟುಂಬಗಳ ಚೊಚ್ಚಲು ಪುತ್ರರ
ಸಂಖ್ಯೆ 22,273. ಹೀಗೆ ಲೇವಿಯರಿಗಿಂತ ಇನ್ನೂ
ರೆಪ್ಪತ್ಮೂರು ಮಂದಿ ಹೆಚ್ಚು ಚೊಚ್ಚಲು ಪುತ್ರರಿರುತ್ತಾರೆ.
47ಅಧಿಕೃತ ಅಳತೆಯನ್ನು ಉಪಯೋಗಿಸಿ ಪ್ರತಿಯೊಬ್ಬನಿಗೆ
ಅಂದರೆ ಇನ್ನೂರೆಪ್ಪತ್ಮೂರು ಮಂದಿಗೆ ಐದೈದು ಶೆಕೆಲ್
ಬೆಳ್ಳಿಯನ್ನು ಸಂಗ್ರಹಿಸು. (ಅಧಿಕೃತ ಅಳತೆಯಲ್ಲಿ ಒಂದು
ಶೆಕೆಲ್ ಅಂದರೆ ಇಪ್ಪತ್ತು ಗೆರಾ.) ಇಸ್ರೇಲರಿಂದ ಈ
ಬೆಳ್ಳಿಯನ್ನು ಸಂಗ್ರಹಿಸು. 48ಆ ಬೆಳ್ಳಿಯನ್ನು ಆರೋನ
ನಿಗೂ ಅವನ ಪುತ್ರರಿಗೂ ಕೊಡು. ಈ ಹಣವು ಇಸ್ರೇಲರ
ಇನ್ನೂರೆಪ್ಪತ್ಮೂರು ಮಂದಿಗೆ ಈಡಾಗಿದೆ.’’
49ಲೇವಿಯರಿಗಿಂತ ಇಸ್ರೇಲರಲ್ಲಿ ಇನ್ನೂರೆಪ್ಪತ್ಮೂರು
ಮಂದಿ ಚೊಚ್ಚಲು ಗಂಡಸರು ಹೆಚ್ಚಾಗಿದ್ದುದರಿಂದ
ಮೋಶೆಯು ಆ ಇನ್ನೂರೆಪ್ಪತ್ಮೂರು ಮಂದಿಗೆ ಈಡು
ಕೊಡುವುದಕ್ಕಾಗಿ ಹಣವನ್ನು ಸಂಗ್ರಹಿಸಿದನು.
50ಮೋಶೆಯು ಇಸ್ರೇಲರಲ್ಲಿ ಚೊಚ್ಚಲಾದ ಗಂಡಸರಿಂದ
ಬೆಳ್ಳಿಯನ್ನು ಸಂಗ್ರಹಿಸಿದನು. (ಅವನು ಅಧಿಕೃತ ಅಳತೆ
ಯನ್ನು ಉಪಯೋಗಿಸಿ ಒಂದು ಸಾವಿರದ ಮುನ್ನೂ
ರೈವತ್ತೈದು ಶೆಕಲ್ ಬೆಳ್ಳಿಯನ್ನು ಸಂಗ್ರಹಿಸಿದನು.)
51ಮೋಶೆಯು ಯೆಹೋವನಿಗೆ ವಿಧೇಯನಾಗಿ ಆತನ
ಆಜ್ಞೆಯಂತೆ ಬೆಳ್ಳಿಯನ್ನು ಆರೋನನಿಗೂ ಅವನ
ಪುತ್ರರಿಗೂ ಕೊಟ್ಟನು.

### ಕೆಹಾತ್ ಗೋತ್ರದವರ ಕೆಲಸಗಳು

4 ಯೆಹೋವನು ಮೋಶೆ ಆರೋನರಿಗೆ ಹೇಳಿದ್ದೇ
ನೆಂದರೆ, 2‘‘ಕೆಹಾತ್ ಗೋತ್ರದ ಪುರುಷರನ್ನು
ಲೆಕ್ಕಿಸು. (ಕೆಹಾತ್ಯರು ಲೇವಿ ವಂಶದವರಾಗಿದ್ದಾರೆ.)
3ದೇವದರ್ಶನಗುಡಾರಕ್ಕೆ ಸಂಬಂಧಿಸಿದ ಕೆಲಸವನ್ನು
ಮಾಡಲು ಯೋಗ್ಯರಾದ ಮೂವತ್ತರಿಂದ ಐವತ್ತರೊಳ
ಗಿನ ಎಲ್ಲಾ ಪುರುಷರನ್ನು ಲೆಕ್ಕಿಸು. 4ಅವರು ದೇವದರ್ಶನ

ಗುಡಾರದಲ್ಲಿರುವ ಮಹಾಪರಿಶುದ್ಧ ವಸ್ತುಗಳನ್ನು
ನೋಡಿಕೊಳ್ಳಬೇಕು.
[5]“ಇಸ್ರೇಲರು ಹೊಸ ಸ್ಥಳಕ್ಕೆ ಪ್ರಯಾಣ ಮಾಡುವಾಗ
ಆರೋನನೂ ಅವನ ಪುತ್ರರೂ ದೇವದರ್ಶನಗುಡಾರ
ದೊಳಕ್ಕೆ ಹೋಗಿ, ಮಹಾಪವಿತ್ರಸ್ಥಳವನ್ನು ಮರೆಮಾಡುವ
ತೆರೆಯನ್ನು ಇಳಿಸಿ, ಅದನ್ನು ಒಡಂಬಡಿಕೆಯ ಪವಿತ್ರ
ಪೆಟ್ಟಿಗೆಗೆ ಹೊದಿಸಬೇಕು. [6]ಬಳಿಕ ಅವರು ಇವುಗಳಿಗೆಲ್ಲ
ಶ್ರೇಷ್ಠವಾದ ತೊಗಲಿನಿಂದ ಮಾಡಿದ ಹೊದಿಕೆಯನ್ನು
ಹೊದಿಸಬೇಕು. ಆಮೇಲೆ ಅವರು ನೀಲಿಬಟ್ಟೆಯನ್ನು
ತೊಗಲಿನ ಮೇಲೆ ಹಾಸಿ ಪವಿತ್ರಪೆಟ್ಟಿಗೆಯ ಬಳೆಗಳಲ್ಲಿ
ಹೊರುವ ಕಂಬಗಳನ್ನು ಸೇರಿಸಬೇಕು.”
[7]“ಬಳಿಕ ಅವರು ಪವಿತ್ರ ಮೇಜಿನ ಮೇಲೆ ನೀಲಿ
ಬಟ್ಟೆಯನ್ನು ಹಾಸಬೇಕು. ಪಾನದ್ರವ್ಯಾರ್ಪಣೆಗಳಿಗಾಗಿ
ತಟ್ಟೆಗಳನ್ನೂ ಸೌಟುಗಳನ್ನೂ ಬಟ್ಟಲುಗಳನ್ನೂ ಹೂಜಿ
ಗಳನ್ನೂ ವಿಶೇಷ ರೊಟ್ಟಿಯನ್ನೂ ಮೇಜಿನ ಮೇಲೆ
ಇಡಬೇಕು. [8]ಬಳಿಕ ಅವುಗಳ ಮೇಲೆ ಕೆಂಪುಬಟ್ಟೆಯನ್ನು
ಹಾಸಿ, ಶ್ರೇಷ್ಠವಾದ ತೊಗಲಿನಿಂದ ಮಾಡಿದ ಹೊದಿಕೆ
ಯನ್ನು ಅದಕ್ಕೆ ಹೊದಿಸಬೇಕು. ಬಳಿಕ ಹೊರುವ ಕಂಬ
ಗಳನ್ನು ಮೇಜಿನ ಬಳೆಗಳಲ್ಲಿ ಸೇರಿಸಬೇಕು.
[9]“ಆಮೇಲೆ ದೀಪಸ್ತಂಭಕ್ಕೂ ಅದರ ದೀಪಗಳಿಗೂ
ದೀಪಗಳ ಉಪಕರಣಗಳಿಗೂ (ಬೂದಿ ತೆಗೆಯುವ)
ಅಗ್ಗಿಷ್ಟಿಕೆಗೂ ಮತ್ತು ಅದಕ್ಕಾಗಿ ಉಪಯೋಗಿಸುವ ಎಲ್ಲಾ
ಎಣ್ಣೆಯ ಪಾತ್ರೆಗಳಿಗೂ ನೀಲಿಬಟ್ಟೆಯನ್ನು ಹೊದಿಸ
ಬೇಕು. [10]ಬಳಿಕ ದೀಪಸ್ತಂಭಕ್ಕೂ ಅದರ ಎಲ್ಲಾ ಉಪ
ಕರಣಗಳಿಗೂ ಶ್ರೇಷ್ಠವಾದ ತೊಗಲಿನಿಂದ ಮಾಡಿದ
ಹೊದಿಕೆಯನ್ನು ಹೊದಿಸಬೇಕು. ಆಮೇಲೆ ಅವರು ಈ
ಎಲ್ಲಾ ವಸ್ತುಗಳನ್ನು ಹೊರುವ ಕಂಬಗಳಿಗೆ ಕಟ್ಟಬೇಕು.
[11]“ಅವರು ಚಿನ್ನದ ವೇದಿಕೆಯ ಮೇಲೆ ನೀಲಿಬಟ್ಟೆ
ಯನ್ನು ಹಾಸಿ, ಶ್ರೇಷ್ಠ ತೊಗಲಿನಿಂದ ಅದನ್ನು ಮುಚ್ಚ
ಬೇಕು. ಬಳಿಕ ಅವರು ಹೊರುವ ಕೋಲುಗಳನ್ನು
ವೇದಿಕೆಯ ಬಳೆಗಳಿಗೆ ಸೇರಿಸಬೇಕು.
[12]“ಬಳಿಕ ಆರಾಧನೆಗಾಗಿ ಪವಿತ್ರಸ್ಥಳದಲ್ಲಿ ಉಪ
ಯೋಗಿಸಲ್ಪಡುವ ಎಲ್ಲಾ ವಿಶೇಷ ವಸ್ತುಗಳನ್ನು ಒಟ್ಟಾಗಿ
ಸೇರಿಸಬೇಕು. ಅವುಗಳನ್ನು ನೀಲಿಬಟ್ಟೆಯಿಂದ ಮುಚ್ಚ
ಬೇಕು. ಬಳಿಕ ಅವುಗಳಿಗೆ ಶ್ರೇಷ್ಠವಾದ ತೊಗಲನ್ನು
ಹೊದಿಸಬೇಕು. ಅವರು ಈ ವಸ್ತುಗಳನ್ನು ಹೊರು
ವುದಕ್ಕಾಗಿ ಚೌಕಟ್ಟಿಗೆ ಕಟ್ಟಬೇಕು.
[13]“ಅವರು ತಾಮ್ರದ ವೇದಿಕೆಯಿಂದ ಬೂದಿಯನ್ನು
ತೆಗೆದು, ನೇರಳೆಬಟ್ಟೆಯನ್ನು ಅದರ ಮೇಲೆ ಹಾಸಬೇಕು.
[14]ಬಳಿಕ ಅವರು ವೇದಿಕೆಯಲ್ಲಿ ಆರಾಧನೆಗಾಗಿ ಉಪ
ಯೋಗಿಸಲ್ಪಡುವ ಎಲ್ಲ ವಸ್ತುಗಳನ್ನು ಒಟ್ಟಾಗಿ ಸೇರಿಸ
ಬೇಕು. ಅವುಗಳು ಯಾವುವೆಂದರೆ, ಅಗ್ಗಿಷ್ಟಿಕೆಗಳು,
ಕವಲುಸೌಟುಗಳು, ಸಲಿಕೆಗಳು ಮತ್ತು ಬೋಗುಣಿಗಳು.
ಅವರು ಇವುಗಳನ್ನು ತಾಮ್ರದ ವೇದಿಕೆಯ ಮೇಲೆ
ಇಡಬೇಕು. ಬಳಿಕ ಅವರು ಶ್ರೇಷ್ಠವಾದ ಒಂದು ತೊಗ
ಲಿನ ಹೊದಿಕೆಯನ್ನು ಇವುಗಳಿಗೆಲ್ಲ ಹೊದಿಸಿ, ಹೊರುವ
ಕಂಬಗಳನ್ನು ವೇದಿಕೆಯ ಬಳೆಗಳಲ್ಲಿ ಸೇರಿಸಬೇಕು.
[15]“ಇಸ್ರೇಲರು ಪ್ರಯಾಣಮಾಡುವ ಸಮಯದಲ್ಲಿ
ಆರೋನನು ಮತ್ತು ಅವನ ಪುತ್ರರು ಪವಿತ್ರವಸ್ತುಗಳಿಗೂ
ಪವಿತ್ರ ಉಪಕರಣಗಳಿಗೂ ಹೊದಿಸಿದ ನಂತರ,
ಕೆಹಾತ್ಯರು ಅವುಗಳನ್ನು ಹೊರುವುದಕ್ಕೆ ಹೋಗ
ಬಹುದು. ಈ ರೀತಿ ಅವರು ಪವಿತ್ರ ವಸ್ತುಗಳನ್ನು ಮುಟ್ಟ
ಬಾರದು; ಅವರು ಮುಟ್ಟಿದರೆ ಸಾಯುತ್ತಾರೆ.
[16]“ಯಾಜಕನಾದ ಆರೋನನ ಮಗನಾದ
ಎಲ್ಲಾಜಾರನು ಇಡೀ ಪವಿತ್ರಗುಡಾರವನ್ನು ಮತ್ತು ಎಲ್ಲಾ
ಪವಿತ್ರಸ್ಥಳವನ್ನು ಮತ್ತು ಅದರೊಳಗಿರುವ ಎಲ್ಲಾ
ಪಾತ್ರೆಗಳನ್ನು ನೋಡಿಕೊಳ್ಳುವ ಜವಾಬ್ದಾರಿ ಹೊಂದಿ
ದ್ದಾನೆ. ದೀಪದ ಎಣ್ಣೆಗೂ ಪರಿಮಳಧೂಪಕ್ಕೂ ದೈನಂದಿನ
ಧಾನ್ಯಸಮರ್ಪಣೆಗೂ ಅಭಿಷೇಕತೈಲಕ್ಕೂ ಅವನು
ಜವಾಬ್ದಾರನಾಗಿದ್ದಾನೆ.”
[17]ಯೆಹೋವನು ಮೋಶೆ ಆರೋನರಿಗೆ,
[18]“ಕೆಹಾತ್ಯರು ಲೇವಿಯರ ಮಧ್ಯದಿಂದ ಇಲ್ಲವಾಗದಂತೆ
ಎಚ್ಚರಿಕೆಯಾಗಿರಿ. [19]ಅವರು ಮಹಾಪರಿಶುದ್ಧ ವಸ್ತುಗಳ
ಹತ್ತಿರ ಬಂದಾಗ ಸಾಯದಂತೆ ನೀವು ಅವರ ವಿಷಯದಲ್ಲಿ
ಮಾಡಬೇಕಾದದ್ದೇನೆಂದರೆ, ಆರೋನನೂ ಅವನ
ಪುತ್ರರೂ ಒಳಗೆ ಬಂದು, ಪ್ರತಿಯೊಬ್ಬ ಕೆಹಾತ್ಯನು ಮಾಡ
ಬೇಕಾದ ಕೆಲಸವನ್ನು ಮತ್ತು ಹೊತ್ತುಕೊಂಡು ಹೋಗ
ಬೇಕಾದದ್ದನ್ನು ತೋರಿಸಲಿ. [20]ಇಲ್ಲವಾದರೆ, ಕೆಹಾತ್ಯರು
ಒಳಗೆ ಬಂದು ಪವಿತ್ರವಸ್ತುಗಳನ್ನು ಮುಟ್ಟುವರು. ಆ
ಮಹಾಪರಿಶುದ್ಧ ವಸ್ತುಗಳನ್ನು ಅವರು ಒಂದು ಕ್ಷಣ
ಮುಟ್ಟಿದರೂ ಸಾಯುತ್ತಾರೆ” ಎಂದು ಹೇಳಿದನು.

### ಗೇರ್ಷೋನ್ ಕುಟುಂಬದವರ ಕೆಲಸಗಳು

[21]ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ, [22-
23]“ನೀನು ಗೇರ್ಷೋನ್ಯರನ್ನು ಕುಟುಂಬಗಳಿಗನು
ಸಾರವಾಗಿ ಮತ್ತು ಕುಲಗಳಿಗನುಸಾರವಾಗಿ ಲೆಕ್ಕಿಸು.
ಅಲ್ಲದೆ ದೇವದರ್ಶನಗುಡಾರದ ಸೇವೆಯನ್ನು ಮಾಡಲು
ಯೋಗ್ಯರಾದ ಗಂಡಸರನ್ನು ಪಟ್ಟಿಮಾಡು. ಅವರ
ವಯಸ್ಸು ಮೂವತ್ತರಿಂದ ಐವತ್ತು ವರ್ಷದೊಳಗಿರ
ಬೇಕು.
[24]“ವರ್ಗಾವಣೆಗಾಗಿ ಸಾಮಾನುಗಳನ್ನು ಕಟ್ಟುವು
ದರಲ್ಲಿಯೂ ವರ್ಗಾವಣೆಯಲ್ಲಿಯೂ ಗೇರ್ಷೋನ್ಯರು
ಮಾಡತಕ್ಕ ಕೆಲಸ ಯಾವುದೆಂದರೆ, [25]ಅವರು ಪವಿತ್ರ
ಗುಡಾರದ ಬಟ್ಟೆಗಳನ್ನು, ದೇವದರ್ಶನಗುಡಾರ ಮತ್ತು

ಅದರ ಹೊದಿಕೆ, ಅದರ ಮೇಲಿರುವ ಶ್ರೇಷ್ಠವಾದ
ತೊಗಲಿನ ಹೊದಿಕೆ ಮತ್ತು ದೇವದರ್ಶನಗುಡಾರ
ದಲ್ಲಿರುವ ಪ್ರವೇಶದ್ವಾರದ ಪರದೆಯನ್ನು ವರ್ಗಾಯಿಸ
ಬೇಕು. 26ಅಂಗಳದ ಪರದೆಗಳನ್ನು, ಪವಿತ್ರಗುಡಾರವನ್ನು
ಮತ್ತು ವೇದಿಕೆಯ ಸುತ್ತಲೂ ಇರುವ ಅಂಗಳ ಪ್ರವೇಶ
ದ್ವಾರದ ಪರದೆಯನ್ನು, ಅವುಗಳ ಹಗ್ಗಗಳನ್ನು, ಮತ್ತು
ಇವುಗಳ ಎಲ್ಲಾ ಉಪಕರಣಗಳನ್ನು ವರ್ಗಾಯಿಸಬೇಕು.
27ಗೇರ್ಷೋನ್ಯರು ಮಾಡುವ ಎಲ್ಲಾ ಕೆಲಸಗಳನ್ನು
ಅಂದರೆ ವರ್ಗಾವಣೆಗಾಗಿ ಸಾಮಾನುಗಳನ್ನು ಕಟ್ಟು
ವುದರಲ್ಲಿಯೂ ವರ್ಗಾವಣೆ ಮಾಡುವುದರಲ್ಲಿಯೂ
ಆರೋನ ಮತ್ತು ಅವನ ಪುತ್ರರು ಮಾರ್ಗದರ್ಶನ ನೀಡು
ವರು. ಗೇರ್ಷೋನ್ಯರು ವರ್ಗಾಯಿಸುವ ಎಲ್ಲವನ್ನು
ಅವರೇ ಕಾಯಬೇಕೆಂಬ ಜವಾಬ್ದಾರಿಕೆಯನ್ನು ನೀನು
ಅವರಿಗೆ ಕೊಡು.
28ದೇವದರ್ಶನ ಗುಡಾರಕ್ಕೋಸ್ಕರ ಮತ್ತು ತಮ್ಮ
ಕಾವಲಿನ ಕರ್ತವ್ಯದಲ್ಲಿ ಗೇರ್ಷೋನ್ಯರು ಮಾಡಬೇಕಾದ
ಕೆಲಸ ಇದೇ. ಆರೋನನ ಮಗನಾದ ಈತಾಮಾರನು
ಅವರ ಮೇಲ್ವಿಚಾರಕನಾಗಿರಬೇಕು.''

### ಮೆರಾರೀ ಕುಟುಂಬದವರ ಕೆಲಸಗಳು

29''ನೀನು ಮೆರಾರೀಯರನ್ನೂ ಅವರ ಕುಲಗಳಿಗನು
ಗುಣವಾಗಿ ಮತ್ತು ಕುಟುಂಬಗಳಿಗನುಗುಣವಾಗಿ
ಲೆಕ್ಕಿಸು. 30ದೇವದರ್ಶನಗುಡಾರದ ಸೇವೆಯ ದಳದಲ್ಲಿ
ಕೆಲಸಮಾಡಲು ಯೋಗ್ಯರಾದ ಗಂಡಸರನ್ನು ಲೆಕ್ಕಿಸು.
ಅವರ ವಯಸ್ಸು ಮೂವತ್ತರಿಂದ ಮೊದಲುಗೊಂಡು
ಐವತ್ತರೊಳಗಿರಬೇಕು. 31ಈ ಕೆಳಕಂಡ ವಸ್ತುಗಳನ್ನು
ಮೆರಾರೀಯರು ವರ್ಗಾವಣೆಗಾಗಿ ಕಟ್ಟುವರು,
ವರ್ಗಾಯಿಸುವರು ಮತ್ತು ಕಾವಲುಕಾಯುವರು; ಪವಿತ್ರ
ಡೇರೆಯ ಚೌಕಟ್ಟುಗಳು, ಅದರ ಅಡ್ಡಪಟ್ಟಿಗಳು, ಅದರ
ಸ್ತಂಬಗಳು, ಅದರ ಗದ್ದಿಗೆಕಲ್ಲುಗಳು, 32ಅಂಗಳದ
ಸ್ತಂಬಗಳು ಮತ್ತು ಅವುಗಳ ಗದ್ದಿಗೆಕಲ್ಲುಗಳು, ಅಗುಳಿ
ಗಳು, ಹಗ್ಗಗಳು ಮತ್ತು ಅವರ ಕೆಲಸಕ್ಕೆ ಬೇಕಾದ ಎಲ್ಲಾ
ಉಪಕರಣಗಳು. ಅವರು ವರ್ಗಾಯಿಸಬೇಕಾದ ಮತ್ತು
ಕಾವಲುಕಾಯಬೇಕಾದ ವಸ್ತುಗಳನ್ನು ನೀನು ಹೆಸರೆಸ
ರಾಗಿ ಅವರಿಗೆ ವಹಿಸಿಕೊಡಬೇಕು. 33ದೇವದರ್ಶನ
ಗುಡಾರಕ್ಕೋಸ್ಕರ ಮೆರಾರೀಯರು ಮಾಡತಕ್ಕ ಕೆಲಸ
ಇದೇ. ಅವರ ಕೆಲಸವನ್ನು ಮೇಲ್ವಿಚಾರಣೆ ಮಾಡುವುದು
ಯಾಜಕನಾದ ಆರೋನನ ಮಗನಾದ ಈತಾಮಾರನ
ಜವಾಬ್ದಾರಿಯಾಗಿದೆ.''

### ಲೇವಿ ಕುಟುಂಬಗಳು

34-35ಮೋಶೆ ಆರೋನರೂ, ಸಮುದಾಯದ
ಪ್ರಧಾನರೂ ಕುಲ ಮತ್ತು ಕುಟುಂಬಗಳಿಗನುಗುಣವಾಗಿ
ಕೆಹಾತ್ಯರಲ್ಲಿ ಮೂವತ್ತು ವರ್ಷದಿಂದ ಮೊದಲುಗೊಂಡು
ಐವತ್ತು ವರ್ಷದೊಳಗಿರುವ ಗಂಡಸರನ್ನು ಲೆಕ್ಕಿಸಿದರು.
ದೇವದರ್ಶನಗುಡಾರಕ್ಕೋಸ್ಕರ ಸೇವೆಯ ದಳದಲ್ಲಿ
ಕೆಲಸ ಮಾಡಲು ಯೋಗ್ಯರಾದ ಗಂಡಸರನ್ನೇ ಅವರು
ಲೆಕ್ಕಿಸಿದರು.
36ಅವರಲ್ಲಿ ಈ ಕೆಲಸವನ್ನು ಮಾಡಲು ಅರ್ಹರಾಗಿ
ಗೋತ್ರ ಕುಟುಂಬಗಳ ಪ್ರಕಾರ ಲೆಕ್ಕಿಸಲ್ಪಟ್ಟವರು 2,750
ಮಂದಿ. 37ಯೆಹೋವನು ಮೋಶೆಗೆ ಆಜ್ಞಾಪಿಸಿದ ಪ್ರಕಾರ
ಮೋಶೆ ಆರೋನರು ಕೆಹಾತ್ಯರನ್ನು ಲೆಕ್ಕಿಸಲಾಗಿ ಅವರಲ್ಲಿ
ದೇವದರ್ಶನಗುಡಾರಕ್ಕೆ ಸಂಬಂಧಪಟ್ಟ ಕೆಲಸವನ್ನು
ಮಾಡತಕ್ಕವರು ಇವರೇ. 38-39ಗೇರ್ಷೋನ್ಯರಲ್ಲಿಯೂ
ಮೂವತ್ತು ವರ್ಷ ಮೊದಲುಗೊಂಡು ಐವತ್ತು ವರ್ಷ
ದೊಳಗಿರುವ ಮತ್ತು ದೇವದರ್ಶನಗುಡಾರಕ್ಕೋಸ್ಕರ
ಸೇವೆಯ ದಳದಲ್ಲಿ ಕೆಲಸ ಮಾಡಲು ಯೋಗ್ಯರಾದ
ಗಂಡಸರನ್ನು ಕುಲ ಮತ್ತು ಕುಟುಂಬಗಳಿಗನುಗುಣವಾಗಿ
ಲೆಕ್ಕಿಸಲಾಯಿತು. 40ಅವರ ಸಂಖ್ಯೆ 2,630.
41ಯೆಹೋವನ ಅಪ್ಪಣೆಯ ಮೇರೆಗೆ ಮೋಶೆ
ಆರೋನರು ಗೇರ್ಷೋನ್ಯರನ್ನು ಲೆಕ್ಕಿಸಿದರು. ಅವರಲ್ಲಿ
ದೇವದರ್ಶನಗುಡಾರದ ವಿಶೇಷ ಕೆಲಸವನ್ನು ಮಾಡತಕ್ಕ
ವರು ಇವರೇ. 42-43ಮೆರಾರೀಯರಲ್ಲಿಯೂ ಮೂವತ್ತ
ರಿಂದ ಐವತ್ತು ವರುಷದ ಒಳಗಿರುವ ಮತ್ತು ದೇವದರ್ಶನ
ಗುಡಾರಕ್ಕೋಸ್ಕರ ಸೇವೆಯ ದಳದಲ್ಲಿ ಕೆಲಸಮಾಡಲು
ಯೋಗ್ಯರಾದ ಗಂಡಸರನ್ನು ಕುಲ ಮತ್ತು ಕುಟುಂಬ
ಗಳಿಗೆ ಅನುಗುಣವಾಗಿ ಲೆಕ್ಕಿಸಲಾಯಿತು. 44ಅವರ ಒಟ್ಟು
ಸಂಖ್ಯೆ 3,200.
45ಯೆಹೋವನ ಅಪ್ಪಣೆಯ ಮೇರೆಗೆ ಮೋಶೆ
ಆರೋನರು ಅವರನ್ನು ಲೆಕ್ಕಿಸಿದರು. ಮೆರಾರೀಯರ
ಕುಲಗಳಿಂದ ಈ ಗಂಡಸರನ್ನು ದಾಖಲಾತಿ ಮಾಡಿಕೊಳ್ಳ
ಲಾಯಿತು. 46ಹೀಗೆ ಮೋಶೆ ಆರೋನರು ಇಸ್ರೇಲರ
ಪ್ರಧಾನರನ್ನೂ ಎಲ್ಲಾ ಲೇವಿಯರನ್ನೂ ಕುಲ ಮತ್ತು
ಕುಟುಂಬಗಳಿಗೆ ಅನುಗುಣವಾಗಿ ಲೆಕ್ಕಿಸಿದರು.
47ಮೂವತ್ತರಿಂದ ಐವತ್ತು ವರ್ಷದೊಳಗಿರುವ ಮತ್ತು
ದೇವದರ್ಶನಗುಡಾರಕ್ಕೆ ಸಂಬಂಧಿಸಿದ ವಸ್ತುಗಳನ್ನು
ವರ್ಗಾವಣೆಗಾಗಿ ಕಟ್ಟುವುದಕ್ಕೂ ವರ್ಗಾವಣೆಯ ಕೆಲ
ಸಕ್ಕೂ ಯೋಗ್ಯರಾದ ಎಲ್ಲಾ ಗಂಡಸರನ್ನು ಲೆಕ್ಕಿಸಿದರು.
48ಅವರ ಒಟ್ಟು ಸಂಖ್ಯೆ 8,580.
49ಹೀಗೆ ಯೆಹೋವನು ಮೋಶೆಗೆ ಆಜ್ಞಾಪಿಸಿದ
ಮೇರೆಗೆ ಪ್ರತಿಯೊಬ್ಬನೂ ಲೆಕ್ಕಿಸಲ್ಪಟ್ಟನು. ಪ್ರತಿಯೊಬ್ಬ
ನಿಗೂ ವರ್ಗಾವಣೆಗಾಗಿ ವಸ್ತುಗಳನ್ನು ಕಟ್ಟುವ ಮತ್ತು
ವರ್ಗಾವಣೆ ಕೆಲಸದ ಕರ್ತವ್ಯಗಳನ್ನು ಗೊತ್ತುಪಡಿಸ
ಲಾಯಿತು. ಯೆಹೋವನು ಆಜ್ಞಾಪಿಸಿದ ಮೇರೆಗೆ ಇದು
ಮಾಡಲ್ಪಟ್ಟಿತು.

## ಶುದ್ಧಾಚಾರದ ಕುರಿತು ನಿಯಮಗಳು

5 ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ,
2 ‘‘ಭಯಂಕರವಾದ ಚರ್ಮರೋಗವುಳ್ಳವರನ್ನೂ
ಮೇಹಸ್ರಾವವುಳ್ಳವರನ್ನೂ ಹೆಣದ ಸೋಂಕಿನಿಂದ ಅಶು
ದ್ಧರಾದವರನ್ನೂ ಪಾಳೆಯದಿಂದ ಹೊರಗಿಡಬೇಕೆಂದು
ಇಸ್ರೇಲರಿಗೆ ಆಜ್ಞಾಪಿಸು. 3 ಅಂಥವರು ಗಂಡಸರೇ ಆಗಲಿ
ಹೆಂಗಸರೇ ಆಗಲಿ ಅವರೆಲ್ಲರನ್ನೂ ಪಾಳೆಯದಿಂದ ಹೊರ
ಡಿಸಬೇಕು. ನಾನೇ ಅವರ ಪಾಳೆಯದಲ್ಲಿ ವಾಸಮಾಡು
ವುದರಿಂದ ಅವರು ಅದನ್ನು ಅಶುದ್ಧ ಮಾಡಬಾರದು.’’
4 ಯೆಹೋವನು ಮೇರೆಗೆ ವಿಧಿಸಿದಂತೆಯೆ ಇಸ್ರೇಲರು
ತಮ್ಮಲ್ಲಿರುವ ಅಂಥವರೆಲ್ಲರನ್ನೂ ಪಾಳೆಯದ ಹೊರಗಿರಿ
ಸಿದರು. ಯೆಹೋವನು ಮೋಶೆಗೆ ಆಜ್ಞಾಪಿಸಿದಂತೆಯೇ
ಅವರು ಮಾಡಿದರು.

## ತಪ್ಪುಕಾರ್ಯಗಳಿಗೆ ಪ್ರಾಯಶ್ಚಿತ್ತ ವಿಧಿ

5 ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ,
6 ‘‘ಇದನ್ನು ಇಸ್ರೇಲರಿಗೆ ತಿಳಿಸು: ಯಾವ ಪುರುಷನಾಗಲೀ
ಸ್ತ್ರೀಯಾಗಲೀ ಮತ್ತೊಬ್ಬನನ್ನು ಆಸ್ತಿಯ ವಿಷಯದಲ್ಲಿ
ಮೋಸಗೊಳಿಸಿದರೆ ಅವನು ಸುಳ್ಳು ಪ್ರಮಾಣ ಮಾಡು
ವುದರ ಮೂಲಕ ಯೆಹೋವನಿಗೆ ವಿರೋಧವಾಗಿ ಹೊಲ
ಸಾದ ಕಾರ್ಯವನ್ನು ಮಾಡಿದಂತಾಯಿತು. ಆದ್ದರಿಂದ
ಅವನು ದೋಷಿಯಾಗಿದ್ದಾನೆ. 7 ಆದ್ದರಿಂದ ಅಂಥವನು
ತನ್ನ ಪಾಪವನ್ನು ಅರಿಕೆಮಾಡಬೇಕು. ಅದಲ್ಲದೆ, ಅಪ
ರಾಧ ಮಾಡಿದವನು ನಷ್ಟಪಟ್ಟವನಿಗೆ ಮೂಲದ್ರವ್ಯದ
ಬೆಲೆಯೊಡನೆ ಐದನೆಯ ಭಾಗವನ್ನು ಹೆಚ್ಚಾಗಿ ಕೊಡ
ಬೇಕು. 8 ದಂಡವನ್ನು ತೆಗೆದುಕೊಳ್ಳ ತಕ್ಕವನು ತೀರಿ
ಹೋಗಿ, ಹತ್ತಿರ ಸಂಬಂಧಿಯೂ ಇಲ್ಲದ ಪಕ್ಷಕ್ಕೆ, ಆ ದ್ರವ್ಯ
ವನ್ನು ಯೆಹೋವನಿಗೆ ಕೊಡಬೇಕು. ಅವನು ಯಾಜಕ
ನಿಗೆ ಪೂರ್ಣ ಬೆಲೆಯನ್ನು ಕೊಡಬೇಕು. ತಪ್ಪು ಮಾಡಿದ
ವನು ಯಾಜಕನಿಗೆ ಒಂದು ಟಗರನ್ನೂ ತಂದುಕೊಡ
ಬೇಕು. ಈ ಟಗರನ್ನು ತಪ್ಪುಮಾಡಿದವನ ಪ್ರಾಯಶ್ಚಿತ್ತ
ಕ್ಕಾಗಿ ಯಜ್ಞಮಾಡಬೇಕು. ಆದರೆ ಉಳಿದದ್ದನ್ನು
ಯಾಜಕನು ಇಟ್ಟುಕೊಳ್ಳಬಹುದು.
9-10 ‘‘ಒಬ್ಬನು ದೇವರಿಗೆ ವಿಶೇಷ ಕಾಣಿಕೆಯನ್ನು
ಅರ್ಪಿಸಿದರೆ, ಅದನ್ನು ಸ್ವೀಕರಿಸುವ ಯಾಜಕನು ತನಗಾಗಿ
ಅದನ್ನು ಇಟ್ಟುಕೊಳ್ಳಬಹುದು. ಅದು ಅವನದಾಗಿರು
ತ್ತದೆ, ಒಬ್ಬನು ಈ ವಿಶೇಷ ಕಾಣಿಕೆಗಳನ್ನು ಕೊಡ
ಬೇಕಾಗಿಲ್ಲ. ಆದರೆ ಅವನು ಅವುಗಳನ್ನು ಕೊಟ್ಟರೆ ಅವು
ಯಾಜಕನಿಗೆ ಸೇರುತ್ತವೆ.’’

## ಸಂಶಯ ಪಡುವ ಗಂಡಂದಿರು

11 ಬಳಿಕ ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ,
12 ‘‘ಈ ವಿಷಯಗಳನ್ನು ಇಸ್ರೇಲರಿಗೆ ಹೇಳು: ಒಬ್ಬನ
ಹೆಂಡತಿ ಸನ್ಮಾರ್ಗವನ್ನು ಬಿಟ್ಟು ತನ್ನ ಗಂಡನಿಗೆ ಅಪನಂಬಿ
ಗಸ್ತಳಾಗಿದ್ದು, 13 ಇನ್ನೊಬ್ಬನೊಡನೆ ಲೈಂಗಿಕ ಸಂಬಂಧ
ಮಾಡಿರಬಹುದು. ಅವಳ ಈ ಕಾರ್ಯವು ಗಂಡನಿಗೆ
ಗೊತ್ತಿಲ್ಲದಿರಬಹುದು; ಯಾವ ಸಾಕ್ಷಿಯೂ ಇಲ್ಲದಿರು
ವುದರಿಂದ ಮತ್ತು ಅವಳು ಈ ಕಾರ್ಯ ಮಾಡು
ತ್ತಿರುವಾಗಲೇ ಸಿಕ್ಕಿಕೊಂಡಿಲ್ಲದಿರುವುದರಿಂದ ತಾನು
ತನ್ನನ್ನು ಅಶುದ್ಧಳನ್ನಾಗಿ ಮಾಡಿಕೊಂಡ ಸತ್ಯಾಂಶವನ್ನು
ಆಕೆ ಗುಪ್ತವಾಗಿಡಬಹುದು. 14 ಆದರೆ ಗಂಡನು ಈರ್ಷೆ
ಉಳ್ಳವನಾಗಿ ತನ್ನ ಹೆಂಡತಿ ತನ್ನನ್ನು ಅಶುದ್ಧಳನ್ನಾಗಿ
ಮಾಡಿಕೊಂಡಿದ್ದಾಳೆ ಎಂದು ಸಂಶಯ ಪಡುವುದಾಗಿದ್ದರೆ
ಅವಳು ಮಾಡಿಕೊಂಡಿರಲೀ ಮಾಡಿಕೊಂಡಿಲ್ಲದಿರಲೀ
15 ಅವನು ಮೂರು ಸೇರು ಗೋಧಿಹಿಟ್ಟನ್ನು ಕಾಣಿಕೆ
ಯಾಗಿ ಯಾಜಕನಿಗೆ ತಂದು ಕೊಡಬೇಕು. ಅವನು ಅದರ
ಮೇಲೆ ಎಣ್ಣೆ ಹಾಕಬಾರದು; ಅವನು ಅದರ ಮೇಲೆ
ಧೂಪ ಹಾಕಬಾರದು; ಯಾಕಂದರೆ ಇದು ಈರ್ಷೆಯುಳ್ಳ
ಗಂಡನ ಧಾನ್ಯಸಮರ್ಪಣೆಯಾಗಿದೆ. ಆಕೆಯ ದೋಷ
ವನ್ನು ಹೊರಪಡಿಸಲು ಕೊಟ್ಟಂಥ ಧಾನ್ಯಸಮರ್ಪಣೆ
ಇದಾಗಿದೆ. 16 ‘‘ಯಾಜಕನು ಅವಳನ್ನು ಸಮೀಪಕ್ಕೆ ತಂದು
ಯೆಹೋವನ ಎದುರಿನಲ್ಲಿ ನಿಲ್ಲಿಸಬೇಕು. 17 ಬಳಿಕ
ಅವನು ಮಣ್ಣಿನ ಪಾತ್ರೆಯಲ್ಲಿ ಸ್ವಲ್ಪ ಪವಿತ್ರ ಜಲವನ್ನು
ತೆಗೆದುಕೊಂಡು ಪವಿತ್ರಗುಡಾರದ ನೆಲದಿಂದ ಸ್ವಲ್ಪ
ಧೂಳನ್ನು ಆ ನೀರಿನಲ್ಲಿ ಹಾಕಬೇಕು. 18 ಯಾಜಕನು
ಅವಳನ್ನು ಯೆಹೋವನ ಮುಂದೆ ನಿಲ್ಲಿಸಿ ಅವಳ ತಲೆಯ
ಕೂದಲನ್ನು ಕೆದರಿಸಿ ಆಕೆಯ ದೋಷವನ್ನು ಹೊರ
ಪಡಿಸುವ ಧಾನ್ಯಸಮರ್ಪಣೆಯನ್ನು ಅವಳ ಕೈಯಲ್ಲಿ
ಇಡಬೇಕು. ಅದು ಈರ್ಷೆಯುಳ್ಳ ಗಂಡನ ಧಾನ್ಯ
ಸಮರ್ಪಣೆ. ಅದೇ ಸಮಯದಲ್ಲಿ ಶಾಪವನ್ನು ಉಂಟು
ಮಾಡುವ ನೀರಿನ ವಿಶೇಷ ಪಾತ್ರೆಯನ್ನು ಯಾಜಕನು ತನ್ನ
ಕೈಯಲ್ಲಿ ಹಿಡಿದುಕೊಳ್ಳಬೇಕು.
19 ‘‘ಬಳಿಕ ಯಾಜಕನು ಸ್ತ್ರೀಗೆ ಸುಳ್ಳಾಡದೆ ಸತ್ಯವನ್ನೇ
ಹೇಳಬೇಕೆಂದು ಪ್ರಮಾಣ ಮಾಡಿಸುವನು. ಯಾಜಕನು
ಅವಳಿಗೆ ಹೀಗನ್ನಬೇಕು: ‘ನೀನು ಪರಪುರುಷನ ಸಂಗ
ಮಾಡದೆ ಗಂಡನ ಅಧೀನದಲ್ಲಿದ್ದು ಪಾತಿವ್ರತ್ಯವನ್ನು
ಬಿಡದೆ ದುಷ್ಕಾರ್ಯವನ್ನು ಮಾಡದೆ ಇರುವವಳಾದರೆ,
ಶಾಪವನ್ನು ಉಂಟುಮಾಡುವ ಕಹಿನೀರಿನಿಂದ ನಿನಗೆ
ಹಾನಿಯಾಗಬಾರದು.
20 ಆದರೆ ನೀನು ನಿನ್ನ ಗಂಡನಲ್ಲದ ಪರಪುರುಷ
ನೊಡನೆ ಸಂಗಮಾಡಿ ನಿನ್ನ ಗಂಡನಿಗೆ ವಿರುದ್ಧವಾಗಿ ಪಾಪ
ಮಾಡಿದ್ದರೆ, ನೀನು ಶುದ್ಧಳಲ್ಲ. 21 ಆದ್ದರಿಂದ ನೀನು ಈ
ವಿಶೇಷ ಜಲವನ್ನು ಕುಡಿಯುವಾಗ, ನಿನಗೆ ಹಾನಿ
ಯುಂಟಾಗುವುದು. ನಿನಗೆ ಮಕ್ಕಳಾಗುವುದಿಲ್ಲ. ನೀನು
ಬಸುರಾಗಿದ್ದರೆ, ನಿನ್ನ ಮಗು ಸಾಯುವುದು. ಆಗ ನಿನ್ನ

ಜನರು ನಿನ್ನನ್ನು ದೂರಮಾಡಿ ನಿನ್ನ ವಿರುದ್ಧವಾಗಿ ಕೆಟ್ಟ
ಸಂಗತಿಗಳನ್ನು ಹೇಳುವರು.’
‘‘ಬಳಿಕ ಯಾಜಕನು ಆ ಸ್ತ್ರೀಗೆ ಪ್ರಮಾಣ ಮಾಡಲು
ಹೇಳಬೇಕು. ಅವಳು, ‘ನಾನು ಸುಳ್ಳಾಡಿದ್ದರೆ, ಈ ಕೆಟ್ಟ
ಸಂಗತಿಗಳು ನನಗೆ ಸಂಭವಿಸಲಿ’ ಎಂದು ಹೇಳಬೇಕು.
22 ಯಾಜಕನು, ‘ಹಾನಿಯನ್ನು ಉಂಟುಮಾಡುವ ಈ
ನೀರನ್ನು ನೀನು ಕುಡಿಯಬೇಕು. ನೀನು ಪಾಪ
ಮಾಡಿದ್ದರೆ ನಿನಗೆ ಮಕ್ಕಳಾಗುವುದಿಲ್ಲ ಮತ್ತು ನೀನು
ಪಡೆಯುವ ಮಗು ಹುಟ್ಟುವ ಮೊದಲೇ ಸಾಯುವುದು’
ಎಂದು ಹೇಳಬೇಕು. ಅದಕ್ಕೆ ಸ್ತ್ರೀಯು, ‘ಹಾಗೆಯೇ
ಆಗಲಿ’ ಎಂದು ಹೇಳಬೇಕು.
23 ‘‘ಯಾಜಕನು ಈ ಶಾಪಗಳನ್ನು ಒಂದು ಸುರುಳಿ
ಯಲ್ಲಿ ಬರೆಯಬೇಕು. ಬಳಿಕ ಆ ಕಹಿ ನೀರಿನಿಂದ ಆ
ಸುರುಳಿಯ ವಾಕ್ಯವನ್ನು ತೊಳೆಯಬೇಕು. 24 ಆಮೇಲೆ
ಶಾಪವನ್ನು ಬರಮಾಡುವ ಆ ನೀರನ್ನು ಆ ಸ್ತ್ರೀಗೆ ಕುಡಿಸ
ಬೇಕು. ಈ ನೀರು ಅವಳೊಳಗೆ ಸೇರುವುದು. ಅವಳು
ದೋಷಿಯಾಗಿದ್ದರೆ ಅವಳಿಗೆ ಮಹಾಸಂಕಟವನ್ನುಂಟು
ಮಾಡುವುದು.
25 ‘‘ಯಾಜಕನು ಈರ್ಷೆಯುಳ್ಳ ಗಂಡನ ಧಾನ್ಯ
ಸಮರ್ಪಣೆಯನ್ನು ಆಕೆಯ ಕೈಗಳಿಂದ ತೆಗೆದುಕೊಂಡು
ಅದನ್ನು ಯೆಹೋವನ ಮುಂದೆ ಪ್ರತಿಷ್ಠಿಸಿ, ಬಳಿಕ ಅದನ್ನು
ವೇದಿಕೆಯ ಮೇಲೆ ಅರ್ಪಿಸಬೇಕು. 26 ಯಾಜಕನು
ನೈವೇದ್ಯವಾದದ್ದನ್ನು ಸೂಚಿಸುವುದಕ್ಕಾಗಿ ಆ ಹಿಟ್ಟಿನಲ್ಲಿ
ಒಂದು ಹಿಡಿಯನ್ನು ತೆಗೆದುಕೊಂಡು ಯಜ್ಞವೇದಿಕೆಯ
ಮೇಲೆ ಹೋಮಮಾಡಬೇಕು. ತರುವಾಯ ಅವನು ಆ
ನೀರನ್ನು ಕುಡಿಯಲು ಸ್ತ್ರೀಗೆ ಕೊಡಬೇಕು. 27 ಅವಳು
ಅಶುದ್ಧಳಾಗಿದ್ದರೆ ಮತ್ತು ತನ್ನ ಗಂಡನಿಗೆ ವಿರುದ್ಧವಾಗಿ
ಪಾಪಮಾಡಿದ್ದರೆ, ನೀರು ಅವಳಿಗೆ ಹಾನಿಯನ್ನು ಉಂಟು
ಮಾಡುವುದು, ನೀರು ಅವಳೊಳಗೆ ಹೋಗಿ ಅವಳಿಗೆ
ಮಹಾಸಂಕಟವನ್ನು ಉಂಟುಮಾಡುವುದು. ನೀರು
ಅವಳನ್ನು ಆ ಕೂಡಲೇ ಬಂಜೆಯನ್ನಾಗಿ ಮಾಡುವುದು.
ಅವಳು ತನ್ನ ಜನರ ಮಧ್ಯದಲ್ಲಿ ಶಾಪಗ್ರಸ್ತಳಾಗಿರುವಳು.
28 ಆದರೆ ಅವಳು ತನ್ನ ಗಂಡನಿಗೆ ವಿರುದ್ಧವಾಗಿ ಪಾಪ
ಮಾಡದೆ ಶುದ್ಧಳಾಗಿದ್ದರೆ, ಯಾಜಕನು ಅವಳನ್ನು ದೋಷಿ
ಯಲ್ಲವೆಂದು ಹೇಳುವನು. ಆಗ ಅವಳಿಗೆ ಯಾವ ಹಾನಿ
ಯಾಗದೆ, ಇನ್ನೂ ಮಕ್ಕಳನ್ನು ಹಡೆಯಲು ಶಕ್ತ
ಳಾಗಿರುವಳು.
29 ‘‘ಇದೇ ವ್ಯಭಿಚಾರ ಸಂಶಯವನ್ನು ಪರಿಹರಿಸುವ
ವಿಧಿ. ಗಂಡನ ಸ್ವಾಧೀನದಲ್ಲಿರುವ ಹೆಂಡತಿಯು
30 ಪಾತಿವ್ರತ್ಯವನ್ನು ಬಿಟ್ಟು ಜಾರತ್ವ ಮಾಡಿರುವಾಗಲೂ
ಗಂಡನು ಹೆಂಡತಿಯ ವಿಷಯದಲ್ಲಿ ಸಂಶಯ ಪಡು
ವಾಗಲೂ ಅವನು ಮಾಡಬೇಕಾದದ್ದು ಇದೇ. ಯಾಜ
ಕನು ಸ್ತ್ರೀಗೆ ಯೆಹೋವನ ಮುಂದೆ ನಿಲ್ಲಲು ಹೇಳಬೇಕು.
ಆಗ ಯಾಜಕನು ಈ ಎಲ್ಲಾ ಸಂಗತಿಗಳನ್ನು ಮಾಡುವನು.
ಇದು ನಿಯಮವಾಗಿದೆ. 31 ಗಂಡನು ನಿರಪರಾಧಿ
ಯಾಗಿರುವನು. ಆದರೆ ಸ್ತ್ರೀಯು ಪಾಪ ಮಾಡಿದ್ದರೆ, ಆಕೆ
ಅದರ ಫಲವನ್ನು ಅನುಭವಿಸಬೇಕು.’’

## ನಾಜೀರವ್ರತ

6 ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ, 2 ‘‘ಈ
ಸಂಗತಿಗಳನ್ನು ಇಸ್ರೇಲರಿಗೆ ಹೇಳು: ಯಾವ ಪುರುಷ
ನಾಗಲೀ ಸ್ತ್ರೀಯಾಗಲೀ ನಾಜೀರವ್ರತವನ್ನು ಹೇಳು
ವುದರ ಮೂಲಕ ತನ್ನನ್ನು ಪ್ರತಿಷ್ಠಿಸಿಕೊಂಡರೆ,
ಯೆಹೋವನಿಗೋಸ್ಕರ ಹರಕೆ ಮಾಡಿಕೊಂಡರೆ, 3 ಆ
ಸಮಯದಲ್ಲಿ ಅವನು ದ್ರಾಕ್ಷಾರಸವನ್ನಾಗಲೀ ಮದ್ಯ
ವನ್ನಾಗಲೀ ಕುಡಿಯಬಾರದು; ದ್ರಾಕ್ಷಾರಸದ ಹುಳಿಯ
ನ್ನಾಗಲೀ ಬೇರೆ ಮದ್ಯದ ಹುಳಿಯನ್ನಾಗಲೀ ಕುಡಿಯ
ಬಾರದು; ದ್ರಾಕ್ಷೆಹಣ್ಣಿನಿಂದ ಮಾಡಿದ ಯಾವ ಪಾನ
ವನ್ನೂ ಕುಡಿಯಬಾರದು; ಹಸಿ ಅಥವಾ ಒಣ ದ್ರಾಕ್ಷೆ
ಯನ್ನು ತಿನ್ನಬಾರದು;
4 ಅವನು ಹರಕೆ ಮಾಡಿಕೊಂಡಿರುವ ದಿನಗಳಲ್ಲಿ
ದ್ರಾಕ್ಷಾಲತೆಯಿಂದ ಉತ್ಪನ್ನವಾಗುವ ಯಾವದನ್ನೂ ತಿನ್ನ
ಬಾರದು. ಅವನು ದ್ರಾಕ್ಷೆಯ ಬೀಜವನ್ನಾಗಲೀ ಸಿಪ್ಪೆಯ
ನ್ನಾಗಲೀ ತಿನ್ನಬಾರದು.
5 ‘‘ಅವನ ವ್ರತದ ಕಾಲದಲ್ಲಿ ಕ್ಷೌರದ ಕತ್ತಿಯು ಅವನ
ತಲೆಯನ್ನು ಸೋಂಕಬಾರದು. ಯೆಹೋವನಿಗೋಸ್ಕರ
ಪ್ರತಿಷ್ಠಿತವಾದ ತನ್ನ ಕಾಲವನ್ನು ಪೂರ್ಣಗೊಳಿಸುವ ತನಕ
ಅವನು ಪರಿಶುದ್ಧನಾಗಿರಬೇಕು. ತನ್ನ ವ್ರತದ ದಿನಗಳು
ಮುಗಿಯುವ ತನಕ ಅವನು ಕೂದಲನ್ನು ಬೆಳೆಸಿ
ಕೊಳ್ಳಬೇಕು.*
6 ‘‘ಅವನು ಯೆಹೋವನಿಗೋಸ್ಕರ ಹರಕೆ ಮಾಡಿ
ಕೊಂಡ ಕಾಲವೆಲ್ಲಾ, ಶವದ ಬಳಿಗೆ ಹೋಗಕೂಡದು.
7 ಅವನ ತಂದೆ, ತಾಯಿ, ಸಹೋದರ, ಸಹೋದರಿ ಸತ್ತರೂ
ಅವನು ಅವರ ಹೆಣವನ್ನು ಮುಟ್ಟಬಾರದು. ಮುಟ್ಟಿದರೆ
ಅವನು ಅಶುದ್ಧನಾಗುವನು. ದೇವರಿಗೋಸ್ಕರ ಮೀಸ
ಲಾಗಿರುವ ಅವನ ಕೂದಲು ಅವನ ತಲೆಯನ್ನು ಮುಚ್ಚಿ
ಕೊಂಡಿರುತ್ತದೆ; ಆದ್ದರಿಂದ ಅವನು ಪರಿಶುದ್ಧನಾಗಿರ
ಬೇಕು. 8 ಅವನು ತನ್ನನ್ನು ಪ್ರತಿಷ್ಠಿಸಿಕೊಂಡ ದಿನಗಳಲ್ಲೆಲ್ಲಾ
ಅವನು ಯೆಹೋವನಿಗೆ ಪವಿತ್ರನಾಗಿರಬೇಕು.
9 ‘‘ಯಾವನಾದರೂ ಇದ್ದಕ್ಕಿದ್ದಂತೆ ಅವನ ಬಳಿಯಲ್ಲೇ
ಸತ್ತದ್ದರಿಂದ ತಾನು ಪ್ರತಿಷ್ಠಿಸಿಕೊಂಡ ತಲೇ ಕೂದಲು
ಅಪವಿತ್ರವಾದರೆ ಏಳನೆಯ ದಿನದಲ್ಲಿ ತಲೆಯನ್ನು ಕ್ಷೌರ

---

**ಬೆಳೆಸಿಕೊಳ್ಳಬೇಕು** ವ್ರತದ ದಿನಗಳು ಮುಗಿದ ಮೇಲೆ ನಾಜೀರನು ತನ್ನ ಕೂದಲನ್ನು ಕತ್ತರಿಸಿ ಅದನ್ನು ದೇವರಿಗೆ ಕಾಣಿಕೆಯಾಗಿ ಕೊಡವನು.

ಮಾಡಿಸಿಕೊಳ್ಳಬೇಕು. [10]ಬಳಿಕ ಎಂಟನೆಯ ದಿನದಲ್ಲಿ
ಅವನು ಎರಡು ಕಾಡುಪಾರಿವಾಳವನ್ನಾಗಲೀ ಎರಡು
ಪಾರಿವಾಳದ ಮರಿಗಳನ್ನಾಗಲೀ ದೇವದರ್ಶನ
ಗುಡಾರದ ಪ್ರವೇಶದ್ವಾರದ ಬಳಿಯಿರುವ ಯಾಜಕನಿಗೆ
ತಂದುಕೊಡಬೇಕು. [11]ಆಗ ಯಾಜಕನು ಒಂದನ್ನು ಪಾಪ
ಪರಿಹಾರಕ ಯಜ್ಞವಾಗಿಯೂ ಇನ್ನೊಂದನ್ನು ಸರ್ವಾಂಗ
ಹೋಮವಾಗಿಯೂ ಅರ್ಪಿಸುವನು. ಈ ಸರ್ವಾಂಗ
ಹೋಮವು ಅವನಿಗೆ ಪ್ರಾಯಶ್ಚಿತ್ತ ಯಜ್ಞವಾಗಿದೆ.
(ಅವನಿಗೆ ಹೆಣವು ಸೋಂಕಿದ್ದರಿಂದ ಅಶುದ್ಧನಾದನು.)
ಆ ಸಮಯದಲ್ಲಿ, ಅವನು ತನ್ನ ತಲೆಕೂದಲನ್ನು
ಯೆಹೋವನಿಗೆ ಕಾಣಿಕೆಯಾಗಿ ಮತ್ತೆ ಹರಕೆ
ಮಾಡುವನು. [12]ಅವನು ಮತ್ತೊಮ್ಮೆ ನಿರ್ದಿಷ್ಟ ಕಾಲ
ದವರೆಗೆ ತನ್ನನ್ನು ಯೆಹೋವನಿಗೆ ಪ್ರತಿಷ್ಠಿಸಿಕೊಳ್ಳ
ಬೇಕೆಂಬುದೇ ಇದರರ್ಥ. ಅವನು ಒಂದು ವರ್ಷದ
ಕುರಿಮರಿಯನ್ನು ತಂದು ಅದನ್ನು ದೋಷಪರಿಹಾರಕ
ಯಜ್ಞಕ್ಕಾಗಿ ಕೊಡಬೇಕು. ಶವವು ಅವನನ್ನು ಅಶುದ್ಧ
ನನ್ನಾಗಿ ಮಾಡಿದ್ದರಿಂದ ಮೊದಲಿನ ದಿನಗಳು ಲೆಕ್ಕಿಸ
ಲ್ಪಡುವುದಿಲ್ಲ. (ಅವನು ಮತ್ತೊಮ್ಮೆ ಆರಂಭಿಸಬೇಕು.)
[13]‘‘ವ್ರತದ ದಿನಗಳು ಮುಗಿದ ನಂತರ, ಮಾಡಬೇಕಾದ
ಕ್ರಮ: ಅವನು ದೇವದರ್ಶನಗುಡಾರದ ಪ್ರವೇಶದ್ವಾರದ
ಬಳಿಗೆ ಬಂದು [14]ಯೆಹೋವನಿಗೆ ತನ್ನ ಸಮರ್ಪಣೆಯನ್ನು
ಮಾಡಬೇಕು. ಅವನು ಸಮರ್ಪಿಸಬೇಕಾದುದು
ಯಾವದೆಂದರೆ,

ಸರ್ವಾಂಗಹೋಮಕ್ಕೆ ದೋಷವಿಲ್ಲದ ಒಂದು
ವರ್ಷದ ಗಂಡು ಕುರಿಮರಿ, ದೋಷ ಪರಿಹಾರ
ಯಜ್ಞಕ್ಕಾಗಿ ಯಾವ ದೋಷವಿಲ್ಲದ ಒಂದು
ವರುಷದ ಹೆಣ್ಣು ಕುರಿಮರಿ, ಸಮಾಧಾನ ಯಜ್ಞ
ಕ್ಕಾಗಿ ಯಾವ ದೋಷವಿಲ್ಲದ ಒಂದು ಟಗರು,
15 ಶುದ್ಧವಾದ ಹಿಟ್ಟಿನಿಂದ ಮತ್ತು ಎಣ್ಣೆಯಿಂದ
ಮಾಡಿದ ಹುಳಿಯಿಲ್ಲದ ರೊಟ್ಟಿಗಳನ್ನೂ ಎಣ್ಣೆ
ಹಾಕಿ ಮಾಡಿದ ಹುಳಿಯಿಲ್ಲದ ತೆಳುವಾದ ರೊಟ್ಟಿ
ಗಳನ್ನೂ ಒಂದು ಪುಟ್ಟಿ ತುಂಬಾ ಸಮರ್ಪಿಸ
ಬೇಕು; ಅಲ್ಲದೆ ಮೇಲೆ ವಿವರಿಸಿದ ಯಜ್ಞಗ
ಳೊಡನೆ ಕೊಡಬೇಕಾದ ಧಾನ್ಯ ದ್ರವ್ಯಗಳನ್ನೂ
ಪಾನದ್ರವ್ಯಗಳನ್ನೂ ಸಮರ್ಪಿಸಬೇಕು.

[16]ಬಳಿಕ ಯಾಜಕನು ಇವುಗಳನ್ನು ಯೆಹೋವನ ಬಳಿಗೆ
ತಂದು ದೋಷಪರಿಹಾರಕ ಯಜ್ಞವನ್ನೂ ಸರ್ವಾಂಗ
ಹೋಮವನ್ನೂ ಮಾಡುವನು. [17]ಯಾಜಕನು ಹುಳಿ
ಯಿಲ್ಲದ ರೊಟ್ಟಿಯಿರುವ ಪುಟ್ಟಿಯನ್ನು ಯೆಹೋವನಿಗೆ
ಸಮರ್ಪಿಸುವನು. ಬಳಿಕ ಅವನು ಟಗರನ್ನು ವಧಿಸಿ
ಸಮಾಧಾನ ಯಜ್ಞವಾಗಿ ಅರ್ಪಿಸುವನು. ಅವನು ಅದನ್ನು
ಧಾನ್ಯಸಮರ್ಪಣೆ ಮತ್ತು ಪಾನದ್ರವ್ಯ ಸಮರ್ಪಣೆ
ಯೊಂದಿಗೆ ಅರ್ಪಿಸುವನು.
[18]‘‘ನಾಜೀರವ್ರತವನ್ನು ಆಚರಿಸುತ್ತಿರುವವನು
ಯೆಹೋವನಿಗಾಗಿ ಪ್ರತಿಷ್ಠಿಸಿದ್ದ ತಲೆಕೂದಲನ್ನು ದೇವ
ದರ್ಶನಗುಡಾರದ ಪ್ರವೇಶದ್ವಾರದ ಬಳಿ ಕ್ಷೌರಮಾಡಿಸಿ
ಕೊಳ್ಳಬೇಕು. ಆ ಕೂದಲನ್ನು ಸಮಾಧಾನಯಜ್ಞದ್ರವ್ಯಗಳ
ಕೆಳಗಿರುವ ಬೆಂಕಿಯಲ್ಲಿ ಹಾಕಬೇಕು.
[19]‘‘ನಾಜೀರನು ತನ್ನ ತಲೆಕೂದಲನ್ನು ಕ್ಷೌರಮಾಡಿಸಿ
ಕೊಂಡ ನಂತರ, ಯಾಜಕನು ಅವನಿಗೆ ಆ ಟಗರಿನ ಬೆಂದ
ಮುಂದೊಡೆಯನ್ನೂ ಪುಟ್ಟಿಯಲ್ಲಿನ ಒಂದು ಹುಳಿ
ಯಿಲ್ಲದ ಸಿಹಿರೊಟ್ಟಿಯನ್ನೂ ಒಂದು ಹುಳಿಯಿಲ್ಲದ
ತೆಳುವಾದ ರೊಟ್ಟಿಯನ್ನೂ ಅವನ ಕೈಯಲ್ಲಿ ಇಡಬೇಕು.
[20]ನೈವೇದ್ಯವಾಗಿ ಅದನ್ನು ಯೆಹೋವನ ಸನ್ನಿಧಿಯಲ್ಲಿ
ವಿಶೇಷ ಕಾಣಿಕೆಯಾಗಿ ನಿವಾಳಿಸಬೇಕು. ಇವುಗಳು
ಪವಿತ್ರವಾಗಿದ್ದು ಯಾಜಕರ ಪಾಲಾಗುತ್ತವೆ. ಅಲ್ಲದೆ
ಮೀಸಲಾಗಿಟ್ಟಿರುವ ನಿವಾಳಿಸಲ್ಪಟ್ಟ ಕಾಣಿಕೆಯ ಎದೆಯ
ಭಾಗ ಮತ್ತು ತೊಡೆಯಭಾಗ ಸಹ ಯಾಜಕನ ಭಾಗ
ವಾಗಿರುತ್ತದೆ. ಇದರ ನಂತರ ನಾಜೀರನು ದ್ರಾಕ್ಷಾ
ರಸವನ್ನು ಕುಡಿಯಬಹುದು.
[21]‘‘ಇದೇ ನಾಜೀರರ ವ್ರತ ವಿಧಿ. ಅವರು ತಮ್ಮ ವ್ರತ
ಪೂರ್ತಿಗಾಗಿ ಯೆಹೋವನಿಗೆ ಸಮರ್ಪಿಸಬೇಕಾದ
ಕಾಣಿಕೆ ಇದೇ. ಅವರು ತಮ್ಮ ಶಕ್ತ್ಯಾನುಸಾರ ಹೆಚ್ಚಾ
ಗಿಯೂ ಕೊಡಬಹುದು. ಆದರೆ ತಾವು ಕೊಡು ತ್ತೇವೆಂದು
ಹರಕೆ ಮಾಡಿದಷ್ಟನ್ನು ವ್ರತವಿಧಿಗನುಸಾರವಾಗಿ ಕೊಡಲೇ
ಬೇಕು.’’

## ಯಾಜಕರು ಹೇಳಬೇಕಾದ ಆಶೀರ್ವಚನವು

[22]ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ,
[23]‘‘ನೀನು ಆರೋನನಿಗೂ ಅವನ ಪುತ್ರರಿಗೂ ಹೀಗೆ
ಆಜ್ಞಾಪಿಸು: ‘ನೀವು ಇಸ್ರೇಲರನ್ನು ಆಶೀರ್ವದಿಸುವಾಗ
ಈ ಪ್ರಕಾರ ಹೇಳಬೇಕು:

24 ಯೆಹೋವನು ನಿಮ್ಮನ್ನು ಆಶೀರ್ವದಿಸಿ
ಕಾಪಾಡಲಿ.
25 ಯೆಹೋವನು ನಿಮ್ಮನ್ನು ಕನಿಕರದಿಂದ ನೋಡಿ
ನಿಮ್ಮ ಮೇಲೆ ದಯವಿಡಲಿ.
26 ಯೆಹೋವನು ನಿಮ್ಮ ಮೇಲೆ ಕೃಪಾಕಟಾಕ್ಷವಿಟ್ಟು
ಶಾಂತಿಯನ್ನು ಅನುಗ್ರಹಿಸಲಿ.’’

[27]ಬಳಿಕ ಯೆಹೋವನು, ‘‘ಹೀಗೆ ಆರೋನನೂ
ಅವನ ಪುತ್ರರೂ ಇಸ್ರೇಲರನ್ನು ನನ್ನ ಹೆಸರಿನಿಂದ

ಆಶೀರ್ವದಿಸುವುದರಿಂದ ನಾನು ಅವರನ್ನು ಆಶೀರ್ವದಿ
ಸುವೆನು'' ಎಂದನು.

### ಪವಿತ್ರಗುಡಾರದ ಪ್ರತಿಷ್ಠೆ

7 ಮೋಶೆ ಪವಿತ್ರಗುಡಾರದ ನಿರ್ಮಾಣಕಾರ್ಯವನ್ನು
ಪೂರ್ಣಗೊಳಿಸಿದಾಗ ಅದನ್ನು ಅದರ ವಸ್ತುಗ
ಳೊಡನೆ, ಯಜ್ಞವೇದಿಕೆಯೊಡನೆ ಮತ್ತು ಅದರ ಎಲ್ಲಾ
ಉಪಕರಣಗಳೊಡನೆ ಯೆಹೋವನಿಗಾಗಿ ಅಭಿಷೇಕಿಸಿ
ಪ್ರತಿಷ್ಠಿಸಿದನು. ಇವು ಯೆಹೋವನ ಆರಾಧನೆಗಾಗಿ
ಮಾತ್ರ ಉಪಯೋಗಿಸಲ್ಪಡುತ್ತವೆಂದು ಹೀಗೆ ಪ್ರತ್ಯೇಕಿಸ
ಲ್ಪಟ್ಟವು. 2 ಬಳಿಕ ಇಸ್ರೇಲಿನ ಪ್ರಧಾನ ಪುರುಷರು, ಅವರ
ಕುಟುಂಬಗಳ ನಾಯಕರು ಅಂದರೆ ಜನಗಣತಿಯ
ಮೇಲ್ವಿಚಾರಣೆಯನ್ನು ಸಹ ವಹಿಸಿಕೊಂಡಿದ್ದ
3 ಗೋತ್ರ ಪ್ರಧಾನರು ಮುಂದೆ ಬಂದು, ತಮ್ಮ ಕಾಣಿಕೆ
ಗಳನ್ನು ಸಮರ್ಪಿಸಿದರು. ಇಬ್ಬಿಬ್ಬರು ಆರುಕಮಾನು
ಬಂಡಿಗಳನ್ನೂ ಅವುಗಳನ್ನು ಎಳೆಯುವುದಕ್ಕೆ ಆರು ಜೊತೆ
ಎತ್ತುಗಳನ್ನೂ ಕೊಟ್ಟರು. ಪ್ರಧಾನರು ಇವುಗಳನ್ನು ಪವಿತ್ರ
ಗುಡಾರದಲ್ಲಿ ಯೆಹೋವನಿಗೆ ಒಪ್ಪಿಸಿದರು.
4 ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ,
5 ''ಪ್ರಧಾನರಿಂದ ಈ ಕಾಣಿಕೆಗಳನ್ನು ಸ್ವೀಕರಿಸು. ಇವು
ದೇವದರ್ಶನಗುಡಾರದ ವರ್ಗಾವಣೆಗೆ ಉಪಯೋಗಿಸ
ಲ್ಪಡಲಿ. ಇವುಗಳನ್ನು ಲೇವಿಯರಿಗೆ ಕೊಡು. ಅವರು
ತಮ್ಮ ಕೆಲಸಗಳನ್ನು ಮಾಡಲು ಇದು ಸಹಾಯ
ಮಾಡುವುದು.''
6 ಆದ್ದರಿಂದ ಮೋಶೆಯು ಬಂಡಿಗಳನ್ನೂ ಎತ್ತುಗಳನ್ನೂ
ಸ್ವೀಕರಿಸಿ ಅವುಗಳನ್ನು ಲೇವಿಯರಿಗೆ ಕೊಟ್ಟನು. 7 ಅವನು
ಗೇರ್ಷೋನ್ ಗೋತ್ರ ಪುರುಷರಿಗೆ ಅವರ ಕೆಲಸಕ್ಕೆ
ಅಗತ್ಯವಾಗಿದ್ದ ಎರಡು ಬಂಡಿಗಳನ್ನು ಮತ್ತು ನಾಲ್ಕು
ಎತ್ತುಗಳನ್ನು ಕೊಟ್ಟನು. 8 ಬಳಿಕ ಮೆರಾರೀಯರ ಕೆಲಸಕ್ಕೆ
ಬೇಕಾಗಿದ್ದ ನಾಲ್ಕು ಬಂಡಿಗಳನ್ನೂ ಎಂಟು ಎತ್ತುಗಳನ್ನೂ
ಅವರಿಗೆ ಕೊಟ್ಟನು. ಇವರೆಲ್ಲರು ಮಾಡುವ ಕೆಲಸಕ್ಕೆ
ಯಾಜಕನಾದ ಆರೋನನ ಮಗನಾದ ಈತಾಮಾರನು
ಮೇಲ್ವಿಚಾರಕನಾಗಿದ್ದನು. 9 ಮೋಶೆಯು ಕೆಹಾತ್ಯರಿಗೆ
ಎತ್ತುಗಳನ್ನಾಗಲೀ ಬಂಡಿಗಳನ್ನಾಗಲೀ ಕೊಡಲಿಲ್ಲ.
ಯಾಕಂದರೆ ಅವರು ಪವಿತ್ರವಸ್ತುಗಳನ್ನು ತಮ್ಮ ಭುಜದ
ಮೇಲೆ ಹೊರಬೇಕು. ಅವರಿಗೆ ಈ ಕೆಲಸವು
ಕೊಡಲ್ಪಟ್ಟಿತು. 10 ವೇದಿಕೆಯು ಅಭಿಷೇಕಿಸಲ್ಪಟ್ಟಾಗ,
ಯಜ್ಞವೇದಿಕೆಯ ಆರಂಭಕ್ಕಾಗಿ ಪ್ರಧಾನರು ಸಹ ತಮ್ಮ
ಕಾಣಿಕೆಗಳನ್ನು ವೇದಿಕೆಯ ಮುಂದೆ ತಂದರು.
11 ಯೆಹೋವನು ಮೋಶೆಗೆ, ''ಪ್ರತಿ ದಿನ ಒಬ್ಬ ಪ್ರಧಾನನು
ವೇದಿಕೆಯ ಪ್ರತಿಷ್ಠೆಗಾಗಿ ತನ್ನ ಕಾಣಿಕೆಯನ್ನು ತರಬೇಕು''
ಎಂದು ಆಜ್ಞಾಪಿಸಿದ್ದನು.
12-83 ಹನ್ನೆರಡು ಪ್ರಧಾನರಲ್ಲಿ ಪ್ರತಿಯೊಬ್ಬನೂ ತನ್ನ
ಕಾಣಿಕೆಯನ್ನು ತಂದನು. ಅವರು ಕೊಟ್ಟ ಕಾಣಿಕೆಗಳು
ಹೀಗಿವೆ: ಪ್ರತಿಯೊಬ್ಬ ಪ್ರಧಾನನು ಮೂರುಕ್ಕಾಲು
ಪೌಂಡು ತೂಕವುಳ್ಳ ಬೆಳ್ಳಿಯ ತಟ್ಟೆಯನ್ನೂ ಒಂದು
ಮುಕ್ಕಾಲು ಪೌಂಡು ತೂಕವುಳ್ಳ ಬೆಳ್ಳಿಯ ಬಟ್ಟಲನ್ನೂ
ತಂದನು. ಇವೆರಡನ್ನೂ ಅಧಿಕೃತ ಅಳತೆಯಿಂದ ತೂಕ
ಮಾಡಲಾಯಿತು. ಧಾನ್ಯಸಮರ್ಪಣೆಗಾಗಿ ಉಪಯೋಗ
ವಾಗುವ ಎಣ್ಣೆ ಬೆರೆಸಿದ ಶ್ರೇಷ್ಠ ಗೋಧಿಹಿಟ್ಟನ್ನು ಬಟ್ಟಲಲ್ಲಿ
ಮತ್ತು ತಟ್ಟೆಯಲ್ಲಿ ತುಂಬಿಡಲಾಗಿತ್ತು. ಧೂಪದ್ರವ್ಯ
ತುಂಬಿದ್ದ ನಾಲ್ಕು ತೊಲೆ ತೂಕವುಳ್ಳ ಚಿನ್ನದ ಧೂಪಾ
ರತಿಯನ್ನೂ ಒಂದು ಎಳೆಯ ಹೋರಿಯನ್ನೂ ಸರ್ವಾಂಗ
ಹೋಮಕ್ಕಾಗಿ ಒಂದು ಹೋರಿಯನ್ನೂ ಒಂದು
ಟಗರನ್ನೂ ಒಂದು ವರುಷದ ಗಂಡು ಕುರಿಮರಿಯನ್ನೂ
ಪಾಪಪರಿಹಾರಕಯಜ್ಞಕ್ಕಾಗಿ ಒಂದು ಹೋತವನ್ನೂ
ಎರಡು ಎತ್ತುಗಳನ್ನೂ ಐದು ಟಗರುಗಳನ್ನೂ ಐದು
ಹೋತಗಳನ್ನೂ ಐದು ಒಂದು ವರುಷದ ಗಂಡು
ಕುರಿಮರಿಗಳನ್ನೂ ಪ್ರತಿಯೊಬ್ಬ ಯಾಜಕನೂ ತಂದನು.
ಇವೆಲ್ಲವೂ ಸಮಾಧಾನ ಯಜ್ಞವಾಗಿ ಸಮರ್ಪಿಸಲ್ಪಟ್ಟವು.

ಮೊದಲನೆಯ ದಿನದಲ್ಲಿ ಯೆಹೂದ ಕುಲಾಧಿಪತಿ
ಅಮ್ಮೀನಾದಾಬನ ಮಗನಾದ ನಹಶೋನನು ತನ್ನ
ಕಾಣಿಕೆಗಳನ್ನು ತಂದನು.

ಎರಡನೆ ದಿನದಲ್ಲಿ ಇಸ್ಸಾಕಾರ್ ಕುಲಾಧಿಪತಿ
ಚೂವಾರನ ಮಗನಾದ ನೆತನೇಲನು ತನ್ನ ಕಾಣಿಕೆಗಳನ್ನು
ತಂದನು.

ಮೂರನೆಯ ದಿನದಲ್ಲಿ ಜೆಬುಲೂನ್ ಕುಲಾಧಿಪತಿ
ಹೇಲೋನನ ಮಗನಾದ ಎಲೀಯಾಬನು ತನ್ನ ಕಾಣಿಕೆ
ಗಳನ್ನು ತಂದನು.

ನಾಲ್ಕನೆಯ ದಿನದಲ್ಲಿ ರೂಬೇನ್ ಕುಲಾಧಿಪತಿ
ಶೆದೇಯೂರನ ಮಗನಾದ ಎಲೀಚೂರನು ತನ್ನ
ಕಾಣಿಕೆಗಳನ್ನು ತಂದನು.

ಐದನೆಯ ದಿನದಲ್ಲಿ ಸಿಮೆಯೋನ್ ಕುಲಾಧಿಪತಿ
ಚೂರೀಷದ್ದೈಯ ಮಗನಾದ ಶೆಲುಮೀಯೇಲನು ತನ್ನ
ಕಾಣಿಕೆಗಳನ್ನು ತಂದನು.

ಆರನೆಯ ದಿನದಲ್ಲಿ ಗಾದ್ ಕುಲಾಧಿಪತಿ ದೆಗೂ
ವೇಲನ ಮಗನಾದ ಎಲ್ಯಾಸಾಫನು ತನ್ನ ಕಾಣಿಕೆಗಳನ್ನು
ತಂದನು.

ಏಳನೆಯ ದಿನದಲ್ಲಿ ಎಫ್ರಾಯೀಮ್ ಕುಲಾಧಿಪತಿ
ಅಮ್ಮೀಹೂದನ ಮಗನಾದ ಎಲೀಷಾಮನು ತನ್ನ
ಕಾಣಿಕೆಗಳನ್ನು ತಂದನು.

ಎಂಟನೆಯ ದಿನದಲ್ಲಿ ಮನಸ್ಸೆ ಕುಲಾಧಿಪತಿ
ಪೆದಾಚೂರನ ಮಗನಾದ ಗಮ್ಲೀಯೇಲನು ತನ್ನ
ಕಾಣಿಕೆಗಳನ್ನು ತಂದನು.

ಒಂಭತ್ತನೆಯ ದಿನದಲ್ಲಿ ಬೆನ್ಯಾಮೀನ್ ಕುಲಾಧಿಪತಿ
ಗಿದ್ಯೋನನ ಮಗನಾದ ಅಬೀದಾನನು ತನ್ನ
ಕಾಣಿಕೆಗಳನ್ನು ತಂದನು.

ಹತ್ತನೆಯ ದಿನದಲ್ಲಿ ದಾನ್ ಕುಲಾಧಿಪತಿ
ಅಮ್ಮೀಷದ್ದೈನ ಮಗನಾದ ಅಹೀಗೆಜರನು ತನ್ನ ಕಾಣಿಕೆ
ಗಳನ್ನು ತಂದನು.

ಹನ್ನೊಂದನೆಯ ದಿನದಲ್ಲಿ ಆಶೇರ್ ಕುಲಾಧಿಪತಿ
ಒಕ್ರಾನನ ಮಗನಾದ ಪಗೀಯೇಲನು ತನ್ನ ಕಾಣಿಕೆ
ಗಳನ್ನು ತಂದನು.

ಹನ್ನೆರಡನೆಯ ದಿನದಲ್ಲಿ ನಫ್ತಾಲಿಯ ಕುಲಾಧಿಪತಿ
ಏನಾನನ ಮಗನಾದ ಅಹೀರನು ತನ್ನ ಕಾಣಿಕೆಗಳನ್ನು
ತಂದನು.

84ಅವೆಲ್ಲವೂ ಇಸ್ರೇಲರ ಪ್ರಧಾನರು ತಂದ ಕಾಣಿಕೆ
ಗಳು. ಯಜ್ಞವೇದಿಕೆಯನ್ನು ಅಭಿಷೇಕಿಸಿ ಪ್ರತಿಷ್ಠಿಸಿದಾಗ
ಯಜ್ಞವೇದಿಕೆಗೋಸ್ಕರ ಅವರು ಕೊಟ್ಟ ಕಾಣಿಕೆಗಳು
ಇವುಗಳೇ. ಅವರು ಹನ್ನೆರಡು ಬೆಳ್ಳಿಯ ತಟ್ಟೆಗಳನ್ನೂ
ಹನ್ನೆರಡು ಬೆಳ್ಳಿಯ ಬಟ್ಟಲುಗಳನ್ನೂ ಹನ್ನೆರಡು ಚಿನ್ನದ
ಧೂಪಾರತಿಗಳನ್ನೂ ತಂದರು. 85ಪ್ರತಿಯೊಂದು ಬೆಳ್ಳಿಯ
ತಟ್ಟೆಯ ತೂಕ ಸುಮಾರು ಮೂರುಕ್ಕಾಲು ಪೌಂಡುಗಳು,
ಪ್ರತಿ ಬಟ್ಟಲು ಸುಮಾರು ಮೂರುಮುಕ್ಕಾಲು ಪೌಂಡು
ತೂಕವುಳ್ಳದ್ದಾಗಿದ್ದವು. ಬೆಳ್ಳಿಯ ತಟ್ಟೆಗಳು ಮತ್ತು ಬೆಳ್ಳಿಯ
ಬಟ್ಟಲುಗಳು ಒಟ್ಟಿಗೆ ಅಧಿಕೃತ ಅಳತೆಯ ಪ್ರಕಾರ
ಅರವತ್ತು ಪೌಂಡುಗಳಷ್ಟು ತೂಕವಾಗಿದ್ದವು. 86ಧೂಪ
ವುಳ್ಳ ಹನ್ನೆರಡು ಚಿನ್ನದ ಧೂಪಾರತಿಗಳಲ್ಲಿ ಪ್ರತಿಯೊಂದು
ಅಧಿಕೃತ ಅಳತೆಯ ಪ್ರಕಾರ ನಾಲ್ಕು ತೊಲೆ ತೂಕವುಳ್ಳ
ದ್ದಾಗಿತ್ತು. ಹನ್ನೆರಡು ಚಿನ್ನದ ಧೂಪಾರತಿಗಳು ಒಟ್ಟಿಗೆ
ಮೂರು ಪೌಂಡುಗಳಷ್ಟು ತೂಕವುಳ್ಳದ್ದಾಗಿತ್ತು.
87ಸರ್ವಾಂಗಹೋಮಕ್ಕಾಗಿ ಉಪಯೋಗಿಸಲ್ಪಟ್ಟ ಒಟ್ಟು
ಪಶುಗಳು: ಹನ್ನೆರಡು ಹೋರಿಗಳು, ಹನ್ನೆರಡು ಟಗರು
ಗಳು, (ಒಂದು ವರುಷದ ಎರಡು ಗಂಡು ಕುರಿಮರಿಗಳು.
ಆ ಸಮರ್ಪಣೆಗಳೊಂದಿಗೆ ಧಾನ್ಯ ಸಮರ್ಪಣೆಗಳೂ
ಅರ್ಪಿಸಲ್ಪಟ್ಟವು. ಪಾಪಪರಿಹಾರಕ ಯಜ್ಞವಾಗಿ ಹನ್ನೆ
ರಡು ಹೋತಗಳು ಯೆಹೋವನಿಗೆ ಸಮರ್ಪಿಸಲ್ಪಟ್ಟವು.
88ಸಮಾಧಾನ ಯಜ್ಞಕ್ಕಾಗಿಯೂ ಪ್ರಧಾನರು ಪಶು
ಗಳನ್ನು ಕೊಟ್ಟರು. ಅವುಗಳ ಒಟ್ಟು ಸಂಖ್ಯೆ ಇಪ್ಪತ್ನಾಲ್ಕು
ಹೋರಿಗಳು, ಅರವತ್ತು ಟಗರುಗಳು, ಅರವತ್ತು ಹೋತ
ಗಳು, ಒಂದು ವರುಷದ ಅರವತ್ತು ಗಂಡು ಕುರಿಮರಿ
ಗಳು. ಯಜ್ಞವೇದಿಕೆಯನ್ನು ಅಭೀಷೇಕಿಸಿ ಪ್ರತಿಷ್ಠಿಸಿದಾಗ
ಅದಕೋಸ್ಕರ ಅವರು ಕೊಟ್ಟ ಕಾಣಿಕೆಗಳು ಇವೇ.

89ಮೋಶೆ ಯೆಹೋವನ ಸಂಗಡ ಮಾತಾಡಲು ದೇವ
ದರ್ಶನಗುಡಾರದೊಳಗೆ ಹೋದಾಗ, ಒಡಂಬಡಿಕೆಯ
ಪವಿತ್ರಪೆಟ್ಟಿಗೆಯ ಹೊದಿಕೆಯ ಮೇಲಿದ್ದ ಎರಡು
ಕೆರೂಬಿಗಳ ಮಧ್ಯದಿಂದ ಯೆಹೋವನು ಮಾತಾಡು
ತ್ತಿರುವುದು ಮೋಶೆಗೆ ಕೇಳಿಸಿತು.

## ದೀಪಸ್ತಂಭ

8 ಯೆಹೋವನು ಮೋಶೆಗೆ, 2‘‘ಆರೋನನು (ಪವಿತ್ರ
ಗುಡಾರದ) ದೀಪಸ್ತಂಭದ ಮೇಲಿನ ದೀಪಗಳನ್ನು
ಕ್ರಮಪಡಿಸಲು ಹೇಳು. ಆಗ ದೀಪಸ್ತಂಭದ ಮುಂದಿನ
ಸ್ಥಳದಲ್ಲಿ ಬೆಳಕು ಪ್ರಕಾಶಿಸುವುದು’’ ಎಂದು ಹೇಳಿದನು.
3ಅಂತೆಯೇ ಆರೋನನು ಮಾಡಿದನು. ಆರೋನನು
ದೀಪಗಳನ್ನು ಸರಿಯಾದ ಸ್ಥಳದಲ್ಲಿಟ್ಟು ಅವುಗಳು ದೀಪ
ಸ್ತಂಭದ ಎದುರಿನಲ್ಲಿ ಪ್ರಕಾಶಿಸುವಂತೆ ಮಾಡಿದನು. ಹೀಗೆ
ಯೆಹೋವನು ಹೇಳಿದಂತೆಯೇ ಮೋಶೆಯು
ಮಾಡಿದನು.

4ಆ ದೀಪಸ್ತಂಭವನ್ನು ಅದರ ಬುಡದಿಂದ ಪುಷ್ಪಾ
ಲಂಕಾರಗಳವರೆಗೂ ಸಂಪೂರ್ಣವಾಗಿ ಚಿನ್ನದ ತಗಡಿ
ನಿಂದ ಮಾಡಲಾಗಿತ್ತು. ಯೆಹೋವನು ಮೋಶೆಗೆ
ತೋರಿಸಿದ ಮಾದರಿಯಂತೆ ಅದು ಮಾಡಲ್ಪಟ್ಟಿತ್ತು.

## ಲೇವಿಯರ ಶುದ್ಧೀಕರಣ

5ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
6‘‘ಇಸ್ರೇಲರಿಂದ ಲೇವಿಯರನ್ನು ಪ್ರತ್ಯೇಕಿಸಿ ಶುದ್ಧೀ
ಕರಿಸು. 7ಅವರನ್ನು ಶುದ್ಧೀಕರಿಸುವ ಕ್ರಮ ಹೇಗೆಂದರೆ,
‘‘ನೀನು ಅವರ ಮೇಲೆ ಶುದ್ಧೀಕರಣದ ನೀರನ್ನು ಚಿಮಿ
ಕಿಸಬೇಕು. ಬಳಿಕ ಅವರು ಸರ್ವಾಂಗ ಕ್ಷೌರ ಮಾಡಿಸಿ
ಕೊಳ್ಳಬೇಕು; ತಮ್ಮ ಬಟ್ಟೆಗಳನ್ನು ತೊಳೆದುಕೊಳ್ಳಬೇಕು;
ತಮ್ಮನ್ನು ಶುದ್ಧಪಡಿಸಿಕೊಳ್ಳಬೇಕು.

8‘‘ತರುವಾಯ ಲೇವಿಯರು ಸರ್ವಾಂಗ ಹೋಮಕ್ಕಾಗಿ
ಒಂದು ಎಳೆಹೋರಿಯನ್ನು ಮತ್ತು ಅದರೊಡನೆ ಸಮ
ರ್ಪಿಸಬೇಕಾದ ಧಾನ್ಯ ಸಮರ್ಪಣೆಗಾಗಿ ಎಣ್ಣೆ ಬೆರೆಸಿದ
ಗೋಧಿಯ ಹಿಟ್ಟನ್ನು ತೆಗೆದುಕೊಂಡು ಬರ ಬೇಕು; ನೀನು
ಅವರಿಂದ ಪಾಪಪರಿಹಾರಕಯಜ್ಞಕ್ಕಾಗಿ ಮತ್ತೊಂದು
ಎಳೆಹೋರಿಯನ್ನು ತೆಗೆದುಕೊಳ್ಳಬೇಕು. 9‘‘ಲೇವಿಯ
ರನ್ನು ದೇವದರ್ಶನಗುಡಾರದ ಮುಂಭಾಗಕ್ಕೆ ಕರೆದು
ಕೊಂಡು ಬಂದು ಇಸ್ರೇಲರನ್ನು ಒಟ್ಟಾಗಿ ಸೇರಿಸು.
10ನೀನು ಲೇವಿಯರನ್ನು ಯೆಹೋವನ ಮುಂದೆ ಕರೆದು
ಕೊಂಡು ಬಂದಾಗ ಇಸ್ರೇಲರು ತಮ್ಮ ಕೈಗಳನ್ನು ಅವರ
ತಲೆಯ ಮೇಲಿಡುವರು. 11ಆಗ ಆರೋನನು ಲೇವಿಯ
ರನ್ನು ಯೆಹೋವನಿಗೆ ಇಸ್ರೇಲರ ಕಾಣಿಕೆಯಾಗಿ ಕೊಡು
ವನು. ಈ ರೀತಿಯಾಗಿ ಲೇವಿಯರು ಯೆಹೋವನ
ಪರಿಚರ್ಯ ಕೆಲಸಕ್ಕಾಗಿ ಸಿದ್ಧ ರಾಗುವರು.

12‘‘ಲೇವಿಯರು ಆ ಹೋರಿಗಳ ತಲೆಯ ಮೇಲೆ ತಮ್ಮ
ಕೈಗಳನ್ನಿಟ್ಟ ನಂತರ, ನೀನು ಯೆಹೋವನಿಗೆ ಪಾಪಪರಿ
ಹಾರಕಯಜ್ಞವಾಗಿ ಒಂದು ಹೋರಿಯನ್ನೂ ಸರ್ವಾಂಗ

ಹೋಮವಾಗಿ ಇನ್ನೊಂದು ಹೋರಿಯನ್ನೂ ಸಮರ್ಪಿಸ
ಬೇಕು. ಇವು ಲೇವಿಯರಿಗೆ ನೈವೇದ್ಯದ ಸಮರ್ಪಣೆ
ಗಳಾಗಿವೆ. 13ಈ ರೀತಿಯಲ್ಲಿ ನೀನು ಲೇವಿಯರನ್ನು
ಆರೋನ ಮತ್ತು ಅವನ ಪುತ್ರರ ಅಧೀನದಲ್ಲಿ ಸೇವೆ
ಮಾಡುವಂತೆ ಮಾಡುವೆ ಮತ್ತು ಲೇವಿಯರನ್ನು
ಯೆಹೋವನಿಗೆ ವಿಶೇಷ ಕೊಡುಗೆಯಾಗಿ ಸಲ್ಲಿಸುವೆ.
14ನೀನು ಲೇವಿಯರನ್ನು ಇತರ ಇಸ್ರೇಲರಿಂದ ಪ್ರತ್ಯೇಕಿಸ
ಬೇಕು. ಲೇವಿಯರು ನನ್ನ ಆಸ್ತಿಯಾಗಿದ್ದಾರೆ.

15‘‘ನೀನು ಲೇವಿಯರನ್ನು ಶುದ್ಧೀಕರಿಸಿ ಅವರನ್ನು
ವಿಶೇಷ ಕೊಡುಗೆಯಾಗಿ ನನಗೆ ಕೊಟ್ಟ ಮೇಲೆ, ಅವರು
ಬಂದು ದೇವದರ್ಶನಗುಡಾರದ ಕೆಲಸವನ್ನು ಮಾಡ
ಬಹುದು. 16ಯಾಕಂದರೆ ಲೇವಿಯರು ಇಸ್ರೇಲರ ಮಧ್ಯ
ದಿಂದ ನನಗಾಗಿ ಸಂಪೂರ್ಣವಾಗಿ ಪ್ರತಿಷ್ಠಿತರಾಗಿದ್ದಾರೆ.
ಇಸ್ರೇಲರ ಚೊಚ್ಚಲು ಗಂಡುಮಕ್ಕಳಿಗೆ ಬದಲಾಗಿ ನಾನು
ಇವರನ್ನೇ ನನ್ನ ಸ್ವಂತಕ್ಕಾಗಿ ತೆಗೆದುಕೊಂಡಿದ್ದೇನೆ.
17ಇಸ್ರೇಲರಲ್ಲಿ ಚೊಚ್ಚಲಾದ ಮನುಷ್ಯರೂ ಪಶುಗಳೂ
ನನ್ನ ಸ್ವತ್ತಾಗಿರುವರು. ಈಜಿಪ್ಟ್ ದೇಶದಲ್ಲಿದ್ದ ಚೊಚ್ಚ
ಲಾದದ್ದನ್ನೆಲ್ಲ ನಾನು ಸಂಹರಿಸಿದಾಗ ಇಸ್ರೇಲರ ಚೊಚ್ಚ
ಲಾದದ್ದನ್ನು ನನ್ನ ಸ್ವಂತಕ್ಕಾಗಿ ಪ್ರತಿಷ್ಠಿಸಿಕೊಂಡೆನಲ್ಲಾ.
18ಆದರೆ ಈಗ ನಾನು ಇಸ್ರೇಲರ ಚೊಚ್ಚಲು ಗಂಡು
ಮಕ್ಕಳಿಗೆ ಬದಲಾಗಿ ಲೇವಿಯರನ್ನು ತೆಗೆದುಕೊಳ್ಳುವೆನು.
19ಇಸ್ರೇಲರ ಮಧ್ಯದಿಂದ ನಾನು ಲೇವಿಯರನ್ನು ಆರಿಸಿ
ಕೊಂಡಿದ್ದೇನೆ ಮತ್ತು ದೇವದರ್ಶನಗುಡಾರದಲ್ಲಿ
ಇಸ್ರೇಲರ ಪರವಾಗಿ ಕೆಲಸಮಾಡಲೂ ಮತ್ತು ಇಸ್ರೇಲ
ರಿಗೆ ದೋಷಪರಿಹಾರ ಮಾಡುವುದಕ್ಕೂ ನಾನು ಅವರನ್ನು
ಆರೋನ ಮತ್ತು ಅವನ ಪುತ್ರರಿಗೆ ಒಪ್ಪಿಸಿಕೊಟ್ಟಿದ್ದೇನೆ.
ಇಸ್ರೇಲರನ್ನು ಶುದ್ಧಿಗೊಳಿಸುವ ಯಜ್ಞಗಳನ್ನು ಸಮ
ರ್ಪಿಸುವುದಕ್ಕೆ ಅವರು ಸಹಾಯಮಾಡುವರು. ಹೀಗಿರು
ವುದರಿಂದ ಇಸ್ರೇಲರು ಪವಿತ್ರವಸ್ತುಗಳ ಅತೀಸಮೀಪಕ್ಕೆ
ಬಂದರೂ ಅವರಿಗೆ ಅಪಾಯವು ಸಂಭವಿಸುವುದಿಲ್ಲ.’’

20ಯೆಹೋವನು ಲೇವಿಯರ ವಿಷಯದಲ್ಲಿ ಆಜ್ಞಾಪಿಸಿ
ದಂತೆ ಮೋಶೆ ಆರೋನರೂ ಇಸ್ರೇಲರ ಸಮೂಹ
ದವರೆಲ್ಲರೂ ಮಾಡಿದರು. 21ಲೇವಿಯರು ತಮ್ಮನ್ನು
ಶುದ್ಧಮಾಡಿಕೊಂಡು ಬಟ್ಟೆಗಳನ್ನು ಒಗೆದುಕೊಂಡರು.
ಬಳಿಕ ಆರೋನನು ಅವರನ್ನು ಯೆಹೋವನಿಗೆ ವಿಶೇಷ
ಕೊಡುಗೆಯಾಗಿ ಕೊಟ್ಟನು. ಆರೋನನು ಅವರನ್ನು
ಶುದ್ಧೀಕರಿಸುವುದಕ್ಕಾಗಿ ಪ್ರಾಯಶ್ಚಿತ್ತ ಮಾಡಿದನು.
22ಆಗ ಲೇವಿಯರು ದೇವದರ್ಶನಗುಡಾರದಲ್ಲಿ
ಆರೋನನ ಮತ್ತು ಅವನ ಪುತ್ರರ ಮೇಲ್ವಿಚಾರಣೆಯಲ್ಲಿ
ಕೆಲಸ ಮಾಡಲು ಅರ್ಹರಾದರು. ಯೆಹೋವನು
ಮೋಶೆಗೆ ಲೇವಿಯರ ಬಗ್ಗೆ ಆಜ್ಞಾಪಿಸಿದ್ದಂತೆಯೇ
ಅವರಿಗೆ ಮಾಡಲಾಯಿತು.

23ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
24‘‘ಲೇವಿಯರು ಅನುಸರಿಸಬೇಕಾದ ಪದ್ಧತಿ ಏನೆಂದರೆ,
ಲೇವಿಯರಲ್ಲಿ ಇಪ್ಪತ್ತೈದು ವರ್ಷಕ್ಕಿಂತ ಹೆಚ್ಚು ವಯ
ಸ್ಸಾಗಿರುವ ಗಂಡಸರು ದೇವದರ್ಶನಗುಡಾರದ ಸೇವೆಯ
ದಳದಲ್ಲಿ ಕೆಲಸಮಾಡಲು ಯೋಗ್ಯರಾಗಿದ್ದಾರೆ. 25ಅವರ
ವಯಸ್ಸು ಐವತ್ತು ವರ್ಷವಾದ ನಂತರ ಸೇವೆಯಿಂದ
ನಿವೃತ್ತರಾಗಬೇಕು; ಪವಿತ್ರಗುಡಾರವನ್ನು ವರ್ಗಾವಣೆ
ಮಾಡುವ ಭಾರವಾದ ಕೆಲಸವನ್ನು ಅವರೆಂದಿಗೂ ಮಾಡ
ಕೂಡದು. 26ಅವರು ಕಾವಲುಗಾರರಾಗಿ ದೇವದರ್ಶನ
ಗುಡಾರದ ಬಳಿ ಇತರ ಲೇವಿಯರಿಗೆ ಸಹಾಯ ಮಾಡ
ಬಹುದೇ ಹೊರತು ಭಾರವಾದ ಕೆಲಸವನ್ನು ಮಾಡಲೇ
ಕೂಡದು. ನೀನು ಈ ರೀತಿಯಲ್ಲಿ ಲೇವಿಯರಿಗೆ
ಕೆಲಸವನ್ನು ಹಂಚಿಕೊಡಬೇಕು.’’

## ಪಸ್ಕಹಬ್ಬ

9 ಇಸ್ರೇಲರು ಈಜಿಪ್ಟ್ ದೇಶವನ್ನು ಬಿಟ್ಟಬಂದ
ನಂತರದ ಎರಡನೆ ವರುಷದ ಮೊದಲನೆಯ ತಿಂಗ
ಳಲ್ಲಿ ಸೀನಾಯಿ ಮರುಭೂಮಿಯಲ್ಲಿ ಯೆಹೋವನು
ಮೋಶೆಯೊಡನೆ ಮಾತಾಡಿದನು. ಯೆಹೋವನು
ಮೋಶೆಗೆ ಹೇಳಿದ್ದೇನೆಂದರೆ: 2‘‘ಇಸ್ರೇಲರು ನೇಮಕ
ವಾದ ಕಾಲದಲ್ಲಿ ಪಸ್ಕಹಬ್ಬವನ್ನು ಆಚರಿಸಬೇಕು. 3ಅವರು
ಈ ತಿಂಗಳ ಹದಿನಾಲ್ಕನೆಯ ದಿನದ ನಸುಸಂಜೆಯ ವೇಳೆ
ಪಸ್ಕದ ಊಟವನ್ನು ಮಾಡಬೇಕು. ಅವರು ಇದನ್ನು
ಪಸ್ಕಹಬ್ಬದ ಎಲ್ಲಾ ನಿಯಮಗಳ ಪ್ರಕಾರ ನೇಮಕವಾದ
ಕಾಲದಲ್ಲಿ ಮಾಡಬೇಕು.’’

4ಆದುದರಿಂದ ಮೋಶೆ ಇಸ್ರೇಲರಿಗೆ, ನೀವು ಪಸ್ಕ
ಹಬ್ಬವನ್ನು ಆಚರಿಸಬೇಕೆಂದು ಹೇಳಿದನು. 5ಜನರು
ಮೊದಲನೆಯ ತಿಂಗಳಿನ ಹದಿನಾಲ್ಕನೆಯ ದಿನದ ನಸು
ಸಂಜೆಯ ವೇಳೆಯಲ್ಲಿ ಸೀನಾಯಿ ಮರುಭೂಮಿಯಲ್ಲಿ
ಇದನ್ನು ಆಚರಿಸಿದರು. ಯೆಹೋವನು ಮೋಶೆಗೆ
ಆಜ್ಞಾಪಿಸಿದಂತೆ ಪ್ರತಿಯೊಂದನ್ನೂ ಮಾಡಿದರು.

6ಆದರೆ ಕೆಲವು ಜನರು ಶವವನ್ನು ಮುಟ್ಟಿದ್ದರಿಂದ
ಅಶುದ್ಧರಾಗಿ ಆ ದಿನದಲ್ಲಿ ಪಸ್ಕಹಬ್ಬವನ್ನು ಆಚರಿಸ
ಲಾಗಲಿಲ್ಲ. ಆದುದರಿಂದ ಅವರು ಆ ದಿನ ಮೋಶೆ
ಆರೋನರ ಬಳಿಗೆ ಬಂದು, 7‘‘ನಾವು ಮನುಷ್ಯಶವವನ್ನು
ಮುಟ್ಟಿದ್ದರಿಂದ ಅಶುದ್ಧರಾಗಿದ್ದೇವೆ. ಆದರೆ ನೇಮಕ
ವಾದ ಕಾಲದಲ್ಲಿ ಯೆಹೋವನ ಪಸ್ಕಹಬ್ಬದ ಯಜ್ಞವನ್ನು
ಇತರ ಇಸ್ರೇಲರೊಡನೆ ಅರ್ಪಿಸುವುದಕ್ಕೆ ಸಾಧ್ಯ
ವಿಲ್ಲವೇ?’’ ಎಂದು ಕೇಳಿದರು.

8ಮೋಶೆಯು ಅವರಿಗೆ, ‘‘ಇಲ್ಲೇ ಇರಿ. ಇದರ ವಿಷಯ
ದಲ್ಲಿ ಯೆಹೋವನು ಏನು ಹೇಳುತ್ತಾನೆಂದು ನಾನು
ಆತನನ್ನು ವಿಚಾರಿಸುತ್ತೇನೆ’’ ಎಂದು ಹೇಳಿದನು.

9ಆಗ ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ,
10“ನೀನು ಇಸ್ರೇಲರಿಗೆ ಹೀಗೆ ಆಜ್ಞಾಪಿಸು, “ನಿಮ್ಮಲ್ಲಿ
ಯಾಗಲೀ ನಿಮ್ಮ ಸಂತತಿಯವರಲ್ಲಿಯಾಗಲೀ ಶವ
ಸೋಂಕಿದ್ದರಿಂದ ಅಶುದ್ಧರಾದವರೂ ದೂರಪ್ರಯಾಣ
ದಲ್ಲಿರುವವರೂ ಸಹ ಯೆಹೋವನ ಪಸ್ಕಹಬ್ಬವನ್ನು
ಆಚರಿಸಲೇಬೇಕು. 11ಅಂಥವರು ಎರಡನೆಯ ತಿಂಗಳಿನ
ಹದಿನಾಲ್ಕನೆಯ ದಿನದ ಸಸುಸಂಜೆ ವೇಳೆಯಲ್ಲಿ ಪಸ್ಕ
ಹಬ್ಬವನ್ನು ಆಚರಿಸಬೇಕು. ಆ ಸಮಯದಲ್ಲಿ ಅವರು
ಪಸ್ಕದ ಕುರಿಮರಿಯ ಮಾಂಸವನ್ನು ಹುಳಿಯಿಲ್ಲದ ರೊಟ್ಟಿ
ಗಳೊಡನೆ ಮತ್ತು ಕಹಿಯಾದ ಸೊಪ್ಪುಗಳೊಡನೆ ಊಟ
ಮಾಡಬೇಕು. 12ಅದರಲ್ಲಿ ಯಾವುದನ್ನೂ ಮರುದಿನದ
ವರೆಗೆ ಇಡಬಾರದು. ಅವರು ಅದೆಲ್ಲವನ್ನು ತಿಂದು
ಬಿಡಬೇಕು. ಆ ಕುರಿಮರಿಯ ಎಲುಬುಗಳನ್ನು ಮುರಿಯ
ಬಾರದು. ಅಂತೂ ಪಸ್ಕಹಬ್ಬದ ವಿಷಯವಾಗಿ ನೇಮಕ
ವಾಗಿರುವ ನಿಯಮಗಳ ಪ್ರಕಾರವೇ ಅದನ್ನು ಆಚರಿಸ
ಬೇಕು. 13ಆದರೆ ಯಾವನಾದರೂ ಶುದ್ಧನಾಗಿದ್ದರೂ
ಪ್ರಯಾಣದಲ್ಲಿಲ್ಲದಿದ್ದರೂ ಪಸ್ಕಹಬ್ಬವನ್ನು ಆಚರಿಸ
ದಿದ್ದರೆ, ಅವನನ್ನು ಅವನ ಜನರಿಂದ ಬಹಿಷ್ಕರಿಸಬೇಕು.
ಅವನು ಯೆಹೋವನಿಂದ ನೇಮಕವಾದ ಯಜ್ಞವನ್ನು
ಸರಿಯಾದ ಕಾಲದಲ್ಲಿ ಸಮರ್ಪಿಸದೆ ಹೋದದ್ದರಿಂದ
ಅವನು ದೋಷಿಯಾಗಿದ್ದಾನೆ ಮತ್ತು ಅವನಿಗೆ ಶಿಕ್ಷೆ
ಯಾಗಬೇಕು.

14“ನಿಮ್ಮಲ್ಲಿ ವಾಸವಾಗಿರುವ ಅನ್ಯದೇಶಸ್ಥನು
ಯೆಹೋವನಿಗೆ ಪಸ್ಕಹಬ್ಬವನ್ನು ಆಚರಿಸಬೇಕೆಂದು
ಅಪೇಕ್ಷಿಸಿದರೆ, ಅದರ ವಿಷಯವಾದ ನಿಯಮಗಳ
ಪ್ರಕಾರವೇ ಅದನ್ನು ಆಚರಿಸಬೇಕು. ಪರದೇಶದವನಿಗೂ
ಸ್ವದೇಶದವನಿಗೂ ಒಂದೇ ವಿಧಿಯಿರಬೇಕು.”

## ಮೇಘಸ್ತಂಭ ಮತ್ತು ಅಗ್ನಿಸ್ತಂಭ

15ಇಸ್ರೇಲರು ಒಡಂಬಡಿಕೆಯ ಗುಡಾರವಾದ ಪವಿತ್ರ
ಗುಡಾರವನ್ನು ಎತ್ತಿ ನಿಲ್ಲಿಸಿದ ದಿನದಲ್ಲಿ ಮೇಘವು ಅದರ
ಮೇಲೆ ಮುಚ್ಚಿಕೊಂಡಿತು ಮತ್ತು ಅದು ರಾತ್ರಿಯಲ್ಲಿ
ಬೆಂಕಿಯಂತೆ ಕಾಣಿಸುತ್ತಿತ್ತು. 16ಹೀಗೆ ಮೇಘವು ಯಾವಾ
ಗಲೂ ದೇವದರ್ಶನಗುಡಾರವನ್ನು ಮುಚ್ಚಿಕೊಂಡಿರು
ವುದು. ರಾತ್ರಿವೇಳೆಯಲ್ಲಿ ಆ ಮೇಘವು ಬೆಂಕಿಯಂತೆ
ಕಾಣಿಸುವುದು. 17ಆ ಮೇಘವು ಪವಿತ್ರಗುಡಾರದಿಂದ
ಮೇಲಕ್ಕೆ ಎದ್ದಾಗಲೆಲ್ಲಾ ಇಸ್ರೇಲರು ಮುಂದಕ್ಕೆ
ಪ್ರಯಾಣಮಾಡುವರು. ಆ ಮೇಘವು ನಿಂತಲ್ಲೆಲ್ಲಾ
ಇಸ್ರೇಲರು ಪಾಳೆಯ ಮಾಡಿಕೊಳ್ಳುವರು. 18ಇಸ್ರೇಲರು
ಯೆಹೋವನ ಸೂಚನೆಯನ್ನು ಹೊಂದಿದ ಮೇಲೆ
ಪ್ರಯಾಣಮಾಡುವರು. ಆ ಮೋಡವು ಪವಿತ್ರಗುಡಾರದ
ಮೇಲಿರುವ ತನಕ ಅವರು ತಾವಿರುವಲ್ಲಿಯೇ ಇರುವರು.
19ಕೆಲವು ಬಾರಿ ಆ ಮೇಘವು ಬಹುದಿನಗಳವರೆಗೂ
ಪವಿತ್ರಗುಡಾರದ ಮೇಲೆ ಇರುವ ಸಂದರ್ಭದಲ್ಲಿ
ಇಸ್ರೇಲರು ಯೆಹೋವನಿಗೆ ವಿಧೇಯರಾಗಿ ಮುಂದಕ್ಕೆ
ಪ್ರಯಾಣಮಾಡಲಿಲ್ಲ.

20ಒಂದೊಂದು ವೇಳೆಯಲ್ಲಿ ಮೇಘವು ಕೆಲವು ದಿವಸ
ಮಾತ್ರ ಪವಿತ್ರಗುಡಾರದ ಮೇಲೆ ನಿಂತಿರುವುದು.
ಯೆಹೋವನ ಆಜ್ಞೆಯ ಪ್ರಕಾರ ಅವರು ಇಳಿದು
ಕೊಳ್ಳುತ್ತಿದ್ದರು ಮತ್ತು ಯೆಹೋವನ ಆಜ್ಞೆಯ ಪ್ರಕಾರ
ಹೊರಡುತ್ತಿದ್ದರು. 21ಕೆಲವು ಸಮಯಗಳಲ್ಲಿ ಮೇಘವು
ಸಾಯಂಕಾಲದಿಂದ ಹೊತ್ತಾರೆಯವರೆಗೂ ಇರುತ್ತಿತ್ತು;
ಬೆಳಿಗ್ಗೆ ಅದು ಮೇಲಕ್ಕೆ ಎದ್ದಾಗ ಜನರು ಪ್ರಯಾಣ
ಮಾಡುತ್ತಿದ್ದರು. ಮೋಡವು ಚಲಿಸಿದಾಗ ಅದು ಹಗಲಾ
ಗಿರಲೀ ರಾತ್ರಿಯಾಗಿರಲೀ ಜನರು ಅದನ್ನು ಹಿಂಬಾಲಿಸು
ವರು. 22ಆ ಮೇಘವು ಪವಿತ್ರಗುಡಾರದ ಮೇಲೆ ಎರಡು
ದಿನವಾಗಲೀ ಒಂದು ತಿಂಗಳಾಗಲೀ ಒಂದು ವರ್ಷ
ವಾಗಲೀ ನಿಂತರೆ ಅದು ನಿಂತಿರುವ ತನಕ ಇಸ್ರೇಲರು
ಪ್ರಯಾಣ ಮಾಡದೆ ಇಳಿದುಕೊಂಡೇ ಇರುವರು. ಅದು
ಮೇಲಕ್ಕೆ ಎದ್ದಾಗ ಅವರು ಹೊರಡುವರು. 23ಹೀಗೆ
ಯೆಹೋವನ ಸೂಚನೆಯಂತೆ ಜನರು ಪಾಳೆಯ ಮಾಡಿ
ಕೊಳ್ಳುವರು; ಪ್ರಯಾಣ ಮುಂದುವರಿಸುವರು.
ಮೋಶೆಯ ಮೂಲಕವಾಗಿ ಆಜ್ಞಾಪಿಸಿದಂತೆ ಜನರು
ಯೆಹೋವನ ಸೂಚನೆಗಳನ್ನು ಲಕ್ಷ್ಯವಿಟ್ಟು ಅನುಸರಿಸಿ
ನಡೆಯುತ್ತಿದ್ದರು.

## ಬೆಳ್ಳಿಯ ತುತ್ತೂರಿಗಳು

10 ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
2“ನೀನು ಬೆಳ್ಳಿಯ ತಗಡುಗಳಿಂದ ಎರಡು
ತುತ್ತೂರಿಗಳನ್ನು ಮಾಡಿಸಬೇಕು. ಜನಸಮೂಹದವ
ರನ್ನು ಒಟ್ಟಾಗಿ ಕರೆಸುವುದಕ್ಕೂ ಅವರು ಯಾವಾಗ
ಹೊರಡಬೇಕೆಂದು ಹೇಳುವುದಕ್ಕೂ ಇವುಗಳನ್ನು ಉಪ
ಯೋಗಿಸಬೇಕು. 3ನೀನು ಎರಡು ತುತ್ತೂರಿಗಳನ್ನು
ದೀರ್ಘಸ್ವರದಿಂದ ಊದಿಸುವಾಗ ಜನಸಮೂಹದವ
ರೆಲ್ಲರೂ ನಿನ್ನ ಹತ್ತಿರ ದೇವದರ್ಶನಗುಡಾರದ ಪ್ರವೇಶ
ದ್ವಾರದ ಬಳಿಯಲ್ಲಿ ಕೂಡಿರಬೇಕು. 4ಆದರೆ ನೀನು
ಒಂದು ತುತ್ತೂರಿಯನ್ನು ಮಾತ್ರ ಊದಿಸಿದರೆ ಇಸ್ರೇಲಿನ
ಕುಲಪ್ರಧಾನರಾದ ಮುಖ್ಯಸ್ಥರು ಮಾತ್ರ ನಿನ್ನನ್ನು
ಸಂಧಿಸಲು ಬರಬೇಕು.

5“ಜನರ ಕುಲಗಳು ಪಾಳೆಯದಿಂದ ಪ್ರಯಾಣ
ಹೊರಡಬೇಕೆಂಬುದಕ್ಕೆ ಸೂಚನೆಯಾಗಿ ತುತ್ತೂರಿಯನ್ನು
ಲಘುಸ್ವರದಿಂದ ಊದಿಸಬೇಕು. ನೀವು ಮೊದಲನೆ ಸಲ
ತುತ್ತೂರಿಯನ್ನು ಲಘುಸ್ವರದಿಂದ ಊದಿಸುವಾಗ ದೇವ
ದರ್ಶನಗುಡಾರದ ಪೂರ್ವದಿಕ್ಕಿನಲ್ಲಿ ಪಾಳೆಯ

ಹಾಕಿಕೊಂಡಿರುವ ಕುಲಗಳು ಹೊರಡಬೇಕು. 6ನೀವು
ಎರಡನೆಯ ಸಲ ತುತ್ತೂರಿಗಳನ್ನು ಲಘುಸ್ವರದಲ್ಲಿ
ಊದಿಸುವಾಗ ದೇವದರ್ಶನಗುಡಾರದ ದಕ್ಷಿಣದಿಕ್ಕಿನಲ್ಲಿ
ಪಾಳೆಯ ಹಾಕಿಕೊಂಡಿರುವ ಕುಲಗಳು ಹೊರಡಬೇಕು.
7ಆದರೆ ಜನಸಮುದಾಯವು ಕೂಡಿಬರಬೇಕಾದಾಗ
ತುತ್ತೂರಿಗಳನ್ನು ದೀರ್ಘಸ್ವರದಲ್ಲಿ ಊದಿಸಬೇಕೇ
ಹೊರತು ಲಘುಸ್ವರದಲ್ಲಲ್ಲ. 8ಯಾಜಕರಾದ ಆರೋ
ನನ ಪುತ್ರರು ಮಾತ್ರವೇ ತುತ್ತೂರಿಗಳನ್ನು ಊದಬೇಕು.
ಇದು ನಿಮಗೂ ನಿಮ್ಮ ಸಂತತಿಯವರಿಗೂ ಶಾಶ್ವತ
ನಿಯಮ.

9"ನೀವು ಸ್ವದೇಶವನ್ನು ಸೇರಿದ ಮೇಲೆ ನಿಮ್ಮ ಶತ್ರು
ಗಳನ್ನು ಎದುರಿಸುವುದಕ್ಕಾಗಿ ಯುದ್ಧಕ್ಕೆ ಹೊರಡುವಾಗ
ತುತ್ತೂರಿಗಳನ್ನು ಲಘುಸ್ವರದಲ್ಲಿ ಊದಿಸಬೇಕು. ಆಗ
ನಿಮ್ಮ ದೇವರಾದ ಯೆಹೋವನು ನಿಮ್ಮನ್ನು ಜ್ಞಾಪಕ
ಮಾಡಿಕೊಂಡು ಶತ್ರುಗಳಿಂದ ನಿಮ್ಮನ್ನು ರಕ್ಷಿಸುವನು.
10ಇದಲ್ಲದೆ, ನೀವು ಉತ್ಸವಕಾಲಗಳಲ್ಲಿಯೂ ಹಬ್ಬ
ಗಳಲ್ಲಿಯೂ ಅಮಾವಾಸ್ಯೆಯಲ್ಲಿಯೂ ಸರ್ವಾಂಗ
ಹೋಮಗಳನ್ನೂ ಸಮಾಧಾನ ಯಜ್ಞಗಳನ್ನೂ ಸಮ
ರ್ಪಿಸುವಾಗ ತುತ್ತೂರಿಗಳನ್ನು ಊದಿಸಬೇಕು. ನಿಮ್ಮನ್ನು
ಗಮನಿಸಬೇಕೆಂದು ಆ ತುತ್ತೂರಿ ಧ್ವನಿಗಳು ನಿಮ್ಮ
ದೇವರಿಗೆ ನೆನಪನ್ನುಂಟುಮಾಡುತ್ತವೆ. ನೀವು ಇದನ್ನು
ಮಾಡಬೇಕೆಂದು ನಾನು ಆಜ್ಞಾಪಿಸುತ್ತೇನೆ. ನಿಮ್ಮ ದೇವ
ರಾದ ಯೆಹೋವನು ನಾನೇ."

### ಇಸ್ರೇಲರ ಪ್ರಯಾಣ

11ಇಸ್ರೇಲರು ಈಜಿಪ್ಟನ್ನು ಬಿಟ್ಟ ನಂತರದ ಎರಡನೆಯ
ವರ್ಷದ ಎರಡನೆಯ ತಿಂಗಳಿನ ಇಪ್ಪತ್ತನೆಯ ದಿನದಲ್ಲಿ
ಮೇಘವು ಒಡಂಬಡಿಕೆಯ ಗುಡಾರದಿಂದ ಮೇಲೆ
ಎದ್ದಿತು. 12ಆದ್ದರಿಂದ, ಇಸ್ರೇಲರು ತಮ್ಮ ಪ್ರಯಾಣ
ಗಳನ್ನು ಪ್ರಾರಂಭಿಸಿದರು. ಅವರು ಸೀನಾಯಿ ಮರು
ಭೂಮಿಯನ್ನು ಬಿಟ್ಟು ಮೇಘವು ಪಾರಾನ್ ಮರು
ಭೂಮಿಯಲ್ಲಿ ನಿಲ್ಲುವವರೆಗೆ ಪ್ರಯಾಣ ಮಾಡಿದರು.
13ಯೆಹೋವನು ಮೋಶೆಯ ಮೂಲಕ ಕೊಟ್ಟ
ಸೂಚನೆಯ ಪ್ರಕಾರ ಅವರು ಮೊಟ್ಟಮೊದಲನೆಯ ಸಲ
ಪ್ರಯಾಣವನ್ನು ಆರಂಭಿಸಿದರು. 14ಮೊದಲು ಯೆಹೂದ
ಪಾಳೆಯದ ಮೂರು ದಂಡುಗಳು ಹೊರಟವು. ಅವರು
ತಮ್ಮ ಧ್ವಜದೊಂದಿಗೆ ಪ್ರಯಾಣ ಮಾಡಿದರು.
ಅಮ್ಮೀನಾದಾಬನ ಮಗನಾದ ನಹಶೋನನು ಯೆಹೂದ
ಕುಲದ ಸೇನಾಧಿಪತಿಯಾಗಿದ್ದನು. 15ಚೂವಾರನ ಮಗ
ನಾದ ನೆತನೇಲನು ಇಸ್ಸಾಕಾರನ ಕುಲದ ಸೇನಾಧಿಪತಿ.
16ಹೇಲೋನನ ಮಗನಾದ ಎಲೀಯಾಬನು
ಜೆಬುಲೂನ್ ಕುಲದ ಸೇನಾಧಿಪತಿ.

17ಬಳಿಕ ಪವಿತ್ರಗುಡಾರವನ್ನು ಕೆಳಗಿಳಿಸಲಾಯಿತು.
ಗೇರ್ಷೋನ್ ಮತ್ತು ಮೆರಾರೀ ಕುಲಗಳ ಗಂಡಸರು
ಪವಿತ್ರಗುಡಾರವನ್ನು ಹೊತ್ತುಕೊಂಡು ಅವರ ಹಿಂದೆ
ಹೊರಟರು. 18ಅವರ ತರುವಾಯ ರೂಬೇನ್ ಕುಲ
ದಿಂದ ಮುನ್ನಡೆಸಲ್ಪಟ್ಟ ಮೂರು ಗುಂಪುಗಳು
ಹೊರಟವು. ಅವರು ತಮ್ಮ ಧ್ವಜದೊಂದಿಗೆ ಹೊರಟರು.
ಶೆದೇಯೂರನ ಮಗನಾದ ಎಲೀಚೂರನು ರೂಬೇನ್
ಕುಲದ ಸೇನಾಧಿಪತಿಯಾಗಿದ್ದನು. 19ಚೂರೀಷದ್ದೈನ
ಮಗನಾದ ಶೆಲುಮೀಯೇಲನು ಸಿಮೆಯೋನ್ ಕುಲದ
ಸೇನಾಧಿಪತಿ. 20ದೆಗೂವೇಲನ ಮಗನಾದ ಎಲ್ಯಾಸಾಫನು
ಗಾದ್ ಕುಲದ ಸೇನಾಧಿಪತಿ. 21ಬಳಿಕ ಕೆಹಾತನ ಕುಲ
ದವರು ಹೊರಟರು. ಅವರು ದೇವಸ್ಥಾನದ ಪವಿತ್ರ
ವಸ್ತುಗಳನ್ನು ಹೊತ್ತುಕೊಂಡಿದ್ದರು. ಕೆಹಾತ್ಯರು ಪವಿತ್ರ
ವಸ್ತುಗಳೊಡನೆ ಬರುವಷ್ಟರೊಳಗೆ ಇತರ ಲೇವಿಯರು
ದೇವದರ್ಶನಗುಡಾರವನ್ನು ಎತ್ತಿ ನಿಲ್ಲಿಸುವರು. 22ಬಳಿಕ
ಎಫ್ರಾಯೀಮ್ ಪಾಳೆಯದಿಂದ ಮೂರು ಗುಂಪುಗಳು
ಹೊರಟವು. ಅವರು ತಮ್ಮ ಧ್ವಜದೊಂದಿಗೆ ಪ್ರಯಾಣ
ಮಾಡಿದರು. ಅಮ್ಮೀಹೂದನ ಮಗನಾದ
ಎಲೀಷಾಮನು ಎಫ್ರಾಯೀಮ್ ಕುಲದ ಸೇನಾಧಿಪತಿ.
23ಪೆದಾಚೂರನ ಮಗನಾದ ಗಮ್ಲೀಯೇಲನು ಮನಸ್ಸೆ
ಕುಲದ ಸೇನಾಧಿಪತಿ. 24ಗಿದ್ಯೋನಿಯ ಮಗನಾದ
ಅಬೀದಾನನು ಬೆನ್ಯಾಮೀನನ ಕುಲದ ಸೇನಾಧಿಪತಿ.

25ಆಮೇಲೆ ಎಲ್ಲಾ ಕುಲಗಳ ಹಿಂಭಾಗದಲ್ಲಿ ದಾನ್
ಕುಲದಿಂದ ಮುನ್ನಡೆಸಲ್ಪಟ್ಟ ಗುಂಪುಗಳು ಹೊರಟವು.
ಅವರು ತಮ್ಮ ಧ್ವಜದೊಂದಿಗೆ ಪ್ರಯಾಣ ಮಾಡಿದರು.
ಅಮ್ಮೀಷದ್ದೈನ ಮಗನಾದ ಅಹೀಗೆಜೆರನು ದಾನ್
ಕುಲದ ಸೇನಾಧಿಪತಿ. 26ಅಶೇರನ ಕುಲಕ್ಕೆ ಒಕ್ರಾನನ
ಮಗನಾದ ಪಗೀಯೇಲನು ಸೇನಾಧಿಪತಿಯಾಗಿದ್ದನು.
27ನಫ್ತಾಲಿ ಕುಲಕ್ಕೆ ಏನಾನ ಮಗನಾದ ಅಹೀರನು
ಸೇನಾಧಿಪತಿಯಾಗಿದ್ದನು. 28ಈ ರೀತಿಯಾಗಿ ಇಸ್ರೇಲರು
ತಮ್ಮ ಗುಂಪುಗಳಲ್ಲಿ ಒಂದು ಸ್ಥಳದಿಂದ ಇನ್ನೊಂದು ಸ್ಥಳಕ್ಕೆ
ಪ್ರಯಾಣ ಮಾಡಿದರು.

29ಹೋಬಾಬನು ಮಿದ್ಯಾನ್ಯನಾದ ರೆಗೂವೇಲನ
ಮಗನು. (ರೆಗೂವೇಲನು ಮೋಶೆಯ ಮಾವ.)
ಮೋಶೆಯು ಹೋಬಾಬನಿಗೆ, "ದೇವರು ನಮಗೆ ಕೊಡು
ತ್ತೇನೆಂದು ವಾಗ್ದಾನ ಮಾಡಿದ ದೇಶಕ್ಕೆ ನಾವು ಪ್ರಯಾಣ
ಮಾಡುತ್ತಿದ್ದೇವೆ. ನಮ್ಮೊಂದಿಗೆ ಬಾ. ನಾವು ನಿನ್ನೊಂದಿಗೆ
ಉದಾರವಾಗಿರುತ್ತೇವೆ; ಯಾಕಂದರೆ ಯೆಹೋವನು
ಇಸ್ರೇಲರಿಗೆ ಒಳ್ಳೆಯವುಗಳನ್ನು ವಾಗ್ದಾನ ಮಾಡಿದ್ದಾನೆ."
30ಆದರೆ ಹೋಬಾಬನು, "ಇಲ್ಲ. ನಾನು ನಿಮ್ಮೊಂದಿಗೆ
ಬರುವುದಿಲ್ಲ. ನಾನು ನನ್ನ ಸ್ವದೇಶಕ್ಕೂ ನನ್ನ ಸ್ವಜನರ
ಬಳಿಗೂ ಹೋಗುವೆನು" ಎಂದು ಉತ್ತರಕೊಟ್ಟನು.

[31]ಆಗ ಮೋಶೆ, ‘‘ದಯಮಾಡಿ ನಮ್ಮನ್ನು ಬಿಟ್ಟು
ಹೋಗಬೇಡ. ನಾವು ಮರುಭೂಮಿಯಲ್ಲಿ ಎಲ್ಲಿ
ಪಾಳೆಯ ಮಾಡಿಕೊಳ್ಳಬಹುದೆಂಬುದು ನಿನಗೆ ಗೊತ್ತಿದೆ.
ನೀನು ನಮ್ಮ ಮಾರ್ಗದರ್ಶಕನಾಗಿರಬಹುದು. [32]ನೀನು
ನಮ್ಮೊಂದಿಗೆ ಬಂದರೆ, ಯೆಹೋವನು ನಮಗೆ ಕೊಡುವ
ಎಲ್ಲಾ ಒಳ್ಳೆಯ ವಸ್ತುಗಳಲ್ಲಿ ನಿನಗೆ ಪಾಲು ಕೊಡುವೆವು’’
ಎಂದು ಹೇಳಿದನು.

[33]ಅವರು ಯೆಹೋವನ ಬೆಟ್ಟದಿಂದ ಹೊರಟು
ಮೂರು ದಿನ ಪ್ರಯಾಣಮಾಡಿದರು. ಲೇವಿಯರು
ಹೊತ್ತುಕೊಂಡಿದ್ದ ಯೆಹೋವನ ಒಡಂಬಡಿಕೆ
ಪೆಟ್ಟಿಗೆಯು ಮತ್ತೆ ಪಾಳೆಯ ಹಾಕಲು ಯೋಗ್ಯವಾದ
ಸ್ಥಳವನ್ನು ಎದುರುನೋಡುತ್ತಾ ಜನರ ಮುಂದೆ ಮೂರು
ದಿನಗಳವರೆಗೆ ಹೋಯಿತು. [34]ಅವರು ಪಾಳೆಯದೊಡನೆ
ಹೊರಟಾಗ ಪ್ರತಿದಿನವೂ ಯೆಹೋವನ ಮೋಡವು
ಅವರ ಮೇಲಿರುತ್ತಿತ್ತು.

[35]ಜನರು ಪವಿತ್ರ ಪೆಟ್ಟಿಗೆಯನ್ನು ಎತ್ತಿಕೊಂಡು
ಹೊರಡುವಾಗ, ಮೋಶೆಯು,

‘‘ಯೆಹೋವನೇ, ಎದ್ದೇಳು! ನಿನ್ನ ವೈರಿಗಳು
ಚದರಿಹೋಗಲಿ, ನಿನ್ನ ಶತ್ರುಗಳು ಬೆನ್ನು ಕೊಟ್ಟು
ಓಡಿಹೋಗಲಿ’’ ಎಂದು ಹೇಳುತ್ತಿದ್ದನು.

[36]ಪವಿತ್ರಪೆಟ್ಟಿಗೆಯು ಕೆಳಗಿಳಿಸಲ್ಪಟ್ಟಾಗ ಮೋಶೆಯು,

‘‘ಯೆಹೋವನೇ, ಇಸ್ರೇಲರ ಲಕ್ಷಾಂತರ
ಕುಟುಂಬಗಳ ಬಳಿಗೆ ಹಿಂತಿರುಗಿ ಬಾ’’ ಎಂದು
ಹೇಳುತ್ತಿದ್ದನು.

### ಜನರು ಮತ್ತೆ ಗುಣಗುಟ್ಟಿದರು

11 ಜನರು ತಮಗೆ ತೊಂದರೆ ಉಂಟಾಯಿತೆಂದು
ಗಟ್ಟಿಯಾಗಿ ಗುಣಗುಟ್ಟಿದರು. ಅದನ್ನು
ಯೆಹೋವನು ಕೇಳಿ ಕೋಪಗೊಂಡನು. ಯೆಹೋವ
ನಿಂದ ಬಂದ ಬೆಂಕಿ ಅವರ ವಿರುದ್ಧವಾಗಿ ಹೊತ್ತಿಕೊಂಡದ್ದ
ರಿಂದ ಪಾಳೆಯದ ಹೊರಭಾಗದಲ್ಲಿದ್ದವರು ನಾಶ
ವಾದರು. [2]ಆಗ ಜನರು ಸಹಾಯಕ್ಕಾಗಿ ಮೋಶೆಗೆ ಮೊರೆ
ಯಿಟ್ಟರು. ಮೋಶೆಯು ಯೆಹೋವನಿಗೆ ಪ್ರಾರ್ಥಿಸಲಾಗಿ
ಬೆಂಕಿ ಆರಿಹೋಯಿತು. [3]ಯೆಹೋವನು ಅವರಿಗೆ
ವಿರುದ್ಧವಾಗಿ ಬೆಂಕಿ ಉರಿಯುವಂತೆ ಮಾಡಿದ್ದರಿಂದ
ಜನರು ಆ ಸ್ಥಳಕ್ಕೆ ‘‘ತಬೇರ’’* ಎಂದು ಹೆಸರಿಟ್ಟರು.

### ಎಪ್ಪತ್ತು ಮಂದಿ ಹಿರಿಯರು

[4]ಅವರ ಮಧ್ಯದಲ್ಲಿದ್ದ ಕಿರುಕುಳಕೊಡುವ ಪರ
ದೇಶಸ್ಥರು ಬೇರೆ ರೀತಿಯ ಆಹಾರಕ್ಕಾಗಿ ಬಹಳವಾಗಿ
ಆಶಿಸಿದರು. ಇಸ್ರೇಲರು ಸಹ ಮತ್ತೆ ಅಳಲು ಆರಂಭಿಸಿ,
‘‘ನಮಗೆ ಯಾರು ಮಾಂಸವನ್ನು ಕೊಡುತ್ತಾರೆ. [5]ನಾವು
ಈಜಿಪ್ಟಿನಲ್ಲಿ ಬಿಟ್ಟಿಯಾಗಿ ತಿನ್ನುತ್ತಿದ್ದ ಮೀನು, ಸವತೆ
ಕಾಯಿ, ಕರ್ಬೂಜು, ಈರುಳ್ಳಿಸೊಪ್ಪು, ಈರುಳ್ಳಿ, ಬೆಳ್ಳುಳ್ಳಿ
ಇವುಗಳನ್ನು ನಾವು ಜ್ಞಾಪಿಸಿಕೊಳ್ಳುತ್ತೇವೆ. [6]ಆದರೆ ನಾವು
ಈಗ ನಮ್ಮ ಬಲವನ್ನು ಕಳೆದುಕೊಂಡಿದ್ದೇವೆ. ಈ
ಮನ್ನವನ್ನು ಬಿಟ್ಟು ನಮ್ಮಲ್ಲಿ ತಿನ್ನಲು ಬೇರೇನೂ ಇಲ್ಲ’’
ಎಂದರು. [7]ಈ ಮನ್ನವು ಕೊತ್ತುಂಬರಿ ಕಾಳಿನಂತಿತ್ತು,
ಮತ್ತು ಬದೋಲಖಧೂಪದಂತೆ ಕಾಣಿಸಿತು. [8]ಜನರು
ಮನ್ನವನ್ನು ಕೂಡಿಸಿಕೊಂಡು ಬೀಸುವ ಕಲ್ಲುಗಳಿಂದ
ಬೀಸಿ ಅಥವಾ ಒರಳಲ್ಲಿ ಕುಟ್ಟಿ, ಮಡಕೆಗಳಲ್ಲಿ ಬೇಯಿಸಿ
ತೆಳುವಾದ ರೊಟ್ಟಿಗಳನ್ನು ಮಾಡಿಕೊಂಡರು. ಅದರ ರುಚಿ
ಆಲಿವ್ ಎಣ್ಣೆಯಿಂದ ಮಾಡಿದ ಭಕ್ಷ್ಯಗಳಂತಿತ್ತು. [9]ರಾತ್ರಿ
ಕಾಲದಲ್ಲಿ ಮಂಜು ಪಾಳೆಯದಲ್ಲಿ ಬೀಳುತ್ತಿದ್ದಾಗ
ಅದರೊಂದಿಗೆ ಮನ್ನವೂ ಬೀಳುತ್ತಿತ್ತು.

[10]ಎಲ್ಲಾ ಕುಟುಂಬದವರೂ ತಮ್ಮತಮ್ಮ ಗುಡಾರದ
ಬಾಗಿಲುಗಳಲ್ಲಿ ನಿಂತು ಗುಣಗುಟ್ಟುತ್ತಿರುವ ಶಬ್ದವು
ಮೋಶೆಗೆ ಕೇಳಿಸಿತು. ಆಗ ಯೆಹೋವನು ಬಹು ಕೋಪ
ಗೊಂಡನು. ಇದರಿಂದಾಗಿ ಮೋಶೆಗ ಬಹಳ ಬೇಸರ
ವಾಯಿತು. [11]ಆಗ ಮೋಶೆ ಯೆಹೋವನಿಗೆ, ‘‘ನಿನ್ನ ಸೇವಕ
ನಾದ ನನಗೆ ಯಾಕೆ ತೊಂದರೆಯನ್ನು ಉಂಟುಮಾಡಿದೆ.
ನಾನು ನಿನಗೆ ಬೇಸರವನ್ನು ಉಂಟುಮಾಡಿದೆನೇ? ಈ
ಜನರೆಲ್ಲರನ್ನು ಮುನ್ನಡೆಸಿಕೊಂಡು ಹೋಗುವ ಭಾರ
ವನ್ನು ನೀನು ನನ್ನ ಮೇಲೆ ಯಾಕೆ ಹಾಕಿದೆ? [12]ನಾನು
ಇವರಿಗೆ ಹೆತ್ತ ತಾಯಿಯೋ? ನಾನು ಅವರಿಗೆ ಜನ್ಮ
ಕೊಡಲಿಲ್ಲವೆಂದು ನಿನಗೆ ಗೊತ್ತಿದೆ. ದಾದಿಯು ಮಗು
ವನ್ನು ಎತ್ತಿಕೊಂಡು ಹೋಗುವಂತೆ, ಈ ಜನರನ್ನು ನಾನು
ನನ್ನ ಮಡಿಲಲ್ಲಿ ಇಟ್ಟು, ನೀನು ಅವರ ಪೂರ್ವಿಕರಿಗೆ
ವಾಗ್ದಾನಮಾಡಿರುವ ದೇಶಕ್ಕೆ ಎತ್ತಿಕೊಂಡು ಹೋಗು
ವಂತೆ ನೀನು ನನಗೇಕೆ ಹೇಳುವೇ? [13]ಇವರು ನನ್ನ ಬಳಿಗೆ
ಬಂದು, ‘‘ಮಾಂಸವನ್ನು ನಮಗೆ ತಿನ್ನಲಿಕ್ಕೆ ಕೊಡು’ ಎಂದು
ಕೇಳಿಕೊಳ್ಳುತ್ತಾರಲ್ಲಾ? ಇಷ್ಟು ಜನಕ್ಕೆ ಬೇಕಾದ
ಮಾಂಸವು ನನಗೆ ಎಲ್ಲಿಂದ ದೊರಕೀತು? [14]ಇಷ್ಟು ಜನರ
ಭಾರವನ್ನು ನಾನೊಬ್ಬನೇ ಹೊರುವುದು ನನಗೆ ಅಸಾಧ್ಯ.
ಅದು ನನ್ನ ಶಕ್ತಿಗೆ ಮೀರಿದ ಕೆಲಸ. [15]ನೀನು ಹೀಗೆಯೇ
ನನಗೆ ಮಾಡುವುದಾಗಿದ್ದರೆ ಅದಕ್ಕೆ ಬದಲಾಗಿ ನನ್ನನ್ನು
ಕೊಂದುಬಿಡು ಎಂದು ಬೇಡಿಕೊಳ್ಳುತ್ತೇನೆ. ಆಗ ನಾನು
ಈ ದುರವಸ್ಥೆಗಳಿಂದ ವಿಮುಕ್ತನಾಗುವೆನು’’ ಎಂದು
ಹೇಳಿದನು.

---

**ತಬೇರ** ಅಂದರೆ ‘‘ಉರಿಯುವಿಕೆ.’’

[16]ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
''ಇಸ್ರೇಲರಲ್ಲಿ ಹಿರಿಯರೆಂದೂ ಅಧಿಕಾರಿಗಳೆಂದೂ
ನೀನು ತಿಳಿದುಕೊಂಡಿರುವ ಎಪ್ಪತ್ತು ಮಂದಿಯನ್ನು
ಕೂಡಿಸಿ ದೇವದರ್ಶನಗುಡಾರದ ಬಾಗಿಲಿಗೆ ಕರೆದು
ತಂದು ಅಲ್ಲೇ ನಿನ್ನೊಡನೆ ನಿಲ್ಲಿಸಿಕೊ. [17]ನಾನು ಅಲ್ಲಿಗೆ
ಇಳಿದುಬಂದು ನಿನ್ನ ಸಂಗಡ ಮಾತಾಡುವೆನು. ಅದಲ್ಲದೆ
ನಾನು ನಿನಗೆ ಅನುಗ್ರಹಿಸಿದ ಆತ್ಮವನ್ನೇ ಅವರ ಮೇಲೆ
ಸುರಿಸುವೆನು. ಆಗ ಸ್ವತಃ ನೀನೇ ಈ ಜನರ ಭಾರವನ್ನು
ವಹಿಸಬೇಕಾಗಿರುವುದಿಲ್ಲ. ಈ ಎಪ್ಪತ್ತು ಮಂದಿ
ಹಿರಿಯರು ಆ ಭಾರವನ್ನು ಹೊರಲು ನಿನಗೆ ಸಹಾಯ
ಮಾಡುವರು.

[18]''ಇಸ್ರೇಲರಿಗೆ ಹೀಗೆ ಹೇಳು: ನಾಳೆಗಾಗಿ ನಿಮ್ಮನ್ನು
ಪವಿತ್ರರನ್ನಾಗಿ ಮಾಡಿಕೊಳ್ಳಿರಿ. ನಾಳೆ ನೀವು ಮಾಂಸವನ್ನು
ತಿನ್ನುವಿರಿ. 'ನಮಗೆ ಮಾಂಸವನ್ನು ಕೊಡುವವರು
ಯಾರು? ನಾವು ಈಜಿಪ್ಟಿನಲ್ಲಿ ಇದಕ್ಕಿಂತಲೂ ಚೆನ್ನಾಗಿ
ದ್ದೆವಲ್ಲಾ' ಎಂಬ ನಿಮ್ಮ ದೂರನ್ನು ಯೆಹೋವನು ಕೇಳಿ
ದ್ದಾನೆ. ಆದ್ದರಿಂದ ಯೆಹೋವನು ನಿಮಗೆ ಮಾಂಸವನ್ನು
ಕೊಡುವನು ಮತ್ತು ನೀವು ತಿನ್ನುವಿರಿ. [19]ನೀವು ಒಂದು
ದಿನವಲ್ಲ, ಎರಡು ದಿನವಲ್ಲ, ಐದು ದಿನವಲ್ಲ, ಹತ್ತು
ದಿನವಲ್ಲ, ಇಪ್ಪತ್ತು ದಿನವಲ್ಲ, [20]ಒಂದು ತಿಂಗಳು ಪೂರ್ತಿ
ಮಾಂಸವನ್ನು ತಿನ್ನುವಿರಿ. ಅದು ನಿಮ್ಮ ಮೂಗಿನಲ್ಲಿ ಹೊರ
ಬರುವ ತನಕ ಮತ್ತು ನಿಮಗೆ ಅಸಹ್ಯವಾಗುವವರೆಗೆ
ಅದನ್ನು ತಿನ್ನುವಿರಿ. ನೀವು ನಿಮ್ಮ ಮಧ್ಯದಲ್ಲಿರುವ
ಯೆಹೋವನನ್ನು ತಿರಸ್ಕರಿಸಿದ್ದರಿಂದ ಮತ್ತು 'ನಾವೇಕೆ
ಈಜಿಪ್ಟನ್ನು ಬಿಟ್ಟುಬಂದೆವು' ಎಂದು ಆತನ ಮುಂದೆ
ದೂರುಹೇಳಿದ್ದರಿಂದ ಇದು ನಿಮಗೆ ಸಂಭವಿಸುವುದು.''

[21]ಮೋಶೆ ''ಯೆಹೋವನೇ, ಇಲ್ಲಿ ಆರು ಲಕ್ಷ ಗಂಡ
ಸರು ನನ್ನೊಂದಿಗೆ ಇದ್ದಾರೆ. ಆದಾಗ್ಯೂ ನೀನು ಇವರಿಗೆ
ಮಾಂಸ ಕೊಡುವುದಾಗಿಯೂ ಇವರು ಒಂದು ತಿಂಗ
ಳೆಲ್ಲಾ ಅದನ್ನು ತಿನ್ನುವುದಾಗಿಯೂ ನೀನು ಹೇಳುತ್ತಿರುವೆ.
[22]ನಾವು ಎಲ್ಲಾ ಕುರಿಗಳನ್ನು ದನಕರುಗಳನ್ನು ಕೊಂದರೂ
ಇಷ್ಟು ಜನರು ಒಂದು ತಿಂಗಳು ತಿನ್ನುವುದಕ್ಕೆ ಸಾಕಾಗದು.
ಸಮುದ್ರದಲ್ಲಿರುವ ಮೀನುಗಳೆಲ್ಲವನ್ನು ಹಿಡಿದರೂ
ಅದು ಇಷ್ಟು ಜನರಿಗೆ ಸಾಕಾಗದು'' ಎಂದು ಹೇಳಿದನು.

[23]ಆದರೆ ಯೆಹೋವನು ಮೋಶೆಗೆ, ''ಯೆಹೋವನ
ಶಕ್ತಿಗೆ ಮಿತಿಯಿಲ್ಲ. ನಾನು ಹೇಳುತ್ತಿರುವ ಸಂಗತಿಗಳು
ನಡೆಯುವುದನ್ನು ನೀನು ನೋಡುವೆ'' ಎಂದು
ಹೇಳಿದನು.

[24]ಮೋಶೆಯು ಹೊರಟುಹೋಗಿ, ಯೆಹೋವನು
ಹೇಳಿದ್ದನ್ನು ಜನರಿಗೆ ತಿಳಿಸಿ, ಇಸ್ರೇಲರ ಹಿರಿಯರಲ್ಲಿ
ಎಪ್ಪತ್ತು ಮಂದಿಯನ್ನು ಒಟ್ಟಾಗಿ ಸೇರಿಸಿದನು. ಅವರು
ಗುಡಾರದ ಸುತ್ತಲೂ ನಿಲ್ಲುವಂತೆ ಆಜ್ಞಾಪಿಸಿದನು. [25]ಆಗ
ಯೆಹೋವನು ಮೇಘದಲ್ಲಿ ಇಳಿದು ಮೋಶೆಯೊಡನೆ
ಮಾತಾಡಿ ಮೋಶೆಯಲ್ಲಿದ್ದ ಆತ್ಮವನ್ನೇ* ಆ ಎಪ್ಪತ್ತು
ಮಂದಿ ಹಿರಿಯರಿಗೆ ಕೊಟ್ಟನು. ಆತ್ಮಿಕ ವರಗಳು ಅವರಿಗೆ
ಕೊಡಲ್ಪಟ್ಟಾಗ ಅವರು ಪ್ರವಾದಿಗಳಂತೆ ಪ್ರವಾದಿಸಿದರು.
ಆದರೆ ಮತ್ತೆ ಅವರು ಹಾಗೆ ಪ್ರವಾದಿಸಲಿಲ್ಲ.

[26]ಎಲ್ದಾದ್ ಮತ್ತು ಮೇದಾದ್ ಎಂಬ ಹಿರಿಯರಿಬ್ಬರು
ಗುಡಾರದ ಬಳಿಗೆ ಹೋಗಲಿಲ್ಲ. ಹಿರಿಯರ ಹೆಸರುಗಳಿದ್ದ
ಪಟ್ಟಿಯಲ್ಲಿ ಅವರ ಹೆಸರುಗಳಿದ್ದುವು. ಆದರೆ ಅವರು
ಗುಡಾರದಲ್ಲೇ ಉಳಿದುಕೊಂಡರು. ಆದರೆ ಅವರಿಗೆ
ಆತ್ಮಿಕ ವರಗಳು ಕೊಡಲ್ಪಟ್ಟಿದ್ದರಿಂದ ಅವರು ಪಾಳೆಯ
ದಲ್ಲಿ ಪ್ರವಾದಿಗಳಂತೆ ಪ್ರವಾದಿಸತೊಡಗಿದರು. [27]ಒಬ್ಬ
ಯೌವನಸ್ಥನು ಮೋಶೆಯ ಬಳಿಗೆ ಓಡಿಹೋಗಿ,
''ಎಲ್ದಾದ್ ಮತ್ತು ಮೇದಾದ್ ಎಂಬಿಬ್ಬರು ಪಾಳೆಯ
ದಲ್ಲಿ ಪ್ರವಾದಿಗಳಂತೆ ಪ್ರವಾದಿಸುತ್ತಿದ್ದಾರೆ'' ಎಂದು
ಹೇಳಿದನು. [28]ನೂನನ ಮಗನಾದ ಯೆಹೋಶುವನು
ಮೋಶೆಗೆ, ''ಸ್ವಾಮೀ, ನೀನು ಅವರನ್ನು ತಡೆಯಬೇಕು''
ಎಂದನು. (ಯೆಹೋಶುವನು ಯೌವನಸ್ಥನಾಗಿದ್ದಾಗಿ
ನಿಂದಲೂ ಮೋಶೆಯ ಸಹಾಯಕನಾಗಿದ್ದನು.) [29]ಆದರೆ
ಮೋಶೆಯು, ''ನೀನು ನನಗೋಸ್ಕರ ಭಾವೋದ್ವೇಗ
ಗೊಂಡಿರುವೆಯೋ? ಯೆಹೋವನ ಜನರೆಲ್ಲರೂ
ಪ್ರವಾದಿಗಳಾಗಿರಬೇಕೆಂದು ನಾನು ಬಯಸುತ್ತೇನೆ. ಅವ
ರೆಲ್ಲರ ಮೇಲೆ ಯೆಹೋವನು ತನ್ನ ಆತ್ಮನನ್ನು ಇರಿಸ
ಬೇಕೆಂದು ನಾನು ಬಯಸುತ್ತೇನೆ'' ಎಂದುತ್ತರಿಸಿದನು.
[30]ಬಳಿಕ ಮೋಶೆಯು ಮತ್ತು ಇಸ್ರೇಲರ ನಾಯಕರು
ಪಾಳೆಯಕ್ಕೆ ಹಿಂತಿರುಗಿದರು.

### ಲಾವಕ್ಕಿಗಳು

[31]ಆಗ ಯೆಹೋವನು ಸಮುದ್ರದ ಕಡೆಯಿಂದ ಬಲ
ವಾದ ಗಾಳಿಯು ಬೀಸುವಂತೆ ಮಾಡಿದನು. ಗಾಳಿಯು
ಲಾವಕ್ಕಿಗಳನ್ನು ಹೊತ್ತುಕೊಂಡು ಬಂತು. ಲಾವಕ್ಕಿಗಳು
ಪಾಳೆಯದ ಸುತ್ತಲೂ ಹಾರಿಬಂದವು. ಒಬ್ಬನು ಪ್ರತಿ
ಯೊಂದು ದಿಕ್ಕಿನಲ್ಲಿ ಒಂದು ದಿನ ನಡೆಯಬಹುದಾದಷ್ಟು
ದೂರದವರೆಗೂ ಲಾವಕ್ಕಿಗಳು ಭೂಮಿಯಿಂದ ಮೂರು
ಅಡಿ ಎತ್ತರದಲ್ಲಿ ಹಾರಾಡುತ್ತಿದ್ದವು. [32]ಜನರು ಎದ್ದು ಆ
ದಿನವೆಲ್ಲಾ ಮತ್ತು ರಾತ್ರಿಯೆಲ್ಲಾ ಮತ್ತು ಮರುದಿನವೆಲ್ಲಾ
ಲಾವಕ್ಕಿಗಳನ್ನು ಕೂಡಿಸಿಕೊಂಡರು. ಸ್ವಲ್ಪ ಕೂಡಿಸಿ
ಕೊಂಡವನು ಅರವತ್ತು ಕಿಲೋ ಗ್ರಾಂ ಕೂಡಿಸಿ
ಕೊಂಡನು. ಬಳಿಕ ಜನರು ಲಾವಕ್ಕಿಗಳ ಮಾಂಸವನ್ನು
ಪಾಳೆಯದ ಸುತ್ತಲೂ ಹರಡಿ ಬಿಸಿಲಿನಲ್ಲಿ ಒಣಗಿಸಿ
ಕೊಂಡರು. [33]ಜನರು ಮಾಂಸವನ್ನು ಇನ್ನೂ

**ಆತ್ಮವನ್ನೇ** ಅಕ್ಷರಶಃ, ದೇವರು ಮೋಶೆಯಲ್ಲಿದ್ದ ಆತ್ಮವನ್ನು ತೆಗೆದು ಕೊಂಡು ಅವರ ಮೇಲೆ ಸುರಿಸಿದನು.

ತಿನ್ನುತ್ತಿರುವಾಗಲೇ ಮತ್ತು ಲಾವಕ್ಕಿಗಳ ಸರಬರಾಜು ನಿಂತು ಹೋಗುವುದಕ್ಕಿಂತ ಮೊದಲೇ ಯೆಹೋವನು ಬಹಳವಾಗಿ ಕೋಪಗೊಂಡು ಜನರ ಮಧ್ಯದಲ್ಲಿ ಭಯಂಕರವಾದ ಕಾಯಿಲೆಯನ್ನು ಉಂಟುಮಾಡಿದನು. ಜನರಲ್ಲಿ ಅನೇಕರು ಸತ್ತದ್ದರಿಂದ ಅವರನ್ನು ಅಲ್ಲೇ ಹೂಳಿಟ್ಟರು. 34 ಈ ಕಾರಣದಿಂದ ಆ ಸ್ಥಳಕ್ಕೆ 'ಕಿಬ್ರೋತ್ ಹತಾವಾ' ಎಂದು ಹೆಸರಿಟ್ಟರು. ಮಾಂಸಕ್ಕಾಗಿ ಅತ್ಯಾಶೆಪಟ್ಟವರನ್ನು ಅಲ್ಲಿ ಹೂಳಿಟ್ಟಿದ್ದರಿಂದ ಆ ಸ್ಥಳಕ್ಕೆ ಈ ಹೆಸರನ್ನು ಇಟ್ಟರು. 35 ಜನರು ಕಿಬ್ರೋತ್ ಹತಾವಾದಿಂದ ಪ್ರಯಾಣಮಾಡಿ ಹಚೇರೋತಿಗೆ ಹೋಗಿ ಅಲ್ಲಿ ಇಳಿದುಕೊಂಡರು.

## ಮಿರ್ಯಾಮಳು ಮತ್ತು ಆರೋನನು ಮೋಶೆಗೆ ವಿರುದ್ಧವಾಗಿ ಗುಣಗುಟ್ಟಿದ್ದು

12 ಮೋಶೆಯು ಇಥಿಯೋಪ್ಯದ ಸ್ತ್ರೀಯನ್ನು ಮದುವೆ ಮಾಡಿಕೊಂಡ ಕಾರಣ ಮಿರ್ಯಾಮಳೂ ಆರೋನನೂ ಮೋಶೆಗೆ ವಿರೋಧವಾಗಿ ಮಾತಾಡಿದರು. 2 ಅವರು, ''ಯೆಹೋವನು ಮೋಶೆಯೊಡನೆ ಮಾತ್ರ ಮಾತಾಡಿದ್ದಾನೊ? ಆತನು ನಮ್ಮೊಡನೆಯೂ ಮಾತಾಡಿದನಲ್ಲವೇ?'' ಅಂದರು.

ಯೆಹೋವನು ಅವರ ಮಾತುಗಳನ್ನು ಕೇಳಿದನು. 3 (ಮೋಶೆಯು ಬಹಳ ದೀನನಾದ ವ್ಯಕ್ತಿ. ಅವನು ಭೂಮಿಯ ಮೇಲಿರುವ ಎಲ್ಲಾ ಮನುಷ್ಯರಿಗಿಂತಲೂ ದೀನನಾಗಿದ್ದನು.) 4 ಆದ್ದರಿಂದ ಕೂಡಲೇ ಯೆಹೋವನು ಮೋಶೆ, ಆರೋನರ ಮತ್ತು ಮಿರ್ಯಾಮಳ ಸಂಗಡ ಮಾತಾಡಿ, ''ನೀವು ಮೂವರು ದೇವದರ್ಶನ ಗುಡಾರಕ್ಕೆ ಬನ್ನಿ'' ಎಂದು ಹೇಳಿದನು.

ಆದ್ದರಿಂದ ಮೋಶೆ, ಆರೋನರು ಮತ್ತು ಮಿರ್ಯಾಮಳು ದೇವದರ್ಶನಗುಡಾರಕ್ಕೆ ಹೋದರು. 5 ಯೆಹೋವನು ಎತ್ತರವಾದ ಮೇಘದಲ್ಲಿ ಇಳಿದುಬಂದು ದೇವದರ್ಶನ ಗುಡಾರದ ಪ್ರವೇಶದ್ವಾರದ ಬಳಿ ನಿಂತನು. ಯೆಹೋವನು ಆರೋನನನ್ನೂ ಮಿರ್ಯಾಮಳನ್ನೂ ಕರೆದನು. ಆರೋನನೂ ಮಿರ್ಯಾಮಳೂ ಹತ್ತಿರಕ್ಕೆ ಹೋದರು. 6 ದೇವರು, ''ನನ್ನ ಮಾತನ್ನು ಕೇಳಿರಿ. ನಿಮ್ಮಲ್ಲಿ ಪ್ರವಾದಿಯಿದ್ದರೆ, ನಾನು ಅವನಿಗೆ ನನ್ನನ್ನು ದರ್ಶನದಲ್ಲಿ ಗೊತ್ತುಪಡಿಸಿಕೊಳ್ಳುವೆನು ಅಥವಾ ಸ್ವಪ್ನದಲ್ಲಿ ಅವನ ಸಂಗಡ ಮಾತಾಡುವೆನು. 7 ಆದರೆ ಮೋಶೆಯೊಡನೆ ನಾನು ಆ ರೀತಿ ಮಾಡುವುದಿಲ್ಲ. ಮೋಶೆಯು ನನ್ನ ನಂಬಿಗಸ್ತನಾದ ಸೇವಕನು. ಅವನ ಮೇಲೆ ನನಗೆ ಭರವಸೆಯಿದೆ. 8 ನಾನು ಅವನೊಂದಿಗೆ ಗೂಡಾರ್ಥದಿಂದ ಮಾತಾಡದೆ ನೇರವಾಗಿಯೂ ಸ್ಪಷ್ಟವಾಗಿಯೂ ಮಾತಾಡುತ್ತೇನೆ. ಅವನು ನನ್ನ ಸ್ವರೂಪವನ್ನೇ ನೋಡಬಲ್ಲನು. ನನ್ನ ಸೇವಕನಾದ ಮೋಶೆಗೆ ವಿರೋಧವಾಗಿ ಮಾತಾಡಲು ನೀವು ಯಾಕೆ ಭಯಪಡಲಿಲ್ಲ?'' ಎಂದು ಹೇಳಿದನು.

9 ಯೆಹೋವನು ಅವರ ಮೇಲೆ ಬಹಳವಾಗಿ ಕೋಪಗೊಂಡು ಹೊರಟುಹೋದನು. 10 ಮೇಘವು ಗುಡಾರದಿಂದ ಮೇಲಕ್ಕೆ ಎದ್ದಿತು. ಆರೋನನು ಹಿಂತಿರುಗಿ ಮಿರ್ಯಾಮಳನ್ನು ನೋಡಿದನು. ಆಕೆಯ ಚರ್ಮವು ಹಿಮದಂತೆ ಬೆಳ್ಳಗಾಗಿತ್ತು. ಆಕೆಗೆ ಭಯಂಕರವಾದ ಚರ್ಮರೋಗ ಹಿಡಿದಿತ್ತು.

11 ಆಗ ಆರೋನನು ಮೋಶೆಗೆ, ''ಸ್ವಾಮೀ, ನಾವು ಮೂರ್ಖತನದಿಂದ ಮಾಡಿದ ಪಾಪಕ್ಕೆ ದಯವಿಟ್ಟು ನಮ್ಮನ್ನು ದಂಡಿಸಬೇಡ. 12 ಗರ್ಭದಲ್ಲೇ ಅರ್ಧ ಮಾಂಸ ಕೊಳೆತುಹೋಗಿ, ಹುಟ್ಟುವಾಗಲೇ ಸತ್ತ ಮಗುವಿನಂತೆ ಈಕೆಗೆ ಆಗದಂತೆ ದಯವಿಟ್ಟು ಕಾಪಾಡು'' ಎಂದು ಬೇಡಿಕೊಂಡನು. 13 ಆದ್ದರಿಂದ ಮೋಶೆ ಯೆಹೋವನಿಗೆ ಪ್ರಾರ್ಥಿಸಿ, ''ದೇವರೇ, ದಯಮಾಡಿ ಈಕೆಯನ್ನು ವಾಸಿಮಾಡು'' ಎಂದು ಹೇಳಿದನು.

14 ಅದಕ್ಕೆ ಯೆಹೋವನು, ''ತಂದೆ ಮುಖದ ಮೇಲೆ ಉಗುಳಿದ್ದರೆ ಆಕೆ ಏಳು ದಿವಸ ನಾಚಿಕೆಯಿಂದ ಇರುತ್ತಿರಲಿಲ್ಲವೇ? ಹಾಗಾದರೆ ಆಕೆ ಏಳು ದಿವಸ ಪಾಳೆಯದ ಹೊರಗೆ ಇರಬೇಕು. ತರುವಾಯ ಆಕೆ ಪಾಳೆಯದೊಳಗೆ ಬರಬಹುದು'' ಎಂದು ಉತ್ತರಿಸಿದನು.

15 ಆದಕಾರಣ ಅವರು ಮಿರ್ಯಾಮಳನ್ನು ಏಳು ದಿವಸಗಳವರೆಗೆ ಪಾಳೆಯದ ಹೊರಗೆ ಇಟ್ಟರು. ಆಕೆ ತಿರುಗಿ ಸೇರಿಕೊಳ್ಳುವ ಪರ್ಯಂತರ ಇಸ್ರೇಲರು ಪ್ರಯಾಣ ಮಾಡಲಿಲ್ಲ. 16 ಇದಾದ ನಂತರ, ಜನರು ಹಚೇರೋತಿನಿಂದ ಹೊರಟು ಪಾರಾನ್ ಮರುಭೂಮಿಯಲ್ಲಿ ಪಾಳೆಯ ಮಾಡಿಕೊಂಡರು.

## ಗೂಢಚಾರರು ಕಾನಾನ್ ದೇಶಕ್ಕೆ ಹೋದದ್ದು

13 ಯೆಹೋವನು ಮೋಶೆಗೆ, 2 ''ಕಾನಾನ್ ದೇಶದ ಬಗ್ಗೆ ವಿಷಯವನ್ನು ಸಂಗ್ರಹಿಸಿಕೊಂಡು ಬರಲು ಗೂಢಚಾರರನ್ನು ಕಳುಹಿಸು. ನಾನು ಇಸ್ರೇಲರಿಗೆ ಕೊಡುವ ದೇಶ ಇದಾಗಿದೆ. ಹನ್ನೆರಡು ಕುಲಗಳಿಂದ ಒಬ್ಬೊಬ್ಬ ನಾಯಕನನ್ನು ಕಳುಹಿಸು'' ಎಂದು ಹೇಳಿದನು.

3 ಜನರು ಪಾರಾನ್ ಮರುಭೂಮಿಯಲ್ಲಿ ಇಳಿದುಕೊಂಡಿದ್ದಾಗ ಯೆಹೋವನ ಆಜ್ಞೆಗನುಸಾರವಾಗಿ ಮೋಶೆಯು ಈ ನಾಯಕರನ್ನು ಕಳುಹಿಸಿದನು. 4 ಆ ನಾಯಕರು ಯಾರೆಂದರೆ:

ರೂಬೇನ್ ಕುಲದಿಂದ ಜಕ್ಕೂರನ ಮಗನಾದ ಶಮ್ಮೂವ,
5 ಸಿಮೆಯೋನ್ ಕುಲದಿಂದ ಹೋರಿಯ ಮಗನಾದ ಶಾಫಾಟ್,

6 ಯೆಹೂದ ಕುಲದಿಂದ ಯೆಫುನ್ನೆಯ ಮಗನಾದ ಕಾಲೇಬ್,
7 ಇಸ್ಸಾಕಾರನ ಕುಲದಿಂದ ಯೋಸೇಫನ ಮಗನಾದ ಇಗಾಲ್,
8 ಎಫ್ರಾಯೀಮ್ ಕುಲದಿಂದ ನೂನನ ಮಗನಾದ ಹೋಶೇಯ,
9 ಬೆನ್ಯಾಮೀನ್ ಕುಲದಿಂದ ರಾಫೂವನ ಮಗನಾದ ಪಲ್ಟೀ,
10 ಜೆಬುಲೂನ್ ಕುಲದಿಂದ ಸೋದೀಯ ಮಗನಾದ ಗದ್ದೀಯೇಲ್,
11 ಯೋಸೇಫನ ಕುಲದಿಂದ (ಮನಸ್ಸೆ) ಸೂಸೀಯ ಮಗನಾದ ಗದ್ದೀ.
12 ದಾನ್ ಕುಲದಿಂದ ಗೆಮಲ್ಲೀಯ ಮಗನಾದ ಅಮ್ಮೀಯೇಲ್.
13 ಆಶೇರ್ ಕುಲದಿಂದ ಮೀಕಾಯೇಲನ ಮಗನಾದ ಸೆತೂರ್,
14 ನಫ್ತಾಲಿ ಕುಲದಿಂದ ವಾಪೆಸೀಯನ ಮಗನಾದ ನಹಬೀ,
15 ಗಾದ್ ಕುಲದಿಂದ ಮಾಕೀಯನ ಮಗನಾದ ಗೆಯೂವೇಲ್.

16ದೇಶದ ವಿಷಯವನ್ನು ಸಂಗ್ರಹಿಸಿಕೊಂಡು ಬರಲು
ಮೋಶೆ ಕಳುಹಿಸಿದ ಗೂಢಚಾರರ ಹೆಸರುಗಳು ಇವೆ.

(ಮೋಶೆಯು ನೂನನ ಮಗನಾದ ಹೋಶೇಯನಿಗೆ
ಯೆಹೋಶುವನೆಂದು ಹೆಸರಿಟ್ಟನು.)

17ಕಾನಾನ್ ದೇಶದ ವಿಷಯವನ್ನು ಸಂಗ್ರಹಿಸಿಕೊಂಡು
ಬರಲು ಮೋಶೆ ಅವರನ್ನು ಕಳುಹಿಸುವಾಗ ಅವರಿಗೆ,
''ನೀವು ಬೆಟ್ಟದ ಸೀಮೆಗೆ ನೆಗೆವ್ ಮೂಲಕ ಹತ್ತಿ ಹೋಗಿ
18ಆ ದೇಶದ ಸಂಗತಿಯನ್ನೆಲ್ಲಾ ತಿಳಿದುಕೊಳ್ಳಿರಿ. ಅಲ್ಲಿಯ
ನಿವಾಸಿಗಳು ಬಲಿಷ್ಠರೋ ಅಥವಾ ಬಲಹೀನರೋ,
ಬಹಳ ಮಂದಿಯೋ ಅಥವಾ ಸ್ವಲ್ಪ ಮಂದಿಯೋ,
19ಅವರ ದೇಶ ಒಳ್ಳೆಯದೋ ಅಥವಾ ಕೆಟ್ಟದ್ದೋ, ಅವರ
ಪಟ್ಟಣಗಳು ಗೋಡೆಗಳನ್ನು ಹೊಂದಿವೆಯೋ ಅಥವಾ
ಇಲ್ಲವೋ, 20ಭೂಮಿಯು ಸಾರವಾದದ್ದೋ ಅಥವಾ
ನಿಸ್ಸಾರವಾದದ್ದೋ, ಮರಗಳನ್ನು ಹೊಂದಿದೆಯೋ
ಅಥವಾ ಇಲ್ಲವೋ, ಎಂಬುದನ್ನು ತಿಳಿದುಕೊಳ್ಳಿ.
ಅದಲ್ಲದೆ ಆ ದೇಶದ ಉತ್ಪನ್ನಗಳಲ್ಲಿ ಕೆಲವನ್ನು ತರಲು
ಪ್ರಯತ್ನ ಮಾಡಿ'' ಎಂದು ಹೇಳಿದನು. (ಆಗ
ದ್ರಾಕ್ಷಾಲತೆಗಳ ಪ್ರಥಮಫಲದ ಕಾಲವಾಗಿತ್ತು.)

21ಅವರು ಬೆಟ್ಟದ ಸೀಮೆಗೆ ಹತ್ತಿಹೋಗಿ ಚಿನ್
ಅರಣ್ಯದಿಂದಿಡಿದು ಲೆಬೊ-ಹಮಾತಿನ ಬಳಿಯಲ್ಲಿರುವ
ರೆಹೋಬಿನವರೆಗೂ ದೇಶದ ವಿಷಯಗಳನ್ನು ಸಂಗ್ರಹಿಸಿ
ಕೊಂಡರು. 22ಅವರು ನೆಗೆವ್ ಮೂಲಕ ದೇಶವನ್ನು
ಪ್ರವೇಶಿಸಿ ಹೆಬ್ರೋನಿಗೆ ಹೋದರು. ಹೆಬ್ರೋನ್
ಪಟ್ಟಣವು ಚೋವನ್ ಪಟ್ಟಣಕ್ಕಿಂತ ಏಳು ವರುಷಗಳ
ಮುಂಚೆ ಕಟ್ಟಲ್ಪಟ್ಟಿತ್ತು. ಅಲ್ಲಿ ಅಹೀಮನ್, ಶೇಷೈ ಮತ್ತು
ತಲ್ಮೈ ಎಂಬವರು ವಾಸಿಸುತ್ತಿದ್ದರು. ಇವರು ಅನಾಕನ
ಸಂತತಿಯವರು. 23ಬಳಿಕ ಅವರು ಎಷ್ಕೋಲ್* ಕಣಿವೆಗೆ
ಹೋದರು. ಅಲ್ಲಿ ಅವರು ದ್ರಾಕ್ಷಾಲತೆಯಿಂದ ಒಂದು
ಕೊಂಬೆಯನ್ನು ಕಡಿದರು. ಆ ಕೊಂಬೆಯಲ್ಲಿ ದ್ರಾಕ್ಷೆಯ
ಗೊಂಚಲಿತ್ತು. ಅವರು ಅದನ್ನು ಒಂದು ಕೋಲಿಗೆ ಕಟ್ಟಿ
ಇಬ್ಬರು ಅದನ್ನು ಹೊತ್ತುಕೊಂಡು ಬಂದರು. ಕೆಲವು
ದಾಳಿಂಬೆ ಹಣ್ಣುಗಳನ್ನು ಮತ್ತು ಅಂಜೂರದ ಹಣ್ಣು
ಗಳನ್ನು ಹೊತ್ತು ತಂದರು. 24ಇಸ್ರೇಲರು ಅಲ್ಲಿ ದ್ರಾಕ್ಷೆಯ
ಗೊಂಚಲನ್ನು ಕತ್ತರಿಸಿದ್ದರಿಂದ ಆ ಸ್ಥಳಕ್ಕೆ ಎಷ್ಕೋಲ್
ಕಣಿವೆ ಎಂದು ಹೆಸರಾಯಿತು.

25ಜನರು ನಲವತ್ತು ದಿನಗಳವರೆಗೆ ದೇಶವನ್ನು
ಸಂಚರಿಸಿ ನೋಡಿ, ತಮ್ಮ ಪಾಳೆಯಕ್ಕೆ ಹಿಂತಿರುಗಿದರು.
26ಇಸ್ರೇಲರು ಪಾರಾನ್ ಮರುಭೂಮಿಯ ಕಾದೇಶಿನಲ್ಲಿ
ತಂಗಿದ್ದರು. ಅವರು ನೋಡಿದ್ದರ ಬಗ್ಗೆ ಎಲ್ಲವನ್ನು
ಮೋಶೆಗೂ ಆರೋನನಿಗೂ ಎಲ್ಲ ಇಸ್ರೇಲರಿಗೂ ತಿಳಿಸಿ
ದರು. ಅವರು ಕಾನಾನ್ ದೇಶದಿಂದ ತಂದ ಹಣ್ಣುಗಳನ್ನು
ತೋರಿಸಿದರು. 27ಜನರು ಮೋಶೆಗೆ, ''ನೀನು ಕಳುಹಿಸಿದ
ದೇಶಕ್ಕೆ ನಾವು ಹೋಗಿ ಸಂಚರಿಸಿ ನೋಡಿದೆವು. ಅದು
ಹಾಲೂ ಜೇನೂ ಹರಿಯುವ ದೇಶವಾಗಿದೆ. ಇಗೋ
ಹಣ್ಣುಗಳಲ್ಲಿ ಕೆಲವು ಇಲ್ಲಿವೆ. 28ಅಲ್ಲಿನ ಜನರು ಬಲಿಷ್ಠರು.
ಪಟ್ಟಣಗಳೂ ಬಹಳ ದೊಡ್ಡದಾಗಿವೆ. ಪಟ್ಟಣಗಳು
ಕೋಟೆಕೊತ್ತಲುಗಳುಳ್ಳದಾಗಿವೆ. ನಾವು ಕೆಲವು ಅನಾಕ್ಯ
ರನ್ನು ಸಹ ನೋಡಿದೆವು. 29ಅಮಾಲೇಕ್ಯರು ನೆಗೆವ್‌ನಲ್ಲಿ
ವಾಸಿಸುತ್ತಾರೆ. ಹಿತ್ತಿಯರು, ಯೆಬೂಸಿಯರು ಮತ್ತು
ಅಮೋರಿಯರು ಪರ್ವತಪ್ರದೇಶದಲ್ಲಿ ವಾಸಿಸುತ್ತಾರೆ.
ಕಾನಾನ್ಯರು ಸಮುದ್ರ ತೀರದಲ್ಲಿಯೂ ಮತ್ತು
ಯೊರ್ದನ್ ನದಿಯ ಉದ್ದಕ್ಕೂ ವಾಸಿಸುತ್ತಾರೆ'' ಎಂದು
ಹೇಳಿದರು.

30ಕಾಲೇಬನು ಮೋಶೆಯ ಬಳಿಯಲ್ಲಿದ್ದ ಜನರನ್ನು
ಸುಮ್ಮನಿರಿಸಿ, ''ನಾವು ಹೋಗಿ ದೇಶವನ್ನು ವಶಪಡಿಸಿ
ಕೊಳ್ಳಬೇಕು. ನಾವು ಸುಲಭವಾಗಿ ದೇಶವನ್ನು ವಶಪಡಿಸಿ
ಕೊಳ್ಳಬಹುದು'' ಎಂದು ಹೇಳಿದನು.

31ಆದರೆ ಅವನೊಡನೆ ಹೋದ ಜನರು, ''ನಾವು ಆ
ಜನರೊಡನೆ ಹೋರಾಡಲಾರೆವು, ಅವರು ನಮ
ಗಿಂತಲೂ ಬಲಿಷ್ಠರು'' ಎಂದು ಹೇಳಿದರು. 32''ನಾವು
ಸಂಚರಿಸಿ ವಿಷಯ ಸಂಗ್ರಹಿಸಿಕೊಂಡು ಬಂದ ದೇಶವು
ಅಲ್ಲಿ ವಾಸಿಸುವವರನ್ನು ನಾಶಪಡಿಸುವ ದೇಶವಾಗಿದೆ.

---

**ಎಷ್ಕೋಲ್** ಹೀಬ್ರೂ ಭಾಷೆಯಲ್ಲಿ ಈ ಪದದ ಅರ್ಥ ''ದ್ರಾಕ್ಷೆಯ ಗೊಂಚಲು.''

ನಾವು ಅಲ್ಲಿ ನೋಡಿದ ಎಲ್ಲಾ ಜನರು ರಾಕ್ಷಸರಂತಿದ್ದಾರೆ.
33ರಾಕ್ಷಸರಾದ ನೆಫೀಲರು ಅಲ್ಲಿ ವಾಸವಾಗಿರುವುದನ್ನು
ನಾವು ನೋಡಿದೆವು. (ಅನಾಕ್ಯರು ನೆಫೀಲಿಯ ಜನರ
ಸಂತತಿಯವರಾಗಿದ್ದಾರೆ.) ಅವರ ಮುಂದೆ ನಾವು ಮಿಡತೆ
ಗಳೊ ಎಂದೆನಿಸಿತು. ಅವರಿಗೂ ಸಹ ನಾವು ಮಿಡತೆಗಳಂತೆ
ಕಂಡುಬಂದೆವು'' ಎಂದರು.

## ಜನರು ಮತ್ತೆ ಗುಣಗುಟ್ಟಿದ್ದು

14 ಆ ರಾತ್ರಿಯಲ್ಲಿ ಜನರೆಲ್ಲರೂ ಗಟ್ಟಿಯಾಗಿ
ಕೂಗಿಕೊಂಡರು. 2ಇಸ್ರೇಲರು ಮೋಶೆ
ಆರೋನರ ವಿರುದ್ಧ ಗುಣಗುಟ್ಟಿದರು. ಜನರೆಲ್ಲರೂ
ಒಟ್ಟಾಗಿ ಮೋಶೆ ಆರೋನರ ಬಳಿಗೆ ಬಂದು, ''ನಾವು
ಈಜಿಪ್ಟಿನಲ್ಲಿಯಾಗಲೀ ಅಥವಾ ಈ ಮರುಭೂಮಿ
ಯಲ್ಲಾಗಲೀ ಸತ್ತಿದ್ದರೆ ಒಳ್ಳೆಯದಿತ್ತು. 3ಯುದ್ಧದಲ್ಲಿ
ನಾವು ಸತ್ತುಹೋಗುವಂತೆ ಯೆಹೋವನು ನಮ್ಮನ್ನು ಈ
ಹೊಸ ದೇಶಕ್ಕೆ ತರುತ್ತಿರುವುದೇಕೆ? ವೈರಿಗಳು ನಮ್ಮನ್ನು
ಕೊಂದು ನಮ್ಮ ಹೆಂಡತಿಯರನ್ನೂ ಮಕ್ಕಳನ್ನೂ ತೆಗೆದು
ಕೊಳ್ಳುವರು. ನಾವು ಈಜಿಪ್ಟಿಗೆ ಮರಳಿಹೋಗುವುದೇ
ಉತ್ತಮ'' ಎಂದು ಹೇಳಿದರು.

4ಬಳಿಕ ಜನರು, ''ನಾವು ಇನ್ನೊಬ್ಬ ನಾಯಕನನ್ನು
ಆರಿಸಿಕೊಂಡು ಈಜಿಪ್ಟಿಗೆ ಮರಳಿಹೋಗೋಣ'' ಎಂದು
ಮಾತಾಡಿಕೊಂಡರು. 5ಮೋಶೆ ಆರೋನರು ಇಸ್ರೇಲರ
ಸರ್ವಸಮೂಹದವರ ಮುಂದೆ ಬೋರಲಬಿದ್ದರು.
6ನೂನನ ಮಗನಾದ ಯೆಹೋಶುವನೂ ಯೆಫುನ್ನೆಯ
ಮಗನಾದ ಕಾಲೇಬನೂ ದೇಶದ ವಿಷಯವನ್ನು ಸಂಗ್ರ
ಹಿಸಿಕೊಂಡು ಬಂದವರಲ್ಲಿ ಇಬ್ಬರಾಗಿದ್ದರು. ಅವರು
ಬೇಸರಗೊಂಡು ತಮ್ಮ ಬಟ್ಟೆಗಳನ್ನು ಹರಿದುಕೊಂಡರು.
7ಇವರಿಬ್ಬರು ಇಸ್ರೇಲರೆಲ್ಲರಿಗೆ, ''ನಾವು ಸಂಚರಿಸಿ
ನೋಡಿದ ದೇಶವು ಅತ್ಯುತ್ತಮವಾದದ್ದು, 8ಅದು ಹಾಲೂ
ಜೇನೂ ಹರಿಯುವ ದೇಶ. ಯೆಹೋವನು ನಮ್ಮನ್ನು
ಮೆಚ್ಚಿಕೊಂಡರೆ ಆ ದೇಶದೊಳಗೆ ನಮ್ಮನ್ನು ಕರೆದೊಯ್ದು
ಅದನ್ನು ನಮ್ಮ ಸ್ವಾಧೀನಕ್ಕೆ ಕೊಡುವನು. 9ಹೀಗಿರು
ವುದರಿಂದ ಯೆಹೋವನಿಗೆ ವಿರುದ್ಧವಾಗಿ ಏಳಬೇಡಿರಿ.
ಆ ದೇಶದ ಜನರಿಗೆ ಭಯ ಪಡಬೇಡಿರಿ. ನಾವು ಅವರನ್ನು
ಸೋಲಿಸಬಹುದು. ಅವರಿಗೆ ಯಾವ ಸಂರಕ್ಷಣೆ ಇರು
ವುದಿಲ್ಲ. ಆದರೆ ನಮ್ಮ ಕಡೆ ಯೆಹೋವನು ಇದ್ದಾನೆ.
ಆದ್ದರಿಂದ ಭಯಪಡಬೇಡಿರಿ'' ಅಂದರು.

10ಎಲ್ಲಾ ಜನರು ಯೆಹೋಶುವನನ್ನು ಮತ್ತು
ಕಾಲೇಬನನ್ನು ಕಲ್ಲೆಸೆದು ಕೊಲ್ಲಬೇಕೆಂದು ಮಾತಾಡ
ತೊಡಗಿದರು. ಆದರೆ ಯೆಹೋವನ ತೇಜಸ್ಸು ದೇವ
ದರ್ಶನ ಗುಡಾರದಲ್ಲಿ ಹೊಳೆದು ಇಸ್ರೇಲರೆಲ್ಲರಿಗೆ
ಕಾಣಿಸಿತು. ಯೆಹೋವನು ಮೋಶೆಯೊಡನೆ ಮತಾಡಿ,
11''ಈ ಜನರು ಇನ್ನೆಷ್ಟು ಕಾಲದವರೆಗೆ ನನ್ನನ್ನು
ತಿರಸ್ಕರಿಸುವರು? ನಾನು ನಡಿಸಿದ ಎಲ್ಲಾ ಮಹತ್ಕಾರ್ಯ
ಗಳನ್ನು ಇವರು ಪ್ರತ್ಯಕ್ಷವಾಗಿ ನೋಡಿದಾಗ್ಯೂ ಇನ್ನೆಷ್ಟು
ಕಾಲದವರೆಗೆ ನನ್ನನ್ನು ನಂಬದೆ ಇರುವರು? 12ಸರಿ,
ನಾನು ಇವರಿಗೆ ವ್ಯಾಧಿಯನ್ನು ಉಂಟುಮಾಡಿ ಇವರನ್ನು
ನಿರ್ಮೂಲಮಾಡಿ ಈ ಜನಕ್ಕಿಂತ ಹೆಚ್ಚಾಗಿಯೂ ಬಲಿಷ್ಠ
ವಾಗಿಯೂ ಇರುವ ಜನಾಂಗವನ್ನು ನಿನ್ನ ಮೂಲಕವೇ
ಹುಟ್ಟಿಸುವೆನು'' ಎಂದು ಹೇಳಿದನು.

13ಅದಕ್ಕೆ ಮೋಶೆ ಯೆಹೋವನಿಗೆ, ''ನೀನು ನಿನ್ನ
ಜನರಾದ ಇಸ್ರೇಲರನ್ನು ನಿನ್ನ ಶಕ್ತಿಯ ಮೂಲಕ ಈಜಿಪ್ಟಿ
ನಿಂದ ಕರೆದುಕೊಂಡು ಬಂದೆ. ನೀನು ನಿನ್ನ ಜನರನ್ನು
ನಾಶಮಾಡಿದರೆ, ಈಜಿಪ್ಟಿನವರು ಈ ಸುದ್ದಿಗಳನ್ನು ಕೇಳಿ
ಕಾನಾನಿನ ನಿವಾಸಿಗಳಿಗೆ ಅದರ ಬಗ್ಗೆ ತಿಳಿಸುವರು.
14ಅದಲ್ಲದೆ, ಈ ದೇಶದವರು ನೀನು ಇಸ್ರೇಲರ ಮಧ್ಯ
ದಲ್ಲಿರುವ ಸಂಗತಿಯನ್ನು ಕೇಳಿದ್ದಾರೆ. ನೀನು ಇಸ್ರೇಲರಿಗೆ
ಪ್ರತ್ಯಕ್ಷನಾಗಿ ಕಾಣಿಸಿಕೊಂಡದ್ದು ಅವರಿಗೆ ತಿಳಿದಿದೆ. ನಿನ್ನ
ಮೇಘವು ಇಸ್ರೇಲರ ಮೇಲಿರುವುದು ಅವರಿಗೆ ಗೊತ್ತಿದೆ.
ನೀನು ಇಸ್ರೇಲರನ್ನು ಹಗಲಲ್ಲಿ ಮೇಘಸ್ತಂಭದ ಮೂಲಕ
ವಾಗಿಯೂ ರಾತ್ರಿಯಲ್ಲಿ ಅಗ್ನಿಸ್ತಂಭದ ಮೂಲಕ
ವಾಗಿಯೂ ಮುನ್ನಡೆಸುತ್ತಿರುವುದು ಅವರಿಗೆ ತಿಳಿದಿದೆ.
15ಹೀಗಿರಲಾಗಿ, ನೀನು ಒಂದೇ ಪೆಟ್ಟಿನಿಂದ ಈ ಜನರನ್ನು
ಸಾಯಿಸಿದರೆ, ನಿನ್ನ ಪ್ರಖ್ಯಾತಿಯನ್ನು ಕೇಳಿದ ಜನಾಂಗ
ಗಳವರು ನಿನ್ನ ವಿಷಯದಲ್ಲಿ, 16'ಯೆಹೋವನು ಪ್ರಮಾಣ
ಪೂರ್ವಕವಾಗಿ ವಾಗ್ದಾನ ಮಾಡಿದ ದೇಶದಲ್ಲಿ ಇಸ್ರೇಲ
ರನ್ನು ಸೇರಿಸುವುದಕ್ಕೆ ಶಕ್ತಿಸಾಲದೆ ಅವರನ್ನು ಮರು
ಭೂಮಿಯಲ್ಲಿ ನಾಶಮಾಡಿದನು' ಎಂದು ಮಾತಾಡಿ
ಕೊಳ್ಳುವರು.

17''ಆದ್ದರಿಂದ ಒಡೆಯನೇ, ನೀನು ಹೇಳಿದಂತೆಯೇ
ನಿನ್ನ ತಾಳ್ಮೆಯು ದೀರ್ಘವಾಗಿರಲಿ. 18ನೀನು ನಿನ್ನ ವಿಷಯ
ದಲ್ಲಿ 'ಯೆಹೋವನು ದೀರ್ಘಶಾಂತನು, ಬಹುಪ್ರೀತಿ
ಯುಳ್ಳವನು, ಅಪರಾಧ ಪಾಪಗಳನ್ನು ಕ್ಷಮಿಸುವವ
ನಾಗಿದ್ದರೂ ಎಲ್ಲಾ ದಂಡನೆಯನ್ನು ರದ್ದುಪಡಿಸದವನು.
ತಂದೆಗಳ ಪಾಪಫಲವನ್ನು ಮಕ್ಕಳ ಮೇಲೆ ಮೂರು ನಾಲ್ಕು
ತಲೆಗಳವರೆಗೆ ಬರಮಾಡುವವನು' ಎಂದು ನೀನೇ
ಹೇಳಿರುವಿಯಲ್ಲಾ! 19ನಾವು ಈಜಿಪ್ಟಿನಿಂದ ಬಂದದ್ದು
ಮೊದಲುಗೊಂಡು ಇದುವರೆಗೆ ನೀನು ಈ ಜನರ ಪಾಪ
ಗಳನ್ನು ಕ್ಷಮಿಸಿದ ಪ್ರಕಾರವೇ ಈಗಲೂ ಮಹಾಕೃಪೆ
ಯಿಂದ ಇವರ ಪಾಪವನ್ನು ಕ್ಷಮಿಸಬೇಕೆಂದು ನಿನ್ನನ್ನು
ಬೇಡಿಕೊಳ್ಳುತ್ತೇನೆ'' ಎಂದು ಪ್ರಾರ್ಥಿಸಿದನು.

20ಅದಕ್ಕೆ ಯೆಹೋವನು, ''ನೀನು ಕೇಳಿಕೊಂಡಂತೆ
ನಾನು ಜನರನ್ನು ಕ್ಷಮಿಸುವೆನು. 21ಆದಾಗ್ಯೂ ನನ್ನ
ಜೀವದಾಣೆ ಮತ್ತು ಯೆಹೋವನ ಮಹಿಮೆಯು

ಭೂಲೋಕದಲ್ಲೆಲ್ಲಾ ತುಂಬಿರಬೇಕೆಂಬುವ ನಿಶ್ಚಯ
ವಾಕ್ಯದ ಆಣೆ, 22ಈಜಿಪ್ಟಿನಲ್ಲಿಯೂ ಮರುಭೂಮಿ
ಯಲ್ಲಿಯೂ ನಾನು ನಡಿಸಿರುವ ಮಹಾತ್ಕಾರ್ಯಗಳನ್ನೂ
ನನ್ನ ಮಹಿಮೆಯನ್ನೂ ನೋಡಿದ ಈ ಜನರೆಲ್ಲರೂ
ಪದೇಪದೇ ನನ್ನನ್ನು ಪರೀಕ್ಷಿಸಿದ್ದರಿಂದ ಮತ್ತು ನನಗೆ
ವಿಧೇಯರಾಗದಿದ್ದ ಕಾರಣ, 23ನಾನು ಅವರ ಪೂರ್ವಿಕ
ರಿಗೆ ಪ್ರಮಾಣ ಪೂರ್ವಕವಾಗಿ ವಾಗ್ದಾನ ಮಾಡಿದ
ದೇಶವನ್ನು ಇವರಲ್ಲಿ ಯಾರೂ ನೋಡುವುದಿಲ್ಲ. ನನ್ನನ್ನು
ತಿರಸ್ಕರಿಸಿದ ಇವರಲ್ಲಿ ಯಾರೂ ಅದನ್ನು ನೋಡು
ವುದಿಲ್ಲ. 24ಆದರೆ ನನ್ನ ಸೇವಕನಾದ ಕಾಲೇಬನು ಅವರ
ಹಾಗಲ್ಲ, ಅವನು ನನ್ನನ್ನು ಮನಃಪೂರ್ವಕವಾಗಿ ಹಿಂಬಾ
ಲಿಸಿದ್ದಾನೆ. ಆದ್ದರಿಂದ ಅವನು ಸಂಚರಿಸಿ ನೋಡಿದ
ದೇಶಕ್ಕೆ ಅವನನ್ನು ಬರಮಾಡುವೆನು ಮತ್ತು ಅವನ ಸಂತತಿ
ಯವರು ಆ ದೇಶವನ್ನು ಹೊಂದುವರು. 25ಅಮಾಲೇ
ಕ್ಯರೂ ಕಾನಾನ್ಯರೂ ಆ ಕಣಿವೆಯಲ್ಲಿ ವಾಸವಾಗಿದ್ದಾರೆ.
ಆದ್ದರಿಂದ ಕೆಂಪು ಸಮುದ್ರಕ್ಕೆ ಹೋಗುವ ದಾರಿಯ
ಮೂಲಕ ಅರಣ್ಯಕ್ಕೆ ಮರಳಿ ಪ್ರಯಾಣ ಮಾಡಬೇಕು''
ಎಂದು ಹೇಳಿದನು.

### ಯೆಹೋವನು ಜನರನ್ನು ಶಿಕ್ಷಿಸಿದ್ದು

26-27ಯೆಹೋವನು ಮೋಶೆ ಆರೋನರಿಗೆ, ''ಈ
ದುಷ್ಟ ಸಮೂಹದವರು ನನಗೆ ವಿರುದ್ಧವಾಗಿ ಇನ್ನೆಷ್ಟ
ರವರೆಗೆ ಗುಣಗುತ್ತಲೇ ಇರುತ್ತಾರೆ. ಇಸ್ರೇಲರು ನನಗೆ
ವಿರೋಧವಾಗಿ ಗುಣಗುಟ್ಟುವುದು ನನಗೆ ಕೇಳಿಸಿದೆ.
28ಆದ್ದರಿಂದ ನೀನು ಅವರಿಗೆ ಹೀಗೆ ಹೇಳಬೇಕು.
ಯೆಹೋವನು ಹೇಳುವುದೇನೆಂದರೆ, ''ನನ್ನ ಜೀವದಾಣೆ.
ನೀವು ಏನನ್ನು ಹೇಳಿದಿರೋ ಅದನ್ನೇ ನಿಮಗೆ ಮಾಡು
ತ್ತೇನೆ; 29ನಿಮ್ಮ ಶವಗಳು ಈ ಮರುಭೂಮಿಯಲ್ಲಿಯೇ
ಬೀಳುವವು. ನೀವು ನನಗೆ ವಿರೋಧವಾಗಿ ಗುಣಗುಟ್ಟಿದ್ದ
ರಿಂದ ನಿಮ್ಮಲ್ಲಿ ಲೆಕ್ಕಿಸಲ್ಪಟ್ಟವರೆಲ್ಲರೂ ಅಂದರೆ ಇಪ್ಪತ್ತು
ವರುಷ ಮೊದಲುಗೊಂಡು ಹೆಚ್ಚಾದ ವಯಸ್ಸುಳ್ಳವ
ರೆಲ್ಲರೂ ಅರಣ್ಯದಲ್ಲಿಯೇ ಸಾಯುವರು. 30ಯೆಫುನ್ನೆಯ
ಮಗನಾದ ಕಾಲೇಬ್ ಮತ್ತು ನೂನನ ಮಗನಾದ
ಯೆಹೋಶುವ ಇವರಿಬ್ಬರೇ ಹೊರತು ನಿಮ್ಮಲ್ಲಿ ಬೇರೆ
ಯಾರೂ ನಾನು ಪ್ರಮಾಣಪೂರ್ವಕವಾಗಿ ವಾಗ್ದಾನ
ಮಾಡಿದ ದೇಶವನ್ನು ಸೇರುವುದಿಲ್ಲ. 31ಪರರ ಪಾಲಾಗು
ವರೆಂದು ನೀವು ಹೇಳಿದ ನಿಮ್ಮ ಚಿಕ್ಕಮಕ್ಕಳನ್ನು ಅಲ್ಲಿಗೆ
ಪ್ರವೇಶಿಸುವಂತೆ ಮಾಡುವೆನು. ನೀವು ತಿರಸ್ಕರಿಸಿದ
ದೇಶವನ್ನು ಅವರು ಅನುಭೋಗಿಸುವರು. 32ನೀವಂತೂ
ಈ ಮರುಭೂಮಿಯಲ್ಲಿ ಸಾಯುವಿರಿ. ನಿಮ್ಮೆಲ್ಲರ
ಶವಗಳು ಈ ಅರಣ್ಯದಲ್ಲಿ ಪರ್ಯಂತರ ಬೀಳುವವು.
33''ನಿಮ್ಮ ಅಪನಂಬಿಗಸ್ತಿಕೆಯ ಫಲವನ್ನು ನಿಮ್ಮ
ಮಕ್ಕಳು ಅನುಭವಿಸುವವರಾಗಿ ನೀವು ಸಾಯುವತನಕ
ನಲವತ್ತು ವರ್ಷ ಮರುಭೂಮಿಯಲ್ಲಿ ಅಲೆದಾಡುವರು.
34ನೀವು ಆ ದೇಶವನ್ನು ಸಂಚರಿಸಿ ನೋಡಿದ ನಲವತ್ತು
ದಿನಗಳಿಗೆ ಸಮನಾಗಿ, ದಿನ ಒಂದಕ್ಕೆ ಒಂದು ಸಂವತ್ಸರದ
ಮೇರೆಗೆ ನಲವತ್ತು ವರುಷ ನಿಮ್ಮ ಪಾಪದ ಫಲವನ್ನು
ಅನುಭವಿಸುವಿರಿ. ನನ್ನನ್ನು ತಿರಸ್ಕರಿಸುವುದೆಂದರೆ
ಏನೆಂಬುದು ನಿಮಗೆ ಗೊತ್ತಾಗುತ್ತದೆ.
35''ಇದು ಯೆಹೋವನೆಂಬ ನಾನು ಹೇಳಿದ ಮಾತು.
ನನಗೆ ವಿರೋಧವಾಗಿ ಕೂಡಿಕೊಂಡಿರುವ ಈ ದುಷ್ಟ
ಸಮೂಹದವರೆಲ್ಲರಿಗೆ ಈ ಮಾತಿನ ಮೇರೆಗೆ ಖಂಡಿತ
ವಾಗಿ ಮಾಡುತ್ತೇನೆ. ಈ ಮರುಭೂಮಿಯಲ್ಲಿಯೇ ಇವ
ರೆಲ್ಲರೂ ಸಾಯಬೇಕು'' ಎಂದು ಹೇಳಿದನು.
36-37ಆ ದೇಶವನ್ನು ಸಂಚರಿಸಿ ನೋಡುವುದಕ್ಕೆ
ಮೋಶೆಯಿಂದ ಕಳುಹಿಸಲ್ಪಟ್ಟು ಹಿಂದಿರುಗಿಬಂದು ಆ
ದೇಶದ ವಿಷಯದಲ್ಲಿ ಅಶುಭಸಮಾಚಾರವನ್ನು ಹೇಳಿ
ಸರ್ವಸಮೂಹದವರನ್ನು ಅವರಿಗೆ ವಿರೋಧವಾಗಿ ಗುಣ
ಗುಟ್ಟುವಂತೆ ಮಾಡಿದ ಹತ್ತು ಜನರು ಯೆಹೋವನಿಂದ
ವ್ಯಾಧಿಗೊಳಗಾಗಿ ಸತ್ತರು. 38ನೂನನ ಮಗನಾದ
ಯೆಹೋಶುವನು ಮತ್ತು ಯೆಫುನ್ನೆಯನ ಮಗನಾದ
ಕಾಲೇಬನ ಹೊರತು ಉಳಿದ ಹತ್ತು ಮಂದಿ ಸತ್ತರು.
ಯೆಹೋವನು ಅವರಿಬ್ಬರನ್ನು ಉಳಿಸಿದನು. ಅವರಿಗೆ
ವ್ಯಾಧಿಯು ತಗಲಲಿಲ್ಲ.

### ಜನರು ಕಾನಾನಿಗೆ ಹೋಗಲು ಪ್ರಯತ್ನಿಸಿದ್ದು

39ಮೋಶೆಯು ಈ ಎಲ್ಲಾ ಸಂಗತಿಗಳನ್ನು ಇಸ್ರೇಲ
ರಿಗೆಲ್ಲಾ ಹೇಳಲಾಗಿ ಅವರು ಬಹಳ ದುಃಖಪಟ್ಟರು.
40ಮರುದಿನ ಬೆಳಿಗ್ಗೆ ಜನರು ಎದ್ದು, ''ನಾವು ಪಾಪ
ಮಾಡಿರುವುದು ನಿಜ. ಯೆಹೋವನು ವಾಗ್ದಾನ
ಮಾಡಿರುವ ದೇಶಕ್ಕೆ ಹೋಗಲು ನಾವು ಈಗ ಸಿದ್ಧ
ರಾಗಿದ್ದೇವೆ'' ಎಂದು ಹೇಳಿದರು.
41ಆದರೆ ಮೋಶೆ ಅವರಿಗೆ, ''ನೀವು ಯಾಕೆ ಹೀಗೆ
ಮಾಡಿ ಯೆಹೋವನ ಆಜ್ಞೆಯನ್ನು ಮೀರುತ್ತೀರಿ? ನೀವು
ಯಶಸ್ವಿಯಾಗುವುದಿಲ್ಲ. 42ಯೆಹೋವನು ನಿಮ್ಮ ಸಂಗಡ
ಇರುವುದಿಲ್ಲ. ನೀವು ಆ ದೇಶಕ್ಕೆ ಹೋಗಬೇಡಿರಿ. ಇಲ್ಲ
ವಾದರೆ, ನಿಮ್ಮ ಶತ್ರುಗಳಿಂದ ಸೋಲಿಸಲ್ಪಡುವಿರಿ.
43ಅಮಾಲೇಕ್ಯರೂ ಕಾನಾನ್ಯರೂ ನಿಮ್ಮನ್ನು ಎದುರಿಸಲು
ಅಲ್ಲಿರುವುದರಿಂದ ನೀವು ಅವರ ಖಡ್ಗದಿಂದ ಸಾಯು
ವಿರಿ. ನೀವು ಯೆಹೋವನಿಗೆ ವಿರೋಧವಾಗಿ ದಂಗೆಯೆದ್ದ
ಕಾರಣ ಆತನು ನಿಮ್ಮೊಂದಿಗೆ ಇರುವುದಿಲ್ಲ'' ಎಂದು
ಹೇಳಿದನು.
44ಆದರೆ ಜನರು ಮೋಶೆಯ ಮಾತನ್ನು ನಂಬಲಿಲ್ಲ.
ಅವರು ಪರ್ವತ ಪ್ರದೇಶದ ಕಡೆಗೆ ಹೊರಟರು. ಆದರೆ
ಮೋಶೆಯೂ ಯೆಹೋವನ ಒಡಂಬಡಿಕೆಯ ಪೆಟ್ಟಿ

ಗೆಯೂ ಜನರೊಂದಿಗೆ ಹೋಗಲಿಲ್ಲ. 45ಆಗ ಬೆಟ್ಟದ
ಸೀಮೆಯಲ್ಲಿ ವಾಸವಾಗಿದ್ದ ಅಮಾಲೇಕ್ಯರೂ
ಕಾನಾನ್ಯರೂ ಇಳಿದುಬಂದು ಅವರನ್ನು ಸೋಲಿಸಿ
ಹೊರ್ಮಾ ಪಟ್ಟಣದವರೆಗೂ ಅಟ್ಟಿಸಿಕೊಂಡು ಬಂದು
ಸಂಹರಿಸಿದರು.

## ಯಜ್ಞಗಳ ನಿಯಮಗಳು

15 ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ,
2‘‘ಇಸ್ರೇಲರಿಗೆ ಹೀಗೆ ಆಜ್ಞಾಪಿಸಬೇಕು: ನಾನು
ನಿಮ್ಮ ನಿವಾಸಕ್ಕಾಗಿ ಒಂದು ದೇಶವನ್ನು ಕೊಡುತ್ತಿದ್ದೇನೆ.
ನೀವು ಆ ದೇಶಕ್ಕೆ ಸೇರಿದ ನಂತರ3ನೀವು ಯೆಹೋವನಿಗೆ
ಸುವಾಸನೆಯನ್ನು ಉಂಟುಮಾಡುವುದಕ್ಕಾಗಿ ನಿಮ್ಮ
ಮಂದೆಯಿಂದಾಗಲೀ ಹಿಂಡಿನಿಂದಾಗಲೀ ಅಗ್ನಿಯ
ಮೂಲಕ ಯಜ್ಞವನ್ನರ್ಪಿಸುವವನು ಸರ್ವಾಂಗಹೋಮ
ಮಾಡಿದರೂ ಅಥವಾ ಸಮಾಧಾನಯಜ್ಞ ಮಾಡಿದರೂ
ಹರಕೆಯ ಯಜ್ಞ ಮಾಡಿದರೂ ಅಥವಾ ಸ್ವಇಚ್ಛೆಯಿಂದ
ಯಜ್ಞಮಾಡಿದರೂ ನಿಯಮಿತ ಹಬ್ಬಗಳಲ್ಲಿ ಯಜ್ಞ
ಮಾಡಿದರೂ 4‘‘ಅದರೊಂದಿಗೆ ಧಾನ್ಯನೈವೇದ್ಯಕ್ಕಾಗಿ
ಒಂದುವರೆ ಸೇರು ಎಣ್ಣೆ ಬೆರಸಿದ ಮೂರು ಸೇರು
ಗೋಧಿಯ ಹಿಟ್ಟನ್ನೂ

5ಪಾನದ್ರವ್ಯಕ್ಕಾಗಿ ಒಂದುವರೆ ಸೇರು ದ್ರಾಕ್ಷಾ
ರಸವನ್ನೂ ತರಬೇಕು. ನೀವು ಸರ್ವಾಂಗ ಹೋಮವಾಗಿ
ಇಲ್ಲವೆ ಸಮಾಧಾನಯಜ್ಞವಾಗಿ ಸಮರ್ಪಿಸುವ
ಒಂದೊಂದು ಕುರಿಯೊಂದಿಗೆ ಇದನ್ನೂ ಸಮರ್ಪಿಸ
ಬೇಕು. 6‘‘ನೀವು ಟಗರನ್ನು ಸಮರ್ಪಿಸುವುದಾದರೆ,
ಧಾನ್ಯನೈವೇದ್ಯಕ್ಕಾಗಿ ಎರಡು ಸೇರು ಎಣ್ಣೆ ಬೆರಸಿದ ಆರು
ಸೇರು ಒಳ್ಳೆಯ ಗೋಧಿಯ ಹಿಟ್ಟನ್ನೂ 7ಪಾನದ್ರವ್ಯಕ್ಕಾಗಿ
ಎರಡು ಸೇರು ದ್ರಾಕ್ಷಾರಸವನ್ನೂ ಸಮರ್ಪಿಸಬೇಕು.
ಅದು ಯೆಹೋವನಿಗೆ ಸುವಾಸನೆಯನ್ನು ಉಂಟು
ಮಾಡುವ ಯಜ್ಞವಾಗಿರುತ್ತದೆ.

8‘‘ನಿಮ್ಮಲ್ಲಿ ಎಳೆಹೋರಿಯನ್ನು ಯೆಹೋವನಿಗೆ
ಸರ್ವಾಂಗಹೋಮವನ್ನಾಗಲೀ ಹರಕೆಯ ಯಜ್ಞವನ್ನಾ
ಗಲೀ ಸಮಾಧಾನಯಜ್ಞವನ್ನಾಗಲೀ ಅರ್ಪಿಸುವವನು
9ಅದರೊಂದಿಗೆ ಧಾನ್ಯನೈವೇದ್ಯಕ್ಕಾಗಿ ಮೂರು ಸೇರು
ಎಣ್ಣೆ ಬರಸಿದ ಒಂಭತ್ತು ಸೇರು ಗೋಧಿಯ ಹಿಟ್ಟನ್ನೂ
10ಪಾನದ್ರವ್ಯಕ್ಕಾಗಿ ಮೂರು ಸೇರು ದ್ರಾಕ್ಷಾರಸವನ್ನೂ
ತಂದು ಸಮರ್ಪಿಸಬೇಕು. ಇದು ಅಗ್ನಿಯ ಮೂಲಕ
ಸಮರ್ಪಿಸುವ ಯಜ್ಞವಾಗಿದೆ. ಇದರ ಸುವಾಸನೆಯು
ಯೆಹೋವನಿಗೆ ಮೆಚ್ಚಿಕೆಯನ್ನು ಉಂಟುಮಾಡುತ್ತದೆ.
11ಕುರಿ, ಆಡು, ಟಗರು, ಹೋರಿ ಇವುಗಳಲ್ಲಿ ಯಾವು
ದನ್ನು ಅರ್ಪಿಸಿದರೂ ಇದನ್ನು ಮಾಡಲೇಬೇಕು. 12ನೀವು
ಸಮರ್ಪಿಸುವ ಪಶುಗಳ ಲೆಕ್ಕದ ಪ್ರಕಾರವೇ ಒಂದೊಂದು
ಪಶುವಿನ ಸಂಗಡ ಈ ಮೇರೆಗೆ ಮಾಡಬೇಕು.

13‘‘ಇಸ್ರೇಲಿನ ಪ್ರತಿಯೊಬ್ಬ ಸ್ವದೇಶಿಯೂ ಯೆಹೋವ
ನಿಗೆ ಸುಗಂಧಹೋಮವನ್ನು ಸಮರ್ಪಿಸುವಾಗ ಈ ರೀತಿ
ಯಾಗಿ ಮಾಡಬೇಕು. 14ನಿಮ್ಮ ಮಧ್ಯದಲ್ಲಿ ವಾಸಿಸುವ
ವಿದೇಶಿಯರಲ್ಲಿ ಯಾವನೇ ಆಗಲಿ, ಯೆಹೋವನಿಗೆ
ಸುಗಂಧಹೋಮ ಮಾಡಬೇಕಾದರೆ ನಿಮ್ಮಂತಯೇ
ಅವನು ಮಾಡಬೇಕು. 15ನಿಮಗೂ ನಿಮ್ಮಲ್ಲಿರುವ ಪರ
ದೇಶದವರಿಗೂ ಒಂದೇ ವಿಧಿಯಿರಬೇಕು. ಇದು
ನಿಮಗೂ ನಿಮ್ಮ ಸಂತತಿಯವರಿಗೂ ಶಾಶ್ವತ ನಿಯಮ.
ಯೆಹೋವನ ಸನ್ನಿಧಿಯಲ್ಲಿ ನೀವೂ ಪರದೇಶಿಯರೂ
ಒಂದೇ ಆಗಿದ್ದೀರಿ. 16ನಿಮಗೂ ನಿಮ್ಮ ಬಳಿಯಲ್ಲಿ
ವಾಸಿಸುವ ಪರದೇಶದವನಿಗೂ ಒಂದೇ ವಿಧವಾದ
ಪ್ರಮಾಣ ವಿಧಿಗಳಿರಬೇಕು.’’

17ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ,
18‘‘ಇಸ್ರೇಲರಿಗೆ ಈ ಸಂಗತಿಗಳನ್ನು ತಿಳಿಸು: ನಾನು
ನಿಮ್ಮನ್ನು ಇನ್ನೊಂದು ದೇಶಕ್ಕೆ ಕರೆದುಕೊಂಡು ಹೋಗು
ತ್ತಿದ್ದೇನೆ. 19ನೀವು ಆ ದೇಶದ ಭೂಮಿಯ ಬೆಳೆಯನ್ನು
ಅನುಭೋಗಿಸುವಾಗ, ಸ್ವಲ್ಪವನ್ನು ಪ್ರಭುವಿಗೋಸ್ಕರ
ಪ್ರತ್ಯೇಕಿಸಬೇಕು. 20ನೀವು ಕಣದಲ್ಲಿರುವ ಗೋಧಿಯಲ್ಲಿ
ಪ್ರಥಮ ಫಲವನ್ನು ಯೆಹೋವನಿಗೆ ಕಾಣಿಕೆಯಾಗಿ
ಕೊಡುವಂತೆಯೇ ನೀವು ಪ್ರಥಮವಾಗಿ ನಾದಿದ ಹಿಟ್ಟಿ
ನಿಂದ ಒಂದು ರೊಟ್ಟಿಯನ್ನು ಯೆಹೋವನಿಗೆ ಕಾಣಿಕೆ
ಯಾಗಿ ಕೊಡಬೇಕು. 21ನೀವೂ ನಿಮ್ಮ ಸಂತತಿಯವರೂ
ಕಣಕದಿಂದ ಮಾಡುವ ಮೊದಲನೆಯ ರೊಟ್ಟಿಯನ್ನು
ಯೆಹೋವನಿಗೋಸ್ಕರ ಪ್ರತ್ಯೇಕಿಸಬೇಕು.

22-23‘‘ಯೆಹೋವನು ಮೋಶೆಯ ಮೂಲಕ
ಪ್ರಕಟಿಸಿದ ಆಜ್ಞೆಗಳನ್ನು ಅಂದರೆ ಯೆಹೋವನು ಆಜ್ಞೆ
ಯನ್ನು ಕೊಟ್ಟ ದಿನದಿಂದಿಡಿದು ಮುಂದಿನ ಎಲ್ಲಾ
ಕಾಲದಲ್ಲಿ ನೀವು ತಿಳಿಯದೆ ಯೆಹೋವನ ಆಜ್ಞೆಗಳನ್ನು
ಉಲ್ಲಂಘಿಸಿದರೆ ಹೀಗೆ ಮಾಡಬೇಕು: 24ನಿರುದ್ದೇಶದಿಂದ
ಮತ್ತು ಸಮುದಾಯಕ್ಕೆ ತಿಳಿಯದಂತೆ ಇದನ್ನು ಮಾಡಿ
ದ್ದಾಗಿದ್ದರೆ, ಯೆಹೋವನಿಗೆ ಸುಗಂಧ ವಾಸನೆಯನ್ನು
ಉಂಟುಮಾಡುವುದಕ್ಕಾಗಿ ಒಂದು ಎಳೆಹೋರಿಯನ್ನು
ಸರ್ವಾಂಗಹೋಮವಾಗಿ ಅರ್ಪಿಸಬೇಕು ಮತ್ತು ಅದ
ರೊಡನೆ ಧಾನ್ಯಾರ್ಪಣೆಯನ್ನೂ ಪಾನಾರ್ಪಣೆಯನ್ನೂ
ಪಾಪಪರಿಹಾರಕ ಯಜ್ಞವಾಗಿ ಒಂದು ಹೋತವನ್ನೂ
ಅರ್ಪಿಸಬೇಕು.

25‘‘ಈ ರೀತಿಯಲ್ಲಿ ಇಸ್ರೇಲರ ಇಡೀ ಸಮುದಾಯ
ದವರ ಕ್ಷಮೆಗಾಗಿ ಯಾಜಕನು ಪ್ರಾಯಶ್ಚಿತ್ತ ಮಾಡು
ವನು. ಯಾಕಂದರೆ ಅದು ತಿಳಿಯದೆ ಮಾಡಿದ ತಪ್ಪಾಗಿತ್ತು
ಮತ್ತು ಆ ತಪ್ಪಿಗಾಗಿ ಅವರು ತಮ್ಮ ಅರ್ಪಣೆಯನ್ನು

ಯೆಹೋವನಿಗೆ ಕಾಣಿಕೆಯಾಗಿ ತಂದರು ಮತ್ತು
ಯೆಹೋವನ ಎದುರಿನಲ್ಲಿ ಪಾಪಪರಿಹಾರಕ ಯಜ್ಞವನ್ನು
ಅರ್ಪಿಸಿದರು. 26ಆದ್ದರಿಂದ ಇಡೀ ಇಸ್ರೇಲ್ ಸಮುದಾ
ಯದವರಿಗೆ ಕ್ಷಮಾಪಣೆಯಾಗುವುದು ಮತ್ತು ಅವರ
ಮಧ್ಯದಲ್ಲಿ ವಾಸಿಸುವ ಪರದೇಶಸ್ಥರಿಗೂ ಕ್ಷಮಾಪಣೆ
ಯಾಗುವುದು; ಯಾಕಂದರೆ ಜನರೆಲ್ಲರೂ ನಿರುದ್ದೇಶ
ದಿಂದ ಮಾಡಿದ ಆ ತಪ್ಪಿನಲ್ಲಿ ಸಿಕ್ಕಿಕೊಂಡಿದ್ದರು.

27‘‘ಆದರೆ ಒಬ್ಬನು ತಿಳಿಯದೆ ಪಾಪಮಾಡಿದರೆ,
ಅವನು ಒಂದು ವರುಷದ ಹೆಣ್ಣು ಆಡನ್ನು ದೋಷ ಪರಿ
ಹಾರಕ ಯಜ್ಞವಾಗಿ ಅರ್ಪಿಸಬೇಕು. 28ಆಗ ಯಾಜಕನು
ನಿರುದ್ದೇಶದಿಂದ ತಪ್ಪುಮಾಡಿದವನ ಕ್ಷಮಾಪಣೆಗಾಗಿ
ಯೆಹೋವನ ಸನ್ನಿಧಿಯಲ್ಲಿ ಪ್ರಾಯಶ್ಚಿತ್ತ ಮಾಡುವನು.
29ನಿರುದ್ದೇಶದಿಂದ ತಪ್ಪುಮಾಡಿದ ಪ್ರತಿಯೊಬ್ಬರಿಗೂ ಈ
ನಿಯಮ ಅನ್ವಯಿಸುತ್ತದೆ. ಈ ವಿಷಯದಲ್ಲಿ ಇಸ್ರೇಲ
ರಲ್ಲಿರುವ ಸ್ವದೇಶದವರಿಗೂ ಪರದೇಶದವರಿಗೂ
ಒಂದೇ ವಿಧಿಯಿರಬೇಕು.

30‘‘ಆದರೆ ಉದ್ದೇಶಪೂರ್ವಕವಾಗಿ ಪಾಪಮಾಡು
ವವನು ಯೆಹೋವನಿಗೆ ಅವಮಾನ ಮಾಡುವವ
ನಾಗಿದ್ದಾನೆ. ಅವನನ್ನು ಕುಲದಿಂದ ಬಹಿಷ್ಕರಿಸಬೇಕು. ಈ
ನಿಯಮವು ಇಸ್ರೇಲರಲ್ಲಿ ಹುಟ್ಟಿದ ಪ್ರತಿಯೊಬ್ಬನಿಗೂ
ಹಾಗೂ ಪರದೇಶಸ್ಥರಿಗೂ ಅನ್ವಯಿಸುವುದು. 31ಆ
ಮನುಷ್ಯನು ಯೆಹೋವನ ಮಾತನ್ನು ತಾತ್ಸಾರ ಮಾಡಿ
ಆತನ ಆಜ್ಞೆಯನ್ನು ಮೀರಿದ್ದರಿಂದ ಕುಲದಿಂದ ತೆಗೆದು
ಹಾಕಲ್ಪಡಲೇಬೇಕು. ಅವನು ತನ್ನ ಪಾಪದ ಫಲವನ್ನು
ಅನುಭವಿಸಲಿ.’’

## ಸಬ್ಬತ್ ದಿನದಲ್ಲಿ ಕೆಲಸಮಾಡುವ ಮನುಷ್ಯನು

32ಇಸ್ರೇಲರು ಮರುಭೂಮಿಯಲ್ಲಿ ಇನ್ನೂ ಇದ್ದಾಗ
ಒಬ್ಬನು ಸಬ್ಬತ್ ದಿನದಲ್ಲಿ ಕಟ್ಟಿಗೆ ಕೂಡಿಸುವುದನ್ನು
ಜನರು ಕಂಡರು. 33ಕಂಡವರು ಅವನನ್ನು ಮೋಶೆ
ಆರೋನರ ಮತ್ತ ಸರ್ವಸಮೂಹದವರ ಬಳಿಗೆ ಹಿಡು
ಕೊಂಡು ಬಂದರು. 34ಅವನನ್ನು ಶಿಕ್ಷಿಸಬೇಕಾದ ವಿಧಿ
ಯನ್ನು ಅವರು ತಿಳಿಯದೆ ಇದ್ದುದರಿಂದ ಅವನನ್ನು
ಕಾವಲಲ್ಲಿಟ್ಟರು.

35ಆಗ ಯೆಹೋವನು ಮೋಶೆಗೆ, ‘‘ಆ ಮನುಷ್ಯನು
ಸಾಯಬೇಕು. ಅವನನ್ನು ಪಾಳೆಯದ ಹೊರಗೆ ತೆಗೆದು
ಕೊಂಡು ಹೋಗಿ ಎಲ್ಲಾ ಜನರು ಕಲ್ಲೆಸೆದು ಕೊಲ್ಲ
ಬೇಕು’’ ಎಂದು ಹೇಳಿದನು. 36ಆಗ ಜನರು ಅವನನ್ನು
ಪಾಳೆಯದ ಹೊರಗೆ ಕರೆದುಕೊಂಡು ಹೋಗಿ ಕಲ್ಲೆಸೆದು
ಕೊಂದರು. ಯೆಹೋವನು ಮೋಶೆಗೆ ಆಜ್ಞಾಪಿಸಿದಂತೆ
ಅವರು ಇದನ್ನು ಮಾಡಿದರು.

## ಜನರು ವಿಧಿಗಳನ್ನು ಜ್ಞಾಪಕ ಮಾಡುವಂತೆ ದೇವರು ಸಹಾಯ ಮಾಡಿದ್ದು

37ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ,
38‘‘ಇಸ್ರೇಲರಿಗೆ ಈ ಸಂಗತಿಗಳನ್ನು ತಿಳಿಸು: ನನ್ನ ಅಪ್ಪಣೆ
ಗಳನ್ನು ಜ್ಞಾಪಕಮಾಡುವುದಕ್ಕೆ ನಿಮಗೆ ಒಂದು
ಗುರುತನ್ನು ಕೊಡುತ್ತೇನೆ. ನಿಮ್ಮ ಬಟ್ಟೆಗಳ ಮೂಲೆಯಲ್ಲಿ
ಗೊಂಡೆಗಳನ್ನು ಕಟ್ಟಿಕೊಳ್ಳಬೇಕು. ಪ್ರತಿಯೊಂದು
ಗೊಂಡೆಯೂ ಒಂದೊಂದು ನೀಲಿ ದಾರದಿಂದ ಕೂಡಿರ
ಬೇಕು. ನೀವು ಇವುಗಳನ್ನು ಇಂದಿನಿಂದ ಯಾವಾಗಲೂ
ಧರಿಸಿಕೊಳ್ಳಬೇಕು. 39ಈ ಗೊಂಡೆಗಳನ್ನು ನೀವು
ನೋಡುವಾಗ, ಯೆಹೋವನು ನಿಮಗೆ ಕೊಟ್ಟ ಅಪ್ಪಣೆ
ಗಳನ್ನೆಲ್ಲ ಜ್ಞಾಪಕ ಮಾಡಿಕೊಳ್ಳಬೇಕು ಮತ್ತು ಅವುಗಳಿಗೆ
ವಿಧೇಯರಾಗಬೇಕು. ನೀವು ನಿಮ್ಮ ಮನಸ್ಸಿಗೆ ಮತ್ತು
ಕಣ್ಣಿಗೆ ತೋರಿದ ಪ್ರಕಾರ ನಡೆಯದೆ ನಂಬಿಗಸ್ತರಾಗಿರ
ಬೇಕು. 40ನೀವು ನನ್ನ ಎಲ್ಲಾ ಆಜ್ಞೆಗಳನ್ನು ಜ್ಞಾಪಿಸಿ
ಕೊಂಡು ವಿಧೇಯರಾಗಿರಬೇಕು. ಆಗ ನೀವು ನಿಮ್ಮ
ದೇವರ ವಿಶೇಷವಾದ ಜನರಾಗಿರುವಿರಿ. 41‘‘ನಿಮ್ಮ ದೇವ
ರಾಗಿರುವುದಕ್ಕೆ ನಿಮ್ಮನ್ನು ಈಜಿಪ್ಟಿನಿಂದ ಹೊರಗೆ
ಕರೆತಂದ ನಿಮ್ಮ ದೇವರಾದ ಯೆಹೋವನು ನಾನೇ.’’

## ಮೋಶೆಗೆ ವಿರುದ್ಧ ದಂಗೆ ಎದ್ದದ್ದು

16 ಕೋರಹ, ದಾತಾನ್, ಅಬೀರಾಮ್ ಮತ್ತು
ಓನ್ ಎಂಬವರು ಮೋಶೆಗೆ ವಿರುದ್ಧವಾಗಿ
ಎದ್ದರು. (ಕೋರಹನು ಇಚ್ಹಾರನ ಮಗನು, ಇಚ್ಹಾರನು
ಕೆಹಾತನ ಮಗನು. ಕೆಹಾತನು ಲೇವಿಯ ಮಗನು.
ದಾತಾನ್ ಮತ್ತು ಅಬೀರಾಮ್ ಇವರು ಎಲೀಯಾಬನ
ಗಂಡು ಮಕ್ಕಳು ಮತ್ತು ಓನನು ಪೆಲೆತನ ಮಗನು.
ದಾತಾನ್, ಅಬೀರಾಮ್ ಮತ್ತು ಓನ್ ಇವರು
ರೂಬೇನನ ಸಂತತಿಯವರು.) 2ಈ ನಾಲ್ಕು ಮಂದಿ
ಇಸ್ರೇಲರು ಇನ್ನಿತರ ಇನ್ನೂರೈವತ್ತು ಗಂಡಸರೊಂದಿಗೆ
ಮೋಶೆಗೆ ವಿರುದ್ಧವಾಗಿ ಎದ್ದರು. ಅವರು ಜನರಿಂದ
ಆರಿಸಲ್ಪಟ್ಟ ನಾಯಕರಾಗಿದ್ದುದರಿಂದ ಜನರೆಲ್ಲರೂ
ಅವರನ್ನು ಬಲ್ಲವರಾಗಿದ್ದರು. 3ಅವರು ಮೋಶೆ ಮತ್ತು
ಆರೋನರ ವಿರುದ್ಧ ಒಟ್ಟಾಗಿ ಸೇರಿಬಂದು, ಅವರಿಗೆ,
‘‘ನೀವು ಅಧಿಕಾರವನ್ನು ಮತ್ತು ಘನತೆಯನ್ನು ಅತಿಯಾಗಿ
ಅಪೇಕ್ಷಿಸುತ್ತಿರುವಿರಿ. ಈ ಸಮೂಹದವರಲ್ಲಿರುವ ಪ್ರತಿ
ಯೊಬ್ಬನೂ ದೇವರಿಗೆ ಪ್ರತಿಷ್ಠಿತನೇ. ಯೆಹೋವನು
ಇವರೆಲ್ಲರ ಮಧ್ಯದಲ್ಲಿ ಇದ್ದಾನೆ. ಹೀಗಿರಲಾಗಿ
ಯೆಹೋವನ ಜನರಿಗಿಂತಲೂ ನಿಮ್ಮನ್ನು ನೀವೇ ಹೆಚ್ಚಿಸಿ
ಕೊಳ್ಳುವುದೇನು?’’ ಎಂದು ಕೇಳಿದರು.

4ಮೋಶೆ ಇದನ್ನು ಕೇಳಿ ನೆಲದವರೆಗೆ ಬಾಗಿ 5ಕೋರಹ
ಮತ್ತು ಅವನ ಹಿಂಬಾಲಕರೆಲ್ಲರಿಗೆ ಹೇಳಿದ್ದೇನೆಂದರೆ,

‘‘ನಾಳೆ ಮುಂಜಾನೆ ಯಾವನು ಯೆಹೋವನವನೆಂದು
ಯೆಹೋವನು ತೋರಿಸುವನು. ಯಾವನು ಪ್ರತಿಷ್ಠಿತ
ನೆಂದು ಯೆಹೋವನು ತೋರಿಸುವನು ಮತ್ತು
ಯೆಹೋವನು ಅವನನ್ನು ತನ್ನ ಹತ್ತಿರ ಕರೆದುಕೊಳ್ಳು
ವನು. 6ಆದ್ದರಿಂದ ಕೋರಹನೇ, ನೀನೂ ನಿನ್ನ ಹಿಂಬಾ
ಲಕರೆಲ್ಲರೂ ಈ ಕಾರ್ಯವನ್ನು ಮಾಡಬೇಕು. 7ನಾಳೆ
ಅಗ್ಗಿಷ್ಟಿಕೆಗಳನ್ನು ತೆಗೆದುಕೊಂಡು ಅವುಗಳ ಮೇಲೆ
ಉರಿಯುವ ಕೆಂಡಗಳನ್ನು ಹಾಕಿರಿ ಮತ್ತು ಯೆಹೋವನ
ಮುಂದೆ ಅವುಗಳ ಮೇಲೆ ಧೂಪವನ್ನು ಹಾಕಿರಿ. ಆಗ
ಯೆಹೋವನು ಯಾರನ್ನು ಆರಿಸಿಕೊಳ್ಳುವನೊ ಅವನೇ
ನಿಜವಾಗಿಯೂ ಪವಿತ್ರನಾದವನು. ಲೇವಿಯರಾದ ನೀವು
ಅಧಿಕಾರವನ್ನು ಮತ್ತು ಘನತೆಯನ್ನು ಅತಿಯಾಗಿ
ಅಪೇಕ್ಷಿಸುತ್ತೀರಿ.’’ 8ಮೋಶೆಯು ಕೋರಹನಿಗೆ, ‘‘ಲೇವಿ
ಯರೇ, ಕೇಳಿರಿ! 9ಇಸ್ರೇಲರ ದೇವರು ನಿಮ್ಮನ್ನು
ಸರ್ವಸಮೂಹದಿಂದ ಆರಿಸಿಕೊಂಡದ್ದಕ್ಕಾಗಿ ನೀವು
ಸಂತೋಷಪಡಬೇಕು. ದೇವರ ಪವಿತ್ರ ಗುಡಾರಕ್ಕೆ
ಸಂಬಂಧಿಸಿದ ಕೆಲಸವನ್ನು ಮಾಡುವುದಕ್ಕೂ ಇಸ್ರೇಲರ
ಸೇವೆಯನ್ನು ಮಾಡುವುದಕ್ಕೂ ಮತ್ತು ಯಜ್ಞಗಳನ್ನು
ಸಿದ್ಧಪಡಿಸುವುದರಲ್ಲಿ ಅವರಿಗೆ ಸಹಾಯಕರಾಗಿರ
ಬೇಕೆಂದು ಯೆಹೋವನು ನಿಮ್ಮನ್ನು ತನ್ನ ಸಮೀಪಕ್ಕೆ
ಬರಗೊಡಿಸಿದ್ದಾನೆ. ಅದು ನಿಮಗೆ ಸಾಕಾಗಲಿಲ್ಲವೇ?
10ಈ ರೀತಿ ಆತನ ಬಳಿಯಲ್ಲಿ ಸೇವೆಮಾಡಲು ನಿನಗೂ
ನಿನ್ನ ಸಹೋದ್ಯೋಗಿಗಳಾದ ಎಲ್ಲಾ ಲೇವಿಯರಿಗೂ
ಯೆಹೋವನು ಅವಕಾಶ ಕೊಟ್ಟಿದ್ದಾನೆ. ಆದರೆ ಈಗ
ನೀವು ಯಾಜಕರಾಗಬೇಕೆಂದು ಸಹ ಪ್ರಯತ್ನಿಸುತ್ತಿದ್ದೀರಿ.
11ನೀವೂ ನಿಮ್ಮ ಹಿಂಬಾಲಕರೂ ಒಟ್ಟಾಗಿ ಸೇರಿಕೊಂಡು
ಯೆಹೋವನಿಗೆ ವಿರೋಧವಾಗಿ ದಂಗೆ ಎದ್ದಿದ್ದೀರಿ.
ಆರೋನನು ತನ್ನನ್ನು ತಾನೇ ಮಹಾಯಾಜಕನನ್ನಾಗಿ
ಆರಿಸಿಕೊಂಡನೋ? ಇಲ್ಲ! ಹೀಗಿರಲು ಆರೋನನಿಗೆ
ವಿರೋಧವಾಗಿ ಗುಣಗುಟ್ಟುವುದೇಕೆ?’’ ಎಂದು
ಹೇಳಿದನು.

12ಬಳಿಕ ಮೋಶೆ ಎಲೀಯಾಬನ ಗಂಡುಮಕ್ಕಳಾದ
ದಾತಾನನನ್ನೂ ಅಬೀರಾಮನನ್ನೂ ಕರೇಕಳುಹಿಸಲಾಗಿ,
ಅವರು ಅವನಿಗೆ, ‘‘ನಾವು ಬರುವುದಿಲ್ಲ. 13ನೀನು
ಹಾಲೂ ಜೇನೂ ಹರಿಯುವ ದೇಶದಿಂದ ನಮ್ಮನ್ನು
ಕರೆದುಕೊಂಡು ಬಂದು ಮರಳುಗಾಡಿನಲ್ಲಿ ಸಾಯಿಸು
ವುದು ಸಾಕಾಗಲಿಲ್ಲವೆಂದು ಭಾವಿಸಿ ನಮ್ಮ ಮೇಲೆ
ದೊರೆತನ ಮಾಡಲು ಅಪೇಕ್ಷಿಸುತ್ತಿರುವೆಯೋ? 14ನಾವು
ನಿನ್ನನ್ನು ಯಾಕೆ ಹಿಂಬಾಲಿಸಬೇಕು? ನೀನು ನಮ್ಮನ್ನು
ಹಾಲೂ ಜೇನೂ ಹರಿಯುವ ದೇಶಕ್ಕೆ ಕರೆದುಕೊಂಡು
ಬರಲಿಲ್ಲ. ನೀನು ನಮ್ಮ ಸ್ವಂತಕ್ಕೆ ಹೊಲಗಳನ್ನಾಗಲೀ
ದ್ರಾಕ್ಷೆತೋಟಗಳನ್ನಾಗಲೀ ಕೊಡಲಿಲ್ಲ! ನೀನು ಈ
ಜನರಿಗೆ ಇದೇ ರೀತಿ ಮೋಸಮಾಡಬೇಕೆಂದಿ
ರುವೆಯೋ? ನಾವು ಬರುವುದಿಲ್ಲ’’ ಎಂದು ಹೇಳಿದರು.

15ಇದರಿಂದ ಮೋಶೆ ಬಹಳ ಕೋಪಗೊಂಡನು.
ಅವನು ಯೆಹೋವನಿಗೆ, ‘‘ನಾನು ಈ ಜನರಿಗೆ ಎಂದೂ
ತೊಂದರೆ ಮಾಡಲಿಲ್ಲ. ಅವರಿಂದ ನಾನು ಒಂದು ಕತ್ತೆ
ಯನ್ನಾದರೂ ತೆಗೆದುಕೊಂಡವನಲ್ಲ. ಯೆಹೋವನೇ,
ಅವರ ಕಾಣಿಕೆಯನ್ನು ಸ್ವೀಕರಿಸಬೇಡ’’ ಎಂದು
ಹೇಳಿದನು.

16ಆಗ ಮೋಶೆಯು ಕೋರಹನಿಗೆ, ‘‘ನೀನು ಮತ್ತು
ನಿನ್ನ ಹಿಂಬಾಲಕರೆಲ್ಲರು ನಾಳೆ ಯೆಹೋವನ ಸನ್ನಿಧಿ
ಯಲ್ಲಿ ಆರೋನನೊಡನೆ ನಿಲ್ಲಬೇಕು. 17ನಿಮ್ಮಲ್ಲಿ ಪ್ರತಿ
ಯೊಬ್ಬನು ತನ್ನತನ್ನ ಧೂಪಾರತಿಯನ್ನು ಅಂದರೆ ಒಟ್ಟಾಗಿ
ಇನ್ನೂರೈವತ್ತು ಧೂಪಾರತಿಗಳನ್ನು ತೆಗೆದುಕೊಂಡು
ಧೂಪಹಾಕಿ ಯೆಹೋವನ ಸನ್ನಿಧಿಗೆ ಬರಬೇಕು.
ಹಾಗೆಯೇ ನೀನೂ ಆರೋನನೂ ನಿಮ್ಮನಿಮ್ಮ ಧೂಪಾ
ರತಿಗಳನ್ನು ತೆಗೆದುಕೊಂಡು ಬರಬೇಕು’’ ಎಂದು
ಹೇಳಿದನು.

18ಅದಕ್ಕನುಸಾರವಾಗಿ ಅವರೆಲ್ಲರೂ ತಮ್ಮತಮ್ಮ
ಧೂಪಾರತಿಗಳನ್ನು ಕೈಯಲ್ಲಿ ತೆಗೆದುಕೊಂಡು ಅವುಗಳಲ್ಲಿ
ಕೆಂಡಗಳನ್ನಿಟ್ಟು ಧೂಪದ್ರವ್ಯಗಳನ್ನು ಹಾಕಿ ಮೋಶೆ
ಆರೋನರ ಜೊತೆಯಲ್ಲಿ ದೇವದರ್ಶನಗುಡಾರದ
ಪ್ರವೇಶದ್ವಾರದಲ್ಲಿ ನಿಂತುಕೊಂಡರು. 19ಕೋರಹನು
ತಮಗೆ ಎದುರಾಗಿ ಸರ್ವಸಮೂಹದವರನ್ನು ದೇವ
ದರ್ಶನಗುಡಾರದ ಪ್ರವೇಶದ್ವಾರದ ಹತ್ತಿರಕ್ಕೆ ಕೂಡಿಸಿ
ದನು. ಆಗ ಯೆಹೋವನ ಮಹಿಮೆ ಸಮೂಹ
ದವರೆಲ್ಲರಿಗೆ ಹೊಳೆಯಿತು.

20ಯೆಹೋವನು ಮೋಶೆ ಆರೋನರಿಗೆ, 21‘‘ಈ
ಜನರನ್ನು ಬಿಟ್ಟು ಪ್ರತ್ಯೇಕವಾಗಿ ನಿಲ್ಲಿರಿ. ನಾನು ಅವರನ್ನು
ಈಗ ನಾಶಮಾಡಬಯಸುತ್ತೇನೆ’’ ಅಂದನು.

22ಆದರೆ ಮೋಶೆ ಆರೋನರು ನೆಲದವರೆಗೆ ಬಾಗಿ,
‘‘ದೇವರೇ, ಎಲ್ಲಾ ಜನರ ಆಲೋಚನೆ ನಿನಗೆ ಗೊತ್ತಿದೆ.
ದಯಮಾಡಿ ಎಲ್ಲಾ ಜನರ ಮೇಲೆ ಕೋಪಗೊಳ್ಳಬೇಡ.
ನಿಜವಾಗಿ ಪಾಪಮಾಡಿದವನು ಕೇವಲ ಒಬ್ಬನಲ್ಲವೇ?’’
ಎಂದು ಮೊರೆಯಿಟ್ಟನು.

23ಆಗ ಯೆಹೋವನು ಮೋಶೆಗೆ, 24‘‘ಜನರಿಗೆ
ಕೋರಹ, ದಾತಾನ್ ಮತ್ತು ಅಬೀರಾಮರ ಗುಡಾರದ
ಸುತ್ತಮುತ್ತಲಿಂದ ದೂರಹೋಗಬೇಕೆಂದು ಆಜ್ಞಾಪಿಸು’’
ಎಂದು ಹೇಳಿದನು.

25ಮೋಶೆಯು ಎದ್ದು ಕೋರಹ, ದಾತಾನ್ ಮತ್ತು
ಅಬೀರಾಮರ ಬಳಿಗೆ ಹೋದನು. ಇಸ್ರೇಲರ ಹಿರಿಯ
ರೆಲ್ಲರೂ ಅವನನ್ನು ಹಿಂಬಾಲಿಸಿದರು. 26ಮೋಶೆಯು
ಜನರನ್ನು ಎಚ್ಚರಿಸಿ, ‘‘ಈ ಕೆಟ್ಟ ಜನರ ಗುಡಾರಗಳಿಂದ

ಹೊರಟು ಹೋಗಿರಿ. ಇವರ ಸ್ವತ್ತಿನಲ್ಲಿ ಯಾವುದನ್ನೂ
ಮುಟ್ಟಬಾರದು. ಇಲ್ಲವಾದರೆ ಅವರ ಪಾಪಗಳ ದೆಸೆ
ಯಿಂದ ನೀವೂ ನಾಶವಾಗುವಿರಿ'' ಎಂದು ಹೇಳಿದನು.
27ಆದ್ದರಿಂದ ಜನರು ಕೋರಹ, ದಾತಾನ್ ಮತ್ತು
ಅಬೀರಾಮರ ಗುಡಾರಗಳನ್ನು ಬಿಟ್ಟು ದೂರಹೋದರು.
ದಾತಾನ್ ಮತ್ತು ಅಬೀರಾಮ್ ಹೊರಗೆ ಬಂದು ತಮ್ಮ
ಡೇರೆಗಳ ಪ್ರವೇಶದ್ವಾರದ ಬಳಿ ತಮ್ಮ ಹೆಂಡತಿಯ
ರೊಡನೆ, ಮಕ್ಕಳೊಡನೆ ಮತ್ತು ಕೂಸುಗಳೊಡನೆ
ನಿಂತುಕೊಂಡರು.
28ಆಗ ಮೋಶೆ ಜನರಿಗೆ, ''ಈ ಕಾರ್ಯಗಳೆಲ್ಲಾ ನನ್ನ
ಆಲೋಚನೆಯಿಂದ ಆಗಲಿಲ್ಲವೆಂದೂ ಯೆಹೋವನೇ
ಈ ಕಾರ್ಯಗಳನ್ನು ಮಾಡುವುದಕ್ಕೆ ನನ್ನನ್ನು ಕಳುಹಿಸಿ
ದನೆಂದು ನೀವು ತಿಳಿದುಕೊಳ್ಳುವಂತೆ ನಾನು ಸಾಕ್ಷಿಯನ್ನು
ಕೊಡುವೆನು. 29ಇಲ್ಲಿರುವ ಜನರು ಸಾಯುವರು. ಆದರೆ
ಇವರ ಅಂತ್ಯವು ಎಲ್ಲರಿಗೂ ಸಂಭವಿಸುವ ಅಂತ್ಯ
ವಾಗಿದ್ದರೆ, ಯೆಹೋವನು ನನ್ನನ್ನು ಕಳುಹಿಸಲಿಲ್ಲವೆಂದು
ತಿಳಿದುಕೊಳ್ಳಬೇಕು. 30ಆದರೆ ಯೆಹೋವನು ಇವರಿ
ಗೋಸ್ಕರ ಅಪೂರ್ವ ಶಿಕ್ಷೆಯನ್ನು ಕಲ್ಪಿಸಿದರೆ ಅಂದರೆ
ಭೂಮಿಯು ಬಾಯ್ದೆರೆದು ಇವರನ್ನೂ ಇವರ ಸರ್ವ
ಸ್ವವನ್ನೂ ನುಂಗುವುದರಿಂದ ಇವರೆಲ್ಲರೂ ಸಜೀವಿಗಳಾಗಿ
ಸಮಾಧಿಯಾದರೆ, ಇವರು ನಿಜವಾಗಿಯೂ ಯೆಹೋವ
ನನ್ನು ತಿರಸ್ಕರಿಸಿದವರೆಂದು ನೀವು ತಿಳಿದುಕೊಳ್ಳಬೇಕು''
ಎಂದನು. 31ಕೂಡಲೇ, ಆ ಜನರು ನಿಂತಿದ್ದ ನೆಲವು
ಸೀಳಿತು. 32ಭೂಮಿಯೇ ಬಾಯಿತೆರೆದು ಅವರನ್ನು
ನುಂಗಿಬಿಟ್ಟಿತೊ ಎಂಬಂತೆ, ಅವರ ಕುಟುಂಬಗಳವರನ್ನು
ಕೋರಹನ ಎಲ್ಲಾ ಹಿಂಬಾಲಕರನ್ನು ಮತ್ತು ಅವರ
ಆಸ್ತಿಯೆಲ್ಲವನ್ನು ನುಂಗಿಬಿಟ್ಟಿತು. 33ಆ ಜನರೆಲ್ಲಾ ಸಜೀವ
ಸಮಾಧಿಯಾದರು. ಅವರ ಆಸ್ತಿಪಾಸ್ತಿಯೆಲ್ಲಾ ಅವ
ರೊಡನೆ ಭೂಸಮಾಧಿಯಾಯಿತು. ಆ ಬಳಿಕ ಭೂಮಿ
ಅವರ ಸಮೇತವಾಗಿ ಮುಚ್ಚಿಕೊಂಡಿತು. ಅದೇ ಅವರ
ಅಂತ್ಯವಾಯಿತು. ಅವರು ಸಮುದಾಯದಿಂದ ಶಾಶ್ವತ
ವಾಗಿ ಇಲ್ಲವಾದರು!
34ನಾಶವಾಗುತ್ತಿರುವ ಜನರ ಗೋಳಾಟವನ್ನು ಕೇಳಿದ
ಇಸ್ರೇಲ್ ಜನರು, ''ಭೂಮಿಯು ನಮ್ಮನ್ನೂ ನುಂಗಿ
ಬಿಡುತ್ತದೆ!'' ಎಂದುಕೊಂಡು ನಾನಾ ದಿಕ್ಕುಗಳಿಗೆ ಓಡಿ
ಹೋದರು. 35ಅಲ್ಲದೆ ಯೆಹೋವನಿಂದ ಬೆಂಕಿಯು
ಹೊರಟುಬಂದು ಧೂಪವನ್ನು ಅರ್ಪಿಸುತ್ತಿದ್ದ ಇನ್ನೂ
ರೈವತ್ತು ಮಂದಿಯನ್ನು ದಹಿಸಿಬಿಟ್ಟಿತು.
36ಆಗ ಯೆಹೋವನು ಮೋಶೆಗೆ, 37''ಯಾಜಕನಾದ
ಆರೋನನ ಮಗ ಎಲ್ಲಾಜಾರನು ಸುಟ್ಟುಹೋದವರ
ನಡುವೆಯಿಂದ ಧೂಪಾರತಿಗಳನ್ನು ಎತ್ತಬೇಕೆಂದು
ಆಜ್ಞಾಪಿಸು ಮತ್ತು ನೀನು ಅವುಗಳಲ್ಲಿರುವ ಕೆಂಡಗಳನ್ನು
ದೂರಕ್ಕೆ ಚೆಲ್ಲು. ಯಾಕಂದರೆ ಆ ಧೂಪಾರತಿಗಳು
ಪವಿತ್ರವಾದವುಗಳು. 38ಪ್ರಾಣವನ್ನು ಕಳೆದುಕೊಂಡ ಆ
ದೋಷಿಗಳ ಧೂಪಾರತಿಗಳು ಯೆಹೋವನ ಸನ್ನಿಧಿಗೆ
ತರಲ್ಪಟ್ಟ ಕಾರಣ ಪರಿಶುದ್ಧವಾಗಿವೆ. ಆದುದರಿಂದ
ಅವುಗಳನ್ನು ತೆಗೆದು ತಗಡುಗಳಾಗಿ ಹೊಡೆದು ಯಜ್ಞ
ವೇದಿಕೆಗೆ ಮುಚ್ಚಳವನ್ನು ಮಾಡಿಸಬೇಕು. ಇದು ಇಸ್ರೇಲ
ರೆಲ್ಲರಿಗೆ ಎಚ್ಚರಿಕೆಯಾಗಿರುವುದು'' ಎಂದು ಹೇಳಿದನು.
39ಯೆಹೋವನು ಮೋಶೆಗೆ ಕೊಟ್ಟ ಅಪ್ಪಣೆಯ ಮೇರೆಗೆ
ಯಾಜಕನಾದ ಎಲ್ಲಾಜಾರನು ಸುಟ್ಟು ಹೋದವರಿಂದ
ಮೊದಲು ತರಲ್ಪಟ್ಟಿದ್ದ ಆ ತಾಮ್ರದ ಧೂಪಾರತಿಗಳನ್ನು
ತೆಗೆದುಕೊಂಡು ತಗಡುಗಳಾಗಿ ಹೊಡಿಸಿ ಯಜ್ಞವೇದಿಕೆಗೆ
ಮುಚ್ಚಳವನ್ನು ಮಾಡಿಸಿದನು. 40ಆರೋನನ ಕುಟುಂಬ
ದವನು ಮಾತ್ರ ಯೆಹೋವನ ಎದುರಿನಲ್ಲಿ ಧೂಪವನ್ನು
ಹಾಕತಕ್ಕದ್ದು ಮತ್ತು ಬೇರೆ ಯಾರಾದರೂ ಹಾಕಿದರೆ
ಅವರು ಕೋರಹ ಮತ್ತು ಅವನ ಹಿಂಬಾಲಕರಂತೆ
ಸಾಯುವರು ಎಂಬುದನ್ನು ಇಸ್ರೇಲರಿಗೆ ಆ ಮುಚ್ಚಳವು
ನೆನಪು ಮಾಡುವ ಗುರುತಾಗಿದೆ.

### ಆರೋನನು ಜನರನ್ನು ರಕ್ಷಿಸಿದ್ದು

41ಮರುದಿನ ಇಸ್ರೇಲರೆಲ್ಲರೂ ಮೋಶೆ ಆರೋನರ
ವಿರುದ್ಧ ಗುಣಗುಟ್ಟುತ್ತಾ, ''ನೀವೇ ಯೆಹೋವನ
ಜನರನ್ನು ಸಾಯಿಸಿದಿರಿ'' ಎಂದು ಹೇಳಿದರು.
42ಮೋಶೆ ಆರೋನರನ್ನು ಎದುರಿಸಲು ಜನರು
ಒಟ್ಟಾಗಿ ಸೇರಿಬಂದಿದ್ದಾಗ, ದೇವದರ್ಶನ ಗುಡಾರದ
ಕಡೆಗೆ ತಿರುಗಿ ನೋಡಲಾಗಿ, ದೇವದರ್ಶನಗುಡಾರವನ್ನು
ಮೋಡ ಮುಚ್ಚಿಕೊಂಡಿರುವುದನ್ನೂ ಯೆಹೋವನ
ಮಹಿಮೆಯು ಪ್ರತ್ಯಕ್ಷವಾಗಿರುವುದನ್ನೂ ಅವರು
ಕಂಡರು. 43ಆಗ ಮೋಶೆ ಆರೋನರು ದೇವದರ್ಶನ
ಗುಡಾರದ ಮುಂದಕ್ಕೆ ಬಂದರು.
44ಯೆಹೋವನು ಮೋಶೆಗೆ, 45''ಆ ಜನರಿಂದ
ನೀವಿಬ್ಬರೂ ದೂರಹೋಗಿರಿ. ನಾನು ಈಗ ಅವರನ್ನು
ನಾಶಮಾಡುತ್ತೇನೆ'' ಎಂದು ಹೇಳಿದನು. ಆಗ ಮೋಶೆ
ಆರೋನರು ಅಡ್ಡಬಿದ್ದರು. 46ಮೋಶೆಯು ಆರೋನ
ನಿಗೆ, ''ಯೆಹೋವನಿಗೆ ಕೋಪವುಂಟಾಗಿ ಈ ಜನರೊಳಗೆ
ಘೋರವ್ಯಾಧಿ ಪ್ರಾರಂಭವಾಗಿದೆ. ನೀನು ಧೂಪಾರತಿ
ಯನ್ನು ತೆಗೆದುಕೊಂಡು ಅದರಲ್ಲಿ ಯಜ್ಞವೇದಿಕೆಯಿಂದ
ತೆಗೆದ ಕೆಂಡಗಳನ್ನು ಇಟ್ಟು ಧೂಪಹಾಕಿ ಸಮೂಹದವರ
ಬಳಿಗೆ ಬೇಗ ಹೋಗಿ ಅವರಿಗೋಸ್ಕರ ದೋಷಪರಿ
ಹಾರವನ್ನು ಮಾಡಬೇಕು'' ಎಂದು ಹೇಳಿದನು.
47ಮೋಶೆ ಹೇಳಿದಂತೆ ಆರೋನನು ಧೂಪಾ
ರತಿಯನ್ನು ತೆಗೆದುಕೊಂಡು ಸಮೂಹದವರ ಮಧ್ಯಕ್ಕೆ
ಓಡಿ ಹೋದಾಗ, ಘೋರವ್ಯಾಧಿ ಆ ಜನರಲ್ಲಿ ಹರಡಿ

ಕೊಳ್ಳುತ್ತಾ ಇತ್ತು. ಅವನು ಧೂಪಹಾಕಿ ಜನರಿಗೋಸ್ಕರ
ದೋಷಪರಿಹಾರವನ್ನು ಮಾಡಿದನು. 48ಅವನು ಸತ್ತ
ವರಿಗೂ ಬದುಕಿರುವವರಿಗೂ ನಡುವೆ ನಿಂತುಕೊಂಡನು,
ಆಗ ಕಾಯಿಲೆ ನಿಂತುಹೋಯಿತು. 49ಕೋರಹನೂ
ಸೇರಿದಂತೆ ಆ ಕಾಯಿಲೆಯಿಂದ ಸತ್ತವರು ಹದಿನಾಲ್ಕು
ಸಾವಿರದ ಏಳುನೂರು ಮಂದಿ. 50ಕಾಯಿಲೆಯು ನಿಂತು
ಹೋದಾಗ, ಆರೋನನು ದೇವದರ್ಶನಗುಡಾರದ
ಪ್ರವೇಶದ್ವಾರದಲ್ಲಿದ್ದ ಮೋಶೆಯ ಬಳಿಗೆ ತಿರುಗಿ
ಬಂದನು.

### ಆರೋನನು ಪ್ರಧಾನಯಾಜಕನಾಗಿದ್ದಾನೆಂದು ದೇವರು ಸಾಕ್ಷೀಕರಿಸಿದ್ದು

17 ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
2‘‘ಇಸ್ರೇಲರ ಸಂಗಡ ಮಾತಾಡಿ ಹೀಗೆ ಮಾಡ
ಬೇಕು. ಅವರ ಕುಲಗಳ ಪ್ರತಿಯೊಬ್ಬ ಪ್ರಧಾನನಿಂದ
ಒಂದೊಂದು ಕೋಲಿನ ಮೇರೆಗೆ ಹನ್ನೆರಡು ಕೋಲು
ಗಳನ್ನು ತೆಗೆದುಕೊಳ್ಳಬೇಕು. ಅವನವನ ಕೋಲಿನ ಮೇಲೆ
ಆಯಾ ಕುಲಪ್ರಧಾನನ ಹೆಸರನ್ನು ಬರೆಯಿಸಬೇಕು.
3ಲೇವಿ ಕುಲದ ಕೋಲಿನ ಮೇಲೆ ಆರೋನನ ಹೆಸರನ್ನು
ಬರೆಯಿಸಬೇಕು. 4ನೀನು ಆ ಕುಲಗಳನ್ನು ದೇವದರ್ಶನ
ಗುಡಾರದಲ್ಲಿ ಅಂದರೆ ನಾನು ನಿನ್ನನ್ನು ಸಂಧಿಸುವ
ಒಡಂಬಡಿಕೆ ಪೆಟ್ಟಿಗೆಯ ಮುಂದೆ ಇಡಬೇಕು. 5ನಾನು
ಒಬ್ಬನನ್ನು ನನ್ನ ಯಾಜಕನನ್ನಾಗಿ ಆರಿಸಿಕೊಳ್ಳುವೆನು;
ಅವನ ಕೋಲು ಚಿಗುರುವುದು, ಇಸ್ರೇಲ್ ಜನರು ನಿಮ್ಮ
ವಿರುದ್ಧವಾಗಿ ಹೇಳುತ್ತಿರುವ ದೂರುಗಳನ್ನು ನಾನು ಹೀಗೆ
ನಿಲ್ಲಿಸುವೆನು.’’
6ಅದಕ್ಕನುಸಾರವಾಗಿ ಮೋಶೆಯು ಇಸ್ರೇಲರ ಸಂಗಡ
ಮಾತಾಡಲಾಗಿ ಅವರ ಕುಲಪ್ರಧಾನರೆಲ್ಲ ಅವನಿಗೆ, ಒಬ್ಬ
ಕುಲಪ್ರಧಾನನಿಗೆ ಒಂದು ಕೋಲಿನಂತೆ, ಹನ್ನೆರಡು
ಕೋಲುಗಳನ್ನು ಕೊಟ್ಟರು. ಅವುಗಳೊಡನೆ ಆರೋನನ
ಕೋಲೂ ಇತ್ತು. 7ಮೋಶೆ ಆ ಕೋಲುಗಳನ್ನು
ಒಡಂಬಡಿಕೆಯ ಗುಡಾರದಲ್ಲಿ ಯೆಹೋವನ ಮುಂದೆ
ಇಟ್ಟನು. 8ಮರುದಿನ ಮೋಶೆ ಗುಡಾರದೊಳಗೆ ಹೋಗಿ
ನೋಡಲಾಗಿ ಲೇವಿ ಕುಲದ ಆರೋನನ ಕೋಲು ಚಿಗುರಿ
ಮೊಗ್ಗುಬಿಟ್ಟು ಹೂವರಳಿ ಬಾದಾಮಿ ಹಣ್ಣುಗಳನ್ನು
ಫಲಿಸಿತ್ತು. 9ಮೋಶೆ ಎಲ್ಲಾ ಕೋಲುಗಳನ್ನು ಯೆಹೋವನ
ಸನ್ನಿಧಿಯಿಂದ ಹೊರಗೆ ತೆಗೆದುಕೊಂಡು ಬಂದು
ಅವುಗಳನ್ನೆಲ್ಲಾ ಇಸ್ರೇಲರಿಗೆ ತೋರಿಸಿದನು. ಪ್ರಧಾನರು
ಆ ಕೋಲುಗಳನ್ನು ನೋಡಿ, ತಮ್ಮತಮ್ಮ ಕೋಲುಗಳನ್ನು
ತೆಗೆದುಕೊಂಡರು.
10ತರುವಾಯ ಯೆಹೋವನು ಮೋಶೆಗೆ,
‘‘ಆರೋನನ ಕೋಲನ್ನು ಮತ್ತೆ ಒಡಂಬಡಿಕೆಯ
ಪೆಟ್ಟಿಗೆಯ ಮುಂದಿಡು. ದಂಗೆಕೋರರಿಗೆ ಅದು ಎಚ್ಚರಿಕೆ
ಯಾಗಿ ಅಲ್ಲೇ ಇರಬೇಕು, ಇವರು ಇನ್ನು ಮುಂದೆ ನನಗೆ
ವಿರೋಧವಾಗಿ ಗುಣಗುಟ್ಟಿ ಮರಣಕ್ಕೆ ಗುರಿಯಾಗದಂತೆ
ನೀನು ಹೀಗೆ ಮಾಡಬೇಕು’’ ಎಂದು ಆಜ್ಞಾಪಿಸಿದನು.
11ಆದ್ದರಿಂದ ಯೆಹೋವನ ಅಪ್ಪಣೆಯ ಪ್ರಕಾರವೇ
ಮೋಶೆ ಮಾಡಿದನು.
12ಇಸ್ರೇಲರು ಮೋಶೆಗೆ, ‘‘ನಾವೆಲ್ಲರು ಪ್ರಾಣ ಕಳೆದು
ಕೊಂಡು ನಾಶವಾಗುತ್ತೇವಲ್ಲಾ, ನಮ್ಮಲ್ಲಿ ಯಾರೂ
ಉಳಿಯುವುದಿಲ್ಲ. 13ಯೆಹೋವನ ಗುಡಾರದ ಹತ್ತಿರಕ್ಕೆ
ಬಂದವರೆಲ್ಲರೂ ಸಾಯುತ್ತಾರಷ್ಟೆ. ನಾವೆಲ್ಲರೂ
ಹಾಗೆಯೇ ಸಾಯುತ್ತೇವೋ?’’ ಎಂದು ಹೇಳಿದರು.

### ಯಾಜಕರ ಮತ್ತು ಲೇವಿಯರ ಕಾರ್ಯಗಳು

18 ಯೆಹೋವನು ಆರೋನನಿಗೆ, ‘‘ಪವಿತ್ರ
ವಸ್ತುಗಳ ವಿಷಯದಲ್ಲಿ ಏನಾದರೂ ಹೊಲಸು
ತನ ನಡೆದರೆ, ನೀನೂ ನಿನ್ನ ಕುಟುಂಬದವರೂ ಅದರ
ಅಪರಾಧದ ಫಲವನ್ನು ಅನುಭವಿಸಬೇಕು. ಯಾಜಕತ್ವದ
ವಿಷಯದಲ್ಲಿ ಏನಾದರೂ ಹೊಲಸುತನ ನಡೆದರೆ, ನೀನು
ಮತ್ತು ನಿನ್ನ ಗಂಡುಮಕ್ಕಳು ಮಾತ್ರ ಅದರ ಅಪರಾಧದ
ಫಲವನ್ನು ಅನುಭವಿಸಬೇಕು. 2ನಿನ್ನ ತಂದೆಯ
ಕುಲದವರೂ ನಿನ್ನ ರಕ್ತಸಂಬಂಧಿಗಳೂ ಆಗಿರುವ ಲೇವಿ
ಕುಲದವರನ್ನು ನಿನ್ನೊಡನೆ ಸೇರಿಸಿಕೊ; ನೀನು ಮತ್ತು
ನಿನ್ನ ಗಂಡು ಮಕ್ಕಳು ಒಡಂಬಡಿಕೆಯ ಮುಂದೆ ಇರುವಾಗ
ಅವರು ನಿನ್ನೊಂದಿಗಿದ್ದು ನಿನಗೆ ಸಹಾಯ ಮಾಡುವರು.
3ಆ ಲೇವಿಯರು ನಿನಗೆ ಕಾವಲುಗಾರರಾಗಿರಬೇಕು.
ಅಂದರೆ ಇಡೀ ಗುಡಾರವನ್ನು ಕಾಯಬೇಕು. ಆದರೆ
ಅವರು ಪವಿತ್ರವಾದ ಪಾತ್ರೆಯನ್ನಾಗಲೀ ಯಜ್ಞವೇದಿ
ಕೆಯನ್ನಾಗಲೀ ಮುಟ್ಟಬಾರದು; ಮುಟ್ಟಿದರೆ ಅವರೂ
ಸಾಯುವರು ಮತ್ತು ನೀವೂ ಸಾಯುವಿರಿ. 4ಅವರು
ದೇವದರ್ಶನ ಗುಡಾರವನ್ನು ಕಾಯಬೇಕು ಮತ್ತು
ಗುಡಾರಕ್ಕೆ ಸಂಬಂಧಿಸಿದ ಭಾರವಾದ ಕೆಲಸವನ್ನು ಮಾಡ
ಬೇಕು. ಬೇರೆ ಯಾರೂ ನಿನ್ನೊಂದಿಗೆ ಭಾಗಿಗಳಾಗಿರ
ಬಾರದು.
5‘‘ನಾನು ಮತ್ತೆ ಕೋಪಗೊಂಡು ಇಸ್ರೇಲರನ್ನು
ದಂಡಿಸದಂತೆ ನೀವು ಪವಿತ್ರ ಸ್ಥಳವನ್ನು ಮತ್ತು ಯಜ್ಞ
ವೇದಿಕೆಯನ್ನು ಕಾಯಬೇಕು. 6ಎಲ್ಲಾ ಇಸ್ರೇಲರಿಂದ
ನಾನೇ ಲೇವಿಯರನ್ನು ಆರಿಸಿಕೊಂಡಿದ್ದೇನೆ. ಅವರು
ನಿನಗೆ ಕೊಡಲ್ಪಟ್ಟ ಬಹುಮಾನವಾಗಿದ್ದಾರೆ. ದೇವ
ದರ್ಶನ ಗುಡಾರಕ್ಕೆ ಸಂಬಂಧಿಸಿದ ಭಾರವಾದ ಕೆಲಸವನ್ನು
ಮಾಡಲು ಅವರು ಪ್ರಭುವಿಗೆ ಪ್ರತಿಷ್ಠಿತರಾಗಿದ್ದಾರೆ.
7ಆದರೆ ಆರೋನನೇ, ನೀನೂ ನಿನ್ನ ಪುತ್ರರೂ ನಿಮ್ಮ
ಯಾಜಕತ್ವವನ್ನು ಕಾಪಾಡಿಕೊಳ್ಳಬೇಕು. ಅಯೋಗ್ಯನಾದ

ಯಾವನೂ ಯಜ್ಞವೇದಿಕೆಯ ಬಳಿ ಕೆಲಸ ಮಾಡುವುದ ಕ್ಕಾಗಲೀ ತೆರೆಯ ಆಚೆಯಿರುವ ಮಹಾಪವಿತ್ರ ಸ್ಥಳಕ್ಕೆ ಪ್ರವೇಶಿಸುವುದಕ್ಕಾಗಲೀ ನೀವು ಬಿಡಕೂಡದು. ನೀವು ಸಹ ಕೆಲಸ ಮಾಡಬೇಕು. ನಾನು ನಿಮಗೆ ಅಮೂಲ್ಯವಾದ ಯಾಜಕತ್ವವನ್ನು ಕೊಟ್ಟಿದ್ದೇನೆ. ಆದರೆ ಅಯೋಗ್ಯನಾದ ಯಾವನಾದರೂ ಯಾಜಕತ್ವದ ಈ ಕರ್ತವ್ಯಗಳನ್ನು ಮಾಡಲು ಪ್ರಯತ್ನಿಸಿದರೆ ಅವನು ಕೊಲ್ಲಲ್ಪಡುವನು.''

[8]ಆಗ ಯೆಹೋವನು ಆರೋನನಿಗೆ ಹೀಗೆ ಹೇಳಿದನು: ''ನನಗೆ ಬರಬೇಕಾಗಿರುವ ಕೊಡುಗೆಗಳನ್ನು ಮತ್ತು ಇಸ್ರೇಲರ ಪವಿತ್ರವಾದ ಎಲ್ಲಾ ಕಾಣಿಕೆಗಳನ್ನು ಕಾಯುವ ಜವಾಬ್ದಾರಿಕೆಯನ್ನು ನಾನೇ ನಿನಗೆ ವಹಿಸಿದ್ದೇನೆ. ಅವು ಗಳನ್ನು ನಿನಗೂ ನಿನ್ನ ಸಂತತಿಯವರಿಗೂ ಪಾಲಾಗಿ ಕೊಟ್ಟಿದ್ದೇನೆ. ಅವು ಯಾವಾಗಲೂ ನಿಮ್ಮವೇ. [9]ಯಜ್ಞ ವೇದಿಕೆಯ ಬೆಂಕಿಯಲ್ಲಿ ಹೋಮಮಾಡದೆ ಉಳಿಸಿರುವ ಮಹಾಪರಿಶುದ್ಧ ಪದಾರ್ಥಗಳಲ್ಲಿ ನಿಮಗೆ ದೊರೆಯ ಬೇಕಾದವುಗಳು ಯಾವುವೆಂದರೆ: ಅವರು ನನಗೆ ಕೊಡ ಲಿರುವ ಯಜ್ಞಗಳು, ಧಾನ್ಯಾರ್ಪಣೆಗಳು, ಪಾಪಪರಿ ಹಾರಕ ಯಜ್ಞಗಳು, ದೋಷಪರಿಹಾರಕ ಯಜ್ಞಗಳು ಮತ್ತ ಅಂತಹ ಪ್ರತಿಯೊಂದು ಅರ್ಪಣೆಗಳು ನಿನಗೂ ನಿನ್ನ ಗಂಡುಮಕ್ಕಳಿಗೂ ಮಹಾಪವಿತ್ರವಾಗಿವೆ. [10]ನೀವು ಮಹಾ ಪವಿತ್ರವಾದ ಸ್ಥಳದಲ್ಲಿ ಅದನ್ನು ಊಟಮಾಡಬೇಕು. ನಿಮ್ಮಲ್ಲಿರುವ ಪುರುಷರೆಲ್ಲರೂ ಅವುಗಳನ್ನು ತಿನ್ನ ಬಹುದು; ಅವು ಮಹಾಪವಿತ್ರವಾದವುಗಳೆಂದು ನೀವು ಪರಿಗಣಿಸಬೇಕು.

[11]''ಅದಲ್ಲದೆ, ಅವರ ಪ್ರತಿಷ್ಠಿತಾ ಕಾಣಿಕೆಗಳು ಮತ್ತು ಇಸ್ರೇಲರ ನಿವಾಳಿಸಲ್ಪಟ್ಟ ಕಾಣಿಕೆಗಳು ನಿಮಗೆ ಸೇರಿವೆ. ಅವುಗಳನ್ನು ನಾನು ನಿನಗೂ ನಿನ್ನ ಗಂಡುಮಕ್ಕಳಿಗೂ ಹೆಣ್ಣುಮಕ್ಕಳಿಗೂ ಶಾಶ್ವತವಾದ ಪಾಲಾಗಿ ಕೊಡುವೆನು.

[12]''ಇದಲ್ಲದೆ, ಇಸ್ರೇಲರು ಯೆಹೋವನಿಗೆ ಸಮರ್ಪಿ ಸುವ ಪ್ರಥಮ ಫಲದ ಪದಾರ್ಥಗಳಲ್ಲಿ ಅಂದರೆ ಉತ್ತಮವಾದ ಎಣ್ಣೆ, ಹೊಸ ದ್ರಾಕ್ಷಾರಸ, ಧಾನ್ಯ ಇವು ಗಳನ್ನೆಲ್ಲ ನಾನು ನಿಮಗೆ ಕೊಡುತ್ತೇನೆ. [13]ಅವರು ತಮ್ಮ ದೇಶದ ಎಲ್ಲಾ ಬೆಳೆಗಳಲ್ಲಿ ಯೆಹೋವನಿಗೋಸ್ಕರ ತರುವ ಪ್ರಥಮ ಫಲವು ನಿಮಗೆ ಸಲ್ಲಬೇಕು. ನಿಮ್ಮ ಕುಟುಂಬ ಗಳಲ್ಲಿ ಶುದ್ಧರಾಗಿರುವವರೆಲ್ಲರೂ ಅವುಗಳನ್ನು ಊಟ ಮಾಡಬಹುದು.

[14]''ಇಸ್ರೇಲರು ಯೆಹೋವನಿಗೆ ಹರಕೆಹೊತ್ತು ಕೊಂಡು ಕೊಡುವ ಪ್ರತಿಯೊಂದೂ ನಿಮ್ಮದಾಗಿವೆ.

[15]''ಮನುಷ್ಯರಲ್ಲಾಗಲೀ ಪ್ರಾಣಿಗಳಲ್ಲಾಗಲೀ ಅವರು ಯೆಹೋವನಿಗೆ ಸಮರ್ಪಿಸುವ ಚೊಚ್ಚಲಾದದ್ದು ನಿನಗೆ ಸಲ್ಲಬೇಕು. ಆದರೆ ಮನುಷ್ಯರ ಚೊಚ್ಚಲು ಮಕ್ಕಳಿಗೂ ಅಪವಿತ್ರವಾದ ಪಶುಗಳ ಮರಿಗಳಿಗೂ ಬದಲಾಗಿ ನೀನು ಈಡನ್ನು ತೆಗೆದುಕೊಳ್ಳಬೇಕು. [16]ಒಂದು ತಿಂಗಳಿನ ಪ್ರಾಯಕ್ಕೆ ಬಂದಿರುವ ಎಲ್ಲರಿಂದಲೂ ನಿಗಧಿಪಡಿಸಿದ ಐದು ಶೆಕೆಲ್‌ಗಳನ್ನು ಈಡಾಗಿ ತೆಗೆದುಕೊಳ್ಳಬೇಕು.

[17]''ಆದರೆ ಚೊಚ್ಚಲು ಆಕಳಿಗಾಗಲೀ ಕುರಿಗಾಗಲೀ ಆಡಿಗಾಗಲೀ ಈಡನ್ನು ಕೊಡಕೂಡದು. ಆ ಪಶುಗಳು ಪವಿತ್ರವಾಗಿವೆ. ಅವುಗಳ ರಕ್ತವನ್ನು ವೇದಿಕೆಯ ಮೇಲೆ ಚೆಲ್ಲಿ ಅವುಗಳ ಕೊಬ್ಬನ್ನು ಯೆಹೋವನಿಗೆ ಮೆಚ್ಚಿಗೆಕರ ವಾದ ಸುಗಂಧ ವಾಸನೆಯ ತ್ಯಾಗಮಯವಾದ ಕಾಣಿಕೆಯನ್ನಾಗಿ ಹೋಮಮಾಡಿರಿ. [18]ಆದರೆ ಅವುಗಳ ಮಾಂಸದಲ್ಲಿ ನಿವಾಳಿಸಲ್ಪಡುವ ಕಾಣಿಕೆಯಂತೆ ಎದೆಯ ಭಾಗ ಮತ್ತು ಬಲತೊಡೆ ನಿಮ್ಮದಾಗಿವೆ. [19]ಇಸ್ರೇಲರು ಯೆಹೋವನಿಗೋಸ್ಕರ ಪ್ರತ್ಯೇಕಿಸಿ ಸಮರ್ಪಿಸುವ ಪವಿತ್ರ ವಸ್ತುಗಳೆಲ್ಲವನ್ನು ನಿನಗೂ ನಿನ್ನ ಸಂತತಿಯವರಾದ ಸ್ತ್ರೀ ಪುರುಷರೆಲ್ಲರಿಗೂ ಶಾಶ್ವತವಾದ ಪಾಲಾಗಿ ಅನು ಗ್ರಹಿಸಿ ದ್ದೇನೆ. ಇದು ಯೆಹೋವನ ಸನ್ನಿಧಿಯಲ್ಲಿ ನಿನ್ನೊಡ ನೆಯೂ ನಿನ್ನ ನಂತರದ ಸಂತತಿಯವರೊಡನೆಯೂ ಮಾಡಿಕೊಂಡ ಶಾಶ್ವತವಾದ ಒಡಂಬಡಿಕೆ.''

[20]ಇದಲ್ಲದೆ ಯೆಹೋವನು ಆರೋನನಿಗೆ, ''ಅವರ ಭೂಮಿಯಲ್ಲಿ ನಿನಗೆ ಯಾವ ಪಾಲೂ ದೊರೆಯು ವುದಿಲ್ಲ. ಅವರ ಮಧ್ಯದಲ್ಲಿ ನೀನು ಭೂಮಿಯ ಯಾವ ಭಾಗವನ್ನೂ ಹೊಂದಿರುವುದಿಲ್ಲ. ಇಸ್ರೇಲರ ಮಧ್ಯದಲ್ಲಿ ಯೆಹೋವನಾದ ನಾನೇ ನಿಮ್ಮ ಪಾಲೂ ಭಾಗವೂ ಆಗಿದ್ದೇನೆ.

[21]''ಲೇವಿಯರು ದೇವದರ್ಶನಗುಡಾರಕ್ಕೋಸ್ಕರ ಮಾಡುವ ಭಾರವಾದ ಕೆಲಸಕ್ಕೆ ಪ್ರತಿಫಲವಾಗಿ ಪ್ರತಿ ಯೊಬ್ಬ ಇಸ್ರೇಲನ ದಶಾಂಶವನ್ನು ನಾನು ಲೇವಿಯರಿಗೆ ಅವರ ಪಾಲಾಗಿ ಕೊಡುತ್ತಿದ್ದೇನೆ. [22]ಈಗಿನಿಂದ ಇಸ್ರೇಲರು ದೇವದರ್ಶನಗುಡಾರದೊಳಗೆ ಅತಿಕ್ರಮಿಸಿ ಬರುವುದಿಲ್ಲ. ಬಂದರೆ ತಮ್ಮ ಮೇಲೆ ದಂಡನೆಯನ್ನು ಬರಮಾಡಿಕೊಂಡು ಸಾಯುವರು. [23]ದೇವದರ್ಶನ ಗುಡಾರಕ್ಕೋಸ್ಕರ ಲೇವಿಯರು ಮಾತ್ರ ಕೆಲಸ ಮಾಡ ಬೇಕು. ದೇವದರ್ಶನಗುಡಾರದಲ್ಲಿ ಏನಾದರೂ ಅತಿ ಕ್ರಮಣ ನಡೆದರೆ ಇಸ್ರೇಲರ ದಂಡನೆಯನ್ನು ಅವರೇ ಪಡೆಯುವರು. ಈಗಿನಿಂದ ಇದೇ ಶಾಶ್ವತ ಕಟ್ಟಳೆ. ಇತರ ಇಸ್ರೇಲರಿಗೆ ನಾನು ವಾಗ್ದಾನ ಮಾಡಿದ ಭೂಮಿಯಲ್ಲಿ ಯಾವ ಪಾಲೂ ದೊರೆಯುವುದಿಲ್ಲ. [24]ಇಸ್ರೇಲರು ಪ್ರತ್ಯೇಕಿಸಿ ಯೆಹೋವನಿಗೆ ಸಮರ್ಪಿಸುವ ಹತ್ತನೆಯ ಪಾಲನ್ನು ಲೇವಿಯರಿಗೆ ಸ್ವಾಸ್ಥ್ಯವಾಗಿ ಕೊಟ್ಟಿದ್ದೇನೆ. ಇವರಿಗೆ ಇಸ್ರೇಲರೊಂದಿಗೆ ಪಾಲು ದೊರೆಯುವುದಿಲ್ಲ ವೆಂದು ನಾನು ಲೇವಿಯರ ಕುರಿತು ಹೇಳಿದ ಮಾತಿಗೆ ಇದೇ ಕಾರಣ'' ಎಂದು ಹೇಳಿದನು. [25]ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ: [26]''ನೀನು ಲೇವಿಯರಿಗೆ

ಇದನ್ನು ತಿಳಿಸಬೇಕು; ಇಸ್ರೇಲರು ತಮ್ಮ ಆದಾಯದಲ್ಲಿ ಕೊಡುವ ದಶಾಂಶವನ್ನು ನಿಮ್ಮ ಪಾಲೆಂದು ನಾನು ನಿಗಧಿ ಪಡಿಸಿದ್ದೇನೆ. ಇಸ್ರೇಲರು ದಶಾಂಶ ಕೊಟ್ಟಾಗ ನೀವು ಆ ದಶಾಂಶದಲ್ಲಿ ಹತ್ತನೆಯ ಒಂದು ಭಾಗವನ್ನು ಯೆಹೋವನಿಗೆ ಸಲ್ಲಿಸಬೇಕು. 27 ನೀವು ಹೀಗೆ ಸಮರ್ಪಿಸಿದ ಹತ್ತನೆಯ ಪಾಲು ಕಣದಲ್ಲಿನ ದವಸವನ್ನು, ದ್ರಾಕ್ಷಿ ಆಲೆಯಿಂದ ರಸವನ್ನು ಕೊಟ್ಟಂತೆ ನಿಮ್ಮ ಲೆಕ್ಕದಲ್ಲಿ ಎಣಿಸಲ್ಪಡುವುದು. 28 ಇಸ್ರೇಲರಿಂದ ನಿಮಗೆ ಸಲ್ಲುವ ಹತ್ತನೆಯ ಪಾಲಿನಲ್ಲಿ ನೀವು ಯೆಹೋವನಿಗೋಸ್ಕರ ಹತ್ತನೆಯ ಭಾಗವನ್ನು ಪ್ರತ್ಯೇಕಿಸಿ ಯಾಜಕನಾದ ಆರೋನನಿಗೆ ಒಪ್ಪಿಸಬೇಕು. 29 ಇಸ್ರೇಲರು ನಿಮಗೆ ಕೊಡುವ ಸಕಲ ಪದಾರ್ಥಗಳಿಂದ ನೀವು ಯೆಹೋವನಿಗೆ ಕೊಡಬೇಕಾಗಿರುವ ಪಾಲನ್ನು ಪ್ರತ್ಯೇಕಿಸಿಡಬೇಕು. ಪ್ರತಿಷ್ಠಿಸಲ್ಪಟ್ಟಿರುವ ಉತ್ತಮ ಭಾಗವನ್ನು ನೀವು ಪ್ರತ್ಯೇಕವಾಗಿಡಬೇಕು.

30 ‘‘ಮೋಶೆಯೇ, ಲೇವಿಯರಿಗೆ ಹೀಗೆ ಹೇಳು: ಆ ಕಾಣಿಕೆಗಳಲ್ಲಿ ಉತ್ತಮವಾದ ಭಾಗವನ್ನು ನೀವು ಯೆಹೋವನಿಗೆ ಕೊಡುವಾಗ, ಲೇವಿಯರಾದ ನಿಮಗೆ ಅದು ಕಣದ ಉತ್ಪಾದನೆಯಂತೆಯೂ ದ್ರಾಕ್ಷಿ ಆಲೆಯ ಉತ್ಪಾದನೆಯಂತೆಯೂ ಪರಿಗಣಿಸಲ್ಪಡುವುದು. 31 ಉಳಿದದ್ದನ್ನು ನೀವು ಮತ್ತು ನಿಮ್ಮ ಕುಟುಂಬದವರು ಎಲ್ಲಿ ಬೇಕಾದರೂ ತಿನ್ನಬಹುದು. ನೀವು ದೇವದರ್ಶನ ಗುಡಾರದಲ್ಲಿ ಮಾಡುವ ಕೆಲಸಕ್ಕೆ ಇದು ನಿಮಗೆ ಪ್ರತಿಫಲವಾಗಿದೆ. 32 ನೀವು ಯಾವಾಗಲೂ ಉತ್ತಮ ಭಾಗವನ್ನು ಯೆಹೋವನಿಗೆ ಕೊಟ್ಟರೆ, ಸಂಕಟದ ದಂಡನೆಯಿಂದ ತಪ್ಪಿಸಿಕೊಳ್ಳುವಿರಿ. ಇಸ್ರೇಲರು ಕೊಟ್ಟ ಪವಿತ್ರವಾದ ಕಾಣಿಕೆಗಳಿಗೆ ನೀವು ಅಪಮಾನ ಮಾಡುವುದಿಲ್ಲ ಮತ್ತು ನೀವು ಸಾಯುವುದಿಲ್ಲ.’’

## ಕೆಂಪು ಹಸುವಿನ ಬೂದಿ

19 ಯೆಹೋವನು ಮೋಶೆ ಮತ್ತು ಆರೋನರೊಡನೆ ಮಾತಾಡಿ ಹೀಗಂದನು: 2 ‘‘ಯೆಹೋವನು ಆಜ್ಞಾಪಿಸಿದ ಸಂಪ್ರದಾಯದ ನಿಯಮವಿದು. ಯಾವ ದೋಷವಿಲ್ಲದ ಕೆಂಪು ಹಸುವನ್ನು ನಿನಗೆ ತಂದು ಕೊಡುವಂತೆ ಇಸ್ರೇಲರಿಗೆ ಹೇಳು. ಆ ಹಸುವಿನಲ್ಲಿ ಯಾವ ಗಾಯಗಳಿರಬಾರದು ಮತ್ತು ಆ ಹಸುವು ಎಂದಿಗೂ ನೊಗವನ್ನು ಹೊತ್ತಿರಬಾರದು. 3 ಅದನ್ನು ಯಾಜಕನಾದ ಎಲ್ಲಾಜಾರನಿಗೆ ಒಪ್ಪಿಸಿರಿ. ಅವನು ಅದನ್ನು ಪಾಳೆಯದ ಹೊರಗೆ ಹೊಡಿಸಿಕೊಂಡು ಹೋಗಿ ತನಗೆದುರಾಗಿಯೇ ಒಬ್ಬನ ಕೈಯಿಂದ ವಧೆ ಮಾಡಿಸಬೇಕು. 4 ಬಳಿಕ ಅವನು ಅದರ ರಕ್ತದಲ್ಲಿ ಸ್ವಲ್ಪವನ್ನು ಬೆರಳಿನಿಂದ ದೇವದರ್ಶನ ಗುಡಾರದ ಮುಂಭಾಗದ ಕಡೆಗೆ ಏಳು ಸಾರಿ ಚಿಮಿಕಿಸ ಬೇಕು. 5 ಬಳಿಕ ಅವನು ಆ ಹಸುವನ್ನು ಚರ್ಮ, ಮಾಂಸ, ರಕ್ತ ಮತ್ತು ಕಲ್ಮಶಗಳ ಸಹಿತವಾಗಿ ತನ್ನ ಎದುರಿನಲ್ಲಿಯೇ ಸುಡಿಸಬೇಕು. 6 ಯಾಜಕನು ದೇವದಾರು ಮರದ ಕಟ್ಟಿಗೆಯನ್ನೂ ಹಿಸ್ಸೋಪ್ ಗಿಡದ ಎಳೆಕೊಂಬೆಯನ್ನೂ ಕೆಂಪು ದಾರವನ್ನೂ ತೆಗೆದುಕೊಂಡು ಉರಿಯುತ್ತಿರುವ ಆ ಹಸುವಿನ ಮೇಲೆ ಎಸೆಯಬೇಕು. 7 ಆ ಯಾಜಕನು ತನ್ನ ಬಟ್ಟೆಗಳನ್ನು ಒಗೆದುಕೊಂಡು ಸ್ನಾನ ಮಾಡಿದ ನಂತರ ಪಾಳೆಯ ದೊಳಗೆ ಬರಬಹುದು. ಆದರೆ ಆ ದಿನದ ಸಾಯಂಕಾಲದವರೆಗೆ ಅಶುದ್ಧನಾಗಿರಬೇಕು. 8 ಆ ಹಸುವನ್ನು ಸುಟ್ಟು ಹಾಕಿದವನು ತನ್ನ ಬಟ್ಟೆಗಳನ್ನು ಒಗೆದುಕೊಂಡು, ಸ್ನಾನ ಮಾಡಿಕೊಳ್ಳಬೇಕು; ಅವನು ಸಾಯಂಕಾಲದವರೆಗೆ ಅಶುದ್ಧನಾಗಿರುವನು.

9 ‘‘ಆಗ ಶುದ್ಧನಾದವನೊಬ್ಬನು ಹಸುವಿನ ಬೂದಿಯನ್ನು ಕೂಡಿಸಿ ಪಾಳೆಯದ ಹೊರಗೆ ಶುದ್ಧವಾದ ಸ್ಥಳದಲ್ಲಿ ಇಡಬೇಕು. ಇಸ್ರೇಲರ ಶುದ್ಧೀಕರಣದ ನೀರನ್ನು ಸಿದ್ಧಪಡಿಸುವುದಕ್ಕಾಗಿ ಆ ಬೂದಿಯನ್ನು ಉಪಯೋಗಿಸಬೇಕು. ಅದು ದೋಷಪರಿಹಾರಕವಾದದ್ದು.

10 ‘‘ಆ ಬೂದಿಯನ್ನು ಕೂಡಿಸಿದವನು ತನ್ನ ಬಟ್ಟೆಗಳನ್ನು ಒಗೆದುಕೊಂಡು ಸಾಯಂಕಾಲದವರೆಗೆ ಅಶುದ್ಧನಾಗಿರಬೇಕು.

‘‘ಇದು ಇಸ್ರೇಲರಿಗೂ ಅವರ ಮಧ್ಯದಲ್ಲಿ ಇಳಿದುಕೊಂಡಿರುವ ಪರದೇಶಸ್ಥರಿಗೂ ಶಾಶ್ವತ ನಿಯಮ. 11 ಯಾವನಾದರೂ ಮನುಷ್ಯ ಶವವನ್ನು ಮುಟ್ಟಿದರೆ, ಏಳು ದಿನಗಳವರೆಗೆ ಅಶುದ್ಧನಾಗಿರುವನು. 12 ಅವನು ಶುದ್ಧೀಕರಣದ ನೀರಿನಿಂದ ಮೂರನೆಯ ದಿನದಲ್ಲಿ ಮತ್ತು ತಿರುಗಿ ಏಳನೆಯ ದಿನದಲ್ಲಿ ತನ್ನನ್ನು ಶುದ್ಧೀಕರಿಸಿಕೊಳ್ಳಬೇಕು. ಆಗ ಅವನು ಶುದ್ಧನಾಗಿರುವನು. 13 ಒಬ್ಬನು ಮನುಷ್ಯ ಶವವನ್ನು ಮುಟ್ಟಿ ತನ್ನನ್ನು ಶುದ್ಧೀ ಕರಿಸಿಕೊಳ್ಳದೆ ಹೋದರೆ ಅವನು ಯೆಹೋವನ ಪವಿತ್ರ ಗುಡಾರವನ್ನು ಅಶುದ್ಧಮಾಡುತ್ತಾನೆ. ಆದ್ದರಿಂದ ಆ ವ್ಯಕ್ತಿಯನ್ನು ಇಸ್ರೇಲರಿಂದ ಬಹಿಷ್ಕರಿಸಬೇಕು. ಶುದ್ಧೀಕರಣದ ವಿಶೇಷ ನೀರು ಅವನ ಮೇಲೆ ಚಿಮಕಿಸಲ್ಪಡದ ಕಾರಣ ಅವನು ಅಶುದ್ಧನಾಗಿಯೇ ಇರುವನು. ಅವನ ಅಶುದ್ಧತ್ವ ಅವನಲ್ಲಿ ನೆಲೆಸುವುದು. ಅವನು ಅಶುದ್ಧನಾಗಿಯೇ ಇರುವನು.

14 ‘‘ಯಾವನಾದರೂ ಗುಡಾರದಲ್ಲಿ ಸತ್ತರೆ ಅನುಸರಿಸಬೇಕಾದ ನಿಯಮವಿದು: ಒಬ್ಬನು ಗುಡಾರದಲ್ಲಿ ಸತ್ತರೆ, ಆ ಗುಡಾರವನ್ನು ಪ್ರವೇಶಿಸುವ ಪ್ರತಿಯೊಬ್ಬನು ಮತ್ತು ಆ ಗುಡಾರದಲ್ಲಿರುವ ಪ್ರತಿಯೊಬ್ಬನು ಅಶುದ್ಧನಾಗುವನು. ಅವರು ಏಳು ದಿನಗಳವರೆಗೆ ಅಶುದ್ಧರಾಗಿರುವರು. 15 ಮತ್ತು ಮುಚ್ಚಳವಿಲ್ಲದಿರುವ ಪ್ರತಿಯೊಂದು ಪಾತ್ರೆಯೂ ಅಶುದ್ಧವಾಗಿರುವುದು. 16 ಹೊರಗೆ ಹೋಗಿರುವವನು ಯುದ್ಧದಲ್ಲಿ ಸತ್ತವನ ಶವವನ್ನಾಗಲೀ ಸಹಜವಾಗಿ ಸತ್ತವನ ಶವವನ್ನಾಗಲೀ ಮನುಷ್ಯನ ಮೂಳೆಯ

ನ್ನಾಗಲೀ ಅಥವಾ ಸಮಾಧಿಯನ್ನಾಗಲೀ ಮುಟ್ಟಿದರೆ
ಅವನು ಏಳು ದಿನಗಳವರೆಗೆ ಅಶುದ್ಧನಾಗಿರವನು.
17''ಆದ್ದರಿಂದ ಅಶುದ್ಧ ವ್ಯಕ್ತಿಯನ್ನು ಶುದ್ಧೀಕರಿಸು
ವುದಕ್ಕಾಗಿ ಶುದ್ಧೀಕರಣ ಯಜ್ಞದ ಬೂದಿಯಲ್ಲಿ ಸ್ವಲ್ಪ
ವನ್ನು ಪಾತ್ರೆಯಲ್ಲಿ ತೆಗೆದುಕೊಂಡು ಹರಿಯುವ ನೀರನ್ನು
ಅದರ ಮೇಲೆ ಸುರಿಯಬೇಕು. 18ಆಗ ಶುದ್ಧನಾಗಿರುವ
ಒಬ್ಬನು ಹಿಸ್ಸೋಪ್‌ಗಿಡದ ಎಳೆಕೊಂಬೆಯನ್ನು ಆ
ನೀರಿನಲ್ಲಿ ಅದ್ದಿ ಗುಡಾರದ ಮೇಲೆಯೂ ಪಾತ್ರೆಗಳ
ಮೇಲೆಯೂ ಮತ್ತು ಅದರೊಳಗಿದ್ದ ವ್ಯಕ್ತಿಗಳ
ಮೇಲೆಯೂ ಚಿಮಿಕಿಸಬೇಕು. ಸತ್ತವನ ದೇಹವನ್ನು
ಮುಟ್ಟಿದವನಿಗೂ ಯುದ್ಧದಲ್ಲಿ ಕೊಲ್ಲಲ್ಪಟ್ಟವನ ದೇಹ
ವನ್ನು ಮುಟ್ಟಿದವನಿಗೂ ಸತ್ತವನ ಮೂಳೆಗಳನ್ನು ಮುಟ್ಟಿದ
ವನಿಗೂ ನೀವು ಹೀಗೆ ಮಾಡಲೇಬೇಕು.
19''ಶುದ್ಧನಾಗಿರುವವನು ಮೂರನೆಯ ದಿನದ
ಲ್ಲಿಯೂ ಏಳನೆಯ ದಿನದಲ್ಲಿಯೂ ಅಶುದ್ಧನಾದವನ
ಮೇಲೆ ಚಿಮಿಕಿಸಬೇಕು. ಹೀಗೆ ಅವನು ಏಳನೆಯ ದಿನ
ದಲ್ಲಿ ಶುದ್ಧನಾಗುವನು. ಬಳಿಕ ಅಶುದ್ದನಾದವನು ತನ್ನ
ಬಟ್ಟೆಯನ್ನು ತೊಳೆದುಕೊಳ್ಳಬೇಕು.
20ಅಶುದ್ಧನಾಗಿದ್ದರೂ ತನ್ನನ್ನು ಶುದ್ಧ ಮಾಡಿಕೊಳ್ಳ
ದವನು ಯೆಹೋವನ ಗುಡಾರವನ್ನು ಅಶುದ್ಧ ಮಾಡಿದವ
ನಾಗಿರುತ್ತಾನೆ. ಆದ್ದರಿಂದ ಅವನನ್ನು ಇಸ್ರೇಲರಿಂದ
ಬಹಿಷ್ಕರಿಸಬೇಕು. ಶುದ್ಧಪಡಿಸಿಕೊಳ್ಳುವ ನೀರನ್ನು ಚಿಮಿ
ಕಿಸಿಕೊಳ್ಳದೆ ಹೋದದರಿಂದ ಅವನು ಅಶುದ್ಧನೇ.
21ಇದು ನಿಮಗೆ ಶಾಶ್ವತನಿಯಮ. ಶುದ್ಧಪಡಿಸುವ ಆ
ನೀರನ್ನು ಚಿಮಿಕಿಸಿದವನು ತನ್ನ ಬಟ್ಟೆಗಳನ್ನು ಒಗೆದು
ಕೊಳ್ಳಬೇಕು; ಮತ್ತು ಆ ನೀರನ್ನು ಯಾವನಾದರೂ
ಮುಟ್ಟಿದರೆ, ಅವನು ಆ ದಿನದ ಸಾಯಂಕಾಲದವರೆಗೆ
ಅಶುದ್ಧನಾಗಿರುವನು. 22ಅಶುದ್ಧನಾದವನು ಮುಟ್ಟು
ವುದೆಲ್ಲಾ ಅಶುದ್ಧವಾಗುತ್ತದೆ. ಅಲ್ಲದೆ ಅವನನ್ನು ಮಟ್ಟು
ವವನು ಆ ದಿನದ ಸಾಯಂಕಾಲದವರೆಗೆ ಅಶುದ್ಧ
ನಾಗಿರುವನು.''

## ಮಿರ್ಯಾಮಳ ಮರಣ

20 ಮೊದಲನೆಯ ತಿಂಗಳಲ್ಲಿ ಇಡೀ ಇಸ್ರೇಲ್ ಸಮು
ದಾಯವು ಚಿನ್ ಮರುಭೂಮಿಗೆ ಬಂದಿತು.
ಅವರು ಕಾದೇಶಿನಲ್ಲಿ ಇಳಿದುಕೊಂಡರು. ಅಲ್ಲಿ
ಮಿರ್ಯಾಮಳು ಸತ್ತಳು. ಆಕೆಯ ಶವವನ್ನು ಅಲ್ಲಿ ಸಮಾಧಿ
ಮಾಡಲಾಯಿತು.

## ಮೋಶೆಯ ತಪ್ಪು

2ಅಲ್ಲಿ ನೀರಿಲ್ಲದಿದ್ದ ಕಾರಣ ಅವರು ಮೋಶೆ
ಆರೋನರ ವಿರುದ್ಧವಾಗಿ ಸೇರಿಬಂದರು. 3ಜನರು
ಮೋಶೆಯ ಸಂಗಡ ವಾದಮಾಡಿ, ''ನಮ್ಮ ಸಹೋದರರು
ಯೆಹೋವನ ಸನ್ನಿಧಿಯಲ್ಲಿ ಸತ್ತಾಗ ನಾವೂ ಸತ್ತು
ಹೋಗಿದ್ದರೆ ಎಷ್ಟೋ ಮೇಲಾಗಿತ್ತು. 4ಯೆಹೋವನ ಜನ
ರನ್ನು ಈ ಮರುಭೂಮಿಗೆ ಯಾಕೆ ಕರೆದುಕೊಂಡು
ಬಂದೆ? ನಾವು ಮತ್ತು ನಮ್ಮ ಪ್ರಾಣಿಗಳು ಇಲ್ಲಿ ಸಾಯ
ಬೇಕೆಂದು ನೀನು ಇಚ್ಛಿಸುತ್ತೀಯೊ? 5ಈಜಿಪ್ಟಿನಿಂದ
ನಮ್ಮನ್ನು ಇಲ್ಲಿಗೆ ಯಾಕೆ ಕರೆತಂದೆ? ಈ ಕೆಟ್ಟಸ್ಥಳಕ್ಕೆ
ನಮ್ಮನ್ನು ಯಾಕೆ ಕರೆದುಕೊಂಡು ಬಂದೆ? ಇಲ್ಲಿ ಧಾನ್ಯ
ವಾಗಲೀ ಅಂಜೂರವಾಗಲೀ ದ್ರಾಕ್ಷೆಯಾಗಲೀ ದಾಳಿಂಬೆ
ಯಾಗಲೀ ಇಲ್ಲ, ಕುಡಿಯುವುದಕ್ಕೆ ನೀರೂ ಇಲ್ಲ''
ಎಂದು ಹೇಳಿದರು.
6ಮೋಶೆ ಆರೋನರು ಜನಸಮೂಹದ ಎದುರಿನಿಂದ
ದೇವದರ್ಶನಗುಡಾರದ ಪ್ರವೇಶದ್ವಾರಕ್ಕೆ ಹೋಗಿ ಅಡ್ಡ
ಬಿದ್ದರು. ಆಗ ಯೆಹೋವನ ಮಹಿಮೆಯು ಅವರಿಗೆ
ಪ್ರತ್ಯಕ್ಷವಾಯಿತು.
7ಯೆಹೋವನು ಮೋಶೆಯೊಡನೆ ಮಾತಾಡಿ, 8''ಬಳಿಕ
ನೀನು ಮತ್ತು ನಿನ್ನ ಸಹೋದರನಾದ ಆರೋನನು
ಜನರನ್ನು ಬಂಡೆಯ ಮುಂದೆ ಸಭೆಸೇರಿಸಿ, ಜನರ ಮುಂದೆ
ಆ ಬಂಡೆಗೆ ಮಾತಾಡು. ಆಗ ನೀರು ಬಂಡೆಯಿಂದ
ಹರಿಯುವುದು ಮತ್ತು ನೀರನ್ನು ಜನರಿಗೂ ಅವರ
ಪಶುಗಳಿಗೂ ಕೊಡು'' ಎಂದು ಹೇಳಿದನು.
9ಕೋಲು ಪವಿತ್ರಗುಡಾರದಲ್ಲಿ ಯೆಹೋವನ ಸನ್ನಿಧಿ
ಯಲ್ಲಿತ್ತು. ಯೆಹೋವನು ಹೇಳಿದಂತೆ ಮೋಶೆ
ಕೋಲನ್ನು ತೆಗೆದುಕೊಂಡನು. 10ಜನರು ಬಂಡೆಯ
ಮುಂದೆ ಒಟ್ಟಾಗಿ ಸೇರಿಬರಬೇಕೆಂದು ಮೋಶೆ
ಆರೋನರು ಹೇಳಿದರು. ಆಗ ಮೋಶೆ, ''ದಂಗೆ
ಕೋರರರೇ, ಈಗ ನನಗೆ ಕಿವಿಗೊಡಿರಿ. ನಿಮಗೋಸ್ಕರ
ವಾಗಿ ಈ ಬಂಡೆಯಿಂದ ನೀರು ಹರಿಯುವಂತೆ ನಾವು
ಮಾಡಬೇಕೊ?'' ಎಂದು ಹೇಳಿ, 11ತನ್ನ ಕೈಯಲ್ಲಿದ್ದ
ಕೋಲನ್ನು ಎತ್ತಿ ಎರಡು ಬಾರಿ ಬಂಡೆಯನ್ನು
ಹೊಡೆದನು. ಬಂಡೆಯಿಂದ ನೀರು ಹರಿಯತೊಡಗಿತು.
ಜನರಿಗೆ ಮತ್ತು ಪಶುಗಳಿಗೆ ಕುಡಿಯಲು ನೀರು
ದೊರೆಯಿತು.
12ಆದರೆ ಯೆಹೋವನು ಮೋಶೆ ಆರೋನರಿಗೆ ಹೇಳಿ
ದ್ದೇನೆಂದರೆ, ''ನೀವು ನನ್ನನ್ನು ನಂಬದವರಾಗಿ ಇಸ್ರೇಲರ
ಎದುರಿನಲ್ಲಿ ನನ್ನ ಪವಿತ್ರತೆಯನ್ನು ತೋರಿಸದೆ ಹೋದ
ದ್ದರಿಂದ ಈ ಸಮುದಾಯದವರಿಗೆ ಕೊಡಲಿರುವ ದೇಶಕ್ಕೆ
ನೀವು ಅವರನ್ನು ಕರೆದುಕೊಂಡು ಹೋಗುವುದಿಲ್ಲ.''
13ಈ ಸ್ಥಳವು ''ಮೆರೀಬಾ* ಬುಗ್ಗೆ'' ಎಂದು
ಕರೆಯಲ್ಪಟ್ಟಿತು. ಇಲ್ಲಿಯೇ ಇಸ್ರೇಲರು ಯೆಹೋವ
ನೊಡನೆ ವಾದ ಮಾಡಿದರು ಮತ್ತು ಯೆಹೋವನು ತಾನು

---

**ಮೆರೀಬಾ** ಈ ಹೆಸರಿನ ಅರ್ಥ ''ದೂರು ಹೇಳು.''

ಪರಿಶುದ್ಧನು ಎಂಬುದನ್ನು ಅವರಿಗೆ ತೋರಿಸಿದ ಸ್ಥಳವು ಇದೇ.

### ಎದೋಮ್ಯರು ಇಸ್ರೇಲರನ್ನು ದಾಟಿಹೋಗಲು ಬಿಡುವುದಿಲ್ಲ

[14]ಮೋಶೆಯು ಕಾದೇಶಿನಲ್ಲಿದ್ದಾಗ ಎದೋಮಿನ ಅರಸನ ಬಳಿಗೆ ದೂತರನ್ನು ಕಳುಹಿಸಿ, ''ನಿಮ್ಮ ಸಂಬಂಧಿಕರಾದ ಇಸ್ರೇಲರು ಕೇಳಿಕೊಳ್ಳುವುದೇನೆಂದರೆ: ನಮಗೆ ಸಂಭವಿಸಿದ ಎಲ್ಲಾ ಕಷ್ಟಗಳು ನಿಮಗೆ ಗೊತ್ತಿದೆ. [15]ನಮ್ಮ ಪೂರ್ವಿಕರು ಈಜಿಪ್ಟ್ ದೇಶಕ್ಕೆ ಇಳಿದುಹೋದದ್ದೂ ನಾವು ಅಲ್ಲಿ ಬಹುಕಾಲ ವಾಸವಾಗಿದ್ದದ್ದೂ ಈಜಿಪ್ಟಿನವರು ನಮಗೂ ನಮ್ಮ ಪೂರ್ವಿಕರಿಗೂ ಕ್ರೂರರಾಗಿದ್ದದ್ದೂ ನಿಮಗೆ ತಿಳಿದದೆ. [16]ನಾವು ಯೆಹೋವನಿಗೆ ಮೊರೆಯಿಡಲಾಗಿ ಆತನು ನಮ್ಮ ಪ್ರಾರ್ಥನೆಯನ್ನು ಕೇಳಿ ದೂತನನ್ನು ಕಳುಹಿಸಿ ನಮ್ಮನ್ನು ಈಜಿಪ್ಟಿನಿಂದ ಬಿಡಿಸಿದ್ದನ್ನು ನೀವು ಬಲ್ಲಿರಿ.

''ಈಗ ನಾವು ನಿಮ್ಮ ಪ್ರದೇಶದ ಗಡಿಯಲ್ಲಿರುವ ಕಾದೇಶೆಂಬ ಊರಲ್ಲಿದ್ದೇವೆ. [17]ನಿಮ್ಮ ದೇಶವನ್ನು ದಾಟಿಹೋಗುವುದಕ್ಕೆ ನಮಗೆ ಅಪ್ಪಣೆಯಾಗಬೇಕೆಂದು ಬೇಡಿಕೊಳ್ಳುತ್ತೇವೆ. ನಾವು ಹೊಲಗಳಲ್ಲಿಯಾಗಲೀ ದ್ರಾಕ್ಷಿತೋಟಗಳಲ್ಲಿಯಾಗಲೀ ಹಾದುಹೋಗುವುದಿಲ್ಲ. ಬಾವಿಗಳ ನೀರನ್ನು ಕುಡಿಯುವುದಿಲ್ಲ. ರಾಜಮಾರ್ಗದಲ್ಲಿಯೇ ನಡೆದು ನಿಮ್ಮ ದೇಶದ ಮೇರೆಗಳನ್ನು ದಾಟುವ ತನಕ ಎಡಕ್ಕಾಗಲೀ ಬಲಕ್ಕಾಗಲೀ ತಿರುಗುವುದಿಲ್ಲ'' ಎಂದು ಹೇಳಿಸಿದನು.

[18]ಆದರೆ ಎದೋಮಿನ ಅರಸನು, ''ನಮ್ಮ ದೇಶವನ್ನು ನೀವು ದಾಟಿಹೋಗಕೂಡದು. ದಾಟುವುದಾದರೆ, ನಾವು ನಿಮ್ಮ ಮೇಲೆ ಯುದ್ಧಕ್ಕೆ ಬರುತ್ತೇವೆ'' ಎಂದು ಉತ್ತರಕೊಟ್ಟನು.

[19]ಅದಕ್ಕೆ ಇಸ್ರೇಲರು, ''ನಾವು ರಾಜಮಾರ್ಗದಲ್ಲಿಯೇ ಹೋಗುವೆವು. ನಾವೂ ನಮ್ಮ ಪಶುಗಳೂ ನಿಮ್ಮ ನೀರನ್ನು ಕುಡಿದರೆ ಅದಕ್ಕೆ ಬೆಲೆ ಕೊಡುವೆವು. ನಮಗೆ ಕೇವಲ ನಡೆದುಕೊಂಡು ಹೋಗಲು ಅನುಮತಿ ಕೊಡಿ. ಇದೊಂದೇ ನಮ್ಮ ಚಿಕ್ಕ ಬೇಡಿಕೆ'' ಎಂದು ಹೇಳಿದರು.

[20]ಆದರೆ ಮತ್ತೆ ಎದೋಮ್ಯರು, ''ನೀವು ನಮ್ಮ ದೇಶವನ್ನು ದಾಟಿಹೋಗುವುದಕ್ಕೆ ನಾವು ಬಿಡುವುದಿಲ್ಲ'' ಎಂದು ಉತ್ತರಿಸಿದರು.

ಬಳಿಕ ಎದೋಮ್ಯರ ಅರಸನು ಬಲಿಷ್ಠವಾದ ದೊಡ್ಡ ಸೈನ್ಯವನ್ನು ಕೂಡಿಸಿಕೊಂಡು ಇಸ್ರೇಲರ ವಿರುದ್ಧ ಯುದ್ಧಮಾಡಲು ಹೊರಟನು. [21]ಇಸ್ರೇಲರು ಅವನ ದೇಶವನ್ನು ಹಾದುಹೋಗಲು ಎದೋಮ್ಯರ ಅರಸನು ಬಿಡಲಿಲ್ಲ. ಆಗ ಇಸ್ರೇಲರು ಬೇರೊಂದು ದಿಕ್ಕಿನಲ್ಲಿ ಹೋದರು.

### ಆರೋನನ ಮರಣ

[22]ಇಸ್ರೇಲರೆಲ್ಲರೂ ಕಾದೇಶಿನಿಂದ ಹೊರಟು ಹೋರ್ ಬೆಟ್ಟಕ್ಕೆ ಹೋದರು. [23]ಹೋರ್ ಬೆಟ್ಟವು ಎದೋಮ್ಯರ ಗಡಿಯ ಬಳಿಯಲ್ಲಿ ಇತ್ತು. ಯೆಹೋವನು ಮೋಶೆ ಆರೋನರಿಗೆ, [24]''ಆರೋನನು ಸತ್ತು ಪೂರ್ವಿಕರ ಬಳಿ ಸೇರುವ ಸಮಯ ಬಂದಿದೆ. ಇಸ್ರೇಲರಿಗೆ ನಾನು ವಾಗ್ದಾನ ಮಾಡಿದ ದೇಶದೊಳಗೆ ಆರೋನನು ಪ್ರವೇಶಿಸುವುದಿಲ್ಲ. ಮೆರಿಬಾ ನೀರಿನ ಬಗ್ಗೆ ನಾನು ಕೊಟ್ಟ ಆಜ್ಞೆಗೆ ವಿಧೇಯರಾಗದಿದ್ದುದರಿಂದ ನಾನು ನಿಮಗೆ ಇದನ್ನು ಹೇಳುತ್ತಿದ್ದೇನೆ.

[25]''ಈಗ ನೀನು ಮೋಶೆ ಆರೋನನನ್ನೂ ಅವನ ಮಗನಾದ ಎಲ್ಲಾಜಾರನನ್ನೂ ಕರೆದುಕೊಂಡು ಹೋರ್ ಬೆಟ್ಟಕ್ಕೆ ಬಾ. [26]ಆರೋನನ ಪ್ರತಿಷ್ಠಿತ ವಸ್ತ್ರಗಳನ್ನು ಅವನಿಂದ ತೆಗೆದು ಅವನ ಮಗನಾದ ಎಲ್ಲಾಜಾರನ ಮೇಲೆ ಹಾಕು. ಆರೋನನು ಅಲ್ಲಿ ಬೆಟ್ಟದ ಮೇಲೆ ಸತ್ತು ಪೂರ್ವಿಕರ ಬಳಿ ಸೇರುವನು'' ಎಂದು ಹೇಳಿದನು.

[27]ಮೋಶೆಯು ಯೆಹೋವನ ಅಪ್ಪಣೆಗೆ ವಿಧೇಯನಾದನು. ಮೋಶೆ, ಆರೋನ ಮತ್ತು ಎಲ್ಲಾಜಾರ ಇವರು ಹೋರ್ ಬೆಟ್ಟವನ್ನು ಹತ್ತಿದರು. ಅವರು ಹೋಗುತ್ತಿರುವುದನ್ನು ಇಸ್ರೇಲರೆಲ್ಲರೂ ನೋಡಿದರು. [28]ಮೋಶೆಯು ಆರೋನನ ಪ್ರತಿಷ್ಠಿತಾ ವಸ್ತ್ರಗಳನ್ನು ಅವನಿಂದ ತೆಗೆದು ಅವನ ಮಗನಾದ ಎಲ್ಲಾಜಾರನ ಮೇಲೆ ಹಾಕಿದನು. ಬಳಿಕ ಆರೋನನು ಬೆಟ್ಟದ ಮೇಲೆ ಸತ್ತನು. ಮೋಶೆ ಮತ್ತು ಎಲ್ಲಾಜಾರನು ಬೆಟ್ಟದಿಂದ ಇಳಿದು ಬಂದರು. [29]ಆರೋನನು ಸತ್ತನೆಂದು ಇಸ್ರೇಲರೆಲ್ಲರಿಗೆ ತಿಳಿಯಿತು. ಆದ್ದರಿಂದ ಇಸ್ರೇಲಿನಲ್ಲಿ ಪ್ರತಿಯೊಬ್ಬನೂ ಆರೋನನಿಗಾಗಿ ಮೂವತ್ತು ದಿನಗಳವರೆಗೆ ಶೋಕಿಸಿದನು.

### ಕಾನಾನ್ಯರೊಡನೆ ಯುದ್ಧ

21 ಕಾನಾನ್ಯನಾಗಿದ್ದ ಆರಾದಿನ ರಾಜನು ನೆಗೆವ್‌ನಲ್ಲಿದ್ದುಕೊಂಡು ರಾಜ್ಯಭಾರ ಮಾಡುತ್ತಿದ್ದನು. ಇಸ್ರೇಲರು ಅತಾರೀಮಿನ ಮಾರ್ಗವಾಗಿ ಬರುತ್ತಾರೆಂಬ ಸುದ್ದಿಯು ಅವನಿಗೆ ಮುಟ್ಟಿತು. ಆದ್ದರಿಂದ ಅವನು ಹೋಗಿ ಇಸ್ರೇಲರೊಡನೆ ಯುದ್ಧಮಾಡಿ ಅವರಲ್ಲಿ ಕೆಲವರನ್ನು ಸೆರೆಹಿಡಿದನು. [2]ಇಸ್ರೇಲರು ಯೆಹೋವನಿಗೆ ಹರಕೆಯನ್ನು ಮಾಡಿಕೊಂಡು, ''ನಾವು ಈ ಜನರನ್ನು ಜಯಿಸುವಂತೆ ನೀನು ಅನುಗ್ರಹಿಸಿದರೆ ನಾವು ಅವರ ಗ್ರಾಮಗಳನ್ನು ಪೂರ್ಣವಾಗಿ ಹಾಳುಮಾಡಿ ಯೆಹೋವನಿಗಾಗಿಯೇ ಬಿಟ್ಟುಬಿಡುತ್ತೇವೆ'' ಅಂದರು.

[3]ಯೆಹೋವನು ಅವರ ಪ್ರಾರ್ಥನೆಯನ್ನು ಕೇಳಿ ಕಾನಾನ್ಯರನ್ನು ಜಯಿಸಲು ಸಹಾಯಮಾಡಿದ್ದರಿಂದ ಅವರು ಕಾನಾನ್ಯರನ್ನೂ ಅವರ ಗ್ರಾಮಗಳನ್ನೂ

ಸಂಪೂರ್ಣವಾಗಿ ನಾಶಮಾಡಿಬಿಟ್ಟರು. ಆದುದರಿಂದ ಆ ಪ್ರದೇಶಕ್ಕೆ ಹೊರ್ಮಾ* ಎಂದು ಹೆಸರಾಯಿತು.

### ತಾಮ್ರದ ಸರ್ಪ

4ಇಸ್ರೇಲರು ಹೋರ್ ಬೆಟ್ಟದಿಂದ ಹೊರಟು ಕೆಂಪು ಸಮುದ್ರದ ಮಾರ್ಗವಾಗಿ ಪ್ರಯಾಣಮಾಡಿದರು. ಅವರು ಎದೋಮ್ ದೇಶವನ್ನು ಸುತ್ತಿಕೊಂಡು ಹೋಗುವುದಕ್ಕೆ ಹೀಗೆ ಮಾಡಿದರು. ಜನರು ಮಾರ್ಗದಲ್ಲಿ ತಾಳ್ಮೆ ತಪ್ಪಿದರು. 5ಆಗ ಅವರು ದೇವರಿಗೂ ಮೋಶೆಗೂ ವಿರೋಧವಾಗಿ ಮಾತಾಡುತ್ತಾ ''ಈ ಮರುಭೂಮಿಯಲ್ಲಿ ಸಾಯಲೆಂದು ನಮ್ಮನ್ನು ಈಜಿಪ್ಟಿನಿಂದ ಯಾಕೆ ಬರ ಮಾಡಿದೆ? ಇಲ್ಲಿ ಆಹಾರವೂ ಇಲ್ಲ, ನೀರೂ ಇಲ್ಲ. ಈ ನಿಸ್ಸಾರವಾದ ಆಹಾರವನ್ನು ತಿಂದು ನಮಗೆ ಬೇಸರ ವಾಯಿತು'' ಎಂದು ಹೇಳಿದರು.

6ಆದುದರಿಂದ ಯೆಹೋವನು ಅವರ ಮಧ್ಯದಲ್ಲಿ ವಿಷಕರವಾದ ಹಾವುಗಳನ್ನು ಕಳುಹಿಸಿದನು. ಅವುಗಳು ಅವರನ್ನು ಕಚ್ಚಿದ್ದರಿಂದ ಅನೇಕ ಇಸ್ರೇಲರು ಸತ್ತರು. 7ಆಗ ಜನರು ಮೋಶೆಯ ಬಳಿಗೆ ಬಂದು, ''ನಾವು ನಿನಗೂ ಯೆಹೋವನಿಗೂ ವಿರೋಧವಾಗಿ ಮಾತಾಡಿ ಪಾಪ ಮಾಡಿದ್ದೇವೆ. ಈ ಸರ್ಪಗಳನ್ನು ನಮ್ಮಿಂದ ತೊಲಗಿ ಹೋಗುವಂತೆ ಪ್ರಾರ್ಥನೆ ಮಾಡು'' ಎಂದು ಬೇಡಿಕೊಂಡರು. ಮೋಶೆ ಜನರಿಗೋಸ್ಕರ ಪ್ರಾರ್ಥಿಸಿದನು.

8ಯೆಹೋವನು ಮೋಶೆಗೆ, ''ನೀನು ತಾಮ್ರದಿಂದ ವಿಷಸರ್ಪದ ಆಕಾರವನ್ನು ಮಾಡಿಸಿ ಧ್ವಜಸ್ತಂಭದ ಮೇಲೆ ಎತ್ತಿ ನಿಲ್ಲಿಸಬೇಕು, ಸರ್ಪಗಳಿಂದ ಕಚ್ಚಿಸಿಕೊಂಡವನು ಅದನ್ನು ನೋಡಿದರೆ ಬದುಕಿಕೊಳ್ಳುವನು'' ಎಂದು ಆಜ್ಞಾಪಿಸಿದನು. 9ಆದುದರಿಂದ ಮೋಶೆ ತಾಮ್ರದಿಂದ ಸರ್ಪದ ಆಕಾರವನ್ನು ಮಾಡಿಸಿ ಧ್ವಜಸ್ತಂಭದ ಮೇಲೆ ಇಡಿಸಿದನು. ಸರ್ಪಗಳಿಂದ ಕಚ್ಚಿಸಿಕೊಂಡಿದ್ದವನು ಆ ತಾಮ್ರದ ಸರ್ಪವನ್ನು ನೋಡಿ ಬದುಕಿಕೊಂಡನು.

### ಹೋರ್ ಬೆಟ್ಟದಿಂದ ಮೋವಾಬಿಗೆ

10ಇಸ್ರೇಲರು ಪ್ರಯಾಣವನ್ನು ಮುಂದುವರಿಸಿ ಓಬೋತ್ ಎಂಬ ಸ್ಥಳದಲ್ಲಿ ಇಳಿದುಕೊಂಡರು. 11ಬಳಿಕ ಅವರು ಓಬೋತಿನಿಂದ ಇಯ್ಯೇ ಅಬಾರೀಮಿಗೆ ಹೋದರು. ಇದು ಮೋವಾಬಿನ ಪೂರ್ವದಲ್ಲಿರುವ ಮರುಭೂಮಿಯ ಪ್ರದೇಶದಲ್ಲಿತ್ತು. 12ಬಳಿಕ ಜನರು ಅಲ್ಲಿಂದ ಹೊರಟು ಜೆರೆದ್ ಕಣಿವೆಗೆ ಪ್ರಯಾಣ ಮಾಡಿದರು. ಅವರು ಅಲ್ಲಿ ಇಳಿದುಕೊಂಡರು. 13ಅವರು ಅಲ್ಲಿಂದ ಹೊರಟು ಅರ್ನೋನ್ ಹೊಳೆಯ ಆಚೆ ಕಡೆಯಲ್ಲಿ ಅಂದರೆ ಅಮೋರಿಯರ ಪ್ರದೇಶದೊಳಗೆ ವಿಸ್ತರಿಸಿರುವ ಮರುಭೂಮಿಯಲ್ಲಿ ಪಾಳೆಯ ಮಾಡಿಕೊಂಡರು. ಅರ್ನೋನ್ ನದಿಯು ಮೋವಾಬ್ಯರಿಗೂ ಅಮೋರಿಯರಿಗೂ ಗಡಿಯಾಗಿದೆ. 14ಅದಕ್ಕನುಸಾರವಾಗಿ ''ಯೆಹೋವನ ಯುದ್ಧಗಳು'' ಎಂಬ ಗ್ರಂಥದಲ್ಲಿ,

> ''ಸೂಫದಲ್ಲಿರುವ ವಾಹೇಬನ್ನು, ಅರ್ನೋನ್
> ಹೊಳೆಗೆ ಕೂಡುವ ಕಣಿವೆಗಳನ್ನು ಮತ್ತು 15ಆರ್
> ವಸತಿ ಪ್ರದೇಶಕ್ಕೆ ನಡೆಸುವ ಮೋವಾಬಿನ ಗಡಿಯ
> ಉದ್ದಕ್ಕೂ ಇರುವ ಕಣಿವೆಗಳನ್ನು ದಾಟಿ
> ದ್ದಾಯಿತು'' ಎಂದು ಬರೆದಿದೆ.

16ಅಲ್ಲಿಂದ ಅವರು ಬೇರ್ ಎಂಬ ಸ್ಥಳಕ್ಕೆ ಬಂದರು. ''ಜನರನ್ನು ಕೂಡಿಸಿಕೋ, ನಾನು ಅವರಿಗೆ ನೀರನ್ನು ಕೊಡುವೆನು'' ಎಂದು ಯೆಹೋವನು ಮೋಶೆಗೆ ಹೇಳಿದ್ದು ಈ ಬಾವಿಯ ಸ್ಥಳದಲ್ಲೇ. 17ಆಗ ಇಸ್ರೇಲರು ಈ ಹಾಡನ್ನು ಹಾಡಿದರು,

> ''ಬಾವಿಯೇ, ಉಕ್ಕುತ್ತಾ ಬಾ! ಜನರೇ, ಅದರ
> ಕುರಿತು ಹಾಡಿ!
> 18 ಪ್ರಧಾನರು ಈ ಬಾವಿಯನ್ನು ತೋಡಿದರು.
> ಪ್ರಮುಖ ನಾಯಕರು ಈ ಬಾವಿಯನ್ನು
> ತೋಡಿದರು. ಅವರು ತಮ್ಮ ದೊಣ್ಣೆಗಳಿಂದ
> ಮತ್ತು ಕೋಲುಗಳಿಂದ ಈ ಬಾವಿಯನ್ನು
> ಅಗೆದರು.''

ಆಮೇಲೆ ಜನರು ''ಮತ್ತಾನ'' ಎಂಬ ಮರುಭೂಮಿಯಿಂದ ಹೊರಟರು. 19ಬಳಿಕ ಅವರು ಮತ್ತಾನದಿಂದ ನಹಲೀಯೇಲಿಗೆ ಪ್ರಯಾಣಮಾಡಿದರು. ಬಳಿಕ ಅವರು ನಹಲೀಯೇಲಿನಿಂದ ಬಾಮೋತಿಗೆ ಪ್ರಯಾಣ ಮಾಡಿದರು. 20ಜನರು ಬಾಮೋತಿನಿಂದ ಮೋವಾಬ್ಯರ ಪ್ರದೇಶದ ಕಣಿವೆಗೆ ಪ್ರಯಾಣ ಮಾಡಿದರು. ಪಿಸ್ಗಾ ಬೆಟ್ಟದ ತುದಿಯ ಸಮೀಪದಲ್ಲಿ ನಿಂತುಕೊಂಡರೆ ಮರುಭೂಮಿಯು ಕಾಣುವುದು.

### ಸೀಹೋನ್ ಮತ್ತು ಓಗ್

21ಇಸ್ರೇಲರು ಸಂದೇಶಕರನ್ನು ಅಮೋರಿಯರ ಅರಸನಾದ ಸೀಹೋನನ ಬಳಿಗೆ ಕಳುಹಿಸಿದರು. ಅವರು ಅರಸನಿಗೆ, 22''ನಿನ್ನ ದೇಶವನ್ನು ಹಾದುಹೋಗುವುದಕ್ಕೆ ನಮಗೆ ಅಪ್ಪಣೆಕೊಡು. ನಿಮ್ಮ ಹೊಲಗಳಿಗಾಗಲೀ ದ್ರಾಕ್ಷಿ ತೋಟಗಳಿಗಾಗಲೀ ನಾವು ತಿರುಗಿಕೊಳ್ಳುವುದಿಲ್ಲ. ನಿನ್ನ

---

**ಹೊರ್ಮಾ** ಇದರರ್ಥ ''ನಾಶನ'' ಅಥವಾ ''ಸಂಪೂರ್ಣವಾಗಿ ನಾಶವಾದರು.''

ಯಾವ ಬಾವಿಗಳಿಂದಲೂ ನಾವು ನೀರು ಕುಡಿಯುವುದಿಲ್ಲ. ನಾವು ನಿನ್ನ ದೇಶವನ್ನು ದಾಟಿ ಹೋಗುವ ತನಕ ಮುಖ್ಯ ದಾರಿಯಲ್ಲೇ ಪ್ರಯಾಣ ಮಾಡುತ್ತೇವೆ'' ಎಂದು ಹೇಳಿದರು.

23ಆದರೆ ಅರಸನಾದ ಸೀಹೋನನು ಇಸ್ರೇಲರಿಗೆ ತನ್ನ ದೇಶದ ಮೂಲಕ ಹಾದುಹೋಗಲು ಬಿಡಲಿಲ್ಲ. ಅರಸನು ತನ್ನ ಇಡೀ ಸೈನ್ಯವನ್ನು ಕೂಡಿಸಿಕೊಂಡು ಇಸ್ರೇಲರ ವಿರುದ್ಧ ಯುದ್ಧಮಾಡಲು ಮರುಭೂಮಿಯ ಕಡೆಗೆ ಹೊರಟನು. ಅವನು ಯಹಜ್ ಎಂಬಲ್ಲಿಗೆ ಬಂದನು; ಅಲ್ಲಿ ರಾಜನ ಸೈನ್ಯವು ಇಸ್ರೇಲರಿಗೆ ವಿರೋಧ ವಾಗಿ ಯುದ್ಧಮಾಡಿತು.

24ಆದರೆ ಇಸ್ರೇಲರು ಅರಸನನ್ನು ಕೊಂದುಹಾಕಿದರು. ಬಳಿಕ ಅವರು ಅರ್ನೋನ್ ನದಿಯಿಂದ ಹಿಡಿದು ಯಬ್ಬೋಕ್ ನದಿಯವರೆಗಿರುವ ಅವನ ಭೂಮಿಯನ್ನು ವಶಪಡಿಸಿಕೊಂಡರು. ಅವರು ಅಮ್ಮೋನಿಯರ ಮೇರೆಯವರೆಗಿರುವ ಪ್ರದೇಶವನ್ನೆಲ್ಲಾ ವಶಪಡಿಸಿಕೊಂಡರು. ಅಮ್ಮೋನಿಯರು ತಮ್ಮ ಗಡಿಯನ್ನು ಭದ್ರವಾಗಿ ರಕ್ಷಿಸಿಕೊಂಡದ್ದರಿಂದ ಇಸ್ರೇಲರು ಮುಂದಕ್ಕೆ ಹೋಗ
ಲಿಲ್ಲ. 25ಇಸ್ರೇಲರು ಅಮೋರಿಯರ ಈ ಪಟ್ಟಣ ಗಳನ್ನೆಲ್ಲಾ ವಶಪಡಿಸಿಕೊಂಡು ಅವುಗಳಲ್ಲಿ ವಾಸಿಸಿದರು. ಅವರು ಹಷ್ಬೋನನ್ನು ಮತ್ತು ಅದರ ಸುತ್ತಲಿರುವ ಎಲ್ಲಾ ಚಿಕ್ಕ ಪಟ್ಟಣಗಳನ್ನು ಸಹ ವಶಪಡಿಸಿಕೊಂಡರು.
26ಹೆಷ್ಬೋನಿನಲ್ಲಿ ಅಮೋರಿಯರ ಅರಸನಾದ ಸೀಹೋನನು ವಾಸಿಸುತ್ತಿದ್ದನು. ಸೀಹೋನನು ಮೊದಲಿನ ಮೋವಾಬ್ಯರ ಅರಸನೊಡನೆ ಯುದ್ಧಮಾಡಿದ್ದನು. ಸೀಹೋನನು ಅರ್ನೋನ್ ನದಿಯವರೆಗಿರುವ ಆ ರಾಜನ ಪ್ರದೇಶವನ್ನೆಲ್ಲ ವಶಪಡಿಸಿಕೊಂಡಿದ್ದನು. 27ಆದ
ಕಾರಣ ಹಾಡುವವರು ಈ ಗೀತೆಯನ್ನು ಹಾಡುತ್ತಾರೆ:

''ಹೆಷ್ಬೋನೇ, ಬಾ! ಮತ್ತೆ ಅದನ್ನು ನಿರ್ಮಿಸು!
ಸೀಹೋನನ ಪಟ್ಟಣವನ್ನು ಮತ್ತೆ ಸ್ಥಾಪಿಸಿರಿ.''

28 ಹೆಷ್ಬೋನಿನಲ್ಲಿ ಬೆಂಕಿಯುಂಟಾಯಿತು. ಆ ಬೆಂಕಿ
ಸೀಹೋನ ಪಟ್ಟಣದಲ್ಲಿ ಉಂಟಾಯಿತು. ಆ
ಬೆಂಕಿಯು ಮೋವಾಬಿನಲ್ಲಿರುವ 'ಆರ್' ಪಟ್ಟಣ
ವನ್ನು ನಾಶಮಾಡಿತು. ಅದು ಅರ್ನೋನ್
ನದಿಯ ಬಳಿಯಲ್ಲಿರುವ ಬೆಟ್ಟಗಳನ್ನು ಸುಟ್ಟು
ಹಾಕಿತು.

29 ಮೋವಾಬೇ, ಇದು ನಿನಗೆ ಕೆಟ್ಟದ್ದಾಗಿದೆ.
ಕೆಮೋಷಿನ ಜನರೇ, ನೀವು ನಾಶವಾದಿರಿ. ಅವನ
ಪುತ್ರರು ಓಡಿಹೋದರು. ಅಮೋರಿಯ ರಾಜ
ನಾದ ಸೀಹೋನನು ಅವನ ಪುತ್ರಿಯರನ್ನು ಸೆರೆ
ಒಯ್ದನು.

30 ಆದರೆ ನಾವು ಆ ಅಮೋರಿಯರನ್ನು ಸೋಲಿ
ಸಿದೆವು. ಹೆಷ್ಬೋನಿನಿಂದ ದೀಬೋನಿನವ
ರೆಗಿರುವ ಅವರ ಪಟ್ಟಣಗಳನ್ನೂ ನಾಶೀಮಿ ನಿಂದ
ನೋಫಹದ (ಮೇದೆಬಾದ ಹತ್ತಿರ) ವರೆಗಿರುವ
ಪಟ್ಟಣಗಳನ್ನೂ ನಾವು ನಾಶ ಮಾಡಿದೆವು.''

31ಹೀಗೆ ಇಸ್ರೇಲರು ಅಮೋರಿಯರ ದೇಶದಲ್ಲಿ ತಮ್ಮ
ಪಾಳೆಯ ಹಾಕಿದರು. 32ಮೋಶೆಯು ಯಗ್ಜೇರ್
ಪಟ್ಟಣದ ಗುಟ್ಟನ್ನು ತಿಳಿದುಕೊಂಡು ಬರುವುದಕ್ಕೆ ಕೆಲವು ಜನರನ್ನು ಕಳುಹಿಸಿದ ನಂತರ, ಇಸ್ರೇಲರು ಆ ಪಟ್ಟಣ ವನ್ನು ವಶಪಡಿಸಿಕೊಂಡರು. ಅದರ ಸುತ್ತಲಿರುವ ಚಿಕ್ಕ ಪಟ್ಟಣಗಳನ್ನು ಅವರು ವಶಪಡಿಸಿಕೊಂಡರು. ಇಸ್ರೇಲರು ಅಲ್ಲಿದ್ದ ಅಮೋರಿಯರನ್ನು ಓಡಿಸಿದರು.

33ಬಳಿಕ ಇಸ್ರೇಲರು ಬೇರೆ ದಿಕ್ಕಿಗೆ ತಿರುಗಿ ಬಾಷಾನಿನ ಮಾರ್ಗವಾಗಿ ಪ್ರಯಾಣಮಾಡಿದರು. ಆಗ ಬಾಷಾನಿನ ಅರಸನಾದ ಓಗನು ಎದ್ರೈ ಎಂಬಲ್ಲಿ ಇಸ್ರೇಲರೊಂದಿಗೆ ಯುದ್ಧಮಾಡಲು ತನ್ನ ಸೈನ್ಯ ಸಮೇತವಾಗಿ ಬಂದನು.
34ಆದರೆ ಯೆಹೋವನು ಮೋಶೆಗೆ, ''ಆ ಅರಸನಿಗೆ ಹೆದರ ಬೇಡ. ನೀನು ಅವನನ್ನು ಸೋಲಿಸುವಂತೆ ಮಾಡುವೆನು. ನೀನು ಅವನ ಸೈನ್ಯವನ್ನು ಮತ್ತು ಅವನ ದೇಶವನ್ನು ಪೂರ್ಣವಾಗಿ ವಶಪಡಿಸಿಕೊಳ್ಳುವೆ. ಹೆಷ್ಬೋನಿನಲ್ಲಿ ವಾಸಿಸಿದ್ದ ಅಮೋರಿಯರ ಅರಸನಾದ ಸೀಹೋನನಿಗೆ ಮಾಡಿದಂತೆ ಇವನಿಗೂ ಸಹ ಮಾಡುವಿರಿ'' ಅಂದನು.

35ಇಸ್ರೇಲರು ಓಗನನ್ನೂ ಅವನ ಸೈನ್ಯವನ್ನೂ ಸೋಲಿಸಿದರು. ಅವರು ಅವನನ್ನೂ ಅವನ ಪುತ್ರರನ್ನೂ ಕೊಂದುಹಾಕಿ ಅವನ ಸೈನ್ಯವನ್ನೆಲ್ಲಾ ನಾಶಮಾಡಿದರು. ಯಾರನ್ನೂ ಜೀವಂತವಾಗಿ ಉಳಿಸಲಿಲ್ಲ. ಇಸ್ರೇಲರು ಅವನ ದೇಶ ವನ್ನು ವಶಪಡಿಸಿಕೊಂಡರು.

## ಬಿಳಾಮನೂ ಮೋವಾಬ್ಯರ ಅರಸನೂ

22 ಬಳಿಕ ಇಸ್ರೇಲರು ಹೊರಟು ಯೆರಿಕೋ ಪಟ್ಟಣದ ಎದುರಾಗಿದ್ದ ಯೊರ್ದನ್ ನದಿಯ ಆಚೆಕಡೆಯಲ್ಲಿರುವ ಮೋವಾಬ್ಯರ ಬಯಲುಗಳಲ್ಲಿ ಪಾಳೆಯ ಮಾಡಿಕೊಂಡರು. 2ಚಿಪ್ಪೋರನ ಮಗನಾದ
ಬಾಲಾಕನು ಮೋವಾಬ್ಯರ ಅರಸನಾಗಿದ್ದನು. ಇಸ್ರೇಲರು ಅಮೋರಿಯರಿಗೆ ಮಾಡಿದ್ದೆಲ್ಲವನ್ನು ಅವನು ಕಂಡಿದ್ದನು.
3ಮೋವಾಬ್ಯರು ನಿಜವಾಗಿಯೂ ಬಹಳ ಭಯಗೊಂಡಿದ್ದರು. ಯಾಕೆಂದರೆ ಇಸ್ರೇಲರು ಬಹುಸಂಖ್ಯಾತ
ರಾಗಿದ್ದರು. 4ಮೋವಾಬ್ಯರು ಮಿದ್ಯಾನ್ಯರ ಹಿರಿಯರಿಗೆ, ''ಈ ಜನಸಮೂಹವು ನಮ್ಮನ್ನೂ ನಮ್ಮ ಸುತ್ತಲಿರುವ ಎಲ್ಲವನ್ನೂ ಹೋರಿಯಂತೆ ನಾಶ ಮಾಡುವುದು'' ಎಂದು ಹೇಳಿದನು.

ಮೋವಾಬ್ಯರ ಅರಸನೂ ಚಿಪ್ಪೋರನ ಮಗನೂ ಆದ
ಬಾಲಾಕನು 5ಬೆಯೋರನ ಮಗನಾದ ಬಿಳಾಮನನ್ನು
ಕರೆಸುವುದಕ್ಕೆ ಕೆಲವು ಸಂದೇಶಕರನ್ನು ಕಳುಹಿಸಿದನು.
ಬಿಳಾಮನು ಯೂಫ್ರೆಟೀಸ್ ನದಿಯ ಬಳಿ ''ಪೆತೋರ್''
ಎಂಬ ಸ್ಥಳದಲ್ಲಿದ್ದನು. ಬಿಳಾಮನ ಜನರು ಇಲ್ಲಿ ವಾಸಿಸು
ತ್ತಿದ್ದರು. ಬಾಲಾಕನು ತನ್ನ ಸಂದೇಶಕರನ್ನು ಕಳುಹಿಸಿ
ಬಿಳಾಮನಿಗೆ, ''ಒಂದು ಜನಾಂಗವು ಈಜಿಪ್ಟಿನಿಂದ
ಬಂದಿದೆ. ಅವರು ನೆಲವನ್ನೆಲ್ಲಾ ಮುಚ್ಚಿಕೊಂಡು ನನ್ನ
ಪಕ್ಕದಲ್ಲಿ ನೆಲೆಸಿದ್ದಾರೆ. ಅವರು ನಮಗಿಂತ ಬಲಿಷ್ಠರು.
6ಆದುದರಿಂದ ನೀನು ದಯಮಾಡಿ ಬಂದು ನನ
ಗೋಸ್ಕರ ಈ ಜನಕ್ಕೆ ಶಾಪಕೊಡಬೇಕು, ಯಾಕಂದರೆ
ಅವರು ನನಗಿಂತ ಬಲಿಷ್ಠರಾಗಿದ್ದಾರೆ. ನೀನು ಶಪಿಸಿದರೆ
ಆಗ ನಾನು ಅವರನ್ನು ಸೋಲಿಸಿ ಈ ದೇಶದಿಂದ ಓಡಿಸಲು
ನನಗೆ ಸಾಧ್ಯವಾಗುವುದು. ನೀನು ಯಾವನನ್ನು ಆಶೀರ್ವ
ದಿಸುವಿಯೋ ಅವನು ಯಶಸ್ವಿಯಾಗುವನೆಂದೂ ನೀನು
ಯಾವನನ್ನು ಶಪಿಸುವೆಯೋ ಅವನಿಗೆ ಸೋಲಾಗುವು
ದೆಂದೂ ನನಗೆ ಗೊತ್ತಿದೆ'' ಎಂದು ಹೇಳಿದನು.
7ಮೋವಾಬ್ಯರ ಹಿರಿಯರು ಮತ್ತು ಮಿದ್ಯಾನ್ಯರ
ಹಿರಿಯರು ಬಿಳಾಮನ ಸೇವೆಗೋಸ್ಕರ ಹಣಕೊಡಲು
ಹಣವನ್ನು ತೆಗೆದುಕೊಂಡು ಹೊರಟು ಅವನ ಬಳಿಗೆ
ಬಂದು ಬಾಲಾಕನ ಮಾತುಗಳನ್ನು ತಿಳಿಸಿದರು.

8ಬಿಳಾಮನು, ''ಈ ರಾತ್ರಿ ನೀವು ಇಲ್ಲೇ ಇಳಿದು
ಕೊಳ್ಳಿರಿ. ಯೆಹೋವನು ನನಗೆ ಹೇಳುವ ಮಾತನ್ನು
ಬೆಳಿಗ್ಗೆ ನಿಮಗೆ ತಿಳಿಸುವೆನು'' ಎಂದು ಹೇಳಿದನು.

ಆದ್ದರಿಂದ ಮೋವಾಬ್ಯರ ಹಿರಿಯರು ಆ ರಾತ್ರಿ
ಬಿಳಾಮನ ಮನೆಯಲ್ಲಿ ಇಳಿದುಕೊಂಡರು.

9ದೇವರು ಬಿಳಾಮನ ಬಳಿಗೆ ಬಂದು, ''ನಿನ್ನ
ಬಳಿಯಲ್ಲಿರುವ ಈ ಮನುಷ್ಯರು ಯಾರು?'' ಎಂದು
ಕೇಳಿದನು.

10ಬಿಳಾಮನು ದೇವರಿಗೆ, ''ಮೋವಾಬ್ಯರ ಅರಸನು
ಅಂದರೆ ಚಿಪ್ಪೋರನ ಮಗನಾದ ಬಾಲಾಕನು ನನ್ನ ಬಳಿಗೆ
ದೂತರನ್ನು ಕಳುಹಿಸಿ, 11ಒಂದು ಜನಾಂಗವು ಈಜಿಪ್ಟಿ
ನಿಂದ ಹೊರಟು ಬಂದಿದೆ ಮತ್ತು ಅವರು ದೇಶವನ್ನೆಲ್ಲಾ
ಮುಚ್ಚಿಕೊಂಡಿದ್ದಾರೆ. ಈಗ ನೀನು ಬಂದು ನನಗೋಸ್ಕರ
ಅವರನ್ನು ಶಪಿಸು. ನೀನು ಶಪಿಸಿದರೆ, ನಾನು ಅವರನ್ನು
ಸೋಲಿಸಲು ಮತ್ತು ಓಡಿಸಲು ಸಾಧ್ಯವಾಗುತ್ತದೆ
ಎಂಬುದಾಗಿ ಹೇಳಿ ಕಳುಹಿಸಿದ್ದಾನೆ'' ಎಂದು ಉತ್ತರ
ಕೊಟ್ಟನು.

12ಆದಕ್ಕೆ ದೇವರು ಬಿಳಾಮನಿಗೆ,''ನೀನು ಅವರ
ಜೊತೆಯಲ್ಲಿ ಹೋಗಬಾರದು, ಆ ಜನರಿಗೆ ಶಾಪಕೊಡ
ಬಾರದು. ನಾನು ಅವರನ್ನು ಆಶೀರ್ವದಿಸಿದ್ದೇನೆ'' ಎಂದು
ಹೇಳಿದನು.

13ಮರುದಿನ ಬೆಳಿಗ್ಗೆ ಬಿಳಾಮನು ಎದ್ದು ಬಾಲಾಕನ
ಹಿರಿಯರಿಗೆ, ''ನಿಮ್ಮ ಸ್ವಂತ ದೇಶಕ್ಕೆ ಹಿಂದಕ್ಕೆ ಹೋಗಿರಿ.
ನಿಮ್ಮ ಸಂಗಡ ಬರಲು ಯೆಹೋವನು ನನಗೆ ಅಪ್ಪಣೆ
ಕೊಡುತ್ತಿಲ್ಲ'' ಎಂದು ಹೇಳಿದನು.

14ಮೋವಾಬ್ಯರ ನಾಯಕರು ಬಾಲಾಕನ ಬಳಿಗೆ
ಹಿಂತಿರುಗಿ, ''ಬಿಳಾಮನು ನಮ್ಮೊಡನೆ ಬರಲು ಒಪ್ಪು
ತ್ತಿಲ್ಲ'' ಎಂದು ತಿಳಿಸಿದರು.

15ಆದ್ದರಿಂದ ಬಾಲಾಕನು ಅವರಿಗಿಂತಲೂ ಶ್ರೇಷ್ಠ
ರಾದ ಅನೇಕ ನಾಯಕರನ್ನು ಕಳುಹಿಸಿದನು. 16ಇವರು
ಬಿಳಾಮನ ಬಳಿಗೆ ಬಂದು ಅವನಿಗೆ, ''ಚಿಪ್ಪೋರನ ಮಗ
ನಾದ ಬಾಲಾಕನು ಹೀಗನ್ನುತ್ತಾನೆ: ನೀನು ನನ್ನ ಬಳಿಗೆ
ಬರಲು ಅಡ್ಡಿಮಾಡುವ ಯಾವುದಕ್ಕೂ ಅವಕಾಶ ಕೊಡ
ಬೇಡ. 17ನಾನು ಹೇಳುವುದನ್ನು ನೀನು ಮಾಡಿದರೆ,
ನಾನು ನಿನಗೆ ಹಣವನ್ನು ಮತ್ತು ಗೌರವವನ್ನು ಬಹಳವಾಗಿ
ಕೊಡುವೆನು ಮತ್ತು ನೀನು ಹೇಳಿದ್ದೆಲ್ಲವನ್ನು ಮಾಡು
ವೆನು. ಬಂದು, ನನಗಾಗಿ ಈ ಜನರನ್ನು ಶಪಿಸು'' ಎಂದು
ಹೇಳಿಸಿದನು.

18ಬಿಳಾಮನು ಬಾಲಾಕನ ಅಧಿಕಾರಿಗಳಿಗೆ, ''ನನ್ನ
ದೇವರಾದ ಯೆಹೋವನ ಆಜ್ಞೆಗೆ ವಿರೋಧವಾಗಿ
ನಾನೇನೂ ಮಾಡಲು ಸಾಧ್ಯವಿಲ್ಲ. ಯೆಹೋವನು ಅಪ್ಪಣೆ
ಕೊಡದ ಹೊರತು ನಾನು ಚಿಕ್ಕಕಾರ್ಯವನ್ನಾಗಲೀ
ದೊಡ್ಡಕಾರ್ಯವನ್ನಾಗಲೀ ಮಾಡಲಾರೆ. ಬಾಲಾಕನು
ತನ್ನ ಅರಮನೆ ತುಂಬ ಬೆಳ್ಳಿಬಂಗಾರಗಳನ್ನು ಕೊಟ್ಟರೂ
ಯೆಹೋವನ ಆಜ್ಞೆಗೆ ವಿರುದ್ಧವಾಗಿ ಏನನ್ನೂ ಮಾಡ
ಲಾರೆ. 19ಆದ್ದರಿಂದ ನೀವು ಸಹ ಈ ರಾತ್ರಿ ಇಲ್ಲೇ
ಇರಬೇಕು. ಯೆಹೋವನು ನನಗೆ ಇನ್ನೂ ಹೇಳ
ಬೇಕಾದದ್ದನ್ನು ಈ ರಾತ್ರಿ ತಿಳಿದುಕೊಳ್ಳುವೆನು'' ಎಂದು
ಹೇಳಿದನು.

20ಆ ರಾತ್ರಿ ದೇವರು ಬಿಳಾಮನ ಬಳಿಗೆ ಬಂದು, ''ಈ
ಜನರು ನಿನ್ನನ್ನು ತಮ್ಮೊಡನೆ ಬರಬೇಕೆಂದು ಆಹ್ವಾನಿಸಲು
ಬಂದಿದ್ದಾರೆ. ಆದ್ದರಿಂದ ನೀನು ಅವರೊಂದಿಗೆ ಹೋಗ
ಬಹುದು. ಆದರೆ ನಾನು ಹೇಳುವುದನ್ನು ಮಾತ್ರ ಮಾಡು''
ಎಂದು ಹೇಳಿದನು.

### ಬಿಳಾಮನು ಮತ್ತು ಅವನ ಕತ್ತೆ

21ಮರುದಿನ ಬೆಳಿಗ್ಗೆ ಬಿಳಾಮನು ತನ್ನ ಕತ್ತೆಗೆ ತಡಿಹಾಕಿಸಿ
ಮೋವಾಬ್ಯರ ಪ್ರಧಾನರ ಜೊತೆಯಲ್ಲಿ ಹೊರಟನು.
22ಬಿಳಾಮನು ಕತ್ತೆಯ ಮೇಲೆ ಸವಾರಿ ಮಾಡುತ್ತಿದ್ದನು.
ಅವನ ಜೊತೆ ಇಬ್ಬರು ಆಳುಗಳಿದ್ದರು. ಬಿಳಾಮನು
ಪ್ರಯಾಣ ಮಾಡತೊಡಗಿದ್ದರಿಂದ ದೇವರು ಕೋಪ
ಗೊಂಡನು. ಆದ್ದರಿಂದ ಯೆಹೋವನ ದೂತನು ಬಿಳಾಮ
ನನ್ನು ತಡೆಯಲು ದಾರಿಯಲ್ಲಿ ನಿಂತುಕೊಂಡನು.

23ಯೆಹೋವನ ದೂತನು ಬಿಚ್ಚುಕತ್ತಿಯನ್ನು ಹಿಡಿದು
ಕೊಂಡು ದಾರಿಯಲ್ಲೇ ನಿಂತಿರುವುದನ್ನು ಆ ಕತ್ತೆ ನೋಡಿ
ದಾರಿಯನ್ನು ಬಿಟ್ಟು ಬಯಲಿನ ಕಡೆ ಹೋಯಿತು.
ಕತ್ತೆಯನ್ನು ದಾರಿಗೆ ತಿರುಗಿಸುವದಕ್ಕೆ ಬಿಳಾಮನು ಅದನ್ನು
ಹೊಡೆದನು. ಅವನಿಗೆ ದೂತನು ಕಾಣಿಸಲಿಲ್ಲ. 24ಆಮೇಲೆ
ಯೆಹೋವನ ದೂತನು ಎರಡು ದ್ರಾಕ್ಷಿತೋಟಗಳ
ನಡುವಿನ ಕಿರಿದಾದ ದಾರಿಯಲ್ಲಿ ನಿಂತುಕೊಂಡನು.
ಎರಡು ಕಡೆಯಲ್ಲಿಯೂ ಗೋಡೆಗಳಿದ್ದವು. 25ತಿರುಗಿ
ಕತ್ತೆಯು ಯೆಹೋವನ ದೂತನನ್ನು ನೋಡಿ ಗೋಡೆಗೆ
ತನ್ನನ್ನು ಒತ್ತರಿಸಿಕೊಂಡಿತು. ಆಗ ಬಿಳಾಮನ ಪಾದವು
ಗೋಡೆಗೆ ಒತ್ತರಿಸಿತು. ಆದ್ದರಿಂದ ಬಿಳಾಮನು ತಿರುಗಿ
ಕತ್ತೆಯನ್ನು ಹೊಡೆದನು.

26ಬಳಿಕ ಯೆಹೋವನ ದೂತನು ಮತ್ತೆ ಮುಂದೆ
ಹೋಗಿ ಕತ್ತೆಯು ಎಡಕ್ಕಾಗಲೀ ಬಲಕ್ಕಾಗಲೀ ಹೊರ
ಳಲು ಸಾಧ್ಯವಿಲ್ಲದಷ್ಟು ಇನ್ನೂ ಕಿರಿದಾದ ಸ್ಥಳದಲ್ಲಿ ನಿಂತು
ಕೊಂಡನು. 27ಕತ್ತೆಯು ಯೆಹೋವನ ದೂತನನ್ನು
ನೋಡಿ ಬಿಳಾಮನ ಕೆಳಗೆ ಅಡಗಿ ಮಲಗಿಕೊಂಡಿತು.
ಆಗ ಬಿಳಾಮನು ಸಿಟ್ಟುಗೊಂಡು ತನ್ನ ಕೋಲಿನಿಂದ
ಕತ್ತೆಯನ್ನು ಹೊಡೆದನು.

28ಆಗ ಯೆಹೋವನು ಆ ಕತ್ತೆಗೆ ಮಾತಾಡುವ ಶಕ್ತಿ
ಯನ್ನು ಕೊಟ್ಟನು. ಅದು ಬಿಳಾಮನನ್ನು, ‘‘ನೀನು
ಮೂರು ಸಾರಿ ನನ್ನನ್ನು ಹೊಡೆದದ್ದೇಕೆ? ನಾನು ನಿನ
ಗೇನು ಮಾಡಿದ್ದೇನೆ’’ ಎಂದು ಕೇಳಿತು.

29ಬಿಳಾಮನು, ‘‘ನೀನು ನನ್ನನ್ನು ಮೂರ್ಖನನ್ನಾಗಿ
ಮಾಡಿರುವೆ. ನನ್ನ ಕೈಯಲ್ಲಿ ಕತ್ತಿಯಿದ್ದರೆ ನಿನ್ನನ್ನು ಈಗಲೇ
ಕೊಂದು ಹಾಕಿ ಬಿಡುತ್ತಿದ್ದೆ’’ ಅಂದನು.

30ಅದಕ್ಕೆ ಕತ್ತೆಯು ಬಿಳಾಮನಿಗೆ, ‘‘ನೋಡು, ನಾನು
ನಿನ್ನ ಸ್ವಂತ ಕತ್ತೆ. ಅನೇಕಾನೇಕ ವರ್ಷಗಳಿಂದ ನೀನು ನನ್ನ
ಮೇಲೆ ಸವಾರಿ ಮಾಡುತ್ತಿರುವೆ. ನಾನು ಹಿಂದೆಂದೂ ಹೀಗೆ
ಮಾಡಲಿಲ್ಲವೆಂದು ನಿನಗೆ ತಿಳಿದದೆ’’ ಎಂದು ಹೇಳಿತು.

ಅದಕ್ಕೆ ಬಿಳಾಮನು, ‘‘ಅದು ನಿಜ’’ ಅಂದನು.

31ಆಗ ಯೆಹೋವನು ಬಿಳಾಮನ ಕಣ್ಣುಗಳನ್ನು ತೆರೆದು
ಬಿಚ್ಚುಕತ್ತಿಯನ್ನು ಹಿಡಿದುಕೊಂಡು ದಾರಿಯಲ್ಲಿ ನಿಂತಿ
ರುವ ಯೆಹೋವನ ದೂತನನ್ನು ನೋಡುವಂತೆ ಮಾಡಿ
ದನು. ಅವನನ್ನು ಕಂಡಾಗ ಬಿಳಾಮನು ಮೊಣಕಾಲೂರಿ
ತನ್ನ ಮುಖವನ್ನು ನೆಲದವರೆಗೂ ಬಾಗಿಸಿದನು.

32ಯೆಹೋವನ ದೂತನು ಬಿಳಾಮನಿಗೆ, ‘‘ನೀನು
ಮೂರು ಸಲವೂ ಕತ್ತೆಯನ್ನು ಹೊಡೆದದ್ದೇಕೆ? ನಿನ್ನ
ಪ್ರಯಾಣವು ನನ್ನ ಚಿತ್ತಕ್ಕೆ ವಿರುದ್ಧವಾದದ್ದರಿಂದ ನಿನ್ನನ್ನು
ತಡೆಯುವುದಕ್ಕೆ ನಾನೇ ಬಂದಿದ್ದೇನೆ. 33ಆ ಕತ್ತೆ ನನ್ನನ್ನು
ನೋಡಿ ಮೂರು ಸಲ ನನ್ನೆದುರಿನಿಂದ ಇನ್ನೊಂದು ಕಡೆಗೆ
ತಿರುಗಿಕೊಂಡಿತು. ಹಾಗೆ ತಿರುಗಿಕೊಳ್ಳದಿದ್ದಲ್ಲಿ ನಾನು
ಕತ್ತೆಯನ್ನು ಉಳಿಸಿ ನಿನ್ನನ್ನು ಆಗಲೇ ಕೊಂದು ಹಾಕಿ
ಬಿಡುತ್ತಿದ್ದೆನು’’ ಎಂದು ಹೇಳಿದನು.

34ಆಗ ಬಿಳಾಮನು ಯೆಹೋವನ ದೂತನಿಗೆ, ‘‘ನಾನು
ಪಾಪ ಮಾಡಿದ್ದೇನೆ. ನೀನು ದಾರಿಯಲ್ಲಿ ನಿಂತುಕೊಂಡಿ
ರುವುದು ನನಗೆ ಗೊತ್ತಾಗಲಿಲ್ಲ. ನನ್ನ ಪ್ರಯಾಣವು ನಿನಗೆ
ಮೆಚ್ಚಿಕೆಯಾಗಿಲ್ಲದಿದ್ದರೆ, ನಾನು ಮನೆಗೆ ಹಿಂತಿರುಗು
ವೆನು’’ ಎಂದು ಹೇಳಿದನು.

35ಆಗ ಯೆಹೋವನ ದೂತನು ಬಿಳಾಮನಿಗೆ, ‘‘ಆ
ಮನುಷ್ಯರ ಜೊತೆಯಲ್ಲಿ ಹೋಗು. ಆದರೆ ನಾನು ನಿನಗೆ
ಹೇಳುವ ಮಾತನ್ನೇ ಹೊರತು ಬೇರೆ ಯಾವುದನ್ನೂ ಹೇಳ
ಬಾರದು’’ ಎಂದು ಹೇಳಿದನು. ಆದ್ದರಿಂದ ಬಿಳಾಮನು
ಬಾಲಾಕನ ನಾಯಕರೊಡನೆ ಹೋದನು.

36ಬಿಳಾಮನು ಬರುತ್ತಿರುವ ಸುದ್ದಿಯನ್ನು ಬಾಲಾಕನು
ಕೇಳಿ ಅವನನ್ನು ಎದುರುಗೊಳ್ಳುವುದಕ್ಕಾಗಿ ತನ್ನ ದೇಶದ
ಸರಹದ್ದಿನಲ್ಲಿ ಅರ್ನೋನ್ ನದಿಯ ಬಳಿಯಲ್ಲಿರುವ
ಮೋವಾಬ್ಯರ ಊರಿನಲ್ಲಿ ಅವನನ್ನು ಭೇಟಿಯಾಗಲು
ಹೋದನು. 37ಬಾಲಾಕನು ಬಿಳಾಮನನ್ನು ಕಂಡಾಗ,
‘‘ನಿನ್ನನ್ನು ಅವಸರದಿಂದ ಕರೆಸುವುದಕ್ಕೆ ದೂತರನ್ನು ಕಳು
ಹಿಸಿದೆನಲ್ಲಾ. ನೀನು ಆಗಲೇ ಯಾಕೆ ಬರಲಿಲ್ಲ. ನಿನ್ನನ್ನು
ಘನಪಡಿಸುವುದಕ್ಕೆ ನಾನು ಸಮರ್ಥನಲ್ಲವೆಂದು ನೀನು
ಭಾವಿಸಿಕೊಂಡಿರುವಿಯಾ?’’ ಎಂದು ಕೇಳಿದನು.

38ಬಿಳಾಮನು, ‘‘ನಾನು ಈಗ ಬಂದಿದ್ದೇನೆ. ಆದರೆ,
ನಿನಗೆ ಇಷ್ಟವಾಗುವಂಥದ್ದನ್ನು ಹೇಳಲು ನನಗೆ
ಸಾಧ್ಯವಿಲ್ಲ. ದೇವರು ನನಗೆ ತಿಳಿಸುವುದನ್ನೇ ನಾನು ಹೇಳ
ಬೇಕು’’ ಅಂದನು.

39ಆಗ ಬಿಳಾಮನು ಬಾಲಾಕನೊಡನೆ ಕಿರ್ಯತ್
ಹುಚೋತಿಗೆ ಹೋದನು. 40ಬಾಲಾಕನು ಹೋರಿಗಳನ್ನು
ಮತ್ತು ಕುರಿಗಳನ್ನು ವಧಿಸಿ ಯಜ್ಞಮಾಡಿ ಬಿಳಾಮನಿಗೂ
ಅವನ ಸಂಗಡವಿದ್ದ ಪ್ರಧಾನರಿಗೂ ಊಟಕ್ಕೆ
ಕಳುಹಿಸಿದನು. 41ಮರುದಿನ ಬೆಳಿಗ್ಗೆ ಬಾಲಾಕನು
ಬಿಳಾಮನನ್ನು ಬಾಮೋತ್‌ಬಾಳ್ ಎಂಬ ಸ್ಥಳದವರೆಗೂ
ಕರೆದುಕೊಂಡು ಹೋದನು. ಅಲ್ಲಿಂದ ಇಸ್ರೇಲರ
ಪಾಳೆಯ ಸ್ವಲ್ಪಸ್ವಲ್ಪ ಕಾಣುತ್ತಿತ್ತು.

## ಬಿಳಾಮನ ಮೊದಲನೆಯ ಸಂದೇಶ

23 ಬಿಳಾಮನು ಬಾಲಾಕನಿಗೆ, ‘‘ಇಲ್ಲಿ ನೀನು ಏಳು
ಯಜ್ಞವೇದಿಕೆಗಳನ್ನು ನನಗೆ ಕಟ್ಟಿಸಿ ಏಳು
ಹೋರಿಗಳನ್ನೂ ಏಳು ಟಗರುಗಳನ್ನೂ ನನಗೆ ಸಿದ್ಧ
ಪಡಿಸು’’ ಅಂದನು. 2ಬಾಲಾಕನು ಹಾಗೆಯೇ ಮಾಡಿ
ದನು. ಬಾಲಾಕನೂ ಬಿಳಾಮನೂ ಪ್ರತಿಯೊಂದು ಯಜ್ಞ
ವೇದಿಕೆಯ ಮೇಲೆ ಒಂದು ಹೋರಿಯನ್ನೂ ಒಂದು
ಟಗರನ್ನೂ ಸರ್ವಾಂಗಹೋಮವಾಗಿ ಸಮರ್ಪಿಸಿದಾಗ,

3ಬಿಳಾಮನು ಬಾಲಾಕನಿಗೆ, ''ನೀನು ಸರ್ವಾಂಗ ಹೋಮ ಮಾಡಿದ ಸ್ಥಳದಲ್ಲೇ ಇರು. ನಾನು ಸ್ವಲ್ಪದೂರ ಹೋಗಿ ಬರುತ್ತೇನೆ. ಒಂದು ವೇಳೆ ಯೆಹೋವನು ನನ್ನನ್ನು ಸಂಧಿಸಲು ಬರಬಹುದು. ಆತನು ನನಗೆ ಪ್ರಕಟಿಸುವುದನ್ನು ನಿನಗೆ ತಿಳಿಸುವೆನು'' ಎಂದು ಹೇಳಿ ಮರವಿಲ್ಲದ ಒಂದು ದಿಣ್ಣೆಗೆ ಹೋದನು. 4ದೇವರು ಬಿಳಾಮನಿಗೆ ಎದುರಾಗಿ ಬಂದಾಗ ಬಿಳಾಮನು ಆತನಿಗೆ, ''ನಾನು ಆ ಏಳು ಯಜ್ಞವೇದಿಕೆಗಳನ್ನು ಕಟ್ಟಿಸಿ ಒಂದೊಂದು ಪೀಠದಲ್ಲಿ ಒಂದು ಹೋರಿಯನ್ನೂ ಒಂದು ಟಗರನ್ನೂ ಸರ್ವಾಂಗಹೋಮವಾಗಿ ಸಮರ್ಪಿಸಿದ್ದೇನೆ'' ಎಂದು ಹೇಳಿದನು.

5ಆಗ ಯೆಹೋವನು ಬಿಳಾಮನಿಗೆ ಅವನು ಹೇಳ ಬೇಕಾದ ಮಾತನ್ನು ಕಲಿಸಿಕೊಟ್ಟು,''ನೀನು ಬಾಲಾಕನ ಬಳಿಗೆ ತಿರುಗಿ ಹೋಗಿ ಹೀಗೆ ಹೇಳಬೇಕು'' ಎಂದು ಆಜ್ಞಾಪಿಸಿದನು.

6ಬಿಳಾಮನು ಬಾಲಾಕನ ಬಳಿಗೆ ತಿರುಗಿಬಂದಾಗ ಬಾಲಾಕನು ಯಜ್ಞವೇದಿಕೆಯ ಬಳಿಯಲ್ಲಿ ನಿಂತಿದ್ದನು. ಮೋವಾಬ್ಯರ ಪ್ರಧಾನರೆಲ್ಲರೂ ಅವನೊಡನೆ ನಿಂತಿದ್ದರು. 7ಆಗ ಬಿಳಾಮನು ಹೀಗೆ ಹೇಳಿದನು:

''ಮೋವಾಬ್ಯರ ಅರಸನಾದ ಬಾಲಾಕನು ನನ್ನನ್ನು
ಅರಾಮಿನಿಂದ ಕರೆಸಿದನು. ಪೂರ್ವ ದಿಕ್ಕಿನ
ಬೆಟ್ಟಗಳಿಂದ ನನ್ನನ್ನು ಕರೇ ಕಳುಹಿಸಿದನು.
''ನೀನು ಬಂದು ನನಗೋಸ್ಕರ ಯಾಕೋಬನನ್ನು
ಶಪಿಸು'' ಎಂದು ಬಾಲಾಕನು ಹೇಳಿದನು.
8 ಆದರೆ ದೇವರು ಅವರನ್ನು ಆಶೀರ್ವದಿಸಿರುವಾಗ
ನಾನು ಅವರನ್ನು ಶಪಿಸಲು ಆಗುವುದಿಲ್ಲ.
ಯೆಹೋವನು ಅವರ ಮೇಲೆ ನಾಶನವನ್ನು ಬರ
ಮಾಡಲಿಲ್ಲ. ಆದ್ದರಿಂದ ನಾಶನವು ಅವರ ಮೇಲೆ
ಇಳಿದುಬರುವಂತೆ ಮಾಡಲು ನನಗೆ ಸಾಧ್ಯವಿಲ್ಲ.
9 ಬೆಟ್ಟದ ಶಿಖರದಿಂದ ಅವರನ್ನು ನಾನು ನೋಡಿ
ದೆನು; ಗುಡ್ಡದಿಂದ ಅವರನ್ನು ಕಂಡೆನು. ಅವರು
ತಮ್ಮನ್ನು ಇತರ ಜನಾಂಗಗಳಿಗಿಂತ ಬೇರೆ
ಯಾದವರು ಎಂದು ಪರಿಗಣಿಸಿಕೊಂಡಿದ್ದಾರೆ.
10 ಧೂಳಿನಷ್ಟು ಅಸಂಖ್ಯವಾದ ಯಾಕೋಬ್ಯರನ್ನು
ಲೆಕ್ಕಿಸುವುದಕ್ಕೆ ಯಾರಿಂದಾದೀತು; ಇಸ್ರೇಲರ
ಕಾಲ್ಭಾಗವನ್ನಾದರೂ ಯಾರೂ ಲೆಕ್ಕಿಸಲಾರರು.
ಸಜ್ಜನರಾದ ಅವರು ಸಾಯುವ ರೀತಿಯಲ್ಲೇ
ನಾನೂ ಸಾಯ ಬಯಸುವೆ. ಅವರಿಗುಂಟಾಗುವ
ಅಂತ್ಯ ನನಗೂ ಉಂಟಾಗಲಿ.''

11ಬಾಲಾಕನು ಬಿಳಾಮನಿಗೆ, ''ಇದೇನು ನೀನು ನನಗೆ ಮಾಡಿದ್ದು! ನನ್ನ ಶತ್ರುಗಳನ್ನು ಶಪಿಸುವುದಕ್ಕೆ ನಿನ್ನನ್ನು ಕರೆಸಿದೆನು. ನೀನು ಅವರನ್ನು ಶಪಿಸದೆ ಆಶೀರ್ವಾದವನ್ನೇ ಮಾಡಿಬಿಟ್ಟೆ'' ಎಂದು ಹೇಳಿದನು.

12ಅದಕ್ಕೆ ಬಿಳಾಮನು, ''ಯೆಹೋವನು ನನಗೆ ತಿಳಿಸು ವುದನ್ನು ನಾನು ಹೇಳಬಾರದೇ?'' ಎಂದು ಕೇಳಿದನು.

13ಆಗ ಬಾಲಾಕನು, ''ದಯಮಾಡಿ ನನ್ನೊಂದಿಗೆ ಇನ್ನೊಂದು ಸ್ಥಳಕ್ಕೆ ಬಾ; ಅಲ್ಲಿಂದ ಅವರನ್ನು ನೋಡ ಬಹುದು. ಆದರೆ ಅವರೆಲ್ಲರೂ ಕಾಣಿಸದೆ ಕಡೇಭಾಗವು ಮಾತ್ರ ಕಾಣಿಸುವುದು. ಅಲ್ಲಿಂದ ನನಗೋಸ್ಕರ ಅವರನ್ನೇ ಶಪಿಸಬೇಕು'' ಎಂದು ಹೇಳಿದನು. 14ಹೀಗೆ ಬಾಲಾಕನು ಬಿಳಾಮನನ್ನು''ಕಾವಲುಗಾರರ ಬೆಟ್ಟಗಳು'' ಎಂಬ ಸ್ಥಳಕ್ಕೆ ಕರೆದುಕೊಂಡು ಹೋದನು. ಇದು ಪಿಸ್ಗಾ ಪರ್ವತ ಶ್ರೇಣಿಯ ತುದಿಯಲ್ಲಿತ್ತು. ಅಲ್ಲಿಯೂ ಏಳು ಯಜ್ಞ ವೇದಿಕೆಗಳನ್ನು ಕಟ್ಟಿಸಿ ಪ್ರತಿಯೊಂದು ವೇದಿಕೆಯಲ್ಲಿ ಒಂದು ಹೋರಿಯನ್ನು ಮತ್ತು ಒಂದು ಟಗರನ್ನು ಸರ್ವಾಂಗ ಹೋಮವಾಗಿ ಸಮರ್ಪಿಸಿದನು.

15ಬಿಳಾಮನು ಬಾಲಾಕನಿಗೆ, ''ನೀನು ನಿನ್ನ ಯಜ್ಞ ವೇದಿಕೆಯ ಬಳಿಯಲ್ಲಿರು. ನಾನು ಆ ಕಡೆ ಹೋಗಿ ಯೆಹೋವನನ್ನು ಸಂಧಿಸುವೆನು'' ಎಂದು ಹೇಳಿದನು.

16ಯೆಹೋವನು ಬಿಳಾಮನಿಗೆ ಎದುರಾಗಿ ಬಂದು ಅವನು ಹೇಳಬೇಕಾದ ಮಾತನ್ನು ಕಲಿಸಿಕೊಟ್ಟು, ''ನೀನು ಬಾಲಾಕನ ಬಳಿಗೆ ಹೋಗಿ ಹೀಗೆ ಹೇಳಬೇಕು''ಅಂದನು. 17ಬಿಳಾಮನು ಬಾಲಾಕನ ಬಳಿಗೆ ಬಂದಾಗ ಅವನು ಇನ್ನೂ ಯಜ್ಞಪೀಠದ ಬಳಿಯಲ್ಲಿ ನಿಂತಿದ್ದನು. ಮೋವಾಬ್ಯರ ಪ್ರಧಾನರು ಅವನ ಸಂಗಡ ಇದ್ದರು. ಬಾಲಾಕನು,''ಯೆಹೋವನು ಏನು ಹೇಳಿದ್ದಾನೆ?'' ಎಂದು ಕೇಳಿದನು.

### ಬಿಳಾಮನ ಎರಡನೆಯ ಸಂದೇಶ

18ಆಗ ಬಿಳಾಮನು ಈ ಸಂಗತಿಗಳನ್ನು ಹೇಳಿದನು,

"ಬಾಲಾಕನೇ, ಎದ್ದುನಿಂತು ನಾನು ಹೇಳುವು
ದನ್ನು ಕೇಳು. ಚಿಪ್ಪೋರನ ಮಗನಾದ
ಬಾಲಾಕನೇ, ಕೇಳು.
19 ದೇವರು ಮನುಷ್ಯನಲ್ಲ; ಆತನು ಸುಳ್ಳಾಡು
ವುದಿಲ್ಲ. ದೇವರು ಮಾನವನಲ್ಲ; ಆತನ ಉದ್ದೇಶ
ಗಳು ಬದಲಾಗುವುದಿಲ್ಲ. ಯೆಹೋವನು ತಾನು
ಮಾಡುತ್ತೇನೆಂದು ಹೇಳಿದರೆ, ಅದನ್ನು
ಮಾಡಿಯೇ ಮಾಡುತ್ತಾನೆ. ಯೆಹೋವನು
ವಾಗ್ದಾನ ಮಾಡಿದರೆ, ಅದನ್ನು ನೆರವೇರಿಸುತ್ತಾನೆ.
20 ಆ ಜನರನ್ನು ಆಶೀರ್ವದಿಸಬೇಕೆಂದು
ಯೆಹೋವನು ನನಗೆ ಆಜ್ಞಾಪಿಸಿದನು;
ಯೆಹೋವನು ಅವರನ್ನು ಆಶೀರ್ವದಿಸಿದ್ದಾನೆ.
ಅದನ್ನು ಬದಲಾಯಿಸಲು ನನಗೆ ಸಾಧ್ಯವಿಲ್ಲ.

21 ಯಾಕೋಬನ ಜನರಲ್ಲಿ ಯಾವ ದೋಷವೂ
ಇಲ್ಲ. ಇಸ್ರೇಲಿನ ಜನರಲ್ಲಿ ಯಾವ ಆಪತ್ತು
ಕಾಣುತ್ತಿಲ್ಲ. ಯೆಹೋವನೇ ಅವರ ದೇವರು.
ಆತನು ಅವರೊಂದಿಗಿದ್ದಾನೆ.
22 ದೇವರು ಅವರನ್ನು ಈಜಿಪ್ಟಿನಿಂದ ಕರೆದು
ಕೊಂಡು ಬಂದನು. ಅವರು ಕಾಡು ಎತ್ತಿನಷ್ಟು
ಬಲಿಷ್ಠರಾಗಿದ್ದಾರೆ.
23 ನಿಜವಾಗಿಯೂ ಯಾಕೋಬನ ಜನರ ಮಧ್ಯ
ದಲ್ಲಿ ಶಕುನ ನೋಡುವವರು ಇಲ್ಲ. ಇಸ್ರೇಲಿನಲ್ಲಿ
ಕಣಿಹೇಳುವವರು ಇಲ್ಲ. ಯಾಕೋಬನಿಗೆ
ಒಂದುಸಲ ತಿಳಿಸಲಾಗಿದೆ. 'ಹೌದು, ದೇವರ
ಯೋಜನೆಯನ್ನು' ಇಸ್ರೇಲರಿಗೆ ತಿಳಿಸಲಾಗಿದೆ.
24 ಜನರು ಸಿಂಹದಂತೆ ಬಲಿಷ್ಠರು. ಅವರು ಸಿಂಹ
ದಂತೆ ಹೋರಾಡುತ್ತಾರೆ. ಆ ಸಿಂಹ ತನ್ನ ವೈರಿ
ಯನ್ನು ತಿಂದು ಬಿಡುವ ತನಕ ವಿಶ್ರಮಿಸುವುದಿಲ್ಲ.
ಆ ಸಿಂಹವು ತನಗೆ ಬಲಿಯಾದವರ ರಕ್ತವನ್ನು
ಹೀರುವವರೆಗೆ ಎಂದಿಗೂ ವಿಶ್ರಮಿಸುವುದಿಲ್ಲ.''

25 ಆಗ ಬಾಲಾಕನು ಬಿಳಾಮನಿಗೆ, ''ನೀನು ಅವರನ್ನು
ಶಪಿಸಲೂ ಬೇಡ, ಆಶೀರ್ವದಿಸಲೂ ಬೇಡ'' ಎಂದು
ಹೇಳಿದನು.

26 ಅದಕ್ಕೆ ಬಿಳಾಮನು, ''ಯೆಹೋವನು ಹೇಳುವು
ದನ್ನೇ ನಾನು ಮಾಡುತ್ತೇನೆ ಎಂದು ನಾನು ನಿನಗೆ
ಮೊದಲೇ ಹೇಳಲಿಲ್ಲವೆ'' ಅಂದನು.

27 ಆಮೇಲೆ ಬಾಲಾಕನು ಬಿಳಾಮನಿಗೆ, ''ಸರಿ
ಇನ್ನೊಂದು ಸ್ಥಳಕ್ಕೆ ಬಾ. ಒಂದು ವೇಳೆ ನೀನು ಅವರನ್ನು
ಶಪಿಸಬೇಕೆಂದು ದೇವರು ಅಪೇಕ್ಷೆಪಡಬಹುದು'' ಎಂದು
ಹೇಳಿದನು. 28 ಬಾಲಾಕನು ಬಿಳಾಮನನ್ನು ''ಪೆಗೋರ್''
ಬೆಟ್ಟದ ತುದಿಗೆ ಕರೆದುಕೊಂಡು ಹೋದನು. ಆ ಬೆಟ್ಟದ
ಮೇಲಿಂದ ಕೆಳಗಿರುವ ಮರುಭೂಮಿಯು ಕಾಣಿಸುತ್ತದೆ.

29 ಆಗ ಬಿಳಾಮನು ಬಾಲಾಕನಿಗೆ, ''ಇಲ್ಲಿಯೂ ಏಳು
ಯಜ್ಞವೇದಿಕೆಗಳನ್ನು ಕಟ್ಟಿಸಿ ಏಳು ಹೋರಿಗಳನ್ನು ಮತ್ತು
ಏಳು ಟಗರುಗಳನ್ನು ಸಿದ್ಧಪಡಿಸು'' ಎಂದು ಹೇಳಿದನು.
30 ಬಾಲಾಕನು ಅವನ ಅಪ್ಪಣೆಯ ಮೇರೆಗೆ ಪ್ರತಿ
ಯೊಂದನ್ನು ಮಾಡಿ ಪ್ರತಿಯೊಂದು ಪೀಠದಲ್ಲಿ ಒಂದು
ಹೋರಿಯನ್ನು ಮತ್ತು ಒಂದು ಟಗರನ್ನು ಸರ್ವಾಂಗ
ಹೋಮವಾಗಿ ಅರ್ಪಿಸಿದನು.

### ಬಿಳಾಮನ ಮೂರನೆ ಸಂದೇಶ

24 ಇಸ್ರೇಲರನ್ನುಆಶೀರ್ವದಿಸುವುದೇಯೆಹೋವನ
ಆಸೆಯೆಂದು ಬಿಳಾಮನು ತಿಳಿದುಕೊಂಡನು.
ಆದ್ದರಿಂದ ಬಿಳಾಮನು ಮೊದಲಿನಂತೆ ಶಕುನ ನೋಡು
ವುದಕ್ಕೆ ಹೋಗದೆ ಮರುಭೂಮಿಯ ಕಡೆಗೆ ಮುಖವನ್ನು
ತಿರುಗಿಸಿಕೊಂಡನು. 2 ಬಿಳಾಮನು ಕಣ್ಣೆತ್ತಿ ನೋಡಲಾಗಿ
ಇಸ್ರೇಲರೆಲ್ಲರನ್ನು ನೋಡಿದನು. ಅವರು ತಮ್ಮ ಕುಲಗಳ
ಪ್ರಕಾರ ಡೇರೆಗಳನ್ನು ಹಾಕಿ ಕೊಂಡಿದ್ದರು. 3 ಆಗ ಅವನು
ದೇವರಾತ್ಮ ಪ್ರೇರಿತನಾಗಿ ಇಂತೆಂದನು:

''ಬೆಯೋರನ ಮಗನಾದ ಬಿಳಾಮನ ಸಂದೇಶವಿದು.
ನನ್ನ ಕಣ್ಣುಗಳು ತೆರೆಯಲ್ಪಟ್ಟಿವೆ. ನಾನು ನೋಡುವುದನ್ನೇ
ಹೇಳುತ್ತೇನೆ.

4 ನಾನು ಈ ಸಂದೇಶವನ್ನು ದೇವರಿಂದ ಕೇಳಿದೆನು.
ಸರ್ವಶಕ್ತನಾದ ದೇವರು ತೋರಿಸಿದವುಗಳನ್ನು ನೋಡಿ
ದೆನು. ನಾನು ಸ್ಪಷ್ಟವಾಗಿ ನೋಡುವುದನ್ನು ದೀನತೆ
ಯಿಂದ ತಿಳಿಸುತ್ತೇನೆ.

5 ''ಯಾಕೋಬ್ಯರೇ, ನಿಮ್ಮ ಡೇರೆಗಳು ಬಹಳ ಚೆಲು
ವಾಗಿವೆ! ಇಸ್ರೇಲರೇ, ನೀವು ವಾಸಿಸುವ ಸ್ಥಳಗಳು ಬಹಳ
ರಮ್ಯವಾಗಿವೆ!

6 ನಿಮ್ಮ ಗುಡಾರಗಳು ಕಣಿವೆಗಳಂತೆ ಹರಡಿಕೊಂಡಿವೆ.
ನಿಮ್ಮ ಗುಡಾರಗಳು ನದಿಯ ಬಳಿಯಿರುವ ತೋಟ
ಗಳಂತಿವೆ. ನಿಮ್ಮ ಗುಡಾರಗಳು ಯೆಹೋವನು ನೆಟ್ಟ
ಸುವಾಸನೆಯ ಪೊದೆಗಳಂತೆಯೂ ನೀರಿನ ಬಳಿಯಿರುವ
ದೇವದಾರಿನ ಮರದಂತೆಯೂ ಇವೆ.

7 ನಿಮಗೆ ಕುಡಿಯಲು ಯಾವಾಗಲೂ ಬೇಕಾದಷ್ಟು
ನೀರು ಇರುವುದು. ನೀವು ಬಿತ್ತಿದ ಬೀಜಗಳು ಬೆಳೆಯಲು
ಸಾಕಷ್ಟು ನೀರು ಇರುವುದು. ನಿಮ್ಮ ಅರಸನು ಆಗಾಗ್
ಎಂಬವನಿಗಿಂತಲೂ ದೊಡ್ಡವನಾಗಿದ್ದಾನೆ. ನಿಮ್ಮ
ರಾಜ್ಯವು ಬಹಳ ಬಲಿಷ್ಠವಾಗಿರುವುದು.

8 ''ದೇವರು ಆ ಜನರನ್ನು ಈಜಿಪ್ಟಿನಿಂದ ಕರೆದು
ಕೊಂಡು ಬಂದನು. ಅವರು ಕಾಡು ಎತ್ತಿನಂತೆ ಬಲಿಷ್ಠ
ರಾಗಿದ್ದಾರೆ. ಅವರು ತಮ್ಮೆಲ್ಲಾ ಶತ್ರುಗಳನ್ನು ಸೋಲಿಸು
ವರು. ಅವರು ತಮ್ಮ ವೈರಿಗಳ ಮೂಳೆಗಳನ್ನು ಮುರಿದು
ಹಾಕುವರು. ಅವರ ಬಾಣಗಳು ಅವರ ವೈರಿಗಳನ್ನು
ಕೊಲ್ಲುವವು. 9 'ಅವರು ಅಡಗಿಕೊಂಡಿರುವರು; ಇಸ್ರೇ
ಲರು ಸಿಂಹದಂತೆಯೂ ಹೆಣ್ಣು ಸಿಂಹದಂತೆಯೂ ವಿಶ್ರಮಿ
ಸುವರು. ಅದನ್ನು ಎಬ್ಬಿಸಲು ಯಾರಿಗೆ ಧೈರ್ಯವಿದೆ.
ನಿಮ್ಮನ್ನು ಆಶೀರ್ವದಿಸುವವನು ಆಶೀರ್ವದಿಸಲ್ಪಡು
ವನು. ನಿಮ್ಮನ್ನು ಶಪಿಸುವವನು ಶಪಿಸಲ್ಪಡುವನು.''

10 ಬಾಲಾಕನು ಬಿಳಾಮನ ಮೇಲೆ ಕೋಪಗೊಂಡು,
ಚಪ್ಪಾಳೆಹೊಡೆದು, ''ನನ್ನ ಶತ್ರುಗಳನ್ನು ಶಪಿಸುವುದಕ್ಕೆ
ನಿನ್ನನ್ನು ಕರೆಸಿದೆನು. ಆದರೆ ನೀನು ಅವರನ್ನು ಮೂರು
ಸಾರಿಯೂ ಆಶೀರ್ವದಿಸಿದೆ. 11 ಆದ್ದರಿಂದ ನೀನೀಗ ನೇರ
ವಾಗಿ ಮನೆಗೆ ಹೋಗಿಬಿಡು. ನಿನಗೆ ಹೆಚ್ಚು ಹಣ ಕೊಡುವು
ದಾಗಿ ಆಲೋಚಿಸಿದ್ದೆನು. ಆದರೆ ನಿನ್ನ ಬಹುಮಾನವನ್ನು
ಕಳೆದುಕೊಳ್ಳುವಂತೆ ಯೆಹೋವನು ಮಾಡಿದನು''
ಎಂದು ಹೇಳಿದನು.

12-13ಅದಕ್ಕೆ ಬಿಳಾಮನು ಬಾಲಾಕನಿಗೆ, ''ಬಾಲಾಕನು ತನ್ನ ಮನೆ ತುಂಬ ಬೆಳ್ಳಿಬಂಗಾರವನ್ನು ಕೊಟ್ಟರೂ ನಾನು ಯೆಹೋವನ ಆಜ್ಞೆಯನ್ನು ಮೀರಿ ನನಗೆ ಇಷ್ಟಬಂದಂತೆ ಕೆಟ್ಟದ್ದನ್ನಾಗಲೀ ಒಳ್ಳೆಯದನ್ನಾಗಲೀ ನಾನು ಮಾಡ ಲಾರೆನು; ಆದರೆ ಯೆಹೋವನು ಆಜ್ಞಾಪಿಸುವುದನ್ನೇ ಮಾತಾಡುವೆನೆಂದು ನೀನು ನನ್ನ ಬಳಿಗೆ ಕಳುಹಿಸಿದ ದೂತರಿಗೆ ಹೇಳಲಿಲ್ಲವೇ. 14ಆಗಲಿ, ನಾನು ನನ್ನ ಸ್ವಜನರ ಬಳಿಗೆ ಹೋಗುತ್ತೇನೆ. ಆದರೆ ಮುಂದೆ ಆ ಜನರು ನಿನ್ನ ಜನರಿಗೆ ಏನು ಮಾಡುವರೋ ಅದನ್ನು ನಿನಗೆ ತಿಳಿಸು ತ್ತೇನೆ, ಕೇಳು'' ಎಂದು ಹೇಳಿದನು.

### ಬಿಳಾಮನ ಕೊನೆಯ ಸಂದೇಶ

15ಆಗ ಬಿಳಾಮನು ಇಂತೆಂದನು: ''ಬೆಯೋರನ ಮಗನಾದ ಬಿಳಾಮನ ಸಂದೇಶವಿದು: ನಾನು ಸ್ಪಷ್ಟವಾಗಿ ನೋಡುತ್ತಿರುವ ಸಂಗತಿಗಳ ಬಗ್ಗೆ ಮಾತಾಡುತ್ತಿದ್ದೇನೆ.

16''ನಾನು ದೇವರ ಮುಂದೆ ಅಡ್ಡಬೀಳುತ್ತೇನೆ, ಆದರೆ ನನ್ನ ಕಣ್ಣುಗಳು ಮುಚ್ಚಲ್ಪಟ್ಟಿಲ್ಲ. ನಾನು ದೇವರ ವಾಕ್ಯ ಗಳನ್ನು ಕೇಳುತ್ತಿದ್ದೇನೆ. ನಾನು ಮಹೋನ್ನತನಾದ ದೇವ ರಿಂದ ಜ್ಞಾನವನ್ನು ಹೊಂದಿಕೊಳ್ಳುತ್ತಿದ್ದೇನೆ. ಸರ್ವಶಕ್ತ ನಾದ ದೇವರು ತೋರಿಸುವ ಸಂಗತಿಗಳನ್ನು ನಾನು ನೋಡುತ್ತಿದ್ದೇನೆ. 17ಬರುತ್ತಿರುವ ಒಬ್ಬನನ್ನು ನೋಡುತ್ತಿ ದ್ದೇನೆ. ಆದರೆ ಈಗಲ್ಲ. ಬರುತ್ತಿರುವ ಒಬ್ಬನನ್ನು ನೋಡು ತ್ತಿದ್ದೇನೆ. ಆದರೆ ಬೇಗನೆ ಅಲ್ಲ. ಯಾಕೋಬನ ವಂಶ ದಿಂದ ನಕ್ಷತ್ರವೊಂದು ಬರುವುದು. ಇಸ್ರೇಲರಿಂದ ಅರಸ ನೊಬ್ಬನು ಬರುವನು. ಅವನು ಮೋವಾಬ್ಯರ ತಲೆಯನ್ನು ಜಜ್ಜುವನು. ಆ ಅರಸನು ಶೇತನ ಪುತ್ರರೆಲ್ಲರ ತಲೆಗಳನ್ನು ಜಜ್ಜುವನು.

18''ಇಸ್ರೇಲರು ಬಲಿಷ್ಠರಾಗುವರು. ಅವರು ಎದೋಮ್ ದೇಶವನ್ನು ಪಡೆಯುವರು. ಅವರು ತಮ್ಮ ವೈರಿಯಾದ ಸೇಯೀರನ ದೇಶವನ್ನು ಪಡೆಯುವರು.

19''ಯಾಕೋಬನ ವಂಶದಿಂದ ಹೊಸ ಅರಸನೊಬ್ಬನು ಬರುವನು. ಆ ಅರಸನು ಆ ಪಟ್ಟಣದಲ್ಲಿ ಉಳಿದವರನ್ನು ನಾಶಮಾಡುವನು.''

20''ತರುವಾಯ ಬಿಳಾಮನು ಅಮಾಲೇಕ್ಯರನ್ನು ನೋಡಿ ಹೀಗಂದನು:

''ಅಮಾಲೇಕ್ಯರು ಎಲ್ಲಾ ಜನಾಂಗಗಳಲ್ಲಿ ಬಲಿಷ್ಠರು; ಅಮಾಲೇಕ್ಯರು ಎಲ್ಲಾ ಜನಾಂಗಗಳಲ್ಲಿ ಮೊದಲನೆಯ ವರು; ಆದರೆ ಕೊನೆಯಲ್ಲಿ ಅವರು ನಾಶವಾಗುವರು.''

21ಆಗ ಬಿಳಾಮನು ಕೇನ್ಯರನ್ನು ನೋಡಿ ಹೀಗಂದನು:

''ನಿಮ್ಮ ಮನೆಯು ಬೆಟ್ಟದ ತುದಿಯಲ್ಲಿರುವ ಪಕ್ಷಿಯ ಗೂಡಿನಂತೆ* ಸುರಕ್ಷಿತವಾಗಿದೆಯೆಂದು ನೀವು ನಂಬುತ್ತೀರಿ.

22''ಆದರೆ ಕೇನ್ಯರೇ, ಅಶ್ಶೂರವು ನಿಮ್ಮನ್ನು ಸೆರೆ ಹೊಯ್ಯುವಾಗ ಅದು ನಾಶವಾಗುವುದು.'' 23ಆಗ ಬಿಳಾಮನು ಹೀಗಂದನು: ''ದೇವರು ಇದನ್ನು ಮಾಡುವಾಗ ಯಾರೂ ಉಳಿಯರು.

24''ಸೈಪ್ರಸ್‌ನ ತೀರಗಳಿಂದ ಹಡಗುಗಳು ಬರುವವು. ಅವರು ಅಶ್ಶೂರವನ್ನೂ ಏಬೆರವನ್ನೂ ಸೋಲಿಸುವರು; ಆದರೆ ಅವರು ಸಹ ನಾಶವಾಗುವರು.''

25ಆಗ ಬಿಳಾಮನು ಎದ್ದು ತನ್ನ ಸ್ಥಳಕ್ಕೆ ಹಿಂತಿರುಗಿ ಹೋದನು. ಬಾಲಾಕನೂ ಸಹ ಹೊರಟುಹೋದನು.

### ಪೆಯೋರಿನಲ್ಲಿ ಇಸ್ರೇಲರು

25 ಇಸ್ರೇಲರು ಅಖಾಸಿಯದ ಸಮೀಪದಲ್ಲಿ ಇಳಿದುಕೊಂಡಿದ್ದರು. ಅವರು ಅಲ್ಲಿದ್ದಾಗ ಮೋವಾಬ್ ಸ್ತ್ರೀಯರೊಡನೆ ಲೈಂಗಿಕ ಪಾಪಗಳನ್ನು ಮಾಡತೊಡಗಿದರು. 2-3ಮೋವಾಬ್ ಸ್ತ್ರೀಯರು ತಮ್ಮ ಸುಳ್ಳುದೇವರಿಗೆ ಮಾಡಿದ ಔತಣಯಜ್ಞಗಳಿಗೆ ಅವರನ್ನು ಆಮಂತ್ರಿಸಿದರು. ಹೀಗಾಗಿ ಇಸ್ರೇಲರು ಅವರ ಯಜ್ಞಗಳ ಆಹಾರವನ್ನು ತಿಂದರು ಮತ್ತು ಅವರ ದೇವರನ್ನು ಪೂಜಿಸಿ ದರು. ಈ ರೀತಿ ಇಸ್ರೇಲರು ಸುಳ್ಳುದೇವರಾದ ಪೆಗೋರ್ ಬಾಳನ ಭಕ್ತರಾದರು. ಹೀಗಾಗಿ ಯೆಹೋವನು ಅವರ ಮೇಲೆ ಬಹಳವಾಗಿ ಕೋಪಗೊಂಡನು. 4ಯೆಹೋವನು ಮೋಶೆಗೆ, ''ನೀನು ಜನರ ನಾಯಕರನ್ನೆಲ್ಲ ಬಂಧಿಸಿ ಯೆಹೋವನ ಮುಂದೆ ಬಹಿರಂಗವಾಗಿ ಅವರನ್ನು ನೇಣು ಗಂಬಕ್ಕೆ ಏರಿಸು. ಹೀಗೆ ಯೆಹೋವನ ಕೋಪಾಗ್ನಿಯನ್ನು ಇಸ್ರೇಲರಿಂದ ತೊಲಗಿಸಬೇಕು'' ಎಂದು ಹೇಳಿದನು.

5ಆದಕಾರಣ ಮೋಶೆ ಇಸ್ರೇಲರ ನ್ಯಾಯಾಧಿಪತಿಗಳಿಗೆ, ''ನಿಮ್ಮಲ್ಲಿ ಪ್ರತಿಯೊಬ್ಬನು ಪೆಗೋರದ ಬಾಳನಿಗೆ ಸೇರಿ ಕೊಂಡ ತನ್ನತನ್ನ ವಶದಲ್ಲಿರುವವರನ್ನು ಕೊಲ್ಲಬೇಕು'' ಎಂದು ಆಜ್ಞಾಪಿಸಿದನು.

6ಆಗ ಮೋಶೆ ಮತ್ತು ಇಡೀ ಇಸ್ರೇಲ್ ಸಮುದಾಯವು ಒಟ್ಟಾಗಿ ಸೇರಿಬಂದು ದೇವದರ್ಶನಗುಡಾರದ ಬಾಗಿ ಲಲ್ಲಿ ಅಳುತ್ತಿದ್ದರು. ಅಷ್ಟರಲ್ಲಿ ಇಸ್ರೇಲ್ ಮನುಷ್ಯ ನೊಬ್ಬನು ಮಿದ್ಯಾನ್ ಸ್ತ್ರೀಯೊಬ್ಬಳನ್ನು ತನ್ನ ಸಂಬಂಧಿಕರ ಬಳಿಗೆ ಕರೆದುಕೊಂಡು ಬಂದನು. ಮೋಶೆಯ ಮತ್ತು ಎಲ್ಲಾ ಜನರ ಕಣ್ಣೆದುರಿನಲ್ಲೇ ಅವನು ಹೀಗೆ ಮಾಡಿದನು. 7ಕೂಡಲೇ ಯಾಜಕನಾಗಿದ್ದ ಆರೋನನ ಮೊಮ್ಮಗನೂ ಎಲ್ಲಾಜಾರನ ಮಗನೂ ಆದ ಫೀನೆಹಾಸನು ಸಭೆಯ ನಡುವೆಯಿಂದೆದ್ದು ಈಟಿಯನ್ನು ತೆಗೆದುಕೊಂಡು 8ಆ ಇಸ್ರೇಲನನ್ನು ಹಿಂಬಾಲಿಸಿ ಮದುವೆಯ ಮಲಗುವ ಕೋಣೆಯೊಳಗೆ ಹೋಗಿ ಅವನನ್ನೂ ಆ ಮಿದ್ಯಾನ್ ಸ್ತ್ರೀಯನ್ನೂ ಒಂದೇ ಏಟಿನಿಂದ ಹೊಟ್ಟೆಯಲ್ಲಿ ತಿವಿದು ಕೊಂದನು. ಆಗ ಇಸ್ರೇಲರಿಗುಂಟಾದ ವ್ಯಾಧಿ ನಿಂತು

---

**ಗೂಡು** ಹೀಬ್ರೂ ಭಾಷೆಯಲ್ಲಿ ಈ ಪದವು ''ಕೇನ್ಯರು'' ಎಂಬ ಉಚ್ಚರಣೆಯನ್ನು ಹೊಂದಿದೆ.

ಹೋಯಿತು. 9ಆ ವ್ಯಾಧಿಯಿಂದ ಇಪ್ಪತ್ತನಾಲ್ಕು ಸಾವಿರ
ಜನರು ಸತ್ತುಹೋದರು.
10-11ಆಗ ಯೆಹೋವನು ಮೋಶೆಗೆ, ''ನಾನೇ ನನ್ನ
ಗೌರವವನ್ನು ಕಾಪಾಡಿಕೊಳ್ಳುವ ಮೇರೆಗೆ ಯಾಜಕ
ನಾಗಿದ್ದ ಆರೋನನ ಮೊಮ್ಮಗನೂ ಎಲ್ಲಾಜಾರನ
ಮಗನೂ ಆಗಿರುವ ಫೀನೆಹಾಸನು ನನ್ನ ಗೌರವವನ್ನು
ಕಾಪಾಡಿ ಇಸ್ರೇಲರ ಮೇಲಿದ್ದ ನನ್ನ ಕೋಪವನ್ನು
ತೊಲಗಿಸಿದ್ದಾನೆ. ಹೀಗಿರುವುದರಿಂದ ನಾನು ನನ್ನ
ಗೌರವವನ್ನು ಕಾಪಾಡಿಕೊಳ್ಳುವುದಕ್ಕಾಗಿ ಇಸ್ರೇಲರನ್ನು
ನಿರ್ಮೂಲ ಮಾಡುವ ಅಗತ್ಯವಿಲ್ಲ. 12ಆದಕಾರಣ ನಾನು
ಅವನ ಸಂಗಡ ಸಮಾಧಾನದ ಒಡಂಬಡಿಕೆಯನ್ನು
ಮಾಡಿಕೊಳ್ಳುತ್ತೇನೆಂದು ಎಲ್ಲರಿಗೂ ತಿಳಿಸು; 13ಆ
ಒಡಂಬಡಿಕೆಯು ಅವನಿಗೂ ಅವನ ತರುವಾಯ ಅವನ
ಸಂತತಿಯವರಿಗೂ ಯಾಜಕತ್ವವು ಶಾಶ್ವತವಾಗಿಯೇ
ಇರುವುದೆಂದು ಮಾತುಕೊಡುತ್ತೇನೆ. ಅವನು ತನ್ನ
ದೇವರ ಗೌರವವನ್ನು ಕಾಪಾಡಿ ಇಸ್ರೇಲರಿಗೋಸ್ಕರ
ದೋಷಪರಿಹಾರವನ್ನು ಮಾಡಿದ್ದರಿಂದ ನಾನು ಅವನಿಗೆ
ಈ ಮಾತನ್ನು ಕೊಟ್ಟಿದ್ದೇನೆ''ಎಂದು ಹೇಳಿದನು.
14ಆ ಮಿದ್ಯಾನ್ ಸ್ತ್ರೀಯೊಡನೆ ಕೊಲ್ಲಲ್ಪಟ್ಟವನು
ಸಿಮೆಯೋನ್ ಕುಲದವರಲ್ಲಿ ಗೋತ್ರಪ್ರಧಾನನಾಗಿದ್ದ
ಜಿಮ್ರೀ. ಇವನು ಸಾಲೂ ಎಂಬವನ ಮಗ. 15ಹತಳಾದ
ಮಿದ್ಯಾನ್ ಸ್ತ್ರೀಯ ಹೆಸರು ಕೊಜ್ಬೀ. ಅವಳು ಮಿದ್ಯಾನ್ಯ
ರಲ್ಲಿ ಗೋತ್ರಪ್ರಧಾನನಾದ ಅಥವಾ ಕುಟುಂಬಪ್ರ ,ದಾನ
ನಾದ ಚೂರ್ ಎಂಬವನ ಮಗಳು.
16ತರುವಾಯ ಯೆಹೋವನು ಮೋಶೆಗೆ ಹೇಳಿದ್ದೇ
ನೆಂದರೆ, 17''ನೀನು ಮಿದ್ಯಾನ್ಯರನ್ನು ವೈರಿಗಳೆಂದು
ಪರಿಗಣಿಸಿರುವುದರಿಂದ ಅವರನ್ನು ಸಂಹರಿಸಬೇಕು.
18ಯಾಕೆಂದರೆ ಅವರು ನಿಮ್ಮನ್ನು ವೈರಿಗಳೆಂದು ಪರಿಗಣಿಸಿ
ಪೆಗೋರನ ಘಟನೆಯಲ್ಲಿ ನಿಮ್ಮನ್ನು ಮೋಸಗೊಳಿಸಿ
ದರು. ಮಿದ್ಯಾನಿನ ನಾಯಕನೊಬ್ಬನ ಮಗಳೂ ತಮ್ಮ
ರಕ್ತಸಂಬಂಧಿಯೂ ಆಗಿದ್ದ ಕೊಜ್ಬೀಯ ವಿಷಯ
ದಲ್ಲಿಯೂ ಅವರು ನಿಮ್ಮನ್ನು ಮೋಸಗೊಳಿಸಿದರು.
ಪೆಗೋರಿನ ಘಟನೆಯಿಂದ ಇಸ್ರೇಲರಿಗೆ ಕಾಯಿಲೆ
ಉಂಟಾದಾಗ ಆ ಸ್ತ್ರೀಯೂ ಸತ್ತಳು.''

## ಜನರು ಲೆಕ್ಕಿಸಲ್ಪಟ್ಟದ್ದು

26ಆ ಘೋರ ವ್ಯಾಧಿ ನಿಂತಮೇಲೆ ಯೆಹೋವನು
ಮೋಶೆಗೂ ಯಾಜಕ ಆರೋನನ ಮಗನಾದ
ಎಲ್ಲಾಜಾರನಿಗೂ, 2''ನೀವು ಇಸ್ರೇಲರ ಸರ್ವಸಮೂಹ
ದವರಲ್ಲಿ ಇಪ್ಪತ್ತು ವರ್ಷ ಮೊದಲುಗೊಂಡು ಹೆಚ್ಚಾದ
ವಯಸ್ಸಾಗಿರುವ ಮತ್ತು ಇಸ್ರೇಲ್ ಸೈನ್ಯದಲ್ಲಿ ಸೇವೆ
ಮಾಡಲು ಶಕ್ತರಾಗಿರುವ ಗಂಡಸರನ್ನು ಕುಟುಂಬ
ಕುಟುಂಬಗಳ ಪ್ರಕಾರ ಲೆಕ್ಕಿಸಬೇಕು'' ಎಂದು
ಆಜ್ಞಾಪಿಸಿದನು.
3ಈ ಸಮಯದಲ್ಲಿ ಜನರು ಮೋವಾಬಿನ
ಬಯಲುಗಳಲ್ಲಿ ತಂಗಿದ್ದರು. ಇದು ಜೆರಿಕೋ ಪಟ್ಟಣದ
ಆಚೆಕಡೆಯಲ್ಲಿರುವ ಜೋರ್ಡನ್ ನದಿಯ ಸಮೀಪ
ದಲ್ಲಿತ್ತು. ಮೋಶೆ ಮತ್ತು ಯಾಜಕನಾದ ಎಲ್ಲಾಜಾರನು
ಜನರೊಡನೆ ಮಾತಾಡಿ ಹೇಳಿದ್ದೇನೆಂದರೆ: 4''ಮೋಶೆ
ಮತ್ತು ಇಸ್ರೇಲರು ಈಜಿಪ್ಟಿನಿಂದ ಹೊರಬಂದಾಗ
ಯೆಹೋವನು ಮೋಶೆಗೆ ಆಜ್ಞಾಪಿಸಿದ್ದಂತೆಯೇ ನೀವು
ಇಪ್ಪತ್ತು ವರ್ಷ ಮೊದಲುಗೊಂಡು ಹೆಚ್ಚು ವಯಸ್ಸಾದ
ಗಂಡಸರನ್ನು ಲೆಕ್ಕಿಸಬೇಕು.''
5ರೂಬೇನ್ ಕುಲದ ಜನರು: (ರೂಬೇನನು
ಇಸ್ರೇಲನ (ಯಾಕೋಬನ) ಚೊಚ್ಚಲ ಮಗನು.)

ಹನೋಕನ ಕುಟುಂಬದವರಾದ ಹನೋಕ್ಯರು;
ಪಲ್ಲೂವಿನ ಕುಟುಂಬದವರಾದ ಪಲ್ಲೂವಿ
ನವರು;
6 ಹೆಚ್ರೋನನ ಕುಟುಂಬದವರಾದ ಹೆಚ್ರೋ
ನ್ಯರು; ಕರ್ಮೀಯ ಕುಟುಂಬದವರಾದ
ಕರ್ಮೀಯರು.

7ರೂಬೇನ್ಯ ಕುಲದವರಲ್ಲಿ ಲೆಕ್ಕಿಸಲ್ಪಟ್ಟ ಗಂಡಸರ
ಒಟ್ಟು ಸಂಖ್ಯೆ 43,730.
8ಪಲ್ಲೂವಿನ ಮಗನು ಎಲೀಯಾಬ್. 9ಎಲೀಯಾಬನ
ಗಂಡುಮಕ್ಕಳು: ನೆಮೂವೇಲ್, ದಾತಾನ್,
ಅಬೀರಾಮ್ ಎಂಬವರೇ. ಕೋರಹನ ಗುಂಪಿನವರು
ಯೆಹೋವನಿಗೆ ವಿರೋಧವಾಗಿ ದಂಗೆಯೆದ್ದ ಕಾಲದಲ್ಲಿ
ಅವರೊಳಗೆ ಸೇರಿಕೊಂಡು ಮೋಶೆ ಆರೋನರಿಗೆ
ವಿರೋಧವಾಗಿ ದಂಗೆ ಎದ್ದವರೇ ದಾತಾನ್ ಮತ್ತು
ಅಬೀರಾಮ್. 10ಭೂಮಿಯು ಬಾಯ್ದೆರೆದು ಅವರನ್ನೂ
ಕೋರಹನನ್ನೂ ನುಂಗಿಬಿಟ್ಟಿತು ಮತ್ತು ಬೆಂಕಿಯು ಆ
ಗುಂಪಿನವರಲ್ಲಿ ಇತರ ಇನ್ನೂರೈವತ್ತು ಮಂದಿಯನ್ನು
ದಹಿಸಿ ಇಸ್ರೇಲರಿಗೆ ಎಚ್ಚರಿಕೆಯುಂಟಾಗುವ ಹಾಗೆ
ಮಾಡಿತು. 11ಆ ಗುಂಪಿನವರೆಲ್ಲರು ಸತ್ತರೂ ಕೋರಹನ
ಮಕ್ಕಳು ಆ ಕಾಲದಲ್ಲಿ ಸಾಯಲಿಲ್ಲ.
12ಸಿಮೆಯೋನ್ ಕುಲದ ಕುಟುಂಬಗಳು:

ನೆಮೂವೇಲನ ಕುಟುಂಬದವರಾದ ನೆಮೂವೇ
ಲ್ಯರು; ಯಾಮೀನನ ಕುಟುಂಬದವರಾದ
ಯಾಮೀನ್ಯರು; ಯಾಕೀನನ ಕುಟುಂಬದವ
ರಾದ ಯಾಕೀನ್ಯರು;
13 ಜೆರಹನ ಕುಟುಂಬದವರಾದ ಜೆರಹಿಯರು;
ಸೌಲನ ಕುಟುಂಬದವರಾದ ಸೌಲ್ಯರು;

[14]ಸಿಮೆಯೋನ್ ಕುಲದವರಾದ ಇವರಲ್ಲಿ ಲೆಕ್ಕಿಸಲ್ಪಟ್ಟ ಗಂಡಸರ ಒಟ್ಟು ಸಂಖ್ಯೆ 22,200.
[15]ಗಾದ್ ಕುಲದ

ಚೆಫೋನನ ಕುಟುಂಬದವರಾದ ಚೆಫೋನ್ಯರು;
ಹಗ್ಗೀಯನ ಕುಟುಂಬದವರಾದ ಹಗ್ಗೀಯರು.
ಶೂನೀಯ ಕುಟುಂಬದವರಾದ ಶೂನೀಯರು;
16 ಒಜ್ನೀಯ ಕುಟುಂಬದವರಾದ ಒಜ್ನೀಯರು;
ಏರೀಯ ಕುಟುಂಬದವರಾದ ಏರೀಯರು;
17 ಆರೋದನ ಕುಟುಂಬದವರಾದ ಆರೋದ್ಯರು.
ಅರೇಲೀಯ ಕುಟುಂಬದವರಾದ ಅರೇಲೀಯರು.

[18]ಗಾದ್ ಕುಲದವರಲ್ಲಿ ಲೆಕ್ಕಿಸಲ್ಪಟ್ಟ ಗಂಡಸರ ಒಟ್ಟು ಸಂಖ್ಯೆ 40,500.
[19-20]ಯೆಹೂದ ಕುಲದ ಕುಟುಂಬಗಳು:

ಶೇಲಹನ ಕುಟುಂಬದವರಾದ ಶೇಲಾನ್ಯರು;
ಪೆರೆಚನ ಕುಟುಂಬದವರಾದ ಪೆರೆಚ್ಯರು,
ಜೆರಹನ ಕುಟುಂಬದವರಾದ ಜೆರಹಿಯರು;
(ಯೆಹೂದನ ಇಬ್ಬರು ಗಂಡುಮಕ್ಕಳಾದ ಏರ್ ಮತ್ತು ಓನಾನನು ಕಾನಾನ್‌ನಲ್ಲಿ ಸತ್ತರು.)

21 ಪೆರೆಚನ ಕುಟುಂಬಗಳು:

ಹೆಚ್ರೋನನ ಕುಟುಂಬದವರಾದ ಹೆಚ್ರೋನ್ಯರು, ಹಾಮೂಲನ ಕುಟುಂಬದವರಾದ ಹಾಮೂಲ್ಯರು;

[22]ಯೆಹೂದ ಕುಲದವರಲ್ಲಿ ಲೆಕ್ಕಿಸಲ್ಪಟ್ಟ ಗಂಡಸರ ಒಟ್ಟು ಸಂಖ್ಯೆ 76,500.
[23]ಇಸ್ಸಾಕಾರನ ಕುಟುಂಬಗಳು:

ತೋಲನ ಕುಟುಂಬದವರಾದ ತೋಲಾಯರು.
ಪೂವ್ವನ ಕುಟುಂಬದವರಾದ ಪೂವ್ವರು.
24 ಯಾಶೂಬನ ಕುಟುಂಬದವರಾದ ಯಾಶೂಬ್ಯರು. ಶಿಮ್ರೋನನ ಕುಟುಂಬದವರಾದ ಶಿಮ್ರೋನ್ಯರು.

[25]ಇಸ್ಸಾಕಾರ್ ಕುಲದವರಲ್ಲಿ ಲೆಕ್ಕಿಸಲ್ಪಟ್ಟ ಗಂಡಸರ ಒಟ್ಟು ಸಂಖ್ಯೆ 64,300 ಮಂದಿ.

[26]ಜೆಬುಲೂನ್ ಕುಲದ ಕುಟುಂಬಗಳು:

ಸೆರೆದನ ಕುಟುಂಬದವರಾದ ಸೆರೆದ್ಯರು; ಏಲೋನನ ಕುಟುಂಬದವರಾದ ಏಲೋನ್ಯರು; ಯಹಲೇಲನ ಕುಟುಂಬದವರಾದ ಯಹಲೇಲ್ಯರು.

[27]ಜೆಬುಲೂನ್ ಕುಲದವರಲ್ಲಿ ಲೆಕ್ಕಿಸಲ್ಪಟ್ಟ ಗಂಡಸರ
ಒಟ್ಟು ಸಂಖ್ಯೆ 60,500 [28]ಯೋಸೇಫನ ಇಬ್ಬರು ಗಂಡು
ಮಕ್ಕಳು: ಮನಸ್ಸೆ ಮತ್ತು ಎಫ್ರಾಯೀಮ್. [29]ಮನಸ್ಸೆ
ಕುಲದ ಕುಟುಂಬಗಳು:

ಮಾಕೀರನ ಕುಟುಂಬದವರಾದ ಮಾಕೀರ್ಯರು;
ಮಾಕೀರನ ಮಗನಾದ ಗಿಲ್ಯಾದನ ಕುಟುಂಬದವರಾದ ಗಿಲ್ಯಾದ್ಯರು.
30 ಗಿಲ್ಯಾದನ ಕುಟುಂಬದವರು: ಈಯೆಜೆರನ ಕುಟುಂಬದವರಾದ ಈಯೆಜೆರ್ಯರು; ಹೇಲೆಕನ ಕುಟುಂಬದವರಾದ ಹೇಲೆಕ್ಯರು;
31 ಅಸ್ರೀಯೇಲನ ಕುಟುಂಬದವರಾದ ಅಸ್ರೀಯೇಲ್ಯರು. ಶೆಕೆಮನ ಕುಟುಂಬದವರಾದ ಶೆಕೆಮ್ಯರು.
32 ಶೆಮೀದಾಯನ ಕುಟುಂಬದವರಾದ ಶೆಮೀದಾಯರು. ಹೇಫೆರನ ಕುಟುಂಬದವರಾದ ಹೇಫೆರ್ಯರು.
33 ಹೇಫೆರನ ಮಗನಾದ ಚಲ್ಫಹಾದನಿಗೆ ಹೆಣ್ಣುಮಕ್ಕಳು ಮಾತ್ರ ಹುಟ್ಟಿದರು. ಗಂಡುಮಕ್ಕಳು ಹುಟ್ಟಲಿಲ್ಲ. ಅವನ ಹೆಣ್ಣುಮಕ್ಕಳ ಹೆಸರು: ಮಹ್ಲಾ, ನೋವಾ, ಹೊಗ್ಲಾ, ಮಿಲ್ಕಾ, ತಿರ್ಚಾ.

[34]ಮನಸ್ಸೆ ಕುಲದವರಲ್ಲಿ ಲೆಕ್ಕಿಸಲ್ಪಟ್ಟ ಗಂಡಸರ ಒಟ್ಟು ಸಂಖ್ಯೆ 52,700.
[35]ಎಫ್ರಾಯೀಮ್ ಕುಲದ ಕುಟುಂಬಗಳು:

ಶೂತೆಲಹನ ಕುಟುಂಬದವರಾದ ಶೂತೆಲಹ್ಯರು; ಬೆಕೆರನ ಕುಟುಂಬದವರಾದ ಬೆಕೆರ್ಯರು;
ತಹನನ ಕುಟುಂಬದವರಾದ ತಹನಿಯರು;
36 ಶೂತೆಲಹನ ಮಗನಾದ ಏರಾನನ ಕುಟುಂಬದವರಾದ ಏರಾನ್ಯರು;

[37]ಎಫ್ರಾಯೀಮ್ ಕುಲದವರಲ್ಲಿ ಲೆಕ್ಕಿಸಲ್ಪಟ್ಟ ಗಂಡಸರ ಒಟ್ಟು ಸಂಖ್ಯೆ 32,500. ಇದೇ ಯೋಸೇಫನ ಕುಲದ ಕುಟುಂಬಗಳ ವಿವರ.

[38]ಬೆನ್ಯಾಮೀನ್ ಕುಲದ ಕುಟುಂಬಗಳು:

ಬೆಲಗನ ಕುಟುಂಬದವರಾದ ಬೆಲಗ್ಯರು; ಅಷ್ಬೇಲನ ಕುಟುಂಬದವರಾದ ಅಷ್ಬೇಲ್ಯರು. ಅಹೀರಾಮನ ಕುಟುಂಬದವರಾದ ಅಹೀರಾಮ್ಯರು.
39 ಶೂಫಾಮನ ಕುಟುಂಬದವರಾದ ಶೂಫಾಮ್ಯರು. ಹೂಫಾಮನ ಕುಟುಂಬದವರಾದ ಹೂಫಾಮ್ಯರು.
40 ಬೆಲಗನಿಗೆ ಅರ್ದ್ ಮತ್ತು ನಾಮಾನ್ ಎಂಬ ಇಬ್ಬರು ಗಂಡು ಮಕ್ಕಳಿದ್ದರು. ಬೆಲಗನ ಕುಟುಂಬಗಳು: ಅರ್ದನ ಕುಟುಂಬದವರಾದ ಅರ್ದ್ಯರು. ನಾಮಾನನ ಕುಟುಂಬದವರಾದ ನಾಮಾನ್ಯರು.

[41]ಬೆನ್ಯಾಮೀನ್ ಕುಲದವರಲ್ಲಿ ಲೆಕ್ಕಿಸಲ್ಪಟ್ಟವರ ಒಟ್ಟು ಸಂಖ್ಯೆ 45,600.
[42]ದಾನ್ ಕುಲದ ಕುಟುಂಬಗಳು:

ಶೂಹಾಮನ ಕುಟುಂಬದವರಾದ ಶೂಹಾಮ್ಯರು.

[43]ದಾನ್ ಕುಲದವರಲ್ಲಿ ಲೆಕ್ಕಿಸಲ್ಪಟ್ಟವರ ಒಟ್ಟು ಸಂಖ್ಯೆ 64,400.
[44]ಆಶೇರ್ ಕುಲದ ಕುಟುಂಬಗಳು:

ಇಮ್ನಾಹನ ಕುಟುಂಬದವರಾದ ಇಮ್ನಾಹ್ಯರು; ಇಷ್ವೀಯ ಕುಟುಂಬದವರಾದ ಇಷ್ವೀಯರು; ಬೆರೀಯನ ಕುಟುಂಬದವರಾದ ಬೆರೀಯರು;

45 ಬೆರೀಯನ ಮಕ್ಕಳ ಕುಟುಂಬಗಳು:

ಹೇಬೆರನ ಕುಟುಂಬದವರಾದ ಹೇಬೆರ್ಯರು; ಮಲ್ಕೀಯೇಲನ ಕುಟುಂಬದವಾರದ ಮಲ್ಕೀಯೇಲ್ಯರು.

[46](ಆಶೇರನಿಗೆ ಸೆರಹ ಎಂಬ ಮಗಳೂ ಇದ್ದಳು.)
[47]ಆಶೇರನ ಕುಲದವರಲ್ಲಿ ಲೆಕ್ಕಿಸಲ್ಪಟ್ಟವರ ಒಟ್ಟು ಸಂಖ್ಯೆ 53,400.
[48]ನಫ್ತಾಲಿಯ ಕುಲದ ಕುಟುಂಬಗಳು:

ಯಹಚೇಲನ ಕುಟುಂಬದವರಾದ ಯಹಚೇಲ್ಯರು; ಗೂನೀಯ ಕುಟುಂಬದವರಾದ ಗೂನೀಯರು;
49 ಯೇಚೆರನ ಕುಟುಂಬದವರಾದ ಯೇಚೆರ್ಯರು; ಶಿಲ್ಲೇಮನ ಕುಟುಂಬದವರಾದ ಶಿಲ್ಲೇಮ್ಯರು.

[50]ನಫ್ತಾಲಿಯ ಕುಲದವರಲ್ಲಿ ಲೆಕ್ಕಿಸಲ್ಪಟ್ಟವರ ಒಟ್ಟು ಸಂಖ್ಯೆ 45,400.
[51]ಹೀಗೆ ಇಸ್ರೇಲರಲ್ಲಿ ಲೆಕ್ಕಿಸಲ್ಪಟ್ಟವರ ಒಟ್ಟು ಸಂಖ್ಯೆ 6,01,730.
[52]ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
[53]"ನೀವು ಈ ಕುಲಗಳಿಗೆ ಅವರವರ ಸಂಖ್ಯೆಯ ಪ್ರಕಾರ
ಆ ದೇಶವನ್ನು ಹಂಚಿಕೊಡಬೇಕು. [54]ಹೆಚ್ಚು ಮಂದಿ
ಯುಳ್ಳ ಕುಲಕ್ಕೆ ಹೆಚ್ಚಾಗಿಯೂ ಕಡಿಮೆಯಾದ ಕುಲಕ್ಕೆ
ಕಡಿಮೆಯಾಗಿಯೂ ಕೊಡಬೇಕು. ಲೆಕ್ಕಿಸಿದ ಸಂಖ್ಯೆಯ
ಪ್ರಕಾರವೇ ಪ್ರತಿಯೊಂದು ಕುಲಕ್ಕೆ ಭೂಮಿಯನ್ನು ಸ್ವಾಸ್ಥ್ಯ
ಕ್ಕಾಗಿ ಕೊಡಬೇಕು. [55]ಪ್ರತಿಯೊಂದು ಕುಲದ ಪಿತೃವಿನ
ಹೆಸರನ್ನು ಬರೆದು ಚೀಟುಹಾಕಿ ಆಯಾ ಕುಲಕ್ಕೆ
ಸ್ವಾಸ್ತ್ಯವನ್ನು ಗೊತ್ತುಮಾಡಬೇಕು.
[56]ಕುಲವು ದೊಡ್ಡದಾಗಿರಲೀ ಚಿಕ್ಕದಾಗಿರಲೀ ಚೀಟು
ಬಂದ ಪ್ರಕಾರವೇ ಸ್ವಾಸ್ತ್ಯವನ್ನು ಗೊತ್ತುಪಡಿಸಬೇಕು."
[57]ಲೇವಿಯರೊಳಗಿನ ಕುಲಗಳನ್ನು ಲೆಕ್ಕಿಸಲಾಗಿ, ಅವರಲ್ಲಿನ ಕುಟುಂಬಗಳು:

ಗೇರ್ಷೋನನ ಕುಟುಂಬದವರಾದ ಗೇರ್ಷೋನ್ಯರು, ಕೆಹಾತನ ಕುಟುಂಬದವರಾದ ಕೆಹಾತ್ಯರು; ಮೆರಾರೀಯ ಕುಟುಂಬದವರಾದ ಮೆರಾರೀಯರು.

[58]ಲೇವಿ ಕುಲದವರ ಕುಟುಂಬಗಳು:

ಲಿಬ್ನೀಯರ ಕುಟುಂಬ, ಹೆಬ್ರೋನ್ಯರ ಕುಟುಂಬ, ಮಹ್ಲೀಯರ ಕುಟುಂಬ, ಮೂಷೀಯರ ಕುಟುಂಬ, ಕೋರಹಿಯರ ಕುಟುಂಬ.

[59]ಅಮ್ರಾಮನು ಕೆಹಾತನ ಕುಲಕ್ಕೆ ಸೇರಿದವನು. ಅಮ್ರಾಮನ ಹೆಂಡತಿಯ ಹೆಸರು ಯೋಕೆಬೆದಳು. ಅವಳು ಲೇವಿ ಕುಟುಂಬದವಳು. ಅವಳು ಈಜಿಪ್ಟಿನಲ್ಲಿ ಹುಟ್ಟಿದಳು. ಅಮ್ರಾಮ್ ಮತ್ತು ಯೋಕೆಬೆದಳಿಗೆ ಇಬ್ಬರು ಗಂಡುಮಕ್ಕಳು ಹುಟ್ಟಿದರು. ಅವರಾರೆಂದರೆ ಆರೋನ ಮತ್ತು ಮೋಶೆ. ಅವರಿಗೆ ಒಬ್ಬ ಮಗಳೂ ಇದ್ದಳು. ಅವಳ ಹೆಸರು ಮಿರ್ಯಾಮಳು.
[60]ಆರೋನನು ನಾದಾಬ್, ಅಬೀಹೂ, ಎಲ್ಲಾಜಾರ್,
ಈತಾಮಾರ್ ಇವರ ತಂದೆ. [61]ಆದರೆ ನಾದಾಬ್ ಮತ್ತು

ಅಬೀಹೂ ಸತ್ತರು. ಯೆಹೋವನು ತಿಳಿಸದ ಹೊಸ
ಬೆಂಕಿಯಿಂದ ಧೂಪವನ್ನು ಯೆಹೋವನ ಮುಂದೆ
ಅರ್ಪಿಸಿದ್ದರಿಂದ ಅವರು ಸತ್ತರು.
62ಲೇವಿ ಕುಟುಂಬಗಳಲ್ಲಿ ಒಂದು ತಿಂಗಳು
ಮೊದಲುಗೊಂಡು ಹೆಚ್ಚು ವಯಸ್ಸಾದ ಪುರುಷರ ಒಟ್ಟು
ಸಂಖ್ಯೆ 23,000. ಆದರೆ ಈ ಜನರು ಇತರ ಇಸ್ರೇಲ
ರೊಡನೆ ಲೆಕ್ಕಿಸಲ್ಪಡಲಿಲ್ಲ. ಯೆಹೋವನು ಬೇರೆ ಇಸ್ರೇಲ
ರಿಗೆ ಕೊಟ್ಟ ಸ್ವಾಸ್ತ್ಯದಲ್ಲಿ ಅವರಿಗೆ ಪಾಲು ಸಿಕ್ಕಲಿಲ್ಲ.
63ಮೋಶೆ ಮತ್ತು ಯಾಜಕನಾದ ಎಲ್ಲಾಜಾರನು ಈ
ಜನರನ್ನೆಲ್ಲಾ ಲೆಕ್ಕಿಸಿದರು. ಇಸ್ರೇಲರು ಜೋರ್ಡನ್
ಹೊಳೆಯ ತೀರದಲ್ಲಿ ಜೆರಿಕೋ ಪಟ್ಟಣದ ಆಚೆಯಲ್ಲಿ
ಮೋವಾಬ್ಯರ ಬಯಲುಗಳಲ್ಲಿದ್ದಾಗ ಇವರನ್ನು ಲೆಕ್ಕಿಸಿ
ದರು. 64ಮೋಶೆಯೂ ಯಾಜಕನಾದ ಆರೋನನೂ
ಸೀನಾಯಿ ಮರುಭೂಮಿಯಲ್ಲಿ ಇಸ್ರೇಲರ ಸಂಖ್ಯೆಯನ್ನು
ನೋಡಿದಾಗ ಲೆಕ್ಕಿಸಲ್ಪಟ್ಟವರೊಳಗೆ ಒಬ್ಬರಾದರೂ
ಇವರಲ್ಲಿ ಇರಲಿಲ್ಲ. 65ಯೆಹೋವನು ಅವರೆಲ್ಲರೂ
ಮರುಭೂಮಿಯಲ್ಲಿಯೇ ಸಾಯುವರೆಂದು ಹೇಳಿದ್ದನು.
ಆದುದರಿಂದ ಯೆಫುನ್ನೆಯ ಮಗನಾದ ಕಾಲೇಬ್ ಮತ್ತು
ನೂನನ ಮಗನಾದ ಯೆಹೋಶುವ ಇವರಿಬ್ಬರ ಹೊರ
ತಾಗಿ ಅವರಲ್ಲಿ ಯಾರೂ ಉಳಿಯಲಿಲ್ಲ.

## ಚಲ್ಪಹಾದನ ಹೆಣ್ಣುಮಕ್ಕಳು

27 ಚಲ್ಪಹಾದನು ಹೇಫೆರನ ಮಗನು. ಹೇಫೆರನು
ಗಿಲ್ಯಾದನ ಮಗನು. ಗಿಲ್ಯಾದನು ಮಾಕೀರನ
ಮಗನು. ಮಾಕೀರನು ಮನಸ್ಸೆಯ ಮಗನು. ಮನಸ್ಸೆಯು
ಯೋಸೇಫನ ಮಗನು. ಚಲ್ಪಹಾದನಿಗೆ ಐದು ಮಂದಿ
ಹೆಣ್ಣುಮಕ್ಕಳಿದ್ದರು. ಅವರು ಯಾರೆಂದರೆ: ಮಹ್ಲಾ,
ನೋವಾ, ಹೊಗ್ಲಾ, ಮಿಲ್ಕಾ ಮತ್ತು ತಿರ್ಚಾ. 2ಈ ಐದು
ಮಂದಿ ಸ್ತ್ರೀಯರು ದೇವದರ್ಶನಗುಡಾರದ ಪ್ರವೇಶ
ದ್ವಾರದ ಬಳಿಗೆ ಹೋಗಿ ಮೋಶೆಯ, ಯಾಜಕನಾದ
ಎಲ್ಲಾಜಾರನ, ನಾಯಕರ ಮತ್ತು ಎಲ್ಲಾ ಇಸ್ರೇಲರ
ಮುಂದೆ ನಿಂತರು.
3ಈ ಐದು ಹೆಣ್ಣುಮಕ್ಕಳು, ‘‘ನಮ್ಮ ತಂದೆ ಮರು
ಭೂಮಿಯಲ್ಲಿ ಸತ್ತುಹೋದನು. ಅವನು ಕೋರಹನ
ಜೊತೆಯಲ್ಲಿ ಯೆಹೋವನಿಗೆ ವಿರೋಧವಾಗಿ ತಿರುಗಿ
ಬಿದ್ದವರಲ್ಲಿ ಸೇರಿದವನಲ್ಲ. ನಮ್ಮ ತಂದೆಯು ತನ್ನ ಪಾಪದ
ಫಲವಾಗಿ ಸತ್ತನು. ಅವನಿಗೆ ಗಂಡುಮಕ್ಕಳಿರಲಿಲ್ಲ. 4ನಮ್ಮ
ತಂದೆಗೆ ಗಂಡುಮಗನಿಲ್ಲದ ಮಾತ್ರದಿಂದ ಅವನ
ಹೆಸರನ್ನು ಅವನ ಕುಲದವರ ಮಧ್ಯದಿಂದ ತೆಗೆಯುವುದು
ನ್ಯಾಯವೋ? ನಮ್ಮ ತಂದೆಯ ಸಂಬಂಧಿಕರೊಡನೆ
ನಮಗೂ ಸ್ವಾಸ್ತ್ಯವನ್ನು ಕೊಡು’’ ಎಂದು ಹೇಳಿದರು.
5ಮೋಶೆಯು ಇದರ ವಿಷಯದಲ್ಲಿ ತಾನು ಏನು ಮಾಡ
ಬೇಕೆಂದು ಯೆಹೋವನ ಸನ್ನಿಧಿಯಲ್ಲಿ ವಿಚಾರಿಸಲಾಗಿ,
6ಯೆಹೋವನು ಅವನಿಗೆ ಹೇಳಿದ್ದೇನೆಂದರೆ,
7‘‘ಚಲ್ಪಹಾದನ ಹೆಣ್ಣುಮಕ್ಕಳು ಹೇಳುವುದು ನ್ಯಾಯ
ವಾಗಿದೆ. ಅವರ ತಂದೆಯ ಸಂಬಂಧಿಕರೊಡನೆ ಅವರಿಗೂ
ನೀನು ಸ್ವಾಸ್ತ್ಯವನ್ನು ಕೊಡಬೇಕು. ಅವರ ತಂದೆಯ
ಸ್ವಾಸ್ತ್ಯವನ್ನು ನೀನು ಅವರಿಗೆ ವರ್ಗಾವಣೆ ಮಾಡಬೇಕು.
8‘‘ಮತ್ತು ನೀನು ಇಸ್ರೇಲರಿಗೆ ಹೀಗೆ ಅಪ್ಪಣೆ ಕೊಡ
ಬೇಕು: ‘ಒಬ್ಬ ಮನುಷ್ಯನು ಮಗನಿಲ್ಲದೆ ಸತ್ತರೆ, ನೀವು
ಅವನ ಸ್ವಾಸ್ತ್ಯವನ್ನು ಅವನ ಮಗಳಿಗೆ ವರ್ಗಾವಣೆ
ಮಾಡಬೇಕು. 9-10ಮಗಳು ಇಲ್ಲದ ಪಕ್ಷಕ್ಕೆ ಅವನ ಸ್ವಾಸ್ತ್ಯ
ವನ್ನು ಅವನ ಅಣ್ಣತಮ್ಮಂದಿರಿಗೆ ಕೊಡಬೇಕು. ಅಣ್ಣ
ತಮ್ಮಂದಿರು ಇಲ್ಲದ ಪಕ್ಷಕ್ಕೆ ಅವನ ಸ್ವಾಸ್ತ್ಯವನ್ನು ಅವನ
ತಂದೆಯ ಸಹೋದರರಿಗೆ ಕೊಡಬೇಕು. 11ಅವನ ತಂದೆಗೆ
ಸಹೋದರರಿಲ್ಲದಿದ್ದರೆ, ಅವನ ಸ್ವಂತ ಕುಲದ ಅತಿ
ಸಮೀಪದ ಸಂಬಂಧಿಕನಿಗೆ ಅದನ್ನು ವಹಿಸಿಕೊಡಬೇಕು.
ಆಗ ಅವನು ಅದನ್ನು ಸ್ವಾಧೀನಪಡಿಸಿಕೊಳ್ಳುವನು.
ಯೆಹೋವನು ಮೋಶೆಗೆ ಆಜ್ಞಾಪಿಸಿದ ಈ ನಿರ್ಧಾರವು
ಇಸ್ರೇಲರಿಗೆ ಕಾನೂನುಬದ್ಧವಾದ ವಿಧಿಯಾಗಿದೆ.’’

## ಯೆಹೋಶುವನು ನೂತನ ನಾಯಕ

12ಬಳಿಕ ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
‘‘ಅಬಾರೀಮ್* ಪರ್ವತ ಶ್ರೇಣಿಯಲ್ಲಿರುವ ಈ ಬೆಟ್ಟ
ವನ್ನು ಹತ್ತು. ನಾನು ಇಸ್ರೇಲರಿಗೆ ಕೊಡಲಿಕ್ಕಿರುವ ದೇಶ
ವನ್ನು ನೀನು ಅಲ್ಲಿಂದ ನೋಡು. 13ಆ ದೇಶವನ್ನು
ನೋಡಿದ ನಂತರ ನಿನ್ನ ಅಣ್ಣನಾದ ಆರೋನನಂತೆ
ನೀನೂ ಸಾಯುವೆ. 14ಇಸ್ರೇಲರ ಸಮೂಹದವರು ಚಿನ್
ಮರುಭೂಮಿಯಲ್ಲಿ ನನ್ನೊಡನೆ ವಿವಾದಿಸಿದಾಗ
ನೀವಿಬ್ಬರೂ ನನ್ನ ಪವಿತ್ರತೆಯನ್ನು ಜನರ ಮುಂದೆ
ತೋರಿಸದೆ ನನ್ನ ಆಜ್ಞೆಗೆ ಅವಿಧೇಯರಾದ ಕಾರಣ ಆ
ದೇಶವನ್ನು ನೀನು ಸೇರಬಾರದು.’’ ಚಿನ್ ಮರು
ಭೂಮಿಯಲ್ಲಿ ಕಾದೇಶಿನ ಬಳಿ ಮೆರೀಬಾ ಬುಗ್ಗೆಯ
ಕುರಿತಾಗಿ ಯೆಹೋವನು ಇದನ್ನು ಹೇಳಿದನು.
15ಆಗ ಮೋಶೆಯು ಯೆಹೋವನಿಗೆ, 16‘‘ಎಲ್ಲಾ
ಮನುಷ್ಯರ ಯೋಚನೆಗಳನ್ನು ತಿಳಿದಿರುವ ದೇವರಾದ
ಯೆಹೋವನು ಈ ಸಮೂಹಕ್ಕೆ ಒಬ್ಬ ನಾಯಕನನ್ನು
ನೇಮಿಸಲಿ. 17ಅವನು ಅವರನ್ನು ಯುದ್ಧದಲ್ಲಿ ಮುನ್ನಡೆ
ಸುವವನೂ ಸೈನ್ಯದ ಯೋಜನೆಗಳನ್ನು ರೂಪಿಸುವವನೂ
ಆಗಿರಲಿ. ಆಗ ಯೆಹೋವನ ಸಮೂಹವು ಕುರುಬನಿಲ್ಲದ
ಕುರಿಯಂತಾಗುವುದಿಲ್ಲ.’’

---

**ಅಬಾರೀಮ್** ಈ ಪರ್ವತಗಳು ಜೋರ್ಡನ್ ನದಿಯ ಪೂರ್ವ
ದಿಕ್ಕಿನಲ್ಲಿದ್ದ ಮರುಭೂಮಿಯಲ್ಲಿದ್ದವು.

18ಅದಕ್ಕೆ ಯೆಹೋವನು, ‘‘ನೂನನ ಮಗನಾದ
ಯೆಹೋಶುವನು ಹೊಸ ನಾಯಕನಾಗಿರುವನು. ಅವನು
ಧೈರ್ಯವಂತನು. ಅವನನ್ನು ಹೊಸ ನಾಯಕನನ್ನಾಗಿ
ಮಾಡಲು ಅವನ ಮೇಲೆ ನಿನ್ನ ಕೈಯನ್ನು ಇಡು.
19ಯಾಜಕನಾದ ಎಲ್ಲಾಜಾರನ ಮುಂದೆಯೂ ಸಮಸ್ತ
ಇಸ್ರೇಲರ ಮುಂದೆಯೂ ಅವನನ್ನು ನಿಲ್ಲಿಸು. ಅವರ
ಎದುರಿನಲ್ಲಿಯೇ ಅವನಿಗೆ ಆದೇಶಗಳನ್ನು ಕೊಡು.

20‘‘ಇಸ್ರೇಲರ ಇಡೀ ಸಮುದಾಯವು ವಿಧೇಯ
ರಾಗುವಂತೆ ನಿನ್ನ ಅಧಿಕಾರಗಳಲ್ಲಿ ಸ್ವಲ್ಪವನ್ನು ಅವನಿಗೆ
ಕೊಡು. 21ಯೆಹೋಶುವನು ತೀರ್ಮಾನವೇನಾದರೂ
ಮಾಡಬೇಕಾದರೆ ಅವನು ಯಾಜಕನಾದ ಎಲ್ಲಾಜಾರನ
ಬಳಿಗೆ ಹೋಗಲಿ, ಎಲ್ಲಾಜಾರನು ಊರೀಮಿನಿಂದ
ಯೆಹೋವನ ಉತ್ತರವನ್ನು ಪಡೆಯುವನು. ಆಗ
ಯೆಹೋಶುವನೂ ಇಸ್ರೇಲರೆಲ್ಲರೂ ದೇವರು ಹೇಳುವ
ಕಾರ್ಯಗಳನ್ನು ಮಾಡುವರು. ಆತನು ‘‘ಯುದ್ಧಕ್ಕೆ
ಹೋಗಿರಿ’ ಎಂದು ಹೇಳಿದರೆ ಅವರು ಯುದ್ಧಕ್ಕೆ
ಹೋಗುವರು. ಆತನು ‘ಮನೆಗೆ ಹೋಗಿರಿ’ ಎಂದು
ಹೇಳಿದರೆ ಅವರು ಮನೆಗೆ ಹೋಗುವರು’’ ಎಂದು
ಹೇಳಿದನು. 22ಮೋಶೆಯು ಯೆಹೋವನಿಗೆ ವಿಧೇಯ
ನಾಗಿ ಯೆಹೋಶುವನನ್ನು ಯಾಜಕನಾದ ಎಲ್ಲಾಜಾರನ
ಮುಂದೆಯೂ ಸಮಸ್ತ ಇಸ್ರೇಲರ ಮುಂದೆಯೂ
ನಿಲ್ಲಿಸಿದನು. 23ಬಳಿಕ ಮೋಶೆಯು ತನ್ನ ಕೈಯನ್ನು ಅವನ
ಮೇಲಿಟ್ಟು ಹೊಸನಾಯಕನಿಗೆ ಕೊಡತಕ್ಕ ಆದೇಶಗಳನ್ನು
ಕೊಟ್ಟನು. ಯೆಹೋವನು ಆಜ್ಞಾಪಿಸಿದಂತೆ ಅವನು
ಇದನ್ನು ಮಾಡಿದನು.

## ದಿನಂಪ್ರತಿ ಸಲ್ಲಿಸತಕ್ಕ ಅರ್ಪಣೆಗಳು

28 ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
2‘‘ನೀನು ಇಸ್ರೇಲರಿಗೆ ಈ ಆಜ್ಞೆಯನ್ನು ಕೊಡು.
ನೀವು ಎಚ್ಚರಿಕೆಯಾಗಿದ್ದು ನೇಮಿತ ಕಾಲಗಳಲ್ಲಿ ನನಗೆ
ಅರ್ಪಿಸತಕ್ಕ ಧಾನ್ಯಸಮರ್ಪಣೆಗಳನ್ನು ನನಗೆ ಸುಗಂಧ
ಹೋಮ ಮಾಡಬೇಕು. 3ಅವರಿಗೆ ಹೀಗೆ ಹೇಳು: ನೀವು
ಯೆಹೋವನಿಗೆ ಕೊಡಬೇಕಾಗಿರುವ ತ್ಯಾಗಮಯವಾದ
ಕಾಣಿಕೆಗಳು ಇವುಗಳೇ: ದಿನನಿತ್ಯದ ಸರ್ವಾಂಗಹೋಮ
ಕ್ಕಾಗಿ ಒಂದು ವರ್ಷ ವಯಸ್ಸಿನ ಎರಡು ಗಂಡುಕುರಿಗಳು.
4ನೀವು ಒಂದು ಕುರಿಮರಿಯನ್ನು ಹೊತ್ತಾರೆಯಲ್ಲಿಯೂ
ಇನ್ನೊಂದನ್ನು ನಸುಸಂಜೆಯಲ್ಲಿಯೂ ಅರ್ಪಿಸಬೇಕು.
5ಹೊತ್ತಾರೆಯ ಸಮರ್ಪಣೆಯೊಂದಿಗೆ ನೀವು ಧಾನ್ಯ
ಸಮರ್ಪಣೆಗಾಗಿ ಒಂದುವರೆ ಸೇರು ಶ್ರೇಷ್ಠವಾದ ಎಣ್ಣೆ
ಯನ್ನೂ ಮೂರು ಸೇರು ಗೋಧಿಹಿಟ್ಟನ್ನೂ ಬೆರೆಸಿ
ಸಮರ್ಪಿಸಬೇಕು.’’ 6(ಈ ಸರ್ವಾಂಗಹೋಮವನ್ನು
ಸೀನಾಯಿ ಬೆಟ್ಟದ ಮೇಲೆ ಯೆಹೋವನಿಗೆ ತ್ಯಾಗಮಯ
ವಾದ ಕಾಣಿಕೆಯಾಗಿಯೂ ಸುಗಂಧವಾಸನೆಯಾಗಿಯೂ
ಕ್ರಮವಾಗಿ ಅರ್ಪಿಸಲಾಯಿತು.) 7‘‘ಪ್ರತಿಯೊಂದು
ಕುರಿಮರಿಯೊಂದಿಗೆ ಒಂದುವರೆ ಸೇರು ದ್ರಾಕ್ಷಾರಸವನ್ನು
ಪಾನದ್ರವ್ಯದ ಕಾಣಿಕೆಯಾಗಿ ಅರ್ಪಿಸಬೇಕು. ಯೆಹೋವ
ನಿಗೆ ಪಾನದ್ರವ್ಯವಾಗಿ ಅರ್ಪಿಸತಕ್ಕ ದ್ರಾಕ್ಷಾರಸವನ್ನು
ಪವಿತ್ರಸ್ಥಳದಲ್ಲಿ ಸುರಿಯಿರಿ. 8ನೀವು ಎರಡನೆ ಕುರಿಮರಿ
ಯನ್ನು ನಸುಸಂಜೆಯಲ್ಲಿ ಅರ್ಪಿಸುವಾಗ, ಮುಂಜಾನೆ
ಯಲ್ಲಿ ಅರ್ಪಿಸಿದಂತೆಯೇ ಅದರೊಡನೆ ಸಮರ್ಪಕವಾದ
ಧಾನ್ಯಾರ್ಪಣೆಯನ್ನು ಮತ್ತು ಪಾನದ್ರವ್ಯಾರ್ಪಣೆಯನ್ನು
ಮಾಡಬೇಕು. ಇದು ಯೆಹೋವನಿಗೆ ತ್ಯಾಗಮಯವಾದ
ಅರ್ಪಣೆಯಾಗಿದ್ದು ಸುಗಂಧವಾಸನೆಯನ್ನು ಉಂಟು
ಮಾಡುವುದು.’’

## ಸಬ್ಬತ್ತಿನ ಸಮರ್ಪಣೆಗಳು

9-10ಸಬ್ಬತ್ ದಿನದಲ್ಲಿ ಎರಡು ಪೂರ್ಣಾಂಗವಾದ
ಒಂದು ವರುಷದ ಗಂಡುಕುರಿಗಳನ್ನೂ ಧಾನ್ಯ
ದ್ರವ್ಯಾರ್ಪಣೆಗಾಗಿ ಎಣ್ಣೆ ಬೆರೆಸಿದ ಆರು ಸೇರು ಗೋಧಿ
ಹಿಟ್ಟನ್ನೂ ಅದಕ್ಕೆ ತಕ್ಕ ಪಾನದ್ರವ್ಯವನ್ನೂ ಸಮರ್ಪಿಸ
ಬೇಕು. ಕ್ರಮವಾಗಿ ಅರ್ಪಿಸತಕ್ಕ ಸರ್ವಾಂಗಹೋಮ
ಮತ್ತು ಅದರ ಪಾನದ್ರವ್ಯಾರ್ಪಣೆಗಳಲ್ಲದೆ, ಪ್ರತಿ
ಸಬ್ಬತ್ ದಿನ ಸರ್ವಾಂಗಹೋಮವನ್ನು ಅರ್ಪಿಸಬೇಕು.’’

## ತಿಂಗಳ ಯಜ್ಞಗಳು

11‘‘ಪ್ರತಿ ತಿಂಗಳ ಮೊದಲನೆಯ ದಿನದಲ್ಲಿ, ನೀವು
ಯೆಹೋವನಿಗೆ ಸರ್ವಾಂಗಹೋಮವನ್ನು ಅರ್ಪಿಸ
ಬೇಕು: ಎರಡು ಹೋರಿಗಳು, ಒಂದು ಟಗರು ಮತ್ತು
ಒಂದು ವರುಷದ ಏಳು ಕುರಿಮರಿಗಳು. ಇವುಗಳೆಲ್ಲಾ
ಪೂರ್ಣಾಂಗವಾದವುಗಳಾಗಿರಬೇಕು. 12ಇವುಗಳೊಡನೆ
ಧಾನ್ಯನೈವೇದ್ಯಕ್ಕಾಗಿ ನೀವು ಪ್ರತಿಯೊಂದು ಹೋರಿಗೆ
ಎಣ್ಣೆ ಬೆರೆಸಿದ ಉತ್ತಮವಾದ ಒಂಭತ್ತು ಸೇರು
ಗೋಧಿಹಿಟ್ಟನ್ನು ಅರ್ಪಿಸಬೇಕು. ಪ್ರತಿಯೊಂದು ಟಗರಿಗೆ
ಎಣ್ಣೆ ಬೆರೆಸಿದ ಉತ್ತಮವಾದ ಆರು ಸೇರು ಗೋಧಿ
ಹಿಟ್ಟನ್ನು ಅರ್ಪಿಸಬೇಕು. 13ಪ್ರತಿಯೊಂದು ಕುರಿಮರಿಗೆ
ಎಣ್ಣೆ ಬೆರೆಸಿದ ಉತ್ತಮವಾದ ಮೂರು ಸೇರು ಗೋಧಿ
ಹಿಟ್ಟನ್ನು ಅರ್ಪಿಸಬೇಕು. ಈ ಸರ್ವಾಂಗಹೋಮವು
ಯೆಹೋವನಿಗೆ ಸುಗಂಧ ವಾಸನೆಯಾಗಿಯೂ ತ್ಯಾಗ
ಮಯವಾದ ಕಾಣಿಕೆಯಾಗಿಯೂ ಇದೆ. 14ಇವುಗಳಿಗೆ ತಕ್ಕ
ಪಾನದ್ರವ್ಯಾರ್ಪಣೆಗಳನ್ನು ಮಾಡಬೇಕು. ಅವು ಯಾವು
ವೆಂದರೆ: ಒಂದು ಹೋರಿಯೊಡನೆ ಮೂರು ಸೇರು
ದ್ರಾಕ್ಷಾರಸವನ್ನೂ ಟಗರಿನೊಡನೆ ಎರಡು ಸೇರು
ದ್ರಾಕ್ಷಾರಸವನ್ನೂ ಕುರಿಮರಿಯೊಡನೆ ಒಂದುವರೆ ಸೇರು
ದ್ರಾಕ್ಷಾರಸವನ್ನೂ ಅರ್ಪಿಸಬೇಕು. ವರ್ಷದ ಪ್ರತಿತಿಂಗಳು

ಅಮಾವಾಸ್ಯೆಯಲ್ಲಿ ಅರ್ಪಿಸತಕ್ಕ ಮಾಸಿಕ ಸರ್ವಾಂಗ
ಹೋಮಗಳು ಇವುಗಳೇ. [15]ಕ್ರಮಾನುಸಾರವಾದ
ಸರ್ವಾಂಗಹೋಮ ಮತ್ತು ಅದರ ಪಾನದ್ರವ್ಯಾರ್ಪಣೆ
ಗಳಲ್ಲದೆ, ಪಾಪಪರಿಹಾರಕ ಯಜ್ಞವಾಗಿ ಒಂದು
ಹೋತವನ್ನು ಯೆಹೋವನಿಗೆ ಅರ್ಪಿಸಬೇಕು.

### ಪಸ್ಕಹಬ್ಬ

[16]‘‘ಮೊದಲನೆಯ ತಿಂಗಳಿನ ಹದಿನಾಲ್ಕನೆಯ ದಿನ
ದಲ್ಲಿ ಯೆಹೋವನಿಗೆ ಪಸ್ಕಹಬ್ಬದ ಯಜ್ಞವನ್ನು ಅರ್ಪಿಸ
ಬೇಕು. [17]ಹುಳಿಯಿಲ್ಲದ ರೊಟ್ಟಿಯ ಹಬ್ಬವು ಅದೇ
ತಿಂಗಳಿನ ಹದಿನೈದನೆಯ ದಿನದಿಂದ ಪ್ರಾರಂಭ
ವಾಗುವುದು. ಏಳು ದಿನಗಳವರೆಗೂ ಹುಳಿಯಿಲ್ಲದ
ರೊಟ್ಟಿಯನ್ನೇ ಊಟಮಾಡಬೇಕು. [18]ಮೊದಲನೆಯ
ದಿನದಲ್ಲಿ ದೇವಾರಾಧನೆಗಾಗಿ ಸಭೆಸೇರಬೇಕು. ಆ ದಿನ
ದಲ್ಲಿ ಯಾವ ಪ್ರಯಾಸದ ಕೆಲಸವನ್ನು ಮಾಡಬಾರದು.
[19]ಯೆಹೋವನಿಗೆ ಸರ್ವಾಂಗಹೋಮಕ್ಕಾಗಿ ಎರಡು
ಹೋರಿಗಳನ್ನು, ಒಂದು ಟಗರನ್ನು ಮತ್ತು ಒಂದು
ವರುಷದ ಏಳು ಗಂಡುಕುರಿಮರಿಗಳನ್ನು ಅರ್ಪಿಸಬೇಕು.
ಈ ಪಶುಗಳೆಲ್ಲ ಪೂರ್ಣಾಂಗವಾದವುಗಳಾಗಿರಬೇಕು.
[20]ಇವುಗಳೊಂದಿಗೆ ಧಾನ್ಯಸಮರ್ಪಣೆಗಾಗಿ ಎಣ್ಣೆ ಬೆರೆಸಿದ
ಗೋಧಿಹಿಟ್ಟನ್ನು ತಂದುಕೊಡಬೇಕು; ಹೇಗೆಂದರೆ,
ಒಂದು ಹೋರಿಗೆ ಒಂಭತ್ತು ಸೇರು ಗೋಧಿಹಿಟ್ಟು,
ಒಂದು ಟಗರಿಗೆ ಆರು ಸೇರು ಗೋಧಿಹಿಟ್ಟು, [21]ಏಳು
ಕುರಿಮರಿಗಳಲ್ಲಿ ಪ್ರತಿಯೊಂದಕ್ಕೂ ಮೂರು ಸೇರು
ಗೋಧಿಹಿಟ್ಟು. [22]ಇದಲ್ಲದೆ ನಿಮಗೋಸ್ಕರ ಪ್ರಾಯಶ್ಚಿತ್ತ
ಮಾಡಲು ಒಂದು ಹೋತವನ್ನು ಪಾಪಪರಿಹಾರಕ
ಯಜ್ಞವಾಗಿ ಅರ್ಪಿಸಬೇಕು. [23]ಕ್ರಮವಾಗಿ ಮುಂಜಾನೆ
ಅರ್ಪಿಸುವ ಸರ್ವಾಂಗಹೋಮವಲ್ಲದೆ ಇವುಗಳನ್ನೂ
ಅರ್ಪಿಸಬೇಕು.

[24]‘‘ಈ ಎಲ್ಲ ಅರ್ಪಣೆಗಳನ್ನು ಆ ಏಳು ದಿನಗಳಲ್ಲಿ ಪ್ರತಿ
ಯೊಂದು ದಿನವೂ ಆಹಾರವಾಗಿಯೂ ತ್ಯಾಗಮಯ
ವಾದ ಕಾಣಿಕೆಯಾಗಿಯೂ ಯೆಹೋವನಿಗೆ ಸುಗಂಧ
ವಾಸನೆಯಾಗಿಯೂ ಅರ್ಪಿಸಬೇಕು. ಕ್ರಮಾನುಸಾರ
ವಾದ ಸರ್ವಾಂಗಹೋಮ ಮತ್ತು ಅದರ ಪಾನದ್ರವ್ಯಾ
ರ್ಪಣೆಗಳಲ್ಲದೆ ಇವುಗಳನ್ನೂ ಅರ್ಪಿಸಬೇಕು.

[25]‘‘ಇದಲ್ಲದೆ ಏಳನೆಯ ದಿನದಲ್ಲಿ ನೀವು ಪವಿತ್ರ
ಸಭಾಕೂಟವನ್ನು ಹೊಂದಿರುವಿರಿ. ಆ ದಿನದಲ್ಲಿ ನೀವು
ಪ್ರಯಾಸದ ಕೆಲಸವನ್ನು ಮಾಡಕೂಡದು.

### ವಾರಗಳ ಹಬ್ಬ (ಪಂಚಾಶತ್ತಮ)

[26]‘‘ನಿಮ್ಮ ಪ್ರಥಮಫಲಗಳ ಹಬ್ಬದಲ್ಲಿ ಅಂದರೆ ವಾರ
ಗಳ ಹಬ್ಬದಲ್ಲಿ ನೀವು ಹೊಸದಾಗಿ ಬೆಳೆದ ಗೋಧಿಯನ್ನು
ಯೆಹೋವನಿಗೆ ಅರ್ಪಿಸುವಾಗ, ದೇವರನ್ನು ಆರಾಧಿಸಲು
ನೀವು ಸಭೆಸೇರಬೇಕು. ನೀವು ಯಾವ ಪ್ರಯಾಸದ
ಕೆಲಸವನ್ನೂ ಮಾಡಬಾರದು. [27]ಆ ದಿನದಲ್ಲಿ ಎರಡು
ಹೋರಿಗಳನ್ನು, ಒಂದು ಟಗರನ್ನು ಮತ್ತು ಒಂದು
ವರ್ಷದ ಏಳು ಗಂಡುಕುರಿಮರಿಗಳನ್ನು ಯೆಹೋವನಿಗೆ
ಸುಗಂಧವಾಸನೆಯಾಗಿರುವ ಸರ್ವಾಂಗಹೋಮವಾಗಿ
ಅರ್ಪಿಸಬೇಕು. [28]ಇವುಗಳೊಂದಿಗೆ ಧಾನ್ಯಸಮರ್ಪಣೆ
ಗಾಗಿ ಎಣ್ಣೆಬೆರೆಸಿದ ಗೋಧಿಹಿಟ್ಟನ್ನು ಪ್ರತಿಯೊಂದು
ಹೋರಿಗೆ ಒಂಭತ್ತು ಸೇರು, [29]ಟಗರಿಗೆ ಆರು ಸೇರು
ಮತ್ತು ಪ್ರತಿಯೊಂದು ಕುರಿಗೆ ಮೂರು ಸೇರು ಈ ಮೇರೆಗೆ
ಸಮರ್ಪಿಸಬೇಕು. [30]ನಿಮಗೋಸ್ಕರ ಪ್ರಾಯಶ್ಚಿತ್ತ
ಮಾಡಲು ಒಂದು ಹೋತವನ್ನೂ ಪಾಪಪರಿಹಾರಕ
ಯಜ್ಞವಾಗಿ ಅರ್ಪಿಸಬೇಕು.

[31]ಈ ಪಶುಗಳೆಲ್ಲಾ ಪೂರ್ಣಾಂಗವಾದವುಗಳಾಗಿರ
ಬೇಕು. ಕ್ರಮಾನುಸಾರವಾದ ಸರ್ವಾಂಗಹೋಮ ಮತ್ತು
ಅದರ ಧಾನ್ಯಾರ್ಪಣೆಗಳಲ್ಲದೆ ಈ ಯಜ್ಞಗಳನ್ನು ಮತ್ತು
ಅವುಗಳೊಡನೆ ಪಾನ ದ್ರವ್ಯಾರ್ಪಣೆಗಳನ್ನು ಅರ್ಪಿಸ
ಬೇಕು. ನೀವು ಸಮರ್ಪಿಸುವ ಪಶುಗಳಲ್ಲಿಯೂ ಅಥವಾ
ಪಾನದ್ರವ್ಯ ಸಮರ್ಪಣೆಗಳಲ್ಲಿಯೂ ಯಾವ ದೋಷವೂ
ಇರಬಾರದು.

### ತುತ್ತೂರಿಗಳ ಹಬ್ಬ

29 ‘‘ಏಳನೆಯ ತಿಂಗಳಿನ ಮೊದಲನೆ ದಿನದಲ್ಲಿ
ವಿಶೇಷ ಸಭೆಸೇರಬೇಕು. ಆ ದಿನದಲ್ಲಿ ನೀವು
ಯಾವ ಪ್ರಯಾಸದ ಕೆಲಸವನ್ನೂ ಮಾಡಬಾರದು. ಅದು
ತುತ್ತೂರಿಗಳ ಧ್ವನಿಯಿಂದ ಪ್ರಕಟವಾಗುವ ದಿನವಾಗಿದೆ.
[2]ಅದರಲ್ಲಿ ನೀವು ಯೆಹೋವನಿಗೆ ಸುಗಂಧಕರವಾದ
ಸರ್ವಾಂಗಹೋಮಕ್ಕಾಗಿ ಒಂದು ಹೋರಿಯನ್ನೂ
ಒಂದು ಟಗರನ್ನೂ ಒಂದು ವರುಷದ ಏಳು ಕುರಿ ಮರಿ
ಗಳನ್ನೂ ಸಮರ್ಪಿಸಬೇಕು. ಇವುಗಳೆಲ್ಲ ಪೂರ್ಣಾಂಗ
ವಾದವುಗಳಾಗಿರಬೇಕು. [3]ಇವುಗಳೊಡನೆ ಧಾನ್ಯ
ಸಮರ್ಪಣೆಗಾಗಿ ಹೋರಿಗೆ ಒಂಭತ್ತು ಸೇರು, ಟಗರಿಗೆ
ಆರು ಸೇರು ಮತ್ತು [4]ಪ್ರತಿಯೊಂದು ಕುರಿಮರಿಗೆ ಮೂರು
ಸೇರು, ಈ ಮೇರೆಗೆ ಎಣ್ಣೆ ಬೆರೆಸಿದ ಗೋಧಿಹಿಟ್ಟನ್ನು
ಸಮರ್ಪಿಸಬೇಕು. [5]ಪಾಪಪರಿಹಾರಕ ಯಜ್ಞಕ್ಕಾಗಿ ಒಂದು
ಹೋತವನ್ನು ಅರ್ಪಿಸಬೇಕು. [6]ಅಮಾವಾಸ್ಯೆಯಲ್ಲಿ
ಅರ್ಪಿಸುವ ಸರ್ವಾಂಗಹೋಮ ಮತ್ತು ಅದರೊಡನೆ
ಅರ್ಪಿಸುವ ಧಾನ್ಯಾರ್ಪಣೆ ಮತ್ತು ಕ್ರಮವಾಗಿ ಪ್ರತಿನಿತ್ಯ
ಅರ್ಪಿಸುವ ಸರ್ವಾಂಗಹೋಮ ಮತ್ತು ಅದರೊಡನೆ
ಅರ್ಪಿಸುವ ಧಾನ್ಯಾರ್ಪಣೆ ಮತ್ತು ಪಾನದ್ರವ್ಯಾರ್ಪಣೆ ಇವು
ಗಳಲ್ಲದೆ ಈ ಅರ್ಪಣೆಗಳನ್ನು ಅರ್ಪಿಸಬೇಕು. ಇವುಗಳನ್ನು
ನಿಯಮಗಳ ಪ್ರಕಾರವಾಗಿ ಮಾಡಬೇಕು. ಅವು

ಯೆಹೋವನಿಗೆ ಸುಗಂಧ ವಾಸನೆಯಾಗಿಯೂ ತ್ಯಾಗ
ಮಯವಾದ ಕಾಣಿಕೆಯಾಗಿಯೂ ಇವೆ.

### ದೋಷಪರಿಹಾರಕ ದಿನ

7''ಏಳನೆಯ ತಿಂಗಳಿನ ಹತ್ತನೆಯ ದಿನದಲ್ಲಿ ವಿಶೇಷ
ಸಭೆ ಸೇರಬೇಕು. ಆ ದಿನದಲ್ಲಿ ನೀವು ಉಪವಾಸ ಮಾಡ
ಬೇಕು; ಯಾವ ಕೆಲಸವನ್ನೂ ಮಾಡಬಾರದು. 8ನೀವು
ಇವುಗಳನ್ನು ಯೆಹೋವನಿಗೆ ಸುಗಂಧಕರವಾಗಿರುವ
ಸರ್ವಾಂಗಹೋಮವನ್ನಾಗಿ ಒಂದು ಹೋರಿಯನ್ನೂ
ಒಂದು ಟಗರನ್ನೂ ಒಂದು ವರ್ಷದ ಏಳು ಗಂಡುಕುರಿ
ಮರಿಗಳನ್ನೂ ಅರ್ಪಿಸಬೇಕು. ಇವು ಪೂರ್ಣಾಂಗವಾದವು
ಗಳಾಗಿರಬೇಕು. 9ಇವುಗಳೊಡನೆ, ಧಾನ್ಯನೈವೇದ್ಯಕ್ಕಾಗಿ
ಎಣ್ಣೆ ಬೆರೆಸಿದ ಗೋಧಿಹಿಟ್ಟನ್ನು ಒಂದು ಹೋರಿಗೆ
ಒಂಭತ್ತು ಸೇರು, ಟಗರಿಗೆ ಆರು ಸೇರು 10 ಮತ್ತು ಒಂದು
ಕುರಿಮರಿಗೆ ಮೂರು ಸೇರು ಸಮರ್ಪಿಸಬೇಕು. 11ಪಾಪ
ಪರಿಹಾರಕಯಜ್ಞಕ್ಕಾಗಿ ಒಂದು ಹೋತವನ್ನು ಸಮರ್ಪಿಸ
ಬೇಕು. ದೋಷಪರಿಹಾರಕ ದಿನಕ್ಕೋಸ್ಕರ ಅರ್ಪಿಸುವ
ಪಾಪಪರಿಹಾರಕ ಯಜ್ಞ, ಕ್ರಮವಾಗಿ ಪ್ರತಿನಿತ್ಯ
ಅರ್ಪಿಸುವ ಸರ್ವಾಂಗಹೋಮ ಮತ್ತು ಅದರ ಧಾನ್ಯಾ
ರ್ಪಣೆ ಮತ್ತು ಇವುಗಳೊಡನೆ ಅರ್ಪಿಸುವ ದ್ರವ್ಯಾರ್ಪಣೆ
ಇವುಗಳಲ್ಲದೆ ಮೇಲೆ ಹೇಳಿದವುಗಳನ್ನು ಅರ್ಪಿಸಬೇಕು.
ಇವು ಯೆಹೋವನಿಗೆ ಸುಗಂಧಕರವಾಗಿವೆ.

### ಪರ್ಣಶಾಲೆಗಳ ಹಬ್ಬ

12''ಏಳನೆಯ ತಿಂಗಳಿನ ಹದಿನೈದನೆಯ ದಿನದಲ್ಲಿ
ವಿಶೇಷ ಸಭೆಕೂಡಬೇಕು. ಇದು ಪರ್ಣಶಾಲೆಗಳ ಹಬ್ಬ
ವಾಗಿದೆ. ಆ ದಿವಸ ನೀವು ಯಾವ ಪ್ರಯಾಸದ ಕೆಲಸವನ್ನೂ
ಮಾಡಬಾರದು. ಯೆಹೋವನಿಗೆ ಗೌರವಾರ್ಥವಾಗಿ
''ಪರ್ಣಶಾಲೆಗಳ ಹಬ್ಬ'' ವನ್ನು ನೀವು ಏಳು ದಿನಗಳವರೆಗೆ
ಆಚರಿಸಬೇಕು. 13ನೀವು ಯೆಹೋವನಿಗೆ ಸರ್ವಾಂಗ
ಹೋಮಗಳನ್ನು ಅರ್ಪಿಸಬೇಕು. ಅದರ ಸುವಾಸನೆಯು
ಯೆಹೋವನಿಗೆ ಮೆಚ್ಚಿಗೆಕರವಾಗಿದೆ. ಸರ್ವಾಂಗ
ಹೋಮವಾಗಿ ಹದಿಮೂರು ಹೋರಿಗಳನ್ನು, ಎರಡು
ಟಗರುಗಳನ್ನು ಮತ್ತು ಒಂದು ವರುಷದ ಹದಿನಾಲ್ಕು
ಗಂಡುಕುರಿಮರಿಗಳನ್ನು ಅರ್ಪಿಸಬೇಕು. 14ಧಾನ್ಯ
ನೈವೇದ್ಯಕ್ಕಾಗಿ ಎಣ್ಣೆ ಬೆರೆಸಿದ ಗೋಧಿಹಿಟ್ಟನ್ನು ಅರ್ಪಿಸ
ಬೇಕು. ಅಂದರೆ ಪ್ರತಿಯೊಂದು ಹೋರಿಗೆ ಒಂಭತ್ತು
ಸೇರು, ಟಗರಿಗೆ ಆರು ಸೇರು 15ಮತ್ತು ಒಂದು ಕುರಿ
ಮರಿಗೆ ಮೂರು ಸೇರು ಸಮರ್ಪಿಸಬೇಕು. 16ಕ್ರಮವಾಗಿ
ಪ್ರತಿನಿತ್ಯ ಅರ್ಪಿಸುವ ಸರ್ವಾಂಗಹೋಮ ಮತ್ತು ಅದ
ರೊಡನೆ ಅರ್ಪಿಸುವ ಧಾನ್ಯಾರ್ಪಣೆ ಮತ್ತು ಪಾನ
ದ್ರವ್ಯಾರ್ಪಣೆಗಳಲ್ಲದೆ ದೋಷಪರಿಹಾರಕ ಯಜ್ಞಕ್ಕಾಗಿ
ಒಂದು ಹೋತವನ್ನು ಸಮರ್ಪಿಸಬೇಕು.

17''ಆ ಉತ್ಸವದ ಎರಡನೆಯ ದಿನದಲ್ಲಿ ನೀವು
ಹನ್ನೆರಡು ಹೋರಿಗಳನ್ನು, ಎರಡು ಟಗರುಗಳನ್ನು ಮತ್ತು
ಒಂದು ವರ್ಷದ ಹದಿನಾಲ್ಕು ಗಂಡುಕುರಿಮರಿಗಳನ್ನು
ಅರ್ಪಿಸಬೇಕು. ಇವುಗಳೆಲ್ಲ ಪೂರ್ಣಾಂಗವಾದವು
ಗಳಾಗಿರಬೇಕು. 18ಅಲ್ಲದೆ ಈ ಪಶುಗಳಲ್ಲಿ ಪ್ರತಿ
ಯೊಂದಕ್ಕೂ ನೇಮಕಗೊಂಡ ಧಾನ್ಯಾರ್ಪಣೆಯನ್ನು
ಮತ್ತು ಪಾನದ್ರವ್ಯಾರ್ಪಣೆಯನ್ನು ಸರಿಯಾದ ಪ್ರಮಾಣ
ದಲ್ಲಿ ಅರ್ಪಿಸಬೇಕು. 19ಪಾಪಪರಿಹಾರಕ ಯಜ್ಞಕ್ಕಾಗಿ
ಒಂದು ಹೋತವನ್ನು ಸಮರ್ಪಿಸಬೇಕು. ಕ್ರಮವಾಗಿ
ಪ್ರತಿನಿತ್ಯ ಅರ್ಪಿಸುವ ಸರ್ವಾಂಗಹೋಮ ಮತ್ತು ಅದ
ರೊಡನೆ ಅರ್ಪಿಸುವ ಧಾನ್ಯಾರ್ಪಣೆ ಮತ್ತು ಪಾನ
ದ್ರವ್ಯಾರ್ಪಣೆಗಳಲ್ಲದೆ ಮೇಲ್ಕಂಡವುಗಳನ್ನು ಅರ್ಪಿಸ
ಬೇಕು.

20''ಈ ಉತ್ಸವದ ಮೂರನೆಯ ದಿನದಲ್ಲಿ ನೀವು
ಹನ್ನೊಂದು ಹೋರಿಗಳನ್ನು, ಎರಡು ಟಗರುಗಳನ್ನು
ಮತ್ತು ಒಂದು ವರ್ಷದ ಹದಿನಾಲ್ಕು ಗಂಡು ಕುರಿ
ಮರಿಗಳನ್ನು ಅರ್ಪಿಸಬೇಕು. ಇವುಗಳು ಪೂರ್ಣಾಂಗ
ವಾದವುಗಳಾಗಿರಬೇಕು. 21ಈ ಪಶುಗಳಲ್ಲಿ ಪ್ರತಿ
ಯೊಂದಕ್ಕೂ ನೇಮಕವಾಗಿರುವ ಧಾನ್ಯಾರ್ಪಣೆಯನ್ನು
ಮತ್ತು ಪಾನದ್ರವ್ಯಾರ್ಪಣೆಯನ್ನು ಸರಿಯಾದ ಪ್ರಮಾಣ
ದಲ್ಲಿ ಅರ್ಪಿಸಬೇಕು. 22ದೋಷಪರಿಹಾರಕ್ಕಾಗಿ ಒಂದು
ಹೋತವನ್ನು ಸಮರ್ಪಿಸಬೇಕು. ಕ್ರಮಾನುಸಾರವಾದ
ದೈನಂದಿನ ಸರ್ವಾಂಗಹೋಮ ಮತ್ತು ಅದರೊಡನೆ
ಅರ್ಪಿಸುವ ಧಾನ್ಯಾರ್ಪಣೆ ಮತ್ತು ಪಾನದ್ರವ್ಯಾರ್ಪಣೆ
ಗಳಲ್ಲದೆ ಮೇಲ್ಕಂಡವುಗಳನ್ನು ಅರ್ಪಿಸಬೇಕು.

23''ಈ ಉತ್ಸವದ ನಾಲ್ಕನೆಯ ದಿನದಲ್ಲಿ ನೀವು ಹತ್ತು
ಹೋರಿಗಳನ್ನು, ಎರಡು ಟಗರುಗಳನ್ನು ಮತ್ತು ಒಂದು
ವರ್ಷದ ಹದಿನಾಲ್ಕು ಗಂಡು ಕುರಿಮರಿಗಳನ್ನು ಅರ್ಪಿಸ
ಬೇಕು. ಇವು ಪೂರ್ಣಾಂಗವುಳ್ಳವುಗಳಾಗಿರಬೇಕು. 24ಈ
ಪಶುಗಳಲ್ಲಿ ಪ್ರತಿಯೊಂದಕ್ಕೆ ನೇಮಕವಾದ ಪ್ರಕಾರವೇ
ಧಾನ್ಯಾರ್ಪಣೆಯನ್ನು ಮತ್ತು ಪಾನದ್ರವ್ಯಾರ್ಪಣೆಯನ್ನು
ಸರಿಯಾದ ಪ್ರಮಾಣದಲ್ಲಿ ಅರ್ಪಿಸಬೇಕು. 25ಪಾಪಪರಿ
ಹಾರಕ ಯಜ್ಞಕ್ಕಾಗಿ ಒಂದು ಹೋತವನ್ನು ಸಮರ್ಪಿಸ
ಬೇಕು. ಕ್ರಮವಾಗಿ ಪ್ರತಿನಿತ್ಯ ಅರ್ಪಿಸುವ ಸರ್ವಾಂಗ
ಹೋಮ ಮತ್ತು ಅದರೊಡನೆ ಅರ್ಪಿಸುವ ಧಾನ್ಯಾರ್ಪಣೆ
ಮತ್ತು ಪಾನದ್ರವ್ಯಾರ್ಪಣೆಗಳಲ್ಲದೆ ಮೇಲ್ಕಂಡವುಗಳನ್ನು
ಅರ್ಪಿಸಬೇಕು.

26''ಈ ಉತ್ಸವದ ಐದನೆಯ ದಿನದಲ್ಲಿ ನೀವು ಒಂಭತ್ತು
ಹೋರಿಗಳನ್ನು, ಎರಡು ಟಗರುಗಳನ್ನು ಮತ್ತು ಒಂದು
ವರ್ಷದ ಹದಿನಾಲ್ಕು ಗಂಡುಕುರಿಮರಿಗಳನ್ನು ಅರ್ಪಿಸ
ಬೇಕು. ಇವುಗಳೆಲ್ಲಾ ಪೂರ್ಣಾಂಗವಾದವುಗಳಾಗಿರ
ಬೇಕು. 27ಈ ಪಶುಗಳಲ್ಲಿ ಪ್ರತಿಯೊಂದಕ್ಕೂ ನೇಮಕ

ಗೊಂಡ ಧಾನ್ಯಾರ್ಪಣೆಯನ್ನು ಮತ್ತು ಪಾನದ್ರವ್ಯಾ
ರ್ಪಣೆಯನ್ನು ಸರಿಯಾದ ಪ್ರಮಾಣದಲ್ಲಿ ಅರ್ಪಿಸಬೇಕು.
28ಪಾಪಪರಿಹಾರಕಯಜ್ಞಕ್ಕಾಗಿ ಒಂದು ಹೋತವನ್ನು
ಸಮರ್ಪಿಸಬೇಕು. ಕ್ರಮವಾದ ದೈನಂದಿನ ಸರ್ವಾಂಗ
ಹೋಮ ಮತ್ತು ಅದರೊಡನೆ ಅರ್ಪಿಸಬೇಕಾದ ಧಾನ್ಯಾ
ರ್ಪಣೆ ಮತ್ತು ಪಾನದ್ರವ್ಯಾರ್ಪಣೆಗಳಲ್ಲದೆ ಮೇಲ್ಕಂಡವು
ಗಳನ್ನೂ ಅರ್ಪಿಸಬೇಕು.

29‘‘ಈ ಉತ್ಸವದ ಆರನೆಯ ದಿನದಲ್ಲಿ ನೀವು ಎಂಟು
ಹೋರಿಗಳನ್ನು, ಎರಡು ಟಗರುಗಳನ್ನು ಮತ್ತು ಒಂದು
ವರ್ಷದ ಹದಿನಾಲ್ಕು ಗಂಡುಕುರಿಮರಿಗಳನ್ನು ಅರ್ಪಿಸ
ಬೇಕು. ಇವುಗಳೆಲ್ಲ ಪೂರ್ಣಾಂಗವುಳ್ಳವುಗಳಾಗಿರ
ಬೇಕು. 30ಈ ಪಶುಗಳಲ್ಲಿ ಪ್ರತಿಯೊಂದಕ್ಕೆ ನೇಮಕವಾದ
ಪ್ರಕಾರವೇ ಧಾನ್ಯಾರ್ಪಣೆಯನ್ನೂ ಪಾನದ್ರವ್ಯಾರ್ಪಣೆ
ಯನ್ನೂ ಸರಿಯಾದ ಪ್ರಮಾಣದಲ್ಲಿ ಮಾಡಬೇಕು.
31ದೋಷಪರಿಹಾರಕ ಯಜ್ಞಕ್ಕಾಗಿ ಒಂದು ಹೋತವನ್ನು
ಸಮರ್ಪಿಸಬೇಕು. ಕ್ರಮವಾಗಿ ಪ್ರತಿನಿತ್ಯ ಅರ್ಪಿಸುವ
ಸರ್ವಾಂಗಹೋಮ ಮತ್ತು ಅದರೊಡನೆ ಅರ್ಪಿಸುವ
ಧಾನ್ಯಾರ್ಪಣೆ ಮತ್ತು ಪಾನದ್ರವ್ಯಾರ್ಪಣೆಗಳಲ್ಲದೆ
ಮೇಲ್ಕಂಡವುಗಳನ್ನು ಅರ್ಪಿಸಬೇಕು.

32‘‘ಈ ಉತ್ಸವದ ಏಳನೆಯ ದಿನದಲ್ಲಿ ನೀವು ಏಳು
ಹೋರಿಗಳನ್ನು, ಎರಡು ಟಗರುಗಳನ್ನು ಮತ್ತು ಒಂದು
ವರ್ಷದ ಹದಿನಾಲ್ಕು ಗಂಡುಕುರಿಮರಿಗಳನ್ನು ಅರ್ಪಿಸ
ಬೇಕು. ಅವುಗಳೆಲ್ಲ ಪೂರ್ಣಾಂಗವಾದವುಗಳಾಗಿರ
ಬೇಕು. 33ಈ ಪಶುಗಳಲ್ಲಿ ಪ್ರತಿಯೊಂದಕ್ಕೆ ನೇಮಕವಾದ
ಪ್ರಕಾರವೇ ಧಾನ್ಯಾರ್ಪಣೆಗಳನ್ನು ಮತ್ತು ಪಾನದ್ರವ್ಯಾ
ರ್ಪಣೆಗಳನ್ನು ಸರಿಯಾದ ಪ್ರಮಾಣದಲ್ಲಿ ಅರ್ಪಿಸಬೇಕು.
34ದೋಷಪರಿಹಾರಕ ಯಜ್ಞಕ್ಕಾಗಿ ಒಂದು ಹೋತವನ್ನು
ಸಮರ್ಪಿಸಬೇಕು. ಕ್ರಮವಾಗಿ ಪ್ರತಿನಿತ್ಯ ಅರ್ಪಿಸುವ
ಸರ್ವಾಂಗಹೋಮ ಮತ್ತು ಅದರೊಡನೆ ಅರ್ಪಿಸುವ
ಧಾನ್ಯಾರ್ಪಣೆ ಮತ್ತು ಪಾನದ್ರವ್ಯಾರ್ಪಣೆಗಳಲ್ಲದೆ
ಮೇಲ್ಕಂಡವುಗಳನ್ನೂ ಅರ್ಪಿಸಬೇಕು.

35‘‘ಎಂಟನೆಯ ದಿನದಲ್ಲಿ ಮುಕ್ತಾಯ ಸಭಾಕೂಟ
ವಿರುವುದು. ಆ ದಿನದಲ್ಲಿ ಯಾವ ಪ್ರಯಾಸದ ಕೆಲಸ
ವನ್ನೂ ಮಾಡಬಾರದು. 36ನೀವು ಈ ಕೆಳಕಂಡವುಗಳನ್ನು
ಯೆಹೋವನಿಗೆ ಸುಗಂಧಕರವಾದ ತ್ಯಾಗಮಯವಾದ
ಸರ್ವಾಂಗಹೋಮವನ್ನಾಗಿ ಒಂದು ಹೋರಿಯನ್ನೂ
ಒಂದು ಟಗರನ್ನೂ ಒಂದು ವರ್ಷದ ಏಳು ಗಂಡುಕುರಿ
ಮರಿಗಳನ್ನೂ ಅರ್ಪಿಸಬೇಕು. ಇವುಗಳೆಲ್ಲ ಪೂರ್ಣಾಂಗ
ವಾದವುಗಳಾಗಿರಬೇಕು. 37ಈ ಪಶುಗಳಲ್ಲಿ ಪ್ರತಿ
ಯೊಂದಕ್ಕೆ ನೇಮಕವಾದ ಪ್ರಕಾರವೇ ಧಾನ್ಯಾರ್ಪಣೆ
ಗಳನ್ನು ಮತ್ತು ಪಾನದ್ರವ್ಯಾರ್ಪಣೆಗಳನ್ನು ಸರಿಯಾದ
ಪ್ರಮಾಣದಲ್ಲಿ ಅರ್ಪಿಸಬೇಕು. 38ಪಾಪಪರಿಹಾರಕ
ಯಜ್ಞಕ್ಕಾಗಿ ಒಂದು ಹೋತವನ್ನು ಸಮರ್ಪಿಸಬೇಕು.
ಕ್ರಮವಾಗಿ ಪ್ರತಿನಿತ್ಯ ಅರ್ಪಿಸುವ ಸರ್ವಾಂಗಹೋಮ
ಮತ್ತು ಅದರೊಡನೆ ಅರ್ಪಿಸುವ ಧಾನ್ಯಾರ್ಪಣೆ ಮತ್ತು
ಅದರ ಪಾನದ್ರವ್ಯಾರ್ಪಣೆಗಳಲ್ಲದೆ ಮೇಲ್ಕಂಡವುಗಳನ್ನು
ಅರ್ಪಿಸಬೇಕು.

39‘‘ಮೇಲೆ ತಿಳಿಸಿರುವ ಸಾರ್ವಜನಿಕ ಯಜ್ಞಗಳನ್ನು
ಇಡೀ ಸಮುದಾಯಕ್ಕೋಸ್ಕರ ಹಬ್ಬದ ದಿನಗಳಲ್ಲಿ ನಿಮ್ಮ
ಸರ್ವಾಂಗಹೋಮಗಳನ್ನಾಗಿಯೂ ಧಾನ್ಯಾರ್ಪಣೆಗಳ
ನ್ನಾಗಿಯೂ ಪಾನದ್ರವ್ಯಾರ್ಪಣೆಗಳನ್ನಾಗಿಯೂ ಮತ್ತು
ಸಮಾಧಾನ ಯಜ್ಞಗಳನ್ನಾಗಿಯೂ ಅರ್ಪಿಸಬೇಕು. ನಿಮ್ಮ
ವೈಯಕ್ತಿಕ ಹರಕೆಯ ಅರ್ಪಣೆ ಮತ್ತು ಸ್ವಯಿಚ್ಛಾರ್ಪಣೆ
ಗಳಲ್ಲದೆ ಮೇಲ್ಕಂಡವುಗಳನ್ನು ಅರ್ಪಿಸಬೇಕು.’’

40‘‘ಯೆಹೋವನು ಆಜ್ಞಾಪಿಸಿದ್ದನ್ನೆಲ್ಲಾ ಮೋಶೆಯು
ಇಸ್ರೇಲರಿಗೆ ತಿಳಿಸಿದನು.

### ವಿಶೇಷ ಹರಕೆಗಳು

30 ಮೋಶೆಯು ಇಸ್ರೇಲರ ಕುಲಪ್ರಧಾನರಿಗೆ ಹೇಳಿ
ದ್ದೇನೆಂದರೆ, ‘‘ಯೆಹೋವನು ಹೀಗೆ ಆಜ್ಞಾಪಿಸಿ
ದ್ದಾನೆ: 2‘‘ಯಾವನಾದರೂ ಯೆಹೋವನಿಗೆ ಇಂಥದ್ದನ್ನು
ಕೊಡುತ್ತೇನೆಂದು ಹರಕೆ ಮಾಡಿದರೆ ಅಥವಾ ತಾನು
ಇಂಥದ್ದನ್ನು ಮಾಡುವುದಿಲ್ಲ ಎಂದು ಆಣೆಯಿಟ್ಟು
ಕೊಂಡರೆ, ಅವನು ತನ್ನ ಮಾತನ್ನು ಮೀರದೆ ತಾನು
ಹೇಳಿದಂತೆಯೇ ನೆರವೇರಿಸಬೇಕು.

3‘‘ಇನ್ನೂ ತನ್ನ ತಂದೆಯ ಮನೆಯಲ್ಲಿರುವ
ಯುವತಿಯು ಯೆಹೋವನಿಗೆ ಇಂಥದ್ದನ್ನು ಕೊಡುತ್ತೇ
ನೆಂದು ಹರಕೆ ಮಾಡಿಕೊಂಡರೆ ಅಥವಾ ಇಂಥದ್ದನ್ನು
ಮಾಡುವುದಿಲ್ಲ ಎಂದು ಆಣೆಯಿಟ್ಟುಕೊಂಡರೆ, 4ಆದರೆ
ಅವಳ ತಂದೆಯು ಅವಳ ಹರಕೆಯನ್ನಾಗಲೀ ಆಣೆಯ
ನ್ನಾಗಲೀ ಕೇಳಿಯೂ ಅದರ ಬಗ್ಗೆ ಅವಳಿಗೆ ಏನೂ ಹೇಳ
ದಿದ್ದರೆ, ಆಕೆಯು ಅಂಥಾ ಹರಕೆಯನ್ನೂ ಆಣೆಯನ್ನೂ
ನೆರವೇರಿಸಲೇಬೇಕು. 5ಆದರೆ ತಂದೆಯು ಆ ಸಂಗತಿ
ಯನ್ನು ತಿಳಿದ ದಿನವೇ ಅದನ್ನು ಆಕ್ಷೇಪಿಸಿದರೆ, ಆಕೆಯು
ಮಾಡಿದ ಹರಕೆಯನ್ನಾಗಲೀ ಇಟ್ಟುಕೊಂಡ ಆಣೆಯ
ನ್ನಾಗಲೀ ನೆರವೇರಿಸಬೇಕಿಲ್ಲ. ತಂದೆಯು ಆಕ್ಷೇಪಿಸಿದ್ದ
ರಿಂದ ಯೆಹೋವನು ಅವಳನ್ನು ಕ್ಷಮಿಸುವನು.

6‘‘ಆದರೆ ಅವಳು ತನ್ನ ಹರಕೆಯನ್ನಾಗಲೀ ಆಣೆ
ಯನ್ನಾಗಲೀ ನೆರವೇರಿಸಿಲ್ಲದಿರುವಾಗಲೇ ಮದುವೆ
ಯಾದರೆ, 7ಗಂಡನು ಅದರ ಬಗ್ಗೆ ತಿಳಿದ ದಿನದಂದು ಆಕೆಗೆ
ಅದರ ಬಗ್ಗೆ ಏನೂ ಹೇಳದಿದ್ದರೆ, ಆಕೆ ತಾನು ಮಾಡಿದ
ಹರಕೆಯನ್ನಾಗಲೀ ಆಣೆಯನ್ನಾಗಲೀ ನೆರವೇರಿಸಬೇಕು.
8ಆದರೆ ಗಂಡನು ಅದನ್ನು ಕೇಳಿದ ದಿನವೇ ಆಕ್ಷೇಪಿಸಿದರೆ,
ಅವನು ಆಕೆಯ ಹರಕೆಯನ್ನಾಗಲೀ ಅಥವಾ

ಆಣೆಯನ್ನಾಗಲೀ ರದ್ದುಪಡಿಸುವನು. ಯೆಹೋವನು
ಅವಳನ್ನು ಕ್ಷಮಿಸುವನು.

9‘‘ವಿಧವೆಯಾಗಲೀ ವಿವಾಹವಿಚ್ಛೇಧನ ಹೊಂದಿದ
ಸ್ತ್ರೀಯಾಗಲೀ ತಾನು ಮಾಡಿದ ಪ್ರತಿಯೊಂದು ಹರಕೆ
ಯನ್ನೂ ಆಣೆಯನ್ನೂ ನೆರವೇರಿಸಲೇಬೇಕು.
10ವಿವಾಹಿತ ಸ್ತ್ರೀಯು ಅಂಥಾ ಹರಕೆಯನ್ನಾಗಲೀ
ಪ್ರಮಾಣವನ್ನಾಗಲೀ ಮಾಡಿದಾಗ, 11ಅವಳ ಗಂಡನು
ತಿಳಿದು ಅಡ್ಡಿಮಾಡದೆ ಏನೂ ಹೇಳದಿದ್ದರೆ ಆಕೆಯು ಆ
ಹರಕೆಗಳನ್ನೂ ಆಣೆಗಳನ್ನೂ ನೆರವೇರಿಸಬೇಕು. 12ಆದರೆ
ಗಂಡನು ಅವುಗಳನ್ನು ತಿಳಿದಾಗಲೇ ರದ್ದುಗೊಳಿಸಿದರೆ,
ಅವಳ ಎಲ್ಲ ಹರಕೆಗಳಿಗೆ ಮತ್ತು ಆಣೆಗಳಿಗೆ ಬೆಲೆ
ಯಿರುವುದಿಲ್ಲ. ಯಾಕಂದರೆ ಗಂಡನು ಅವುಗಳನ್ನು ರದ್ದು
ಪಡಿಸಿದನು ಮತ್ತು ಯೆಹೋವನು ಆಕೆಯನ್ನು ಕ್ಷಮಿಸು
ತ್ತಾನೆ. 13ಹೆಂಡತಿ ಮಾಡಿದ ಹರಕೆಯನ್ನೂ ಆಣೆಯನ್ನೂ
ಸ್ಥಾಪಿಸುವುದಕ್ಕಾಗಲೀ ರದ್ದುಮಾಡುವುದಕ್ಕಾಗಲೀ
ಗಂಡನಿಗೆ ಅಧಿಕಾರವಿರುವುದು. 14ಆದರೆ ಅವಳ ಗಂಡನು
ಅದನ್ನು ಕೇಳಿದ ದಿನದಿಂದ ಅದರ ಬಗ್ಗೆ ಆಕ್ಷೇಪಿಸದಿದ್ದರೆ,
ಅವನು ಅವಳ ಎಲ್ಲಾ ಹರಕೆಗಳನ್ನು ಮತ್ತು ಆಣೆಗಳನ್ನು
ಸ್ಥಾಪಿಸಿದ್ದಾನೆ. ಯಾಕಂದರೆ ಅವನು ಅದರ ಬಗ್ಗೆ ಕೇಳಿದ
ದಿನದಂದು ಅವಳಿಗೆ ಏನೂ ಹೇಳಲಿಲ್ಲ. 15ಆದರೆ ಅವನು
ಅವುಗಳ ಬಗ್ಗೆ ಕೇಳಿ ಸ್ವಲ್ಪ ದಿನಗಳಾದ ಮೇಲೆ ಆಕೆಯ
ಹರಕೆಗಳನ್ನಾಗಲೀ ವಾಗ್ದಾನಗಳನ್ನಾಗಲೀ ರದ್ದು ಪಡಿಸಿ
ದರೆ, ಆಕೆಯ ಹರಕೆಯನ್ನು ಮುರಿದದ್ದಕ್ಕಾಗಿ ಅವನು
ಶಿಕ್ಷೆಯನ್ನು ಅನುಭವಿಸುವನು.’’

16ಗಂಡಹೆಂಡತಿಯರ ಬಗ್ಗೆ, ತಂದೆಯೊಡನೆ ಇನ್ನೂ
ಮನೆಯಲ್ಲಿರುವ ಮಗಳ ವಿಷಯದಲ್ಲಿ ಯೆಹೋವನು
ಮೋಶೆಗೆ ಈ ಆಜ್ಞೆಗಳನ್ನು ಕೊಟ್ಟನು.

## ಇಸ್ರೇಲರು ಮಿದ್ಯಾನ್ಯರನ್ನು ಸಂಹರಿಸಿದ್ದು

31 ಯೆಹೋವನು ಮೋಶೆಯೊಡನೆ ಮಾತಾಡಿ
ಹೀಗಂದನು, 2‘‘ಮಿದ್ಯಾನ್ಯರನ್ನು ಸೋಲಿಸು
ವುದರಿಂದ ನಾನು ಇಸ್ರೇಲರ ಗೌರವವನ್ನು ಸ್ಥಾಪಿಸು
ವೆನು. ಇದಾದನಂತರ ನೀನು ಸಾಯುವಿ.’’

3ಆಗ ಮೋಶೆ ಇಸ್ರೇಲರಿಗೆ, ‘‘ಮಿದ್ಯಾನ್ಯರು
ಯೆಹೋವನಿಗೆ ವಿರೋಧವಾಗಿ ಮಾಡಿದ ಕೃತ್ಯಗಳಿಗಾಗಿ
ಅವರ ಮೇಲೆ ಆಕ್ರಮಣಮಾಡಿ ದಂಡಿಸಲು ನಿಮ್ಮಲ್ಲಿರುವ
ಗಂಡಸರಲ್ಲಿ ಕೆಲವರನ್ನು ದಂಡಯಾತ್ರೆಗೆ ಆರಿಸಿಕೊಳ್ಳ
ಬೇಕು. 4ಇಸ್ರೇಲಿನ ಕುಲಗಳವರಲ್ಲಿ ಪ್ರತಿಯೊಂದು
ಕುಲದಿಂದ ಒಂದು ಸಾವಿರ ಗಂಡಸರನ್ನು ದಂಡಯಾತ್ರೆಗೆ
ಕಳುಹಿಸಬೇಕು. 5ಆದುದರಿಂದ ಇಸ್ರೇಲರ ಕುಲಗಳಿಂದ
ಪ್ರತಿಯೊಂದು ಕುಲಕ್ಕೆ ಒಂದು ಸಾವಿರ ಗಂಡಸರ ಪ್ರಕಾರ
ಹನ್ನೆರಡು ಸಾವಿರ ಗಂಡಸರನ್ನು ಯುದ್ಧಕ್ಕೆ ಆರಿಸಿ
ಕೊಳ್ಳಲಾಯಿತು’’ ಅಂದನು.

6ಮೋಶೆಯು ಅವರನ್ನು ಯುದ್ಧಕ್ಕೆ ಕಳುಹಿಸಿದನು.
ಅವರ ಸಂಗಡ ಎಲ್ಲಾಜಾರನ ಮಗನಾದ ಫೀನೆಹಾಸ
ನನ್ನೂ ಕಳುಹಿಸಿದನು. ಫೀನೆಹಾಸನು ಪವಿತ್ರವಸ್ತುಗಳನ್ನು
ತೆಗೆದುಕೊಂಡನು ಮತ್ತು ಸೂಚನೆ ಕೊಡುವುದಕ್ಕಾಗಿ
ತುತ್ತೂರಿಗಳನ್ನು ತೆಗೆದುಕೊಂಡನು. 7ಯೆಹೋವನು
ಆಜ್ಞಾಪಿಸಿದಂತೆಯೇ ಇಸ್ರೇಲರು ಮಿದ್ಯಾನ್ಯರೊಡನೆ
ಯುದ್ಧಮಾಡಿದರು. ಅವರು ಮಿದ್ಯಾನ್ಯರ ಗಂಡಸ
ರೆಲ್ಲರನ್ನು ಕೊಂದರು. 8ಅವರು ಕೊಂದವರಲ್ಲಿ ಎವೀ,
ರೆಕೆಮ್, ಚೂರ್, ಹೂರ್ ಮತ್ತು ರೆಬಾ ಎಂಬ
ಮಿದ್ಯಾನ್ಯರ ಐದು ಮಂದಿ ರಾಜರು ಸೇರಿದ್ದರು. ಅವರು
ಕತ್ತಿಯಿಂದ ಬೆಯೋರನ ಮಗನಾದ ಬಿಳಾಮನನ್ನೂ
ಕೊಂದರು. 9ಇಸ್ರೇಲರು ಮಿದ್ಯಾನ್ಯರ ಹೆಂಗಸರನ್ನು
ಮತ್ತು ಮಕ್ಕಳನ್ನು ಸೆರೆಹಿಡಿದರು. ಅವರು ಮಿದ್ಯಾನ್ಯರ
ಎಲ್ಲಾ ಪಶುಗಳನ್ನು, ಮತ್ತು ಇತರ ಅಮೂಲ್ಯವಾದ
ವಸ್ತುಗಳನ್ನು ತೆಗೆದುಕೊಂಡರು. 10ಅವರು ನೆಲೆಸಿದ್ದ
ಊರುಗಳನ್ನೂ ಪಾಳೆಯಗಳನ್ನೂ ಸುಟ್ಟುಹಾಕಿದರು.
11ಎಲ್ಲಾ ಜನರನ್ನೂ ಪಶುಗಳನ್ನೂ ಹಿಡಿದು, 12ತಾವು
ಸೆರೆಹಿಡಿದವರನ್ನೂ ಪಶುಗಳನ್ನೂ ಆಸ್ತಿಯನ್ನೂ ತೆಗೆದು
ಕೊಂಡು ಜೆರಿಕೋ ಪಟ್ಟಣದ ಆಚೆ ಜೋರ್ಡನ್
ಹೊಳೆಯ ತೀರದಲ್ಲಿ ಮೋವಾಬ್ಯರ ಬಯಲಿನಲ್ಲಿದ್ದ
ಪಾಳೆಯಕ್ಕೆ ಅಂದರೆ ಮೋಶೆ, ಯಾಜಕನಾದ
ಎಲ್ಲಾಜಾರ್ ಮತ್ತು ಇಸ್ರೇಲರ ಸರ್ವಸಮೂಹದವರು
ಇದ್ದಲ್ಲಿಗೆ ಬಂದರು. 13ಮೋಶೆಯೂ ಯಾಜಕನಾದ
ಎಲ್ಲಾಜಾರನೂ ಸಮೂಹದ ಪ್ರಧಾನರೂ ಪಾಳೆಯದ
ಹೊರಗೆ ಬಂದು ಸೈನಿಕರನ್ನು ಎದುರುಗೊಂಡರು.
14ಮೋಶೆಯು ಯುದ್ಧದಿಂದ ಹಿಂತಿರುಗಿ ಬರುತ್ತಿದ್ದ
ಸೈನ್ಯಾಧಿಕಾರಿಗಳ ಮೇಲೆ ಅಂದರೆ ಸಹಸ್ರಾಧಿಪತಿಗಳ
ಮತ್ತು ಶತಾಧಿಪತಿಗಳ ಮೇಲೆ ಕೋಪಗೊಂಡನು.
15ಅವನು ಅವರಿಗೆ, ‘‘ನೀವು ಎಲ್ಲಾ ಹೆಂಗಸರನ್ನು
ಉಳಿಸಿದ್ದೇಕೆ? 16ಬಿಳಾಮನ ಸಲಹೆಯನ್ನು ಅನುಸರಿಸಿ,
ಯೆಹೋವನಿಗೆ ವಿರೋಧವಾಗಿ ಇಸ್ರೇಲರು ಪಾಪ
ಮಾಡುವಂತೆ ಮಾಡಿ ಪೆಗೋರದ ಬಾಳನ ಸಂಗತಿಗೆ
ಕಾರಣರಾದವರು ಇವರೇ ಅಲ್ಲವೇ? ಅದರ ಫಲವಾಗಿ
ಭಯಂಕರವಾದ ಕಾಯಿಲೆಯು ಜನರಿಗೆ ಬಂದಿತು.
17ಆದುದರಿಂದ ಈ ಗುಂಪಿನಲ್ಲಿರುವ ಎಲ್ಲಾ ಹುಡುಗ
ರನ್ನೂ ಪುರುಷಸಂಗಮ ಮಾಡಿದ ಎಲ್ಲಾ ಮಿದ್ಯಾನ್
ಹೆಂಗಸರನ್ನೂ ಕೊಲ್ಲಬೇಕು. 18ಪುರುಷ ಸಂಗಮ
ಮಾಡದಿರುವ ಕನ್ಯೆಯರನ್ನು ನಿಮಗಾಗಿ ಉಳಿಸಿರಿ.
19ನೀವಾದರೊ ಏಳು ದಿನಗಳವರೆಗೂ ಪಾಳೆಯದ
ಹೊರಗೆ ಇರಬೇಕು. ಮನುಷ್ಯರನ್ನು ಕೊಂದವರೂ

ಶವಸೋಂಕಿದವರೂ ನಿಮ್ಮವರಾಗಿರಲೀ ಸೆರೆಯವ
ರಾಗಿರಲೀ ಮೂರನೆಯ ಮತ್ತು ಏಳನೆಯ ದಿನದಲ್ಲಿ
ನಿಮ್ಮನ್ನು ಶುದ್ಧೀಕರಿಸಿಕೊಳ್ಳಬೇಕು. 20ಅದಲ್ಲದೆ ಎಲ್ಲಾ
ಬಟ್ಟೆಗಳನ್ನೂ ತೊಗಲಿನ ಸಾಮಾನುಗಳನ್ನೂ ಮೇಕೆ
ಕೂದಲಿನ ವಸ್ತುಗಳನ್ನೂ ಮರದ ಸಾಮಾನನ್ನೂ
ಶುದ್ಧಮಾಡಬೇಕು.''

21ಆಗ ಯಾಜಕನಾದ ಎಲ್ಲಾಜಾರನು ಸೈನಿಕರೊಡನೆ
ಮಾತಾಡಿ ಇಂತೆಂದನು: ''ಯೆಹೋವನು ಮೋಶೆಗೆ
ಯುದ್ಧದಿಂದ ಮರಳಿಬರುವ ಸೈನಿಕರ ಬಗ್ಗೆ ಆ ನಿಯಮ
ಗಳನ್ನು ಕೊಟ್ಟನು: 22-23ಬೆಂಕಿಯನ್ನು ಸಹಿಸ ಬಲ್ಲ ಚಿನ್ನ,
ಬೆಳ್ಳಿ, ತಾಮ್ರ, ಕಬ್ಬಿಣ, ತವರ, ಸೀಸ ಮೊದಲಾದ
ವುಗಳನ್ನು ಬೆಂಕಿಯಲ್ಲಿ ಹಾಯಿಸಿ ಶುದ್ಧ ಮಾಡಬೇಕು.
ಬಳಿಕ ಶುದ್ಧೀಕರಣದ ನೀರಿನಿಂದ ಅವುಗಳನ್ನು ಶುದ್ಧೀಕ
ರಿಸಬೇಕು. ಬೆಂಕಿಯನ್ನು ಸಹಿಸಲಾರದ ವಸ್ತುಗಳನ್ನು
ನೀರಿನಿಂದ ಮಾತ್ರ ತೊಳೆಯಬೇಕು. 24ಏಳನೆಯ ದಿನ
ದಲ್ಲಿ ನಿಮ್ಮ ಬಟ್ಟೆಗಳನ್ನು ಒಗೆದುಕೊಂಡ ನಂತರ ನೀವು
ಶುದ್ಧರಾಗುವಿರಿ. ಆಮೇಲೆ ನೀವು ಪಾಳೆಯದೊಳಗೆ
ಬರಬಹುದು.''

25ತರುವಾಯ ಯೆಹೋವನು ಮೋಶೆಗೆ, 26''ನೀನೂ
ಯಾಜಕನಾದ ಎಲ್ಲಾಜಾರನೂ ಸಮುದಾಯದ ಎಲ್ಲಾ
ಕುಲಪ್ರಧಾನರೂ ಸೆರೆಸಿಕ್ಕಿದ ಮನುಷ್ಯರನ್ನು ಮತ್ತು
ಪಶುಗಳನ್ನು ಲೆಕ್ಕಿಸಿ ಪಟ್ಟಿಮಾಡಬೇಕು. 27ಅವುಗಳನ್ನು
ಎರಡು ಭಾಗಮಾಡಿ ಯುದ್ಧಕ್ಕೆ ಹೋದ ಸೈನಿಕರಿಗೆ ಅರ್ಧ
ವನ್ನು ಮಿಕ್ಕಸಮೂಹದವರಿಗೆ ಅರ್ಧವನ್ನು ಹಂಚಿ ಕೊಡ
ಬೇಕು. 28ಯುದ್ಧಕ್ಕೆ ಹೋದ ಸೈನಿಕರಿಗೆ ಬರುವ ಭಾಗ
ದಿಂದ ಮನುಷ್ಯರನ್ನು, ದನಕರುಗಳನ್ನು, ಕತ್ತೆಗಳನ್ನು
ಮತ್ತು ಕುರಿಗಳನ್ನು 29ನೀನು ಐನೂರರಲ್ಲಿ ಒಂದರ
ಮೇರೆಗೆ ಯೆಹೋವನಿಗೋಸ್ಕರ ಕಪ್ಪವನ್ನು ತೆಗೆದು
ಕೊಂಡು, ಅದನ್ನು ಪ್ರತ್ಯೇಕಿಸಿ ಯಾಜಕನಾದ ಎಲ್ಲಾಜಾರ
ನಿಗೆ ಒಪ್ಪಿಸಬೇಕು. 30ಮಿಕ್ಕ ಇಸ್ರೇಲರಿಗೆ ಬರುವ ಭಾಗ
ದಿಂದ ಮನುಷ್ಯರನ್ನು, ದನಕರುಗಳನ್ನು, ಕತ್ತೆಗಳನ್ನು,
ಕುರಿಗಳನ್ನು ಐವತ್ತರಲ್ಲಿ ಒಂದರ ಮೇರೆಗೆ ತೆಗೆದುಕೊಳ್ಳ
ಬೇಕು. ಅದನ್ನು ಯೆಹೋವನ ಪವಿತ್ರಗುಡಾರವನ್ನು
ನೋಡಿಕೊಳ್ಳುವ ಲೇವಿಯರಿಗೆ ಕೊಡಬೇಕು'' ಎಂದು
ಆಜ್ಞಾಪಿಸಿದನು.

31ಯೆಹೋವನು ಮೋಶೆಗೆ ಆಜ್ಞಾಪಿಸಿದ್ದಂತೆಯೇ
ಮೋಶೆ ಮತ್ತು ಎಲ್ಲಾಜಾರರು ಮಾಡಿದರು. 32ಸೈನಿಕರು
ಆರು ಲಕ್ಷದ ಎಪ್ಪತ್ತೈದು ಸಾವಿರ ಕುರಿಗಳನ್ನು, 33ಎಪ್ಪ
ತ್ತೆರಡು ಸಾವಿರ ದನಕರುಗಳನ್ನು, 34ಅರವತ್ತೊಂದು
ಸಾವಿರ ಕತ್ತೆಗಳನ್ನು, 35ಮೂವತ್ತೆರಡು ಸಾವಿರ ಕನ್ನಿಕೆ
ಯರನ್ನು ಪಡೆದುಕೊಂಡರು. 36ಯುದ್ಧಕ್ಕೆ ಹೋದ
ಸೈನಿಕರು ಅರ್ಧಭಾಗವನ್ನು ಅಂದರೆ ಮೂರು ಲಕ್ಷದ
ಮೂವತ್ತೇಳು ಸಾವಿರದ ಐನೂರು ಕುರಿಗಳನ್ನು ಪಡೆದು
ಕೊಂಡರು. 37ಅವರು ಆರುನೂರ ಐವತ್ತೇಳು ಕುರಿ
ಗಳನ್ನು ಯೆಹೋವನಿಗೆ ಕೊಟ್ಟರು. 38ಸೈನಿಕರು ಮೂವ
ತ್ತಾರು ಸಾವಿರ ದನಕರುಗಳನ್ನು ಪಡೆದುಕೊಂಡರು.
ಅವುಗಳಲ್ಲಿ ಎಪ್ಪತ್ತೆರಡು ದನಕರುಗಳನ್ನು ಯೆಹೋವನಿಗೆ
ಕೊಟ್ಟರು. 39ಸೈನಿಕರು ಮೂವತ್ತು ಸಾವಿರದ ಐನೂರು
ಕತ್ತೆಗಳನ್ನು ಪಡೆದುಕೊಂಡರು. ಅವರು ಅರವತ್ತೊಂದು
ಕತ್ತೆಗಳನ್ನು ಯೆಹೋವನಿಗೆ ಕೊಟ್ಟರು. 40ಸೈನಿಕರು
ಹದಿನಾರು ಸಾವಿರ ಮಂದಿ ಕನ್ನಿಕೆಯರನ್ನು ಪಡೆದು
ಕೊಂಡರು. ಅವರು ಮೂವತ್ತೆರಡು ಮಂದಿ ಕನ್ನಿಕೆ
ಯರನ್ನು ಯೆಹೋವನಿಗೆ ಕೊಟ್ಟರು. 41ಮೋಶೆಯು
ಯೆಹೋವನ ಅಪ್ಪಣೆಯ ಮೇರೆಗೆ ಆ ಕಪ್ಪವನ್ನೆಲ್ಲ
ಯೆಹೋವನಿಗೆ ಕೊಡುಗೆಯಾಗಿ ಯಾಜಕನಾದ
ಎಲ್ಲಾಜಾರನಿಗೆ ಕೊಟ್ಟನು.

42-43ಮೋಶೆಯು ಜನರ ಅರ್ಧಭಾಗವನ್ನು ಎಣಿಸಿ
ದನು. ಯುದ್ಧಕ್ಕೆ ಹೋಗಿದ್ದ ಸೈನಿಕರಿಂದ ಮೋಶೆಯು
ತೆಗೆದುಕೊಂಡ ಜನರ ಅರ್ಧಭಾಗ: ಮೂರು ಲಕ್ಷದ
ಮೂವತ್ತೇಳು ಸಾವಿರದ ಐನೂರು ಕುರಿಗಳು, 44ಮೂವ
ತ್ತಾರು ಸಾವಿರ ದನಕರುಗಳು, 45ಮೂವತ್ತು ಸಾವಿರದ
ಐನೂರು ಕತ್ತೆಗಳು 46ಮತ್ತು ಹದಿನಾರು ಸಾವಿರ ಸ್ತ್ರೀ
ಯರು. 47ಇಸ್ರೇಲ್ ಜನರಿಗೆ ದೊರಕಿದ ಅರ್ಧಭಾಗ
ದಿಂದ ಮನುಷ್ಯರಲ್ಲಿಯೂ ಪಶುಗಳಲ್ಲಿಯೂ ಮೋಶೆ
ಐವತ್ತನೆ ಒಂದು ಭಾಗವನ್ನು ತೆಗೆದುಕೊಂಡು
ಯೆಹೋವನ ಪವಿತ್ರಗುಡಾರವನ್ನು ನೋಡಿಕೊಳ್ಳುತ್ತಿದ್ದ
ಲೇವಿಯರಿಗೆ ಕೊಟ್ಟನು.

48ಆಗ ದಂಡಿನ ಸಹಸ್ರಾಧಿಪತಿಗಳೂ ಶತಾಧಿಪತಿಗಳೂ
ಮೋಶೆಯ ಬಳಿಗೆ ಬಂದು, 49''ನಿನ್ನ ದಾಸರಾದ ನಾವು
ನಮ್ಮ ಅಧಿಕಾರದೊಳಗೆ ಇದ್ದ ಸೈನಿಕರನ್ನು ಲೆಕ್ಕಿಸಲಾಗಿ
ಒಬ್ಬನಾದರೂ ಕಡಿಮೆಯಾಗಿಲ್ಲವೆಂದು ತಿಳಿಯಿತು.
50ಆದಕಾರಣ ಯೆಹೋವನು ಕಾಪಾಡಿದ ನಮ್ಮ ಪ್ರಾಣ
ಗಳಿಗೆ ಈಡಾಗಿ ಆತನಿಗೋಸ್ಕರ ಕಾಣಿಕೆಯಾಗಿ ನಮ್ಮಲ್ಲಿ
ಒಬ್ಬೊಬ್ಬನು ತನಗೆ ಸಿಕ್ಕಿದ ಚಿನ್ನದ ಒಡವೆಗಳನ್ನು ಅಂದರೆ
ತೋಳ್ಬಳೆ, ಕಡಗ, ಮುದ್ರೆಯುಂಗುರ, ಮುರುವು, ಕಂಠ
ಮಾಲೆ ಮುಂತಾದವುಗಳನ್ನು ನಮ್ಮ ಶುದ್ಧೀಕರಣಕ್ಕಾಗಿ
ಯೆಹೋವನಿಗೆ ತಂದಿದ್ದೇವೆ'' ಅಂದರು.

51ಅವರು ಕೊಟ್ಟ ಎಲ್ಲಾ ಚಿನ್ನದ ವಸ್ತುಗಳನ್ನು
ಮೋಶೆಯು ತೆಗೆದುಕೊಂಡು ಅವುಗಳನ್ನು ಯಾಜಕನಾದ
ಎಲ್ಲಾಜಾರನಿಗೆ ಕೊಟ್ಟನು. ಅವುಗಳನ್ನು ವಿಚಿತ್ರವಾಗಿ
ಮಾಡಲಾಗಿತ್ತು. 52ಸಹಸ್ರಾಧಿಪತಿಗಳು ಮತ್ತು ಶತಾಧಿ
ಪತಿಗಳು ಯೆಹೋವನಿಗೆ ಕೊಟ್ಟ ಚಿನ್ನವು ನಾನೂರಿಪ್ಪತ್ತು
ಪೌಂಡು ತೂಕವಿತ್ತು. 53ಉಳಿದದ್ದನ್ನು ಸೈನಿಕರು ತಮ
ಗಾಗಿ ಇಟ್ಟುಕೊಂಡರು. 54ಮೋಶೆಯೂ ಯಾಜಕನಾದ

ಎಲ್ಲಾಜಾರನೂ ಸಹಸ್ರಾಧಿಪತಿಗಳೂ ಶತಾಧಿಪತಿಗಳೂ
ಕೊಟ್ಟ ಚಿನ್ನವನ್ನು ತೆಗೆದುಕೊಂಡು ದೇವದರ್ಶನ
ಗುಡಾರದಲ್ಲಿ ಇಟ್ಟರು. ಇಸ್ರೇಲರ ವಿಷಯದಲ್ಲಿ
ಜ್ಞಾಪಕಾರ್ಥವಾಗಿ ಇದು ಯೆಹೋವನ ಸನ್ನಿಧಿಯಲ್ಲಿ
ಇಡಲ್ಪಟ್ಟಿತು.

## ಜೋರ್ಡನ್ ಹೊಳೆಯ ಪೂರ್ವದಲ್ಲಿ ಇಸ್ರೇಲರ ಕುಟುಂಬಗಳು

32 ರೂಬೇನ್ ಕುಲದವರಿಗೂ ಗಾದ್ ಕುಲದವ
ರಿಗೂ ಬಹಳ ದನಗಳಿದ್ದವು. ಅವರು ಯಗ್ಜೇರ್
ಮತ್ತು ಗಿಲ್ಯಾದ್ ಪ್ರದೇಶಗಳನ್ನು ನೋಡಿದಾಗ ಅವು
ಅವರ ಪಶುಗಳ ಮೇವಿಗೆ ಒಳ್ಳೆಯ ಸ್ಥಳವೆಂದು ತಿಳಿದು
ಕೊಂಡರು. 2ಆದ್ದರಿಂದ ರೂಬೇನ್ ಮತ್ತು ಗಾದ್
ಕುಲದವರು ಮೋಶೆಯ ಬಳಿಗೆ ಬಂದರು. ಅವರು
ಮೋಶೆಯ ಸಂಗಡದಲ್ಲೂ ಯಾಜಕನಾದ ಎಲ್ಲಾಜಾರನ
ಸಂಗಡದಲ್ಲೂ ಜನರ ನಾಯಕರ ಸಂಗಡದಲ್ಲೂ
ಮಾತಾಡಿ ಹೀಗೆ ಹೇಳಿದರು: 3-4‘‘ಯೆಹೋವನು
ಇಸ್ರೇಲರಿಗೆ ಅಧೀನಪಡಿಸಿದ ಈ ಪ್ರದೇಶವು ಅಂದರೆ,
ಅಟಾರೋತ್, ದೀಬೋನ್, ಯಗ್ಜೇರ್, ನಿಮ್ರಾ,
ಹೆಷ್ಬೋನ್, ಎಲೆಯಾಲೆ, ಸೆಬಾಮ್, ನೆಬೋ,
ಬೆಯೋನ್ ಎಂಬ ಪಟ್ಟಣಗಳ ಪ್ರದೇಶವು ಪಶುಗಳ
ಮೇವಿಗೆ ಒಳ್ಳೆಯ ಸ್ಥಳವಾಗಿದೆ. ನಿಮ್ಮ ದಾಸರಾದ ನಮಗೆ
ಬಹಳ ಪಶುಗಳು ಇವೆ. 5ಆದ್ದರಿಂದ ಈ ಪ್ರದೇಶವನ್ನೇ
ನಮಗೆ ಸ್ವಾಸ್ತ್ಯವನ್ನಾಗಿ ಕೊಟ್ಟರೆ ನಮಗೆ ಉಪಕಾರ
ಮಾಡಿದಂತಾಗುವುದು. ನಾವು ಜೋರ್ಡನ್ ನದಿಯನ್ನು
ದಾಟಿಹೋಗುವಂತೆ ಮಾಡಬೇಡ.’’

6ಮೋಶೆಯು ರೂಬೇನ್ ಮತ್ತು ಗಾದ್ ಕುಲಗಳ
ವರಿಗೆ, ‘‘ನಿಮ್ಮ ಸಹೋದರರು ಯುದ್ಧಕ್ಕೆ ಹೋಗುವಾಗ
ನೀವು ಇಲ್ಲೇ ಕುಳಿತಿರಬೇಕೇ? 7ಯೆಹೋವನು
ಇಸ್ರೇಲರಿಗೆ ಕೊಟ್ಟ ದೇಶಕ್ಕೆ ಅವರು ಹೋಗದಂತೆ ನೀವು
ಯಾಕೆ ಅವರಿಗೆ ಅಧೈರ್ಯವನ್ನು ಹುಟ್ಟಿಸುತ್ತೀರಿ? 8ಆ
ದೇಶವನ್ನು ನೋಡಿಕೊಂಡು ಬರುವುದಕ್ಕೆ ನಾನು
ಕಾದೇಶ್‌ಬರ್ನೇಯದಿಂದ ನಿಮ್ಮ ಪೂರ್ವಿಕರನ್ನು
ಗೂಢಚಾರರನ್ನಾಗಿ ಕಳುಹಿಸಿದಾಗ ಅವರೂ ಹಾಗೆಯೇ
ಮಾಡಿದರಲ್ಲಾ. 9ಅವರು ಎಷ್ಕೋಲ್ ತಗ್ಗಿಗೆ ಬಂದು ಆ
ದೇಶವನ್ನು ನೋಡಿ ಇಸ್ರೇಲರಿಗೆ ಅಧೈರ್ಯವನ್ನು
ಹುಟ್ಟಿಸಿದ್ದರಿಂದ ಇಸ್ರೇಲರು ತಮಗೆ ಯೆಹೋವನು
ವಾಗ್ದಾನ ಮಾಡಿದ್ದ ದೇಶಕ್ಕೆ ಹೋಗಲೇ ಇಲ್ಲ. 10ಆಗ
ಯೆಹೋವನು ಕೋಪಗೊಂಡು, 11-12ಈಜಿಪ್ಟಿನಿಂದ
ಬಂದ ಈ ಜನರಲ್ಲಿ ಮತ್ತು ಇಪ್ಪತ್ತು ವರ್ಷ ಮೊದಲು
ಗೊಂಡು ಅದಕ್ಕಿಂತ ಹೆಚ್ಚು ವಯಸ್ಸಾದ ನಿಮ್ಮವರೆಲ್ಲಾ
ಕೆನಿಜ್ಜೀಯನಾದ ಯೆಫುನ್ನೆಯ ಮಗ ಕಾಲೇಬನ ಮತ್ತು
ನೂನನ ಮಗನಾದ ಯೆಹೋಶುವನ ಹೊರತು ಯಾರೂ
ನನ್ನನ್ನು ನಿಜವಾಗಿಯೂ ಅನುಸರಿಸದೆ ಹೋದದ್ದರಿಂದ,
ನಾನು ಅಬ್ರಹಾಮ್, ಇಸಾಕ್, ಯಾಕೋಬರಿಗೆ
ಪ್ರಮಾಣಪೂರ್ವಕವಾಗಿ ಕೊಟ್ಟ ದೇಶವನ್ನು ಅವರಿಬ್ಬರೇ
ಹೊರತು ಬೇರೆ ಯಾರೂ ನೋಡುವುದೇ ಇಲ್ಲ’ ಎಂದು
ಖಂಡಿತವಾಗಿ ಹೇಳಿದನು.

13‘‘ಆದ್ದರಿಂದ ಯೆಹೋವನು ಇಸ್ರೇಲರ ಮೇಲೆ
ಕೋಪಗೊಂಡು, ತನ್ನನ್ನು ಬೇಸರಗೊಳಿಸಿದ್ದ ಇಡೀ ತಲೆ
ಮಾರು ಸಾಯುವತನಕ ಇಸ್ರೇಲರನ್ನು ಮರು
ಭೂಮಿಯಲ್ಲಿ ನಲವತ್ತು ವರ್ಷಗಳ ಕಾಲ ಅಲೆ
ದಾಡಿಸಿದನು. 14ದುಷ್ಟ ಸಂತತಿಯವರೇ, ಈಗ ನೀವು
ಯೆಹೋವನ ಭಯಂಕರವಾದ ಕೋಪವನ್ನು ಇನ್ನೂ
ಹೆಚ್ಚಾಗಿ ಮಾಡಲು ನಿಮ್ಮ ಪೂರ್ವಿಕರ ಸ್ಥಾನವನ್ನು
ತೆಗೆದುಕೊಂಡಿದ್ದೀರಿ. 15ನೀವು ಆತನನ್ನು ಹಿಂಬಾಲಿಸದೆ
ಹೋದರೆ, ಆತನು ಇಸ್ರೇಲರನ್ನು ಮರುಭೂಮಿಯಲ್ಲಿ
ಇನ್ನೂ ಹೆಚ್ಚು ಕಾಲ ಬಿಟ್ಟುಬಿಡುವನು. ಈ ಜನರೆಲ್ಲರ
ನಾಶನಕ್ಕೆ ನೀವೇ ಕಾರಣರಾಗುವಿರಿ’’ ಎಂದು ಹೇಳಿದನು.

16ಆಗ ಅವರು ಮೋಶೆಯ ಬಳಿಗೆ ಬಂದು, ‘‘ನಮ್ಮ
ಪಶುಗಳಿಗಾಗಿ ನಾವು ಬೇಲಿಯನ್ನು ಹಾಕೋಣ ಮತ್ತು
ಸ್ತ್ರೀಯರಿಗಾಗಿ ಮತ್ತು ಮಕ್ಕಳಿಗಾಗಿ ಊರುಗಳನ್ನು
ಕಟ್ಟುವೆವು. 17ಬಳಿಕ ಇಸ್ರೇಲರನ್ನು ಅವರವರ ಸ್ಥಳಗಳಿಗೆ
ಸೇರಿಸುವವರೆಗೆ ನಾವು ಅವರ ಮುಂದೆ ಹೋಗುವ
ಸೈನಿಕರಾಗಿ ಹೊರಡುವೆವು ಅಲ್ಲದೆ ನಮ್ಮ ಸ್ತ್ರೀಯರು
ಮತ್ತು ಮಕ್ಕಳು ಈ ದೇಶದ ಇತರ ನಿವಾಸಿಗಳಿಂದ
ತೊಂದರೆಗೊಳಗಾಗದೆ ಕೋಟೆಗಳುಳ್ಳ ಊರುಗಳಲ್ಲಿ
ಸುರಕ್ಷಿತವಾಗಿರುವರು. 18ಇಸ್ರೇಲರೆಲ್ಲರು ದೇಶದಲ್ಲಿ
ನಮಗೆ ಬರಬೇಕಾದ ಸ್ವಾಸ್ತ್ಯವನ್ನು ತೆಗೆದುಕೊಳ್ಳುವ ತನಕ
ನಾವು ನಮ್ಮ ಮನೆಗಳಿಗೆ ಹೋಗುವುದಿಲ್ಲ. 19ನಮಗೆ
ಜೋರ್ಡನ್ ಹೊಳೆಯ ಈಚೆ ಪೂರ್ವದಿಕ್ಕಿನಲ್ಲಿ ಸ್ವಾಸ್ತ್ಯವು
ದೊರಕಿದ್ದರಿಂದ ನಾವು ಹೊಳೆಯ ಆಚೆ ಎಲ್ಲಿಯೂ ಅವ
ರೊಂದಿಗೆ ಸ್ವಾಸ್ತ್ಯವನ್ನು ಅಪೇಕ್ಷಿಸುವುದಿಲ್ಲ’’ ಅಂದರು.

20-22ಅದಕ್ಕೆ ಮೋಶೆ, ‘‘ನೀವು ನಿಮ್ಮ ಮಾತಿನಂತೆ
ಯೆಹೋವನ ಮುಂದೆ ಸನ್ನದ್ಧರಾದ ಸೈನಿಕರಾಗಿ ಯುದ್ಧಕ್ಕೆ
ಹೋಗುವುದಾದರೆ, ಯೆಹೋವನು ತನ್ನ ವೈರಿಗಳನ್ನು
ಓಡಿಸುವ ತನಕ ಮತ್ತು ಆ ದೇಶವನ್ನು ಗೆದ್ದುಕೊಳ್ಳು
ವತನಕ ಪ್ರತಿಯೊಬ್ಬ ಪ್ರವೀಣ ಸೈನಿಕನು ಯೆಹೋವನ
ಮುಂದೆ ಜೋರ್ಡನ್ ನದಿಯನ್ನು ದಾಟಿದರೆ, ಆ ಬಳಿಕ
ನೀವು ನಿಮ್ಮ ಮನೆಗಳಿಗೆ ಹಿಂತಿರುಗಬಹುದು ಮತ್ತು
ನೀವು ಯೆಹೋವನ ದೃಷ್ಟಿಯಲ್ಲಿಯೂ ಇಸ್ರೇಲರ
ದೃಷ್ಟಿಯಲ್ಲಿಯೂ ನಿಮ್ಮ ಕರ್ತವ್ಯವನ್ನು ಮಾಡಿದವ
ರಾಗಿರುವಿರಿ. 23ಆದರೆ ನೀವು ಈ ಸಂಗತಿಗಳನ್ನು ಮಾಡ
ದಿದ್ದರೆ, ಯೆಹೋವನಿಗೆ ವಿರೋಧವಾಗಿ ಪಾಪ

ಮಾಡಿದವರಾಗಿರುವಿರಿ ಮತ್ತು ನಿಮ್ಮ ಪಾಪವು ನಿಮ್ಮನ್ನು
ಹಿಡಿಯುವ ತನಕ ಹುಡುಕಿಕೊಂಡೇ ಬರುವುದು ಎಂದು
ಖಚಿತವಾಗಿ ತಿಳಿದುಕೊಳ್ಳಿರಿ. 24 ನಿಮ್ಮ ಸ್ತ್ರೀಯರಿ
ಗಾಗಿಯೂ ಮಕ್ಕಳಿಗಾಗಿಯೂ ಊರುಗಳನ್ನು ಕಟ್ಟಿರಿ
ಮತ್ತು ಪಶುಗಳಿಗಾಗಿ ದೊಡ್ಡಿಯನ್ನು ಕಟ್ಟಿರಿ. ಬಳಿಕ ನೀವು
ವಾಗ್ದಾನ ಮಾಡಿದಂತೆಯೇ ಮಾಡಿರಿ'' ಎಂದನು.

25 ಆಗ ಗಾದ್ಯರು ಮತ್ತು ರೂಬೇನ್ಯರು ಮೋಶೆಗೆ,
''ಸ್ವಾಮೀ, ನಾವು ನಿನ್ನ ಸೇವಕರಾಗಿದ್ದೇವೆ. ಆದ್ದರಿಂದ
ನೀನು ಆಜ್ಞಾಪಿಸಿದಂತೆಯೇ ನಾವು ಮಾಡುತ್ತೇವೆ.
26 ನಮ್ಮ ಹೆಂಡತಿಯರು, ಮಕ್ಕಳು, ಪಶುಗಳು ಮತ್ತು
ಇತರ ಪ್ರಾಣಿಗಳು ಗಿಲ್ಯಾದಿನ ಊರುಗಳಲ್ಲಿ ವಾಸಿಸು
ವರು. 27 ಆದರೆ ನಿನ್ನ ಸೇವಕರಾದ ನಾವು ಮತ್ತು
ದಂಡೆಯಾತ್ರೆಗಾಗಿ ಆರಿಸಲ್ಪಟ್ಟವರು ನಿನ್ನ ಆಜ್ಞೆಯ
ಪ್ರಕಾರ ಜೋರ್ಡನ್ ನದಿಯನ್ನು ಯೆಹೋವನ ಮುಂದೆ
ದಾಟಿಹೋಗಿ ಹೋರಾಡುತ್ತೇವೆ'' ಎಂದರು.

28 ಆದ್ದರಿಂದ ಮೋಶೆಯು, ಅವರ ಬಗ್ಗೆ ಯಾಜಕ
ಎಲ್ಲಾಜಾರನಿಗೂ ನೂನನ ಮಗನಾದ ಯೆಹೋಶು
ವನಿಗೂ ಇಸ್ರೇಲ್ ಕುಲಗಳ ಗೋತ್ರಪ್ರಧಾನರಿಗೂ
ಆದೇಶಗಳನ್ನು ಕೊಟ್ಟನು. 29 ಮೋಶೆ ಅವರಿಗೆ, ''ಗಾದ್
ಮತ್ತು ರೂಬೇನ್ ಕುಲಗಳಿಂದ ಯುದ್ಧಕ್ಕಾಗಿ ಆರಿಸ
ಲ್ಪಟ್ಟವರು ಜೋರ್ಡನ್ ನದಿಯನ್ನು ಯೆಹೋವನ
ಮುಂದೆ ದಾಟಿ ಆ ದೇಶವನ್ನು ಗೆದ್ದುಕೊಂಡರೆ, ನೀವು
ಅವರಿಗೆ ಗಿಲ್ಯಾದ್ ಪ್ರಾಂತ್ಯವನ್ನು ಸ್ವಾಸ್ತ್ಯವಾಗಿ ಕೊಡ
ಬೇಕು. 30 ಆದರೆ ಆರಿಸಲ್ಪಟ್ಟವರು ನಿಮ್ಮೊಂದಿಗೆ
ನದಿಯನ್ನು ದಾಟದಿದ್ದರೆ, ಅವರು ನಿಮ್ಮೊಂದಿಗೆ ಕಾನಾನ್
ದೇಶದಲ್ಲಿ ಭೂಮಿಯನ್ನು ಪಡೆದುಕೊಳ್ಳಬೇಕು'' ಎಂದು
ಹೇಳಿದನು.

31 ಅದಕ್ಕೆ ಗಾದ್ ಮತ್ತು ರೂಬೇನ್ ಕುಲಗಳವರು
ಒಪ್ಪಿ, 'ನಿನ್ನ ಸೇವಕರಾದ ನಾವು ಯೆಹೋವನ ಆಜ್ಞೆ
ಯಂತೆಯೇ ಮಾಡುವೆವು. 32 ನಾವೇ ಯುದ್ಧ ಮಾಡುವ
ಸೈನಿಕರಾಗಿ ನದಿಯನ್ನು ದಾಟಿ ಯೆಹೋವನ ಮುಂದೆ
ಕಾನಾನ್ ದೇಶದೊಳಗೆ ಹೋಗುವೆವು. ಆದರೆ ನಮ್ಮ
ಸ್ವಾಸ್ತ್ಯವಾದ ಭೂಮಿಯು ಜೋರ್ಡನ್ ನದಿಯ
ಈಚೆಕಡೆಯಲ್ಲಿರುವುದು'' ಎಂದರು.

33 ಆಗ ಮೋಶೆಯು ಗಾದ್ ಮತ್ತು ರೂಬೇನ್
ಕುಲಗಳವರಿಗೆ ಮತ್ತು ಯೋಸೇಫನ ಮಗನಾದ
ಮನಸ್ಸೆಯ ಅರ್ಧಕುಲದವರಿಗೆ ಅಮೋರಿಯರ ರಾಜ
ನಾದ ಸೀಹೋನನ ರಾಜ್ಯವನ್ನೂ ಬಾಷಾನಿನ ರಾಜನಾದ
ಓಗನ ರಾಜ್ಯವನ್ನೂ ಅವುಗಳ ಎಲ್ಲಾ ಊರುಗಳನ್ನೂ ಆ
ಊರುಗಳಿಗೆ ಸೇರಿದ ಭೂಮಿಗಳನ್ನೂ ಕೊಟ್ಟನು.
34 ಗಾದ್ ಕುಲದವರು ದೀಬೋನ್, ಅಟಾರೋತ್,
ಅರೋಯೇರ್, 35 ಅಟ್ರೋತ್ಶೋಫಾನ್, ಯಗ್ಜೇರ್,
ಯೊಗ್ಬೆಹಾ, ಬೇತ್ನಿಮ್ರಾ, 36 ಬೇತ್ಹಾರಾನ್ ಎಂಬ
ಕೋಟೆಗಳುಳ್ಳ ಊರುಗಳನ್ನು ಹೊಸದಾಗಿ ಕಟ್ಟಿ
ಕೊಂಡರು ಮತ್ತು ತಮ್ಮ ಪಶುಗಳಿಗಾಗಿ ದೊಡ್ಡಿಗಳನ್ನು
ಕಟ್ಟಿಕೊಂಡರು. 37-38 ರೂಬೇನ್ ಕುಲದವರು
ಹೆಷ್ಬೋನ್, ಎಲೆಯಾಲೆ, ಕಿರ್ಯಾತಯಿಮ್, ನೆಬೋ,
ಬಾಳ್ಮೆಯೋನ್ ಮತ್ತು ಸಿಬ್ಮಾ ಎಂಬ ಊರುಗಳನ್ನು
ಕೋಟೆ ಸಮೇತವಾಗಿ ಕಟ್ಟಿದರು; ಅಲ್ಲದೆ ತಮ್ಮ
ಪಶುಗಳಿಗಾಗಿ ದೊಡ್ಡಿಯನ್ನು ಕಟ್ಟಿದರು. ಅವರು ತಾವು
ಮತ್ತೆ ಕಟ್ಟಿದ ಊರುಗಳಿಗೆ ಅವುಗಳ ಮೊದಲಿನ
ಹೆಸರುಗಳನ್ನು ಕೊಟ್ಟರು; ಆದರೆ ನೆಬೋ ಮತ್ತು
ಬಾಳ್ಮೆಯೋನ್ಗಳ ಹೆಸರುಗಳನ್ನು ಬದಲಾಯಿಸಿದರು.
39 ಮಾಕೀರನ ಕುಲದವರು ಗಿಲ್ಯಾದಿಗೆ ಹೋದರು.
(ಮಾಕೀರನು ಮನಸ್ಸೆಯ ಮಗ.) ಅವರು ಆ ಪಟ್ಟಣದಲ್ಲಿ
ವಾಸಿಸುತ್ತಿದ್ದ ಅಮೋರಿಯರನ್ನು ಓಡಿಸಿ ಅದನ್ನು ವಶ
ಪಡಿಸಿಕೊಂಡರು. 40 ಆದ್ದರಿಂದ ಮೋಶೆಯು ಗಿಲ್ಯಾದನ್ನು
ಮನಸ್ಸೆಯ ಮಗನಾದ ಮಾಕೀರನ ಕುಲದವರಿಗೆ
ಕೊಟ್ಟನು. ಮಾಕೀರನ ಕುಲದವರು ಅಲ್ಲಿ ನೆಲೆಸಿದರು.
41 ಮನಸ್ಸೆಯ ಕುಲದವನಾದ ಯಾಯೀರನು (ಅಮೋರಿ
ಯರ) ಕೋಟೆಗಳುಳ್ಳ ಹಳ್ಳಿಗಳನ್ನು ವಶಪಡಿಸಿಕೊಂಡು
ಅವುಗಳಿಗೆ, ''ಯಾಯೀರನ ಹಳ್ಳಿಗಳು'' ಎಂದು ಹೆಸರಿ
ಟ್ಟನು. 42 ನೋಬಹ ಎಂಬವನು ಕೆನಾತ್ ಮತ್ತು ಅದರ
ಹತ್ತಿರವಿದ್ದ ಚಿಕ್ಕ ಊರುಗಳನ್ನು ವಶಪಡಿಸಿಕೊಂಡು
ಅವುಗಳಿಗೆ ''ನೋಬಹ'' ಎಂಬ ತನ್ನ ಹೆಸರನ್ನೇ
ಕೊಟ್ಟನು.

## ಈಜಿಪ್ಟಿನಿಂದ ಇಸ್ರೇಲರು ಪ್ರಯಾಣ ಮಾಡಿದ ಸ್ಥಳಗಳ ಪಟ್ಟಿ

33 ಮೋಶೆ ಮತ್ತು ಆರೋನರ ನೇತೃತ್ವದಲ್ಲಿ
ಈಜಿಪ್ಟ್ ದೇಶದಿಂದ ಹೊರಬಂದ ಇಸ್ರೇಲರ
ಪ್ರಯಾಣಗಳ ವಿವರ: 2 ಮೋಶೆ ಯೆಹೋವನ ಅಪ್ಪಣೆ
ಯನ್ನು ಹೊಂದಿ ಇಸ್ರೇಲರು ಪ್ರಯಾಣಗಳಲ್ಲಿ ಇಳಿದು
ಕೊಂಡ ಸ್ಥಳಗಳ ಹೆಸರುಗಳನ್ನು ಬರೆದನು.

3 ಮೊದಲನೆ ತಿಂಗಳಿನ ಹದಿನೈದನೆಯ ದಿನದಲ್ಲಿ ಅವರು
ರಮ್ಸೇಸ್ ಪಟ್ಟಣವನ್ನು ಬಿಟ್ಟು ಹೊರಟರು. ಪಸ್ಕಹಬ್ಬದ
ಮರುದಿನದಲ್ಲಿ ಇಸ್ರೇಲರು ಜಯದಲ್ಲಿ ತಮ್ಮ ಕೈಗಳನ್ನು
ಎತ್ತಿಕೊಂಡು ಈಜಿಪ್ಟಿನಿಂದ ಹೊರಗೆ ನಡೆದರು.
ಈಜಿಪ್ಟಿನ ಜನರೆಲ್ಲರೂ ಇದನ್ನು ನೋಡಿದರು. 4 ಈಜಿಪ್ಟಿ
ನವರು ಯೆಹೋವನು ಕೊಂದುಹಾಕಿದ ತಮ್ಮ ಚೊಚ್ಚಲು
ಮಕ್ಕಳನ್ನು ಹೂಳಿಡುತ್ತಿದ್ದರು. ಯೆಹೋವನು ಈಜಿಪ್ಟಿನ
ದೇವರುಗಳನ್ನು ಶಿಕ್ಷಿಸಿದನು. 5 ಇಸ್ರೇಲರು ರಮ್ಸೇಸ್
ನಿಂದ ಹೊರಟು ಸುಕ್ಕೋತಿಗೆ ಪ್ರಯಾಣಮಾಡಿ ಅಲ್ಲಿ

ಪಾಳೆಯ ಮಾಡಿಕೊಂಡರು. 6ಸುಕ್ಕೋತಿನಿಂದ ಅವರು
ಏತಾಮಿಗೆ ಪ್ರಯಾಣಮಾಡಿ ಅಲ್ಲಿ ಪಾಳೆಯ ಮಾಡಿ
ಕೊಂಡರು. ಜನರು ಅಲ್ಲಿ ಮರುಭೂಮಿಯ ಗಡಿಯಲ್ಲಿ
ಪಾಳೆಯಮಾಡಿಕೊಂಡರು. 7ಅವರು ಏತಾಮನ್ನು ಬಿಟ್ಟು
ಪೀಹಹೀರೋತಿಗೆ ಪ್ರಯಾಣಮಾಡಿ ಅಲ್ಲಿ ಪಾಳೆಯ
ಮಾಡಿಕೊಂಡರು. ಇದು ಬಾಳ್ಜೆಫೋನಿನ ಹತ್ತಿರವಿತ್ತು.
ಜನರು ಮಿಗ್ದೋಲಿನ ಬಳಿ ಪಾಳೆಯ ಮಾಡಿಕೊಂಡರು.
8ಜನರು ಪೀಹಹೀರೋತನ್ನು ಬಿಟ್ಟು ಸಮುದ್ರದ
ಮಧ್ಯದಲ್ಲೇ ನಡೆದು ಮರುಭೂಮಿಗೆ ಬಂದರು. ಅವರು
ಏತಾಮ್ ಮರುಭೂಮಿಯಲ್ಲಿ ಮೂರು ದಿನಗಳವರೆಗೆ
ಪ್ರಯಾಣಮಾಡಿ ಅಲ್ಲಿ ಪಾಳೆಯ ಮಾಡಿಕೊಂಡರು.
9ಜನರು ಮಾರಾವನ್ನು ಬಿಟ್ಟು ಏಲೀಮಿಗೆ ಪ್ರಯಾಣ
ಮಾಡಿ ಅಲ್ಲಿ ಇಳಿದುಕೊಂಡರು. ಅಲ್ಲಿ ಹನ್ನೆರಡು ನೀರಿನ
ಒರತೆಗಳೂ ಎಪ್ಪತ್ತು ಖರ್ಜೂರದ ಮರಗಳೂ ಇದ್ದವು.
10ಜನರು ಏಲೀಮನ್ನು ಬಿಟ್ಟು ಕೆಂಪುಸಮುದ್ರದ ಹತ್ತಿರ
ಪಾಳೆಯ ಮಾಡಿಕೊಂಡರು.
11ಕೆಂಪುಸಮುದ್ರದಿಂದ ಹೊರಟು ಸೀನ್ ಅರಣ್ಯದಲ್ಲಿ
ಪಾಳೆಯ ಮಾಡಿಕೊಂಡರು.
12ಸೀನ್ ಅರಣ್ಯದಿಂದ ಹೊರಟು ದೊಫ್ಕದಲ್ಲಿ ಇಳಿದು
ಕೊಂಡರು.
13ದೊಫ್ಕದಿಂದ ಹೊರಟು ಆಲೂಷಿನಲ್ಲಿ ಇಳಿದು
ಕೊಂಡರು.
14ಆಲೂಷಿನಿಂದ ಹೊರಟು ರೆಫೀದೀಮಿನಲ್ಲಿ ಇಳಿದು
ಕೊಂಡರು. ಅಲ್ಲಿ ಜನರಿಗೆ ಕುಡಿಯಲು ನೀರು ಇರಲಿಲ್ಲ.
15ರೆಫೀದೀಮಿನಿಂದ ಹೊರಟು ಸೀನಾಯಿ ಮರು
ಭೂಮಿಯಲ್ಲಿ ಇಳಿದುಕೊಂಡರು.
16ಸೀನಾಯಿ ಅರಣ್ಯದಿಂದ ಹೊರಟು ಕಿಬ್ರೋತ್
ಹತಾವದಲ್ಲಿ ಇಳಿದುಕೊಂಡರು.
17ಕಿಬ್ರೋತ್ ಹತಾವದಿಂದ ಹೊರಟು ಹಚೇರೋತಿ
ನಲ್ಲಿ ಇಳಿದುಕೊಂಡರು.
18ಹಚೇರೋತಿನಿಂದ ಹೊರಟು ರಿತ್ಮದಲ್ಲಿ ಇಳಿದು
ಕೊಂಡರು.
19ರಿತ್ಮದಿಂದ ಹೊರಟು ರಿಮ್ಮೋನ್ ಪೆರೆಚಿನಲ್ಲಿ
ಇಳಿದುಕೊಂಡರು.
20ರಿಮ್ಮೋನ್ ಪೆರೆಚಿನಿಂದ ಹೊರಟು ಲಿಬ್ನದಲ್ಲಿ
ಇಳಿದುಕೊಂಡರು.
21ಲಿಬ್ನದಿಂದ ಹೊರಟು ರಿಸ್ಸದಲ್ಲಿ ಇಳಿದುಕೊಂಡರು.
22ರಿಸ್ಸದಿಂದ ಹೊರಟು ಕೆಹೇಲಾತದಲ್ಲಿ ಇಳಿದು
ಕೊಂಡರು.
23ಕೆಹೇಲಾತದಿಂದ ಹೊರಟು ಶೆಫೆರ್ ಬೆಟ್ಟದಲ್ಲಿ
ಇಳಿದುಕೊಂಡರು.
24ಶೆಫೆರ್ ಬೆಟ್ಟದಿಂದ ಹೊರಟು ಹರಾದದಲ್ಲಿ
ಇಳಿದುಕೊಂಡರು.
25ಹರಾದದಿಂದ ಹೊರಟು ಮಖೇಲೋತಿನಲ್ಲಿ
ಇಳಿದುಕೊಂಡರು.
26ಮಖೇಲೋತಿನಿಂದ ಹೊರಟು ತಹತಿನಲ್ಲಿ ಇಳಿದು
ಕೊಂಡರು.
27ತಹತಿನಿಂದ ಹೊರಟು ತೆರಹದಲ್ಲಿ ಇಳಿದು
ಕೊಂಡರು.
28ತೆರಹದಿಂದ ಹೊರಟು ಮಿತ್ಕದಲ್ಲಿ ಇಳಿದು
ಕೊಂಡರು.
29ಮಿತ್ಕದಿಂದ ಹೊರಟು ಹಷ್ಮೋನದಲ್ಲಿ ಇಳಿದು
ಕೊಂಡರು.
30ಹಷ್ಮೋನದಿಂದ ಹೊರಟು ಮೋಸೇರೋತಿನಲ್ಲಿ
ಇಳಿದುಕೊಂಡರು.
31ಮೋಸೇರೋತಿನಿಂದ ಹೊರಟು ಬೆನೇಯಾಕಾನಿ
ನಲ್ಲಿ ಇಳಿದುಕೊಂಡರು.
32ಬೆನೇಯಾಕಾನಿನಿಂದ ಹೊರಟು ಹೋರ್ಹಗಿದ್ಗಾದ್
ನಲ್ಲಿ ಇಳಿದುಕೊಂಡರು.
33ಹೋರ್ಹಗಿದ್ಗಾದ್‌ನಿಂದ ಹೊರಟು ಯೊಟ್ಬಾತದಲ್ಲಿ
ಇಳಿದುಕೊಂಡರು.
34ಯೊಟ್ಬಾತದಿಂದ ಹೊರಟು ಅಬ್ರೋನದಲ್ಲಿ ಇಳಿದು
ಕೊಂಡರು.
35ಅಬ್ರೋನದಿಂದ ಹೊರಟು ಎಚ್ಯೋನ್‌ಗೆಬೆರಿನಲ್ಲಿ
ಇಳಿದುಕೊಂಡರು.
36ಎಚ್ಯೋನ್‌ಗೆಬೆರಿನಿಂದ ಹೊರಟು ಚಿನ್ ಮರು
ಭೂಮಿಯಲ್ಲಿ ಇಳಿದುಕೊಂಡರು. ಅದು ಕಾದೇಶ್.
37ಕಾದೇಶಿನಿಂದ ಹೊರಟು ಎದೋಮ್ಯರ ದೇಶದ
ಅಂಚಿನಲ್ಲಿರುವ ಹೋರ್‌ಬೆಟ್ಟದ ಬಳಿಯಲ್ಲಿ ಇಳಿದು
ಕೊಂಡರು. 38ಮಹಾಯಾಜಕನಾದ ಆರೋನನು
ಯೆಹೋವನಿಂದ ಆಜ್ಞಾಪಿಸಲ್ಪಟ್ಟ ಹೋರ್ ಬೆಟ್ಟವನ್ನು
ಹತ್ತಿದನು. ಇಸ್ರೇಲರು ಈಜಿಪ್ಟನ್ನು ಬಿಟ್ಟು ಹೊರಟ
ನಂತರ ನಲವತ್ತನೆ ವರ್ಷದ ಐದನೆ ತಿಂಗಳಿನ ಮೊದಲನೆ
ದಿನದಲ್ಲಿ ಆರೋನನು ಅಲ್ಲಿ ಪ್ರಾಣಬಿಟ್ಟನು.
39ಆರೋನನು 'ಹೋರ್' ಬೆಟ್ಟದಲ್ಲಿ ಸತ್ತಾಗ ಅವನಿಗೆ
ನೂರಿಪ್ಪತ್ಮೂರು ವರ್ಷ ವಯಸ್ಸಾಗಿತ್ತು.
40ಇಸ್ರೇಲರು ಬರುತ್ತಾರೆಂಬ ಸುದ್ದಿಯನ್ನು ನೆಗೆವ್
ನಲ್ಲಿ ವಾಸವಾಗಿದ್ದ ಅರಾದ್ ಪಟ್ಟಣದ ಅರಸನು ಕೇಳಿ
ದನು. 41ಇಸ್ರೇಲರು ಹೋರ್ ಬೆಟ್ಟದಿಂದ ಹೊರಟು
ಚಲ್ಮೋನದಲ್ಲಿ ಇಳಿದುಕೊಂಡರು.
42ಚಲ್ಮೋನದಿಂದ ಹೊರಟು ಪೂನೋನಿನಲ್ಲಿ
ಇಳಿದುಕೊಂಡರು. 43ಪೂನೋನಿನಿಂದ ಹೊರಟು
ಓಬೋತಿನಲ್ಲಿ ಇಳಿದುಕೊಂಡರು.
44ಓಬೋತಿನಿಂದ ಹೊರಟು ಮೋವಾಬ್ಯರ ಸರಹದ್ದಿ
ನಲ್ಲಿರುವ ಜೋರ್ಡನ್ ಆಚೆ ಇರುವ ಇಯ್ಯಿಮಿನಲ್ಲಿ
ಇಳಿದುಕೊಂಡರು.

[45]ಇಯ್ಯೀಮಿನಿಂದ ಹೊರಟು ದೀಬೋನ್‌ಗಾದಿನಲ್ಲಿ
ಇಳಿದುಕೊಂಡರು.
[46]ದೀಬೋನ್‌ಗಾದಿನಿಂದ ಹೊರಟು ಅಲ್ಮೋನ್
ದಿಬ್ಲಾತಯಿಮಿನಲ್ಲಿ ಇಳಿದುಕೊಂಡರು.
[47]ಅಲ್ಮೋನ್‌ದಿಬ್ಲಾತಯಿಮಿನಿಂದ ಹೊರಟು
ಅಬಾರೀಮ್ ಬೆಟ್ಟಗಳಲ್ಲಿರುವ ನೆಬೋವಿನ ಪೂರ್ವ
ದಿಕ್ಕಿನಲ್ಲಿ ಇಳಿದುಕೊಂಡರು. [48]ಅಬಾರೀಮ್ ಬೆಟ್ಟ
ಗಳಿಂದ ಹೊರಟು ಜೆರಿಕೋ ಪಟ್ಟಣದ ಆಚೆಕಡೆಯಲ್ಲಿ
ರುವ ಜೋರ್ಡನ್ ನದಿಯ ತೀರದಲ್ಲಿ ಮೋವಾಬಿನ
ಬಯಲಿನಲ್ಲಿ ಇಳಿದುಕೊಂಡರು. [49]ಅವರು ಮೋವಾ
ಬ್ಯರ ಮೈದಾನದಲ್ಲಿ ಬೇತ್‌ಯೆಷೀಮೋತಿನಿಂದ
ಅಬೇಲ್‌ಶಿಟ್ಟೀಮಿನವರೆಗೂ ಜೋರ್ಡನ್ ನದಿಯ
ತೀರದಲ್ಲಿ ಇಳಿದುಕೊಂಡರು.
[50]ಆ ಸ್ಥಳದಲ್ಲಿದ್ದಾಗ ಯೆಹೋವನು ಮೋಶೆಯೊಡನೆ
ಮಾತಾಡಿ ಹೇಳಿದ್ದೇನೆಂದರೆ: [51]“ನೀನು ಇಸ್ರೇಲರಿಗೆ
ಹೀಗೆ ಆಜ್ಞಾಪಿಸು, ‘ನೀವು ಜೋರ್ಡನ್ ಹೊಳೆದಾಟಿ
ಕಾನಾನ್ ದೇಶವನ್ನು ಸೇರಿದಾಗ [52]ಆ ದೇಶದ ನಿವಾಸಿ
ಗಳನ್ನೆಲ್ಲ ಹೊರಡಿಸಿಬಿಟ್ಟು ಅವರ ಕೆತ್ತಿದ ಪ್ರತಿಮೆಗಳನ್ನು
ಮತ್ತು ಲೋಹದ ವಿಗ್ರಹಗಳನ್ನು ನಾಶಮಾಡಿ ಅವರ
ಪೂಜಾಸ್ಥಳಗಳನ್ನು ಹಾಳುಮಾಡಬೇಕು. [53]ನಾನು ನಿಮಗೆ
ಆ ದೇಶವನ್ನು ಸ್ವದೇಶವಾಗುವುದಕ್ಕೆ ಕೊಟ್ಟಿದ್ದೇನೆ. ನೀವು
ಅದನ್ನು ಸ್ವಾಧೀನ ಮಾಡಿಕೊಂಡು ಅದರಲ್ಲಿ ವಾಸಿಸ
ಬೇಕು. [54]ನೀವು ಚೀಟುಹಾಕಿ ಆ ದೇಶವನ್ನು ನಿಮ್ಮನಿಮ್ಮ
ಕುಲಗಳಿಗೆ ಹಂಚಿಕೊಳ್ಳಬೇಕು. ಹೆಚ್ಚು ಮಂದಿಯುಳ್ಳ
ಕುಲಕ್ಕೆ ಹೆಚ್ಚಾಗಿಯೂ ಕಡಿಮೆ ಮಂದಿಯುಳ್ಳ ಕುಲಕ್ಕೆ
ಕಡಿಮೆಯಾಗಿಯೂ ಸ್ವಾಸ್ತ್ಯವು ದೊರೆಯಬೇಕು.
ಒಂದೊಂದು ಕುಲಕ್ಕೆ ಯಾವಯಾವ ಸ್ಥಳವನ್ನು ಸೂಚಿಸು
ತ್ತದೊ ಆ ಸ್ಥಳದಲ್ಲಿಯೇ ಆ ಕುಲದ ಸ್ವಾಸ್ತ್ಯವಿರಬೇಕು.
ಒಂದೊಂದು ಕುಲದ ಕುಟುಂಬಗಳು ಒಂದೇ ಪ್ರದೇಶ
ದಲ್ಲಿರಬೇಕು.
[55] “ನೀವು ಆ ದೇಶದ ನಿವಾಸಿಗಳನ್ನು ಹೊರಡಿಸದೆ
ಹೋದರೆ, ಅವರು ಉಳಿದುಕೊಂಡು ನಿಮ್ಮ ಕಣ್ಣುಗಳಲ್ಲಿ
ಮರದ ಚೂರಿನಂತೆಯೂ ನಿಮ್ಮ ಪಕ್ಕೆಗಳಲ್ಲಿ ಮುಳ್ಳು
ಗಳಂತೆಯೂ ಇರುವರು. ನೀವು ವಾಸಿಸುವ ದೇಶದಲ್ಲಿ
ನಿಮಗೆ ತೊಂದರೆ ಮಾಡುವರು. [56]ಅದಲ್ಲದೆ ನಾನು
ಅವರಿಗೆ ಮಾಡಲು ಯೋಚಿಸಿದಂತೆ ನಿಮಗೆ
ಮಾಡುವೆನು.”

### ಕಾನಾನಿನ ಮೇರೆಗಳು

**34** ಯೆಹೋವನು ಮೋಶೆಗೆ ಹೇಳಿದ್ದೇನೆಂದರೆ:
[2]“ನೀನು ಇಸ್ರೇಲರಿಗೆ ಹೀಗೆ ಆಜ್ಞಾಪಿಸಬೇಕು:
ನೀವು ಕಾನಾನ್‌ದೇಶವನ್ನು ಪ್ರವೇಶಿಸಿದಾಗ, ಇಡೀ
ಕಾನಾನ್ ದೇಶವನ್ನು ಅದರ ಗಡಿಗಳೊಡನೆ ನಿಮಗೆ ಸ್ವಾಸ್ತ್ಯ
ವಾಗಿ ಕೊಡಲಾಗುವುದು. [3]ದಕ್ಷಿಣಭಾಗವು ಎದೋಮಿನ
ಗಡಿಯಲ್ಲಿರುವ ಚಿನ್ ಮರುಭೂಮಿಯನ್ನು ಒಳ
ಗೊಂಡಿದೆ. ಪೂರ್ವದ ಕಡೆಯಿರುವ ದಕ್ಷಿಣ ಗಡಿಯು
ಉಪ್ಪುಸಮುದ್ರದ ದಕ್ಷಿಣಭಾಗದಿಂದ ಆರಂಭ
ವಾಗುತ್ತದೆ. [4]ಅಲ್ಲಿಂದ ಅದು ಅಕ್ರಬ್ಬೀಮ್ ಕಣಿವೆಗೆ
ತಿರುಗಿಕೊಂಡು ಚಿನಿಗೆ ಮುಂದುವರಿಯುವುದು. ಅದರ
ಪರಿಮಿತಿ ದಕ್ಷಿಣ ಕಾದೇಶ್‌ಬರ್ನೇಯಾ. ಅಲ್ಲಿಂದ ಅದು
ಹಚರದ್ದಾರ್‌ಗೆ ಹೋಗಿ ಅಚ್ಮೋನಿಗೆ ಮುಂದುವರಿ
ಯುತ್ತದೆ. [5]ಗಡಿಯು ಅಚ್ಮೋನಿನಿಂದ ಈಜಿಪ್ಟಿನ ನದಿಯ
ಕಡೆಗೆ ತಿರುಗಿಕೊಂಡು ಸಮುದ್ರವನ್ನು ಸೇರುವುದು.
[6]ಪಶ್ಚಿಮದಿಕ್ಕಿನಲ್ಲಿ ಮೆಡಿಟೆರೇನಿಯನ್ ಸಮುದ್ರದ ತೀರ
ನಿಮ್ಮ ದೇಶದ ಮೇರೆಯಾಗಿರುವುದು. [7]ಉತ್ತರದಿಕ್ಕಿನ
ಮೇರೆ ಮೆಡಿಟೆರೇನಿಯನ್ ಸಮುದ್ರದಿಂದ ಹಿಡಿದು
ಲೆಬನೋನಿನಲ್ಲಿರುವ ಹೋರ್ ಬೆಟ್ಟದವರೆಗೂ ಇರು
ವುದು. [8]ಹೋರ್ ಬೆಟ್ಟದಿಂದ ಅದು ಲೆಬೊಹಮಾತಿಗೆ
ಹೋಗಿ ಅಲ್ಲಿಂದ ಚೆದಾದಿಗೆ ಹೋಗುವುದು. [9]ಬಳಿಕ ಆ
ಮೇರೆಯು ಜಿಫ್ರೋನಿಗೆ ಹೋಗಿ ಹಚರೇನಾನಿನಲ್ಲಿ
ಮುಗಿಯುವುದು. ಹೀಗೆ ಅದು ನಿಮ್ಮ ಉತ್ತರಮೇರೆ
ಯಾಗಿರುವುದು. [10]ನಿಮ್ಮ ಪೂರ್ವಮೇರೆಯು
ಹಚರೇನಾನಿನಿಂದ ಹೊರಟು ಶೆಫಾಮಿಗೆ ಹೋಗು
ವುದು. [11]ಶೆಫಾಮಿನಿಂದ ಆ ಮೇರೆಯು ಆಯಿನಿನ
ಪೂರ್ವದಲ್ಲಿರುವ ರಿಬ್ಲಕ್ಕೆ ಹೋಗಿ ಗಲಿಲೇಯ
ಸರೋವರದ ಪೂರ್ವದಲ್ಲಿರುವ ಬೆಟ್ಟಗಳನ್ನು ಮುಟ್ಟು
ವುದು. [12]ಬಳಿಕ ಈ ಮೇರೆಯು ಜೋರ್ಡನ್ ನದಿಯ
ಉದ್ದಕ್ಕೂ ಮುಂದುವರೆಯುವುದು. ಅದು ಉಪ್ಪು
ಸಮುದ್ರದಲ್ಲಿ ಕೊನೆಗೊಳ್ಳುವುದು. ಇವುಗಳೇ ನಿಮ್ಮ
ದೇಶದ ಸುತ್ತಲಿನ ಮೇರೆಗಳು.”
[13]ಮೋಶೆಯು ಇಸ್ರೇಲರಿಗೆ ಹೀಗೆ ಆಜ್ಞಾಪಿಸಿದನು:
“ನೀವು ಚೀಟುಹಾಕಿ ಭಾಗಮಾಡಿಕೊಳ್ಳುವ ದೇಶವೇ
ಇದು. ಒಂಭತ್ತುವರೆ ಕುಲಗಳವರಿಗೆ ಈ ದೇಶವನ್ನು
ಕೊಡಬೇಕೆಂದು ಯೆಹೋವನು ಆಜ್ಞಾಪಿಸಿದ್ದಾನೆ. [14-
15]ಬೇರೆ ಎರಡುವರೆ ಕುಲಗಳವರು ಅಂದರೆ ರೂಬೇನ್
ಕುಲ ಮತ್ತು ಗಾದ್ ಕುಲ ಮತ್ತು ಮನಸ್ಸೆಯ
ಅರ್ಧಕುಲವು ಜೆರಿಕೋ ಪಟ್ಟಣದ ಆಚೆಯಲ್ಲಿರುವ
ಜೋರ್ಡನ್ ನದಿಯ ಪೂರ್ವಭಾಗದಲ್ಲಿ ಈಗಾಗಲೇ
ಸ್ವಾಸ್ತ್ಯವನ್ನು ಹೊಂದಿ ತಮ್ಮ ಕುಟುಂಬಗಳ ಪ್ರಕಾರ
ಹಂಚಿಕೊಂಡಿದ್ದಾರೆ.”
[16]ಆಗ ಯೆಹೋವನು ಮೋಶೆಗೆ ಆಜ್ಞಾಪಿಸಿ
ದ್ದೇನೆಂದರೆ: [17]“ನಿಮಗೋಸ್ಕರ ದೇಶವನ್ನು ಹಂಚಿ
ಕೊಡುವ ಕುಲಪ್ರಧಾನರು ಯಾರೆಂದರೆ: ಮಹಾ
ಯಾಜಕನಾದ ಎಲ್ಲಾಜಾರ್, ನೂನನ ಮಗನಾದ

ಯೆಹೋಶುವ 18 ಮತ್ತು ಪ್ರತಿಯೊಂದು ಕುಲದಿಂದ ಒಬ್ಬ
ಕುಲಪ್ರಧಾನ. 19 ಪ್ರತಿಯೊಂದು ಕುಲದಿಂದ ನೀವು
ನೇಮಿಸಬೇಕಾದವರು ಇವರೇ:

ಯೆಹೂದ ಕುಲದಿಂದ ಯೆಫುನ್ನೆಯ
ಮಗನಾದ ಕಾಲೇಬ್.
20 ಸಿಮೆಯೋನ್ ಕುಲದಿಂದ ಅಮ್ಮೀಹೂದನ
ಮಗನಾದ ಶೆಮೂವೇಲ್.
21 ಬೆನ್ಯಾಮೀನ್ ಕುಲದಿಂದ ಕಿಸ್ಲೋನನ
ಮಗನಾದ ಎಲೀದಾದ್.
22 ದಾನ್ ಕುಲದಿಂದ ಯೊಗ್ಲೀಯ ಮಗನಾದ
ಬುಕ್ಕೀ ಕುಲಾಧಿಪತಿ.
23 ಯೋಸೇಫನ ಸಂತತಿಯವರಲ್ಲಿ ಮನಸ್ಸೆ
ಕುಲದಿಂದ ಏಫೋದನ ಮಗನಾದ
ಹನ್ನೀಯೇಲ್ ಕುಲಾಧಿಪತಿ.
24 ಎಫ್ರಾಯೀಮ್ ಕುಲದಿಂದ ಶಿಫ್ಟಾನನ
ಮಗನಾದ ಕೆಮೂವೇಲ್ ಕುಲಾಧಿಪತಿ.
25 ಜೆಬುಲೂನ್ ಕುಲದಿಂದ ಪರ್ನಾಕನ
ಮಗನಾದ ಎಲೀಚಾಫಾನ್ ಕುಲಾಧಿಪತಿ.
26 ಇಸ್ಸಾಕಾರ್ ಕುಲದಿಂದ ಅಜ್ಜಾನನ
ಮಗನಾದ ಪಲ್ಟೀಯೇಲ್ ಕುಲಾಧಿಪತಿ.
27 ಅಶೇರ್ ಕುಲದಿಂದ ಶೆಲೋಮಿಯ
ಮಗನಾದ ಅಹೀಹೂದ್ ಕುಲಾಧಿಪತಿ.
28 ನಫ್ತಾಲಿ ಕುಲದಿಂದ ಅಮ್ಮೀಹೂದನ
ಮಗನಾದ ಪೆದಹೇಲ್ ಕುಲಾಧಿಪತಿ.''

29 ಕಾನಾನ್ ದೇಶದಲ್ಲಿ, ಇಸ್ರೇಲರಿಗೆ ಅವರವರ ಸ್ವಾಸ್ತ್ಯ
ಗಳನ್ನು ಹಂಚಿಕೊಡುವುದಕ್ಕೆ ಯೆಹೋವನು ಇವರನ್ನೆಲ್ಲ
ನೇಮಿಸಿದನು.

### ಲೇವಿಯರ ಪಟ್ಟಣಗಳು

35 ಜೆರಿಕೋ ಪಟ್ಟಣದ ಆಚೆಕಡೆಯಲ್ಲಿ
ಜೋರ್ಡನ್ ನದಿಯ ತೀರದ ಬಳಿಯಿಂದ
ಮೋವಾಬ್ಯರ ಬಯಲಿನಲ್ಲಿ ಯೆಹೋವನು ಮೋಶೆ
ಯೊಡನೆ ಮಾತಾಡಿ ಹೇಳಿದ್ದೇನೆಂದರೆ, 2 ''ಇಸ್ರೇಲರು
ತಾವು ಹೊಂದುವ ಸ್ವಾಸ್ತ್ಯದಲ್ಲಿ ಕೆಲವು ಊರುಗಳನ್ನೂ ಆ
ಊರುಗಳ ಸುತ್ತಲಿರುವ ಭೂಮಿಯನ್ನೂ ಲೇವಿಯರಿಗೆ
ಕೊಡಬೇಕೆಂದು ಆಜ್ಞಾಪಿಸು. 3 ಅವರು ಆ ಪಟ್ಟಣಗಳಲ್ಲಿ
ವಾಸಿಸುವರು. ಆ ಊರುಗಳು ಲೇವಿಯರ ನಿವಾಸಕ್ಕಾಗಿ
ಸುತ್ತಲಿರುವ ಭೂಮಿಗಳು ಅವರ ಪಶುಗಳಿಗಾಗಿ ಮತ್ತು
ಇತರ ಪ್ರಾಣಿಗಳಿಗಾಗಿ ಇರುವವು. 4 ನೀವು ಲೇವಿಯರಿಗೆ
ಕೊಡುವ ಹುಲ್ಲುಗಾವಲುಗಳು ಅಂದರೆ ಪಟ್ಟಣಗಳ
ಸುತ್ತಲೂ ಇರುವ ಹುಲ್ಲುಗಾವಲುಗಳು ಪಟ್ಟಣದ
ಗೋಡೆಯ ಹೊರಗೆ ಎಲ್ಲಾ ದಿಕ್ಕಿನಲ್ಲೂ ಒಂದು ಸಾವಿರ
ಮೊಳ ವಿಸ್ತರಿಸಬೇಕು. 5 ಪಟ್ಟಣದ ಹೊರಗೆ ಪ್ರತಿ
ಯೊಂದು ದಿಕ್ಕಿನಲ್ಲಿ ಎರಡು ಸಾವಿರ ಮೊಳಗಳನ್ನು ಅಳೆದು
ಪಟ್ಟಣಕ್ಕೆ ಗಡಿಯನ್ನು ಗೊತ್ತುಪಡಿಸಬೇಕು; ಪೂರ್ವ
ದಿಕ್ಕಿನಲ್ಲಿ ಎರಡು ಸಾವಿರ ಮೊಳಗಳು; ದಕ್ಷಿಣದಿಕ್ಕಿನಲ್ಲಿ
ಎರಡು ಸಾವಿರ ಮೊಳಗಳು; ಪಶ್ಚಿಮದಿಕ್ಕಿನಲ್ಲಿ ಎರಡು
ಸಾವಿರ ಮೊಳಗಳು ಮತ್ತು ಉತ್ತರದಿಕ್ಕಿನಲ್ಲಿ ಎರಡು
ಸಾವಿರ ಮೊಳಗಳು. ಇವುಗಳ ಮಧ್ಯದಲ್ಲಿ ಪಟ್ಟಣವಿರ
ಬೇಕು. ಅದು ಅವರ ಪಟ್ಟಣಗಳಿಗೆ ಹುಲ್ಲುಗಾವಲು
ಗಳಾಗಿರುವುದು. 6 ನೀವು ಲೇವಿಯರಿಗೆ ಕೊಡುವ ಆರು
ಪಟ್ಟಣಗಳು ಆಶ್ರಯನಗರಗಳಾಗಿರುತ್ತವೆ. ಬೇರೊಬ್ಬ
ನನ್ನು ಕೊಂದು ಸಂರಕ್ಷಣೆಗಾಗಿ ಓಡಿಹೋಗುವವರು ಈ
ಪಟ್ಟಣಗಳಿಗೆ ಬಂದು ಸಂರಕ್ಷಣೆ ಪಡೆಯಲು ನೀವು
ಅವಕಾಶಕೊಡಬೇಕು. ಇದಲ್ಲದೆ ಇತರ ನಲವತ್ತೆರಡು
ಪಟ್ಟಣಗಳನ್ನು ನೀವು ಲೇವಿಯರಿಗೆ ಕೊಡಬೇಕು.
7 ಅಂದರೆ ನೀವು ಲೇವಿಯರಿಗೆ ಒಟ್ಟು ನಲವತ್ತೆಂಟು
ಪಟ್ಟಣಗಳನ್ನು ಅವುಗಳ ಸುತ್ತಲಿರುವ ಹುಲ್ಲುಗಾವಲಿನ
ಸಮೇತವಾಗಿ ಕೊಡುತ್ತೀರಿ. 8 ನೀವು ಇತರ ಇಸ್ರೇಲರ
ಆಸ್ತಿಯಿಂದ ಲೇವಿಯರಿಗೆ ಪಟ್ಟಣಗಳನ್ನು ಕೊಡುವಾಗ,
ಪ್ರತಿಯೊಂದು ಕುಲವು ಹೊಂದಿರುವ ಭೂಮಿಗನು
ಸಾರವಾಗಿ ಕೊಡಬೇಕು. ದೊಡ್ಡಕುಲಗಳಿಂದ ಹೆಚ್ಚು
ಪಟ್ಟಣಗಳನ್ನೂ ಚಿಕ್ಕಕುಲಗಳಿಂದ ಕೆಲವು ಪಟ್ಟಣಗಳನ್ನೂ
ತೆಗೆದುಕೊಳ್ಳಿ.''

9 ತರುವಾಯ ಯೆಹೋವನು ಮೋಶೆಗೆ ಹೇಳಿದ್ದೇ
ನೆಂದರೆ, 10 ''ಇಸ್ರೇಲರಿಗೆ ಈ ಸಂಗತಿಗಳನ್ನು ತಿಳಿಸು.
ನೀವು ಜೋರ್ಡನ್ ನದಿಯನ್ನು ದಾಟಿ ಕಾನಾನ್
ದೇಶವನ್ನು ಸೇರಿದ ನಂತರ 11 ಆಶ್ರಯ ಸ್ಥಳಗಳಾಗು
ವುದಕ್ಕೆ ಪಟ್ಟಣಗಳನ್ನು ಆರಿಸಿಕೊಳ್ಳಬೇಕು. ಕೈತಪ್ಪಿ
ಮತ್ತೊಬ್ಬನನ್ನು ಕೊಂದವನು ಅವುಗಳಲ್ಲಿ ಒಂದಕ್ಕೆ
ಓಡಿಹೋಗಿ ಸುರಕ್ಷಿತನಾಗಿರಬಹುದು. 12 ಕೊಂದವನು
ನ್ಯಾಯವಿಚಾರಣಾಸಭೆಯ ಮುಂದೆ ನಿಂತುಕೊಳ್ಳು
ವುದಕ್ಕಿಂತ ಮೊದಲೇ ಕೊಲ್ಲಲ್ಪಟ್ಟವನ ಸಂಬಂಧಿಕನಿಂದ
ಕೊಲ್ಲಲ್ಪಡದೆ ಸುರಕ್ಷಿತನಾಗಿರಲು ಆ ಆಶ್ರಯ ಸ್ಥಳಗಳು
ನಿಮ್ಮ ಮಧ್ಯದಲ್ಲಿ ಇರಲೇಬೇಕು. 13-14 ಹೀಗೆ ಆಶ್ರಯ
ಸ್ಥಳಗಳಾಗಿರುವುದಕ್ಕೆ ನೀವು ಜೋರ್ಡನ್ ನದಿಯ ಈಚೆ
ಮೂರು ಮತ್ತು ಕಾನಾನ್ ದೇಶದಲ್ಲಿ ಮೂರು, ಹೀಗೆ
ಒಟ್ಟು ಆರು ಪಟ್ಟಣಗಳನ್ನು ನೇಮಿಸಬೇಕು. 15 ಕೈತಪ್ಪಿ
ಮತ್ತೊಬ್ಬನನ್ನು ಕೊಂದವನು ಇಸ್ರೇಲನಾಗಲೀ
ಪರದೇಶದವನಾಗಲೀ ನಿಮ್ಮಲ್ಲಿ ಇಳಿದುಕೊಂಡವ
ನಾಗಲೀ, ಆ ಆರು ಪಟ್ಟಣಗಳೊಳಗೆ ಒಂದಕ್ಕೆ ಓಡಿ
ಹೋಗಿ ಆಶ್ರಯ ಹೊಂದಬಹುದು.

16''ಯಾವನಾದರೂ ಕಬ್ಬಿಣದ ಆಯುಧದಿಂದ
ಮತ್ತೊಬ್ಬನನ್ನು ಹೊಡೆದು ಕೊಂದರೆ ಅವನನ್ನು ಕೊಲೆ
ಗಾರನೆಂದು ನೀವು ತೀರ್ಮಾನಿಸಬೇಕು. ಅಂಥವನಿಗೆ
ಮರಣಶಿಕ್ಷೆಯಾಗಬೇಕು. 17ಯಾವನಾದರೂ ಮನುಷ್ಯ
ನನ್ನು ಕೊಲ್ಲುವಷ್ಟು ದೊಡ್ಡ ಕಲ್ಲನ್ನು ಕೈಯಲ್ಲಿ ಹಿಡಿದು
ಮತ್ತೊಬ್ಬನನ್ನು ಹೊಡೆದು ಕೊಂದರೆ, ಅವನು ನರಹತ್ಯ
ಮಾಡಿದವನಾಗಿದ್ದಾನೆ. ಅವನಿಗೆ ಮರಣ ಶಿಕ್ಷೆಯಾಗ
ಬೇಕು. 18ಯಾವನಾದರೂ ಮನುಷ್ಯನನ್ನು ಕೊಲ್ಲುವಷ್ಟು
ದೊಡ್ಡ ಮರದ ವಸ್ತುವನ್ನು ಕೈಯಲ್ಲಿ ಹಿಡಿದು ಮತ್ತೊಬ್ಬ
ನನ್ನು ಹೊಡೆದು ಕೊಂದರೆ, ಅವನು ಕೊಲೆಗಾರ, ಅವನಿಗೆ
ಮರಣಶಿಕ್ಷೆಯಾಗಬೇಕು. 19ಕೊಲ್ಲಲ್ಪಟ್ಟವನ ಸಮೀಪ
ಬಂಧುವು ಕೊಲೆಗಾರನನ್ನು ಮರಣಕ್ಕೀಡು ಮಾಡ
ಬೇಕು. ಅವನು ಕೊಲೆಗಾರನನ್ನು ಯಾವಾಗ ಕಂಡರೂ
ಅವನನ್ನು ಕೊಲ್ಲಬೇಕು.

20''ಯಾವನಾದರೂ ಮತ್ತೊಬ್ಬನನ್ನು ದ್ವೇಷಿಸಿ
ನೂಕುವುದರಿಂದಾಗಲೀ ಉದ್ದೇಶಪೂರ್ವಕವಾಗಿ ಅವನ
ಮೇಲೆ ಏನಾದರೂ ಎಸೆಯುವುದರಿಂದಾಗಲೀ 21ದ್ವೇಷ
ದಿಂದ ಕೈಯಾರೆ ಹೊಡೆಯುವುದರಿಂದಾಗಲೀ ಕೊಂದರೆ
ಅವನು ನರಹತ್ಯ ಮಾಡಿದವನೇ. ಅವನಿಗೆ ಮರಣ
ಶಿಕ್ಷೆಯಾಗಬೇಕು. ಹತವಾದವನ ಸಮೀಪ ಬಂಧುವು
ಅವನನ್ನು ಎಲ್ಲಿ ಕಂಡರೂ ಕೊಲ್ಲಲಿ.

22ಆದರೆ ಒಬ್ಬನು ಯಾವ ದ್ವೇಷವೂ ಇಲ್ಲದೆ ನಿರು
ದ್ದೇಶದಿಂದ ಎಸೆದ ಯಾವುದೊ ವಸ್ತುವಿನಿಂದ ಒಬ್ಬನನ್ನು
ಕೊಂದರೆ, 23ಅಥವಾ ದೊಡ್ಡ ಕಲ್ಲನ್ನು ತಿಳಿಯದೆ
ಬೀಳಿಸಿದ್ದರಿಂದ ಮತ್ತೊಬ್ಬನು ಸತ್ತರೆ, ಅವನು ಕೊಲ್ಲಲ್ಪ
ಟ್ಟವನ ವೈರಿಯಾಗಿರದೆಯೂ ಹಾನಿಯನ್ನು ಮಾಡ
ಬೇಕೆಂಬ ಉದ್ದೇಶವಿಲ್ಲದೆಯೂ ಇದ್ದ ಪಕ್ಷಕ್ಕೆ
24ಸಭೆಯವರು ಕೊಂದವನಿಗೂ ಕೊಲ್ಲಲ್ಪಟ್ಟವನಿಗೂ ಈ
ನಿಯಮಗಳಿಗನುಸಾರವಾಗಿ ನ್ಯಾಯತೀರ್ಪು ನೀಡ
ಬೇಕು. 25(ಕೊಂದವನು ನಿರಪರಾಧಿಯೆಂದು ಸಾಬೀತಾ
ದರೆ) ಕೊಂದವನು ಓಡಿಹೋಗಿದ್ದ ಆಶ್ರಯ ನಗರಕ್ಕೆ
ಸಭೆಯವರು ಅವನನ್ನು ಮತ್ತೆ ಕರೆದುಕೊಂಡು ಹೋಗಿ
ಕೊಲ್ಲಲ್ಪಟ್ಟವನ ಸಮೀಪಬಂಧುವಿನಿಂದ ರಕ್ಷಿಸಬೇಕು.
ಅಭಿಷೇಕ ಹೊಂದಿದ ಮಹಾಯಾಜಕನು ಜೀವ
ದಿಂದಿರುವ ತನಕ ಅವನು ಆ ಪಟ್ಟಣದಲ್ಲೇ ವಾಸಿಸಬೇಕು.

26-27''ಆ ವ್ಯಕ್ತಿಯು ತನ್ನ ಆಶ್ರಯನಗರದ ಮೇರೆ
ಯನ್ನು ಎಂದಿಗೂ ದಾಟಿ ಹೊರಗೆ ಹೋಗಬಾರದು. ಆ
ಮೇರೆಗಳನ್ನು ದಾಟಿ ಹೊರಗೆ ಹೋದರೆ, ಹತವಾದವನ
ಸಮೀಪಬಂದುವು ಅವನನ್ನು ಕಂಡು ಕೊಂದುಹಾಕಿದರೆ,
ಆಗ ಆ ಸಮೀಪಬಂಧು ನರಹತ್ಯ ಮಾಡಿದ ದೋಷಿ
ಯಾಗುವುದಿಲ್ಲ. 28ಮಹಾಯಾಜಕನು ಜೀವದಿಂದಿರುವ
ತನಕ ಅವನು ಆಶ್ರಯನಗರದೊಳಗೆ ಇರಬೇಕು. ಮಹಾ
ಯಾಜಕನು ತೀರಿಹೋದ ನಂತರ ಅವನು ತನ್ನ ಸ್ವಾಸ್ತ್ಯ
ವಿರುವ ಸ್ಥಳಕ್ಕೆ ಹೋಗಬಹುದು. 29ನೀವೂ ನಿಮ್ಮ ಸಂತತಿ
ಯವರೂ ನಿಮ್ಮ ಎಲ್ಲಾ ನಿವಾಸ ಗಳಲ್ಲಿ ಈ ಕಟ್ಟಳೆಗೆ ಅನು
ಸಾರವಾಗಿ ನ್ಯಾಯತೀರಿಸಬೇಕು. 30ಯಾವನಾದರೂ
ಮತ್ತೊಬ್ಬನನ್ನು ಕೊಂದರೆ, ಸಾಕ್ಷ್ಯಾಧಾರಗಳು ಇದ್ದರೆ
ಮಾತ್ರ ಕೊಂದವನು ಕೊಲ್ಲಲ್ಪಡಬೇಕು.

31''ಮರಣಶಿಕ್ಷೆಗೆ ಒಳಗಾಗಿರುವ ಕೊಲೆಪಾತಕನನ್ನು
ಉಳಿಸಲು ನೀವು ಯಾವ ಈಡನ್ನೂ ತೆಗೆದುಕೊಳ್ಳ
ಕೂಡದು. ಅವನಿಗೆ ಮರಣಶಿಕ್ಷೆಯೇ ಆಗಬೇಕು.

32''ಆಶ್ರಯನಗರಕ್ಕೆ ಓಡಿಹೋದವನಿಂದ ಹಣವನ್ನು
ಈಡಾಗಿ ತೆಗೆದುಕೊಂಡು ಪ್ರಧಾನಯಾಜಕನು ಜೀವ
ದಿಂದಿರುವಾಗಲೇ ತನ್ನ ಸ್ವಂತ ಸ್ಥಳಕ್ಕೆ ಹೋಗಿ ವಾಸಿಸಲು
ನೀವು ಅವಕಾಶಕೊಡಕೂಡದು.

33''ನೀವು ವಾಸವಾಗಿರುವ ದೇಶವನ್ನು ಕೆಡಿಸಬಾರದು.
ಕೊಲೆಯು ದೇಶವನ್ನು ಕೆಡಿಸುತ್ತದೆ. ಕೊಲೆಯು ನಡೆಯ
ಲ್ಪಟ್ಟಿರುವ ದೇಶಕ್ಕೆ ಕೊಲೆಗಾರನ ರಕ್ತವೇ ಹೊರತು ಬೇರೆ
ಯಾವ ಈಡೂ ಇಲ್ಲ. 34ನಾನು ವಾಸಿಸುವ ದೇಶವನ್ನು
ನೀವು ಅಶುದ್ಧಮಾಡಬಾರದು, ಯಾಕಂದರೆ ಯೆಹೋವ
ನಾದ ನಾನೇ ಇಸ್ರೇಲರೊಂದಿಗೆ ವಾಸಿಸುತ್ತೇನೆ.''

## ಚಲ್ಪಹಾದನ ಹೆಣ್ಣುಮಕ್ಕಳ ಭೂಮಿ

36 ಒಂದು ದಿನ ಗಿಲ್ಯಾದ್ ಕುಲದ ಕುಟುಂಬಗಳ
ನಾಯಕರು ಮೋಶೆಯೊಡನೆಯೂ ಇತರ
ಇಸ್ರೇಲರ ಕುಟುಂಬಗಳ ನಾಯಕರೊಡನೆಯೂ
ಮಾತಾಡುವುದಕ್ಕೆ ಬಂದರು. (ಗಿಲ್ಯಾದನು ಮಾಕೀರನ
ಮಗ; ಮಾಕೀರನು ಮನಸ್ಸೆಯ ಮಗ; ಮನಸ್ಸೆಯು
ಯೋಸೇಫನ ಮಗ.) 2ಅವರು, ''ಸ್ವಾಮೀ, ಚೀಟುಹಾಕಿ
ಇಸ್ರೇಲರಿಗೆ ದೇಶವನ್ನು ಹಂಚಿಕೊಡಬೇಕೆಂದು
ಯೆಹೋವನು ನಿಮಗೆ ಆಜ್ಞಾಪಿಸಿದ್ದಾನೆ. ಅದಲ್ಲದೆ ನಮ್ಮ
ಸಂಬಂಧಿಕನಾದ ಚಲ್ಪಹಾದನ ಭೂಮಿಯನ್ನು ಅವನ
ಹೆಣ್ಣುಮಕ್ಕಳಿಗೆ ಕೊಡಬೇಕಂದು ಯೆಹೋವನು ಆಜ್ಞಾ
ಪಿಸಿದ್ದಾನೆ. 3ಹೀಗಿರಲು ಅವರು ಇಸ್ರೇಲರ ಬೇರೆ ಯಾವ
ಕುಲದವರನ್ನಾದರೂ ಮದುವೆಯಾದರೆ ಅವರ ಸ್ವಾಸ್ತ್ಯವು
ನಮ್ಮ ಪೂರ್ವಿಕರ ಕುಲದಿಂದ ತೆಗೆಯಲ್ಪಟ್ಟು ಅವರು
ಮದುವೆಯ ಮೂಲಕ ಸೇರಿಕೊಳ್ಳುವ ಕುಲಕ್ಕೆ ಹೋಗು
ವುದು. ಇದರಿಂದ ನಮ್ಮ ಸ್ವಾಸ್ತ್ಯಕ್ಕೆ ನಷ್ಟವುಂಟಾಗುವುದು.
4ಇಸ್ರೇಲರ ಜೂಬಿಲಿ ಸಂವತ್ಸರವು ಬಂದಾಗ ಅವರ
ಸ್ವಾಸ್ತ್ಯವು ಅವರು ಸೇರಿಕೊಳ್ಳುವ ಕುಲದ ಸ್ವಾಸ್ತ್ಯಕ್ಕೆ ಕೂಡಿ
ಕೊಳ್ಳುವುದರಿಂದ ನಮ್ಮ ಕುಲದಿಂದ ತೆಗೆಯಲ್ಪಡು
ವುದು'' ಎಂದು ಹೇಳಿದರು.

5ಆಗ ಮೋಶೆಯು ಯೆಹೋವನ ಅಪ್ಪಣೆಯನ್ನು
ಹೊಂದಿ ಇಸ್ರೇಲರಿಗೆ, ''ಯೋಸೇಫನ ಸಂತತಿಯವರು

ಹೇಳುವುದು ನ್ಯಾಯ. 6ಆದಕಾರಣ ಚಲ್ಪಹಾದನ ಹೆಣ್ಣು
ಮಕ್ಕಳು ಮದುವೆಯಾಗುವುದಾದರೆ ತಮ್ಮ ತಂದೆಯ
ಗೋತ್ರಕ್ಕೆ ಸಂಬಂಧಿಸಿದ ಯಾರನ್ನು ಬೇಕಾದರೂ
ಮದುವೆಯಾಗಬಹುದೆಂದು ಯೆಹೋವನು ಆಜ್ಞಾಪಿ
ಸಿದ್ದಾನೆ.

7ಇಸ್ರೇಲರ ಯಾವ ಸ್ವಾಸ್ತ್ಯವೂ ಒಂದು ಕುಲದಿಂದ
ಬೇರೊಂದು ಕುಲಕ್ಕೆ ಹೋಗಬಾರದು. ಇಸ್ರೇಲರೆಲ್ಲರೂ
ತಮ್ಮ ಪೂರ್ವಿಕರಿಂದ ಸ್ವಾಸ್ತ್ಯವಾಗಿ ಪಡೆದುಕೊಂಡ ತಮ್ಮ
ಗೋತ್ರದ ಭೂಮಿಯನ್ನು ತಮ್ಮ ಸ್ವಾಧೀನದಲ್ಲೇ ಇಟ್ಟು
ಕೊಂಡಿರಬೇಕು. 8ಆದ್ದರಿಂದ ಇಸ್ರೇಲರ ಕುಲಗಳಲ್ಲಿ
ಭೂಮಿಯನ್ನು ಸ್ವಾಸ್ತ್ಯವಾಗಿ ಹೊಂದುವ ಪ್ರತಿಯೊಬ್ಬ
ಮಗಳು, ತನ್ನ ತಂದೆಯ ಗೋತ್ರದವನನ್ನೇ ಮದುವೆ
ಯಾಗಬೇಕು.

9ಹೀಗೆ ಯಾವ ಸ್ವಾಸ್ತ್ಯವೂ ಒಂದು ಕುಲದಿಂದ
ಬೇರೊಂದು ಕುಲಕ್ಕೆ ಹೋಗದೆ ಇಸ್ರೇಲರ ಪ್ರತಿ
ಯೊಂದು ಕುಲವೂ ತನ್ನ ಸ್ವಾಸ್ತ್ಯವನ್ನು ಹೊಂದಿಕೊಂಡೇ
ಇರುವುದು'' ಎಂದು ಹೇಳಿದನು.

10ಯೆಹೋವನು ಮೋಶೆಗೆ ಕೊಟ್ಟ ಆಜ್ಞೆಗೆ ಚಲ್ಪ
ಹಾದನ ಹೆಣ್ಣುಮಕ್ಕಳು ವಿಧೇಯರಾದರು. 11ಆದ್ದರಿಂದ
ಚಲ್ಪಹಾದನ ಹೆಣ್ಣುಮಕ್ಕಳಾದ ಮಹ್ಲಾ, ತಿರ್ಚಾ, ಹೊಗ್ಲಾ,
ಮಿಲ್ಕಾ, ನೋವಾ ಎಂಬವರು ಯೆಹೋವನ ಆಜ್ಞಾನು
ಸಾರವಾಗಿ ನಡೆದು ತಂದೆಯ ಅಣ್ಣತಮ್ಮಂದಿರ ಗಂಡು
ಮಕ್ಕಳನ್ನು ಮದುವೆಯಾದರು.

12ಅವರು ಯೋಸೇಫನ ಮಗನಾದ ಮನಸ್ಸೆಯ ಕುಲ
ದವರನ್ನೇ ಮದುವೆಯಾದದ್ದರಿಂದ ಅವರ ಸ್ವಾಸ್ತ್ಯವು
ತಂದೆಯ ಕುಲದಲ್ಲಿಯೇ ನಿಂತಿತು. 13ಜೆರಿಕೋ ಪಟ್ಟಣದ
ಎದುರಾಗಿರುವ ಜೋರ್ಡನ್ ನದಿಯ ಬಳಿಯಲ್ಲಿರುವ
ಮೋವಾಬಿನ ಬಯಲಿನಲ್ಲಿ ಯೆಹೋವನು ಇಸ್ರೇಲರಿಗೆ
ಮೋಶೆಯ ಮೂಲಕ ಕೊಟ್ಟ ಆಜ್ಞೆಗಳೂ ವಿಧಿಗಳೂ
ಇವೇ.

# License Agreement for Bible Texts

***World Bible Translation Center***
***Last Updated: September 21, 2006***

Copyright © 2006 by World Bible Translation Center
All rights reserved.

**These Scriptures:**

- Are copyrighted by World Bible Translation Center.
- Are not public domain.
- May not be altered or modified in any form.
- May not be sold or offered for sale in any form.
- May not be used for commercial purposes (including, but not limited to, use in advertising or Web banners used for the purpose of selling online add space).
- May be distributed without modification in electronic form for non-commercial use. However, they may not be hosted on any kind of server (including a Web or ftp server) without written permission. A copy of this license (without modification) must also be included.
- May be quoted for any purpose, up to 1,000 verses, without written permission. However, the extent of quotation must not comprise a complete book nor should it amount to more than 50% of the work in which it is quoted. A copyright notice must appear on the title or copyright page using this pattern: "Taken from the HOLY BIBLE: EASY-TO-READ VERSION™ © 2006 by World Bible Translation Center, Inc. and used by permission." If the text quoted is from one of WBTC's non-English versions, the printed title of the actual text quoted will be substituted for "HOLY BIBLE: EASY-TO-READ VERSION™." The copyright notice must appear in English or be translated into another language. When quotations from WBTC's text are used in non-saleable media, such as church bulletins, orders of service, posters, transparencies or similar media, a complete copyright notice is not required, but the initials of the version (such as "ERV" for the Easy-to-Read Version™ in English) must appear at the end of each quotation.

Any use of these Scriptures other than those listed above is prohibited. For additional rights and permission for usage, such as the use of WBTC's text on a Web site, or for clarification of any of the above, please contact World Bible Translation Center in writing or by email at distribution@wbtc.com.

World Bible Translation Center
P.O. Box 820648
Fort Worth, Texas 76182, USA
Telephone: 1-817-595-1664
Toll-Free in US: 1-888-54-BIBLE
E-mail: info@wbtc.com

**WBTC's web site –** World Bible Translation Center's web site: http://www.wbtc.org

**Order online –** To order a copy of our texts online, go to: http://www.wbtc.org

**Current license agreement –** *This license is subject to change without notice. The current license can be found at:* http://www.wbtc.org/downloads/biblelicense.htm

**Trouble viewing this file –** If the text in this document does not display correctly, use Adobe Acrobat Reader 5.0 or higher. Download Adobe Acrobat Reader from: http://www.adobe.com/products/acrobat/readstep2.html

**Viewing Chinese or Korean PDFs –** To view the Chinese or Korean PDFs, it may be necessary to download the Chinese Simplified or Korean font pack from Adobe. Download the font packs from: http://www.adobe.com/products/acrobat/acrrasianfontpack.html